

ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಏಪ್ರಿಲ್ 12 ಶುಕ್ರವಾರ 2024

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871


ಸಂಪುಟ: 44 | ಸಂಚಿಕೆ: 353 | ಪುಟಗಳು: 12
ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

₹4



ಪಕ್ಷ ವಿರೋಧಿಗಳಿಗೆ ಬಿಜೆಪಿ ವರಿಷ್ಠರ ಎಚ್ಚರಿಕೆ
ಅಮಾನತು ಇಲ್ಲವೇ ವಜಾ

● ಶಾಸಕರಾದ ಎಸ್.ಟಿ.ಸೋಮಶೇಖರ್, ಶಿವರಾಂ ಹೆಬ್ಬಾರ್ ಅಮಾನತಿಗೆ ತೀರ್ಮಾನ ● ಕೆ.ಎಸ್.ಈಶ್ವರಪ್ಪ ವಜಾಗೊಳಿಸಲು ಚಿಂತನೆ; ಕೆಲವರು ವರಿಷ್ಠರ ಮಾತಿಗೆ ಮನ್ನಣೆ ನೀಡಿ ಮೈತ್ರಿ ಅಭ್ಯರ್ಥಿಗಳ ಪರ ಪ್ರಚಾರ


ಎಸ್.ಟಿ.ಸೋಮಶೇಖರ್


ಶಿವರಾಂ ಹೆಬ್ಬಾರ್

ಬೆಂಗಳೂರು, ಏ.11(ಕೆಎಂಶಿ)– ಪಕ್ಷ ವಿರೋಧಿ ಚಟುವಟಿಕೆಯಲ್ಲಿ ತೊಡಗಿರುವವರನ್ನು ಅಮಾನತು ಇಲ್ಲವೇ ವಜಾಗೊಳಿಸಲು ಬಿಜೆಪಿ ವರಿಷ್ಠರು ತೀರ್ಮಾನಿಸಿದ್ದಾರೆ.

ಲೋಕಸಭಾ ಚುನಾವಣೆಯಲ್ಲಿ ಟಿಕೆಟ್ ಸಿಗದೆ ಬಂಡಾಯ ಅಭ್ಯರ್ಥಿಯಾಗಿ ಕಣಕ್ಕಿಳಿಯುವವರು, ಅಧಿಕೃತ ಅಭ್ಯರ್ಥಿಗಳ ವಿರುದ್ಧ ಪ್ರಚಾರ ನಡೆಸುತ್ತಿರುವವರ ವಿರುದ್ಧ ಶಿಸ್ತು ಕ್ರಮಕ್ಕೆ ಪಕ್ಷ ಮುಂದಾಗಿದೆ.

ಪ್ರಾರಂಭದಿಂದಲೂ ಚುನಾವಣಾ ಕಣದಿಂದ ದೂರ ಉಳಿದ ಮಾಜಿ ಸಚಿವರು ಹಾಗೂ ಹಾಲಿ ಶಾಸಕರಾದ ಎಸ್.ಟಿ.ಸೋಮಶೇಖರ್ ಹಾಗೂ ಶಿವರಾಂ ಹೆಬ್ಬಾರ್ ಅವರನ್ನು ಅಮಾನತು ಮಾಡಲು ತೀರ್ಮಾನಿಸಲಾಗಿದೆ. ತಮ್ಮ ಪುತ್ರನಿಗೆ ಟಿಕೆಟ್ ತಪ್ಪಿತೆಂಬ ಕಾರಣಕ್ಕೆ ಶಿವಮೊಗ್ಗದಲ್ಲಿ ಬಂಡಾಯ ಅಭ್ಯರ್ಥಿಯಾಗಿ ಕಣಕ್ಕಿಳಿಯಲು ಮುಂದಾಗಿರುವ ಪಕ್ಷದ ಹಿರಿಯ ಮುಖಂಡ ಹಾಗೂ ಮಾಜಿ ಉಪಮುಖ್ಯಮಂತ್ರಿ ಕೆ.ಎಸ್.ಈಶ್ವರಪ್ಪ ಅವರನ್ನು ಪಕ್ಷದಿಂದ ಆರು ವರ್ಷಗಳ ಕಾಲ ವಜಾಗೊಳಿಸಲು ಮುಂದಾಗಿದೆ. ಪಕ್ಷ ವಿರೋಧಿ ಚಟುವಟಿಕೆಯಲ್ಲಿ ತೊಡಗಿದ್ದ ಕೆಲವು ಮುಖಂಡರು ಹಾಗೂ ಹಾಲಿ ಶಾಸಕರಿಗೆ ನೀಡಿದ್ದ ಗಡುವು ಮುಗಿದ ನಂತರವೂ ತಮ್ಮ ನಿಲುವಿನಲ್ಲಿ ಯಾವುದೇ ಬದಲಾವಣೆ ತೋರದ ಹಿನ್ನೆಲೆಯಲ್ಲಿ ಬಿಜೆಪಿ ವರಿಷ್ಠರು ಕಠಿಣ ತೀರ್ಮಾನಕ್ಕೆ ಬಂದಿದ್ದಾರೆ.

ಹಾಸನದಲ್ಲಿ ಪ್ರೀತಂ ಗೌಡ, ತುಮಕೂರಿನಲ್ಲಿ ಮಾಜಿ ಸಚಿವ ಜೆ.ಸಿ.ಮಾಧುಸ್ವಾಮಿ, ಕೊಪ್ಪಳದಲ್ಲಿ ಕರಡಿ ಸಂಗಣ್ಣ, ಚಿಕ್ಕಬಳ್ಳಾಪುರದಲ್ಲಿ ಶಾಸಕ ವಿಶ್ವನಾಥ್, ಮಂಡ್ಯದಲ್ಲಿನ ಕೆಲವು ಮುಖಂಡರು, ಚಿತ್ರದುರ್ಗದಲ್ಲಿ ಶಾಸಕ ಚಂದ್ರಪ್ಪ ಸೇರಿದಂತೆ ಹಲವು ನಾಯಕರು ಪಕ್ಷದ ತೀರ್ಮಾನವನ್ನು ಪ್ರಶ್ನಿಸಿದ್ದರು. ರಾಜ್ಯ ಚುನಾವಣಾ ಉಸ್ತುವಾರಿ ವಹಿಸಿಕೊಂಡಿರುವ ಬಿಜೆಪಿಯ ರಾಧಾ ಮೋಹನ್ ದಾಸ್ ಅಗರವಾಲ್ ಭಿನ್ನಾಭಿಪ್ರಾಯಗಳನ್ನು ತೊಡೆದುಹಾಕಲು ಹಲವು ಸುತ್ತಿನ ಮಾತುಕತೆ ನಡೆಸಿದ್ದರು. ಅದರಲ್ಲಿ ಯಶಸ್ವಿಯೂ ಆಗಿದ್ದು, ಬಂಡಾಯದ ಸಾಲಿನಲ್ಲಿ ಮುಂದುವರಿದವರಿಗೆ ಕೇಂದ್ರ ಗೃಹ ಸಚಿವ ಅಮಿತ್ ಷಾ ಅವರೇ ಕಳೆದ ಬುಧವಾರದವರೆಗೆ ಗಡುವು ನೀಡಿದ್ದರು. ಅಮಿತ್ ಷಾ ಅವರ ಎಚ್ಚರಿಕೆಯಿಂದ ಎಚ್ಚೆತ್ತ ವಿಶ್ವನಾಥ್,


ಕೆ.ಎಸ್.ಈಶ್ವರಪ್ಪ

ಪ್ರೀತಂ ಗೌಡ ತಕ್ಷಣವೇ ತಮ್ಮ ತಮ್ಮ ಕ್ಷೇತ್ರಗಳಿಗೆ ತೆರಳಿ ಮನಸ್ಸಿಲ್ಲದಿದ್ದರೂ, ಪಕ್ಷ ಅಥವಾ ಎನ್‌ಡಿಎ ಕೂಟದ ಅಭ್ಯರ್ಥಿಗಳ ಪರ ಪ್ರಚಾರಕ್ಕಿಳಿದರು. ಮಾಧುಸ್ವಾಮಿ, ಸಂಸದ ಕರಡಿ ಸಂಗಣ್ಣ ಮೊದಮೊದಲು ಬಹಿರಂಗವಾಗಿ ಟೀಕೆ ಮಾಡುತ್ತಿದ್ದವರು ಈಗ ಮೌನಕ್ಕೆ ಶರಣಾಗಿ ತಟಸ್ಥವಾಗಿ ಉಳಿದಿದ್ದಾರೆ. ಷಾ ಅವರ ಎಚ್ಚರಿಕೆ ಮೀರಿ ಪಕ್ಷದ ಇಬ್ಬರು ಶಾಸಕರು ಬಹಿರಂಗವಾಗಿಯೇ ಕಾಂಗ್ರೆಸ್ ಅಭ್ಯರ್ಥಿಗಳ ಪರ ಪ್ರಚಾರಕ್ಕಿಳಿದಿದ್ದಾರೆ, ● 9ನೇ ಪುಟಕ್ಕೆ

ಒಂದು ಕೈಯಲ್ಲಿ ಕೊಟ್ಟು ಮತ್ತೊಂದು ಕೈಯಲ್ಲಿ ಕಿತ್ತುಕೊಳ್ಳೋದೇ 'ಗ್ಯಾರಂಟಿ'

● ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಲೇವಡಿ ● ಅದೆಷ್ಟೋ ಜನಪರ ಯೋಜನೆಗಳ ಸ್ಥಗಿತಗೊಳಿಸಿದ್ದೆ ಕಾಂಗ್ರೆಸ್ ಸರ್ಕಾರದ ಸಾಧನೆ


ಮೈಸೂರಿನ ಅಗ್ರಹಾರದಲ್ಲಿ ಗುರುವಾರ ಸಂಜೆ ನಡೆದ ಬಹಿರಂಗ ಸಭೆಯಲ್ಲಿ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಮಾತನಾಡಿದರು.

ಮೈಸೂರು,ಏ.11(ಎಂಕೆ)– ಗ್ಯಾರಂಟಿ ಯೋಜನೆಗಳ ಹೆಸರಿನಲ್ಲಿ ಒಂದು ಕೈಯಲ್ಲಿ ಕೊಟ್ಟು, ಮತ್ತೊಂದು ಕೈಯಿಂದ ಕಿತ್ತುಕೊಂಡು ರಾಜ್ಯದ ಜನತೆಗೆ ಮಕ್ಮಲ್ ಟೋಪಿ ಹಾಕುತ್ತಿರುವ ಕಾಂಗ್ರೆಸ್‌ನಿಂದ ರಾಜ್ಯ ಮತ್ತು ದೇಶದ ಅಭಿವೃದ್ಧಿ ಅಸಾಧ್ಯ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಹೇಳಿದರು.

ಮೈಸೂರಿನ ಅಗ್ರಹಾರ ವೃತ್ತದಲ್ಲಿ ಗುರುವಾರ ಸಂಜೆ ಆಯೋಜಿಸಿದ್ದ ಬಹಿರಂಗ ಸಭೆಯಲ್ಲಿ ಕಾರ್ಯಕರ್ತರು ಹಾಗೂ ಮತದಾರರನ್ನುದ್ದೇಶಿಸಿ ಮಾತನಾಡಿದ ಅವರು, ಮಹಿಳೆಯರಿಗೆ ಬಸ್ ಪ್ರಯಾಣ ಉಚಿತವೆಂದೇಳಿ ಟಿಕೆಟ್ ದರವನ್ನು ಶೇ.30–40ರಷ್ಟು ಹೆಚ್ಚಿಸಿ ನಿಮ್ಮ ಕುಟುಂಬದ ಪುರುಷರು, ಮಕ್ಕಳು ಬಸ್‌ನಲ್ಲಿ ಪ್ರಯಾಣ ಮಾಡಬೇಕು ಎಂದರೆ ದುಪ್ಪಟ್ಟು ಹಣ ಕೊಡಬೇಕಾದ ಪರಿಸ್ಥಿತಿ ಇದೆ. ವಿದ್ಯಾರ್ಥಿಗಳಿಗೆ ನೀಡುವ ಎಲ್ಲಾ ರೀತಿಯ ಸ್ಕಾಲರ್‌ಶಿಪ್‌ಗಳನ್ನು ನಿಲ್ಲಿಸಲಾಗಿದೆ. ಸಬ್ ರಿಜಿಸ್ಟ್ರಾರ್ ಕಚೇರಿಗೆ ಮೂರು ಪಟ್ಟು ತೆರಿಗೆ ಕಟ್ಟಬೇಕು. ಹೀಗೆ ಒಂದು ಕೈಯ್ಯಲ್ಲಿ ಕೊಟ್ಟು ಮತ್ತೊಂದು ಕೈಯಿಂದ ಕಿತ್ತುಕೊಳ್ಳುವ ಕೆಲಸವನ್ನು ರಾಜ್ಯ ಸರ್ಕಾರ ಮಾಡುತ್ತಿದೆ ಎಂದು ಹರಿಹಾಯ್ದರು.

ಬಿಜೆಪಿ–ಜೆಡಿಎಸ್ ಮೈತ್ರಿ ರಾಜ್ಯದಲ್ಲಿ ಹೊಸ ಇತಿಹಾಸ ಬರೆಯಲಿದೆ. ಭಾರತದ ಭವಿಷ್ಯದ ದೃಷ್ಟಿಯಿಂದ ಮಾಜಿ ಪ್ರಧಾನಿಗಳಾದ ಹೆಚ್.ಡಿ.ದೇವೇಗೌಡರು ಕೈಜೋಡಿಸಿದ್ದಾರೆ. ಮೈಸೂರು–ಕೊಡಗು ಲೋಕಸಭಾ ಅಭ್ಯರ್ಥಿಗಳಾದ ಯದುವೀರ್ ಅವರಿಗೆ ರಾಜಕೀಯಕ್ಕೆ ● 9ನೇ ಪುಟಕ್ಕೆ

ಮೈಸೂರಲ್ಲಿ ಕಾಂಗ್ರೆಸ್ ಕಾರ್ಯಕರ್ತರು, ಹಿಂದುಳಿದ ಸಮಾಜದ ಮುಖಂಡರ ಬೃಹತ್ ಸಮಾವೇಶ
ಸಂವಿಧಾನ ಆಶಯಗಳ ಜಾರಿಗೆ ಕಾಂಗ್ರೆಸ್ ಬೆಂಬಲಿಸಿ

ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ಮನವಿ

ಮೈಸೂರು,ಏ.11(ಪಿಎಂ)– ದೇಶದ ಜನತೆಯ ಜೀವನ ಸುಧಾರಣೆ, ಅಭಿವೃದ್ಧಿ ಹಾಗೂ ಸರ್ವರಿಗೂ ಸಮಪಾಲು ದೊರೆಯಬೇಕಾದರೆ ಸಂವಿಧಾನಕ್ಕೆ ಬದ್ಧವಾಗಿರುವ ಕಾಂಗ್ರೆಸ್ ಅನ್ನು ಮತದಾರರು ಈ ಬಾರಿಯ ಲೋಕಸಭಾ ಚುನಾವಣೆಯಲ್ಲಿ ಬೆಂಬಲಿಸಬೇಕೆಂದು ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ಮನವಿ ಮಾಡಿದರು.

ಮೈಸೂರಿನ ಕಾಂಗ್ರೆಸ್ ಭವನದಲ್ಲಿ ಮೈಸೂರು ನಗರ (ಜಿಲ್ಲಾ) ಕಾಂಗ್ರೆಸ್ ಸಮಿತಿಯ ಹಿಂದುಳಿದ ವರ್ಗಗಳ ವಿಭಾಗ ಹಾಗೂ ಕರ್ನಾಟಕ ರಾಜ್ಯ ಅತೀ ಹಿಂದುಳಿದ ವರ್ಗಗಳ ಜಾಗೃತಿ ವೇದಿಕೆ ಜಂಟಿ ಆಶ್ರಯದಲ್ಲಿ ಗುರುವಾರ ಹಮ್ಮಿಕೊಂಡಿದ್ದ ಮೈಸೂರು–ಕೊಡಗು ಮತ್ತು ಚಾಮರಾಜನಗರ ಲೋಕಸಭಾ ಕ್ಷೇತ್ರಗಳ ಕಾಂಗ್ರೆಸ್ ಕಾರ್ಯಕರ್ತರು, ಹಿಂದುಳಿದ ಹಾಗೂ ಅತೀ ಹಿಂದುಳಿದ ಸಮುದಾಯಗಳ ಮುಖಂಡರ ಸಮಾವೇಶ ಉದ್ಘಾಟಿಸಿ ಅವರು ಮಾತನಾಡಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ರಾಜ್ಯ ಕಾಂಗ್ರೆಸ್ ಸರ್ಕಾರ ಗ್ಯಾರಂಟಿಗಳ ಜಾರಿ ಮೂಲಕ ಮಹಿಳಾ ಸಬಲೀಕರಣಕ್ಕೆ ಮುಂದಾಗಿದೆ. ಸಂವಿಧಾನದಲ್ಲಿ ದೇಶದ ಪ್ರತಿಯೊಬ್ಬ ಪ್ರಜೆಗೂ ಅಭಿವ್ಯಕ್ತಿ ಸ್ವಾತಂತ್ರ್ಯ, ಆತ್ಮಗೌರವ, ಸ್ವಾಭಿಮಾನ ಹಾಗೂ ಸಮಾನ ಅವಕಾಶ ದೊರೆಯಬೇಕೆಂಬ ಆಶಯವಿದೆ. ಈ ಎಲ್ಲವೂ ಪರಿಪೂರ್ಣವಾಗಿ ಜಾರಿಯಾಗಬೇಕಾದರೆ, ಮತದಾರರು ಸಂವಿಧಾನದ ಪರವಾಗಿರುವ ಕಾಂಗ್ರೆಸ್ ಬೆಂಬಲಿಸಬೇಕು. ಬಿಜೆಪಿಗೆ ಸಂವಿಧಾನ ಬಗ್ಗೆ ಯಾವುದೇ ಕಾಳಜಿ ಇಲ್ಲ ಎಂದು ದೂರಿದರು.

ಇದಕ್ಕೂ ಮುನ್ನ ಮಾತನಾಡಿದ ಶಾಸಕ ಕೆ.ಹರೀಶ್‌ಗೌಡ, ವಿಧಾನಸಭೆ ಚುನಾವಣೆ ಪೂರ್ವದಲ್ಲಿ ಕಾಂಗ್ರೆಸ್‌ನ ಐದು ಗ್ಯಾರಂಟಿ ಜಾರಿ ಸಾಧ್ಯವಿಲ್ಲವೆಂದು ಬಿಜೆಪಿ, ಜೆಡಿಎಸ್‌ನವರು ಟೀಕಿಸುತ್ತಿದ್ದರು. ಆದರೆ ನಮ್ಮ ಸರ್ಕಾರ ಐದು ಗ್ಯಾರಂಟಿಗಳನ್ನು ಯಶಸ್ವಿಯಾಗಿ ಜಾರಿಗೊಳಿಸಿದೆ. ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದ ಅಭಿವೃದ್ಧಿಗೆ ಪಣತೊಟ್ಟಿರುವ ಎಂ.ಲಕ್ಷ್ಮಣ್ ಅವರನ್ನು ಗೆಲ್ಲಿಸುವ ನಿಟ್ಟಿನಲ್ಲಿ ಕೆಲಸ ಮಾಡಬೇಕೆಂದು ಹೇಳಿದರು.

ಮುಡಾ ಅಧ್ಯಕ್ಷ ಕೆ.ಮರೀಗೌಡ ಮಾತನಾಡಿ, ಈ ದೇಶದ ಭವಿಷ್ಯದ ದೃಷ್ಟಿಯಿಂದ ಮಹತ್ವದ ಚುನಾವಣೆ ಇದು ಎಂಬುದನ್ನು ನಾವೆಲ್ಲರೂ ಅರ್ಥೈಸಿಕೊಳ್ಳಬೇಕು. 2014ರ ಲೋಕಸಭಾ ಚುನಾವಣೆ ಪೂರ್ವದಲ್ಲಿ ನರೇಂದ್ರ ಮೋದಿಯವರು ಪೆಟ್ರೋಲ್, ಡೀಸೆಲ್ ಬೆಲೆ ಇಳಿಸುವುದಾಗಿ ಭರವಸೆ ನೀಡಿದ್ದರು. ಆದರೆ ಅವರು ಕೊಟ್ಟ ಭರವಸೆಗಳೆಲ್ಲವೂ ಹುಸಿಯಾಗಿವೆ. ನಮ್ಮ ರಾಜ್ಯ ಕಾಂಗ್ರೆಸ್ ಸರ್ಕಾರ ಐದು ಗ್ಯಾರಂಟಿಗಳನ್ನು ಜಾರಿಗೊಳಿಸಿ ನುಡಿದಂತೆ ನಡೆದಿದೆ. ಈ ಬಾರಿಯ ಚುನಾವಣೆಯಲ್ಲಿ ಮೈಸೂರು–ಕೊಡಗು ಕ್ಷೇತ್ರದಲ್ಲಿ ಎಂ.ಲಕ್ಷ್ಮಣ್ ಹಾಗೂ ಚಾಮರಾಜನಗರ ಕ್ಷೇತ್ರದಲ್ಲಿ ಸುನೀಲ್ ಬೋಸ್ ಅವರನ್ನು ಗೆಲ್ಲಿಸಬೇಕಿದೆ ಎಂದರು. ಮಾಜಿ ಶಾಸಕ ಎಂ.ಕೆ.ಸೋಮಶೇಖರ್ ಮಾತನಾಡಿ, ದುಡಿದ ಹಣವೆಲ್ಲಾ ನರೇಂದ್ರ ಮೋದಿಯವರ ತೆರಿಗೆಗೆ ● 9ನೇ ಪುಟಕ್ಕೆ


ಮೈಸೂರಿನ ಕಾಂಗ್ರೆಸ್ ಭವನದಲ್ಲಿ ಗುರುವಾರ ಹಮ್ಮಿಕೊಂಡಿದ್ದ ಮೈಸೂರು–ಕೊಡಗು ಮತ್ತು ಚಾಮರಾಜನಗರ ಲೋಕಸಭಾ ಕ್ಷೇತ್ರಗಳ ಕಾಂಗ್ರೆಸ್ ಕಾರ್ಯಕರ್ತರು, ಹಿಂದುಳಿದ, ಅತೀ ಹಿಂದುಳಿದ ಸಮುದಾಯಗಳ ಮುಖಂಡರ ಸಮಾವೇಶವನ್ನು ಸಚಿವ ಡಾ.ಹೆಚ್.ಸಿ.ಮಹದೇವಪ್ಪ ಉದ್ಘಾಟಿಸಿದರು.

ಬೊಂಬೆ ಹೇಳುತೈತೆ 'ಮೋದಿ ಮತ್ತೆ ಪ್ರಧಾನಿ'!



ಬೆಂಗಳೂರು: ಯುಗಾದಿ ಹಬ್ಬದ ಶುಭದಿನದಂದು ಬಾಗಲಕೋಟೆ ಮತ್ತು ಧಾರವಾಡ ಜಿಲ್ಲೆಯ ಹೆಚ್ಚಿನ ಸಂಖ್ಯೆಯ ಜನ ನಂಬುವ ಭವಿಷ್ಯ ಹೇಳುವ ಮಂದಿ, ಸತತ ಮೂರನೇ ಬಾರಿಗೆ ನರೇಂದ್ರ ಮೋದಿಯವರು ಪ್ರಧಾನಿಯಾಗುವ ಮುನ್ಸೂಚನೆ ನೀಡಿದ್ದಾರೆ.

ಬಾಗಲಕೋಟೆ ಜಿಲ್ಲೆಯ ಗುಳೇದಗುಡ್ಡ ಪಟ್ಟಣದ ಮಾರ್ವಾಡಿ ಬಗೀಚದಲ್ಲಿ ಭವಿಷ್ಯ ಹೇಳುವ ಇಲಾಲ ಪರಂಪರೆಯ ಮಲ್ಲಿಕಾರ್ಜುನ ಗೋಬಿ ಮಾತನಾಡಿ, ಲೋಕಸಭೆ ಚುನಾವಣೆಯಲ್ಲಿ ಮೂರನೇ ಬಾರಿಗೆ ಪ್ರಧಾನಿ ನರೇಂದ್ರ ಮೋದಿಯವರು ಅಧಿಕಾರಕ್ಕೆ ಬರುತ್ತಾರೆ ಎಂದು ಭವಿಷ್ಯ ನುಡಿದಿದ್ದಾರೆ.

ಹಲವಾರು ವರ್ಷಗಳಿಂದ ಭವಿಷ್ಯ ನುಡಿಯುತ್ತಿರುವ ಅವರು, ಈ ವರ್ಷದ ಆರಂಭಕ್ಕೂ ಮುನ್ನ ಮಳೆ ಮತ್ತು ಬೆಳೆಗಳ ಕುರಿತು ಭವಿಷ್ಯ ನುಡಿದಿದ್ದರು. ಈ ಪ್ರದೇಶದಲ್ಲಿ ತೊಗರಿ ಮತ್ತು ರಾಗಿ ಬೆಳೆಗಳು ಕೀಟಗಳಿಂದ ಹಾನಿಗೊಳಗಾಗುತ್ತವೆ ಎಂದಿದ್ದರು. ಈ ಭವಿಷ್ಯವಾಣಿಗಳ ಪ್ರಕಾರ ಇಲ್ಲಿನ ಸಾವಿರಾರು ರೈತರು ಮತ್ತು ಸಾಂಪ್ರದಾಯಿಕ ಉಡುಗೆ ತಯಾರಕರು ತಮ್ಮ ಜೀವನದಲ್ಲಿ ಬದಲಾವಣೆಗಳನ್ನು ಮಾಡಿಕೊಳ್ಳುತ್ತಾರೆ.

ಇದೇ ವೇಳೆ ಧಾರವಾಡ ಜಿಲ್ಲೆಯ ಬೆಟಗೇರಿ ಪಟ್ಟಣ ಸಮೀಪದ ಹನುಮನಕೊಪ್ಪ ಗ್ರಾಮದಲ್ಲಿ ಖ್ಯಾತ ಬೊಂಬೆ ಭವಿಷ್ಯ ನುಡಿದಿದ್ದು, ರಾಜ್ಯ ಹಾಗೂ ಕೇಂದ್ರ ರಾಜಕಾರಣದಲ್ಲಿ ಯಾವುದೇ ಬದಲಾವಣೆ ಆಗುವುದಿಲ್ಲ, ಪ್ರಧಾನಿ ಮೋದಿ ಅವರು ಕೇಂದ್ರದಲ್ಲಿ ಮೂರನೇ ಅವಧಿಗೆ ಅಧಿಕಾರಕ್ಕೆ ಬರುತ್ತಾರೆ ಎಂಬುದನ್ನು ಸೂಚಿಸುತ್ತಿದೆ. ಸಾಂಪ್ರದಾಯಿಕ ಬೊಂಬೆ ಭವಿಷ್ಯವನ್ನು 1936ರಿಂದ ಈ ಪ್ರದೇಶದಲ್ಲಿ ಹೆಚ್ಚಿನ ಸಂಖ್ಯೆಯ ಜನ ಅನುಸರಿಸುತ್ತಿದ್ದಾರೆ. ಈ ಹಿಂದೆ ಬಿಜೆಪಿ ಅಧಿಕಾರ ಕಳೆದುಕೊಳ್ಳಲಿದ್ದು, ● 9ನೇ ಪುಟಕ್ಕೆ

ರಾಜ್ಯದಲ್ಲಿ ಎರಡನೇ ಹಂತದ ಚುನಾವಣೆಗೆ ಇಂದಿನಿಂದ
ನಾಮಪತ್ರ ಸಲ್ಲಿಕೆ

● ಉತ್ತರ ಕರ್ನಾಟಕದ 14 ಕ್ಷೇತ್ರಗಳಿಗೆ ಚುನಾವಣೆ
● ನಾಮಪತ್ರ ಸಲ್ಲಿಕೆಗೆ ಏ.19 ಕಡೇ ದಿನ; 20ರಂದು ಪರಿಶೀಲನೆ
● ಏ.22 ನಾಮಪತ್ರ ವಾಪಸ್‌ಗೆ ಕಡೇ ದಿನ; ಮೇ 7 ಮತದಾನ

ಬೆಂಗಳೂರು, ಏ.11(ಕೆಎಂಶಿ)– ಉತ್ತರ ಕರ್ನಾಟಕದ 14 ಲೋಕಸಭಾ ಕ್ಷೇತ್ರಗಳಿಗೆ ಕೇಂದ್ರ ಚುನಾವಣಾ ಆಯೋಗ ಶುಕ್ರವಾರ (ಏಪ್ರಿಲ್ 12) ಅಧಿಸೂಚನೆ ಹೊರಡಿಸಲಿದ್ದು ಅಂದಿನಿಂದಲೇ ನಾಮಪತ್ರ ಸಲ್ಲಿಕೆ ಆರಂಭಗೊಳ್ಳಲಿದೆ. ಕರ್ನಾಟಕದಲ್ಲಿ ಎರಡನೇ ಹಂತದಲ್ಲಿ ನಡೆಯುತ್ತಿರುವ ಚುನಾವಣೆಗೆ ಮಾಜಿ ಮುಖ್ಯಮಂತ್ರಿಗಳು, ಸಿದ್ದರಾಮಯ್ಯ ಸಂಪುಟದ ಸಚಿವರ ಸಂಬಂಧಿಕರೇ ಹೆಚ್ಚಿನ ಮಂದಿ ಕಣಕ್ಕಿಳಿಯಲ್ಲಿದ್ದಾರೆ.

ದಾವಣಗೆರೆ, ಶಿವಮೊಗ್ಗ, ಹಾವೇರಿ, ಉತ್ತರ ಕನ್ನಡ, ಧಾರವಾಡ, ಬೆಳಗಾವಿ, ಚಿಕ್ಕೋಡಿ, ವಿಜಾಪುರ, ಬಾಗಲಕೋಟೆ, ಗುಲ್ಬರ್ಗ, ರಾಯಚೂರು, ಬೀದರ್, ಕೊಪ್ಪಳ ಹಾಗೂ ಬಳ್ಳಾರಿ ಲೋಕಸಭಾ ಕ್ಷೇತ್ರಗಳಿಗೆ ನಾಳೆಯಿಂದ ನಾಮಪತ್ರ ಸಲ್ಲಿಕೆ ಮಾಡಬಹುದಾಗಿದೆ.

ನಾಮಪತ್ರ ಸಲ್ಲಿಕೆಗೆ ಏಪ್ರಿಲ್ 19 ಕಡೆಯ ದಿನವಾಗಿದ್ದು, 20 ರಂದು ನಾಮಪತ್ರ ಪರಿಶೀಲನೆ, ಏಪ್ರಿಲ್ 22 ರಂದು ನಾಮಪತ್ರ ಹಿಂತೆಗೆದುಕೊಳ್ಳಲು ಕಡೆಯ ದಿನವಾಗಿರುತ್ತದೆ.

ಮೇ 7ರಂದು ಮತದಾನ ನಡೆಯಲಿದ್ದು, ಫಲಿತಾಂಶ ಜೂನ್ 4ರಂದು ಪ್ರಕಟಗೊಳ್ಳಲಿದೆ. ಉತ್ತರ ಕರ್ನಾಟಕ ಭಾಗದಲ್ಲಿ ನಡೆಯುವ ಚುನಾವಣೆಯಲ್ಲಿ ಪ್ರಭಾವಿಗಳು ಮತ್ತು ಮಾಜಿ ಮುಖ್ಯಮಂತ್ರಿ ಜಗದೀಶ್ ಶೆಟ್ಟರ್ (ಬೆಳಗಾವಿ), ಬಸವರಾಜ ಬೊಮ್ಮಾಯಿ (ಹಾವೇರಿ), ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಪುತ್ರ ಬಿ.ವೈ.ರಾಘವೇಂದ್ರ (ಶಿವಮೊಗ್ಗ), ಇದೇ ಕ್ಷೇತ್ರದಲ್ಲಿ ಕಾಂಗ್ರೆಸ್‌ನಿಂದ ಮಾಜಿ ಮುಖ್ಯ ಮಂತ್ರಿ, ದಿವಂಗತ ● 9ನೇ ಪುಟಕ್ಕೆ

ಶಾರದಾ ವಿಲಾಸ ಕಾಲೇಜಿಗೆ ಶೇ.91.07 ಫಲಿತಾಂಶ


ಪುರುಷೋತ್ತಮ


ಗಂಗಾಧರ


ಹರ್ಷ


ಸಭಾ


ಎಂ.ಚಂದನ


ಭಾಂಯಾ


ಸೃಜನಾ


ನಿಶ್ಚಿತ

ಮೈಸೂರು, ಏ.11–ಮೈಸೂರಿನ ಕೃಷ್ಣ ಮೂರ್ತಿಪುರಂನಲ್ಲಿರುವ ಶಾರದಾ ವಿಲಾಸ ಪದವಿ ಪೂರ್ವ ಕಾಲೇಜಿಗೆ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಯಲ್ಲಿ ಶೇ.91.07ರಷ್ಟು ಫಲಿತಾಂಶ ಲಭಿಸಿದೆ.

ಒಟ್ಟು 336 ವಿದ್ಯಾರ್ಥಿಗಳ ಪೈಕಿ 306 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದು, 58 ಅತ್ಯುನ್ನತ ಶ್ರೇಣಿ, 210 ಪ್ರಥಮ ದರ್ಜೆ, 32 ದ್ವಿತೀಯ ದರ್ಜೆ, 6 ವಿದ್ಯಾರ್ಥಿಗಳು ತೃತೀಯ ದರ್ಜೆಯಲ್ಲಿ ತೇರ್ಗಡೆ ಹೊಂದಿದ್ದಾರೆ. ಕಾಲೇಜಿನಲ್ಲಿ ಪ್ರಥಮ ಸ್ಥಾನವನ್ನು ವಾಣಿಜ್ಯ ವಿಭಾಗದಲ್ಲಿ ಪುರುಷೋತ್ತಮ ಪಿ. 600ಕ್ಕೆ 577 ಅಂಕಗಳನ್ನು ಪಡೆದರೆ, ಗಂಗಾಧರ್ ವಿಜ್ಞಾನ ವಿಭಾಗದಲ್ಲಿ 572 ಅಂಕಗಳೊಂದಿಗೆ 95.33 ಅಂಕ ಪಡೆದು ಪ್ರಥಮ ಸ್ಥಾನ ಗಳಿಸಿದ್ದಾರೆ. ಎ. ಹರ್ಷ 570, ಸಭಾ ಆರ್.568, ಚಂದನಾ ಎಂ. 568, ಭಾಂಯಾ ಎಂ.ಎಸ್. 567, ಸೃಜನಾ ಎಸ್. 565, ನಿಶ್ಚಿತ 563, ಶಶಿಕಲಾ 562, ನಿರಂಜನ್ ಎಸ್. 561, ಪ್ರಮೋದ್ ಡಿ.ಸಿ. 561, ನವೀನ ಬಿ.ಎನ್.558 ಅಂಕಗಳನ್ನು ಗಳಿಸಿದ್ದಾರೆ.

ಕಳೆದ ಬಾರಿಗೆ ಹೋಲಿಸಿದರೆ ಈ ಬಾರಿ ಶೇ.5ರಷ್ಟು ಹೆಚ್ಚು ಫಲಿತಾಂಶ ಕಾಲೇಜಿಗೆ ಲಭಿಸಿದ್ದು, ಇದಕ್ಕೆ ಆಡಳಿತ ಮಂಡಳಿ ಹಾಗೂ ಅಧ್ಯಾಪಕರ ಸತತ ಪರಿಶ್ರಮ ಹಾಗೂ ಬಹು ಆಯ್ಕೆ ಪ್ರಶ್ನೆಗಳ ಕಲಿಕೆಗೆ ಹೆಚ್ಚು ಆದ್ಯತೆ ಮತ್ತು ವಿದ್ಯಾರ್ಥಿಗಳ ಸತತ ಓದಿನಲ್ಲಿ ಆಸಕ್ತಿ ನೀಡಿದ್ದು, ಫಲಿತಾಂಶ ಹೆಚ್ಚಲು ಕಾರಣವಾಗಿದೆ ಎಂದು ಕಾಲೇಜಿನ ಪ್ರಾಂಶುಪಾಲ ಸಿ.ಕೆ.ಅಶೋಕ ಕುಮಾರ್ ತಿಳಿಸಿ, ಹರ್ಷ ವ್ಯಕ್ತಪಡಿಸಿದ್ದಾರೆ.

ಪ್ರಥಮ್ ಎಂ. ಉನ್ನತ ಶ್ರೇಣಿ



ಮೈಸೂರು,ಏ.11–ಮೈಸೂರಿನ ಸದ್ವಿದ್ಯಾ ಸೆಮಿ ರೆಸಿಡೆನ್ಸಿ ಪಿಯು ಕಾಲೇಜಿನ ಎಂ.ಪ್ರಥಮ್ ದ್ವಿತೀಯ ಪಿಯುಸಿಯಲ್ಲಿ 526 ಅಂಕ ಗಳಿಸುವ ಮೂಲಕ ಉನ್ನತ ಶ್ರೇಣಿಯಲ್ಲಿ ತೇರ್ಗಡೆ ಹೊಂದಿದ್ದಾರೆ.

ಸಂಸ್ಕೃತದಲ್ಲಿ 93, ಇಂಗ್ಲಿಷ್‌ನಲ್ಲಿ 80, ಭೌತಶಾಸ್ತ್ರದಲ್ಲಿ 79, ರಸಾಯನ ಶಾಸ್ತ್ರದಲ್ಲಿ 84, ಗಣಿತ ಶಾಸ್ತ್ರದಲ್ಲಿ 93 ಮತ್ತು ಕಂಪ್ಯೂಟರ್ ಸೈನ್ಸ್‌ನಲ್ಲಿ 97 ಅಂಕ ಗಳಿಸಿ ಕಾಲೇಜಿಗೆ ಕೀರ್ತಿ ತಂದಿದ್ದಾರೆ. ಈತ ಹೆಬ್ಬಾಳು ಎರಡನೇ ಹಂತದ ನಿವಾಸಿ ಪ್ರಶಾಂತ್ ಮತ್ತು ಜ್ಯೋತಿ ದಂಪತಿ ಪುತ್ರ.

ಸೌಜನ್ಯ ಡಿ.ಗೆ ಶೇ.92.66 ಗಳಿಕೆ



ಮೈಸೂರು,ಏ.11–ನಗರ ಅಶೋಕಪುರಂನ 9ನೇ ಕ್ರಾಸ್ ನಿವಾಸಿ ದಿವಂಗತ ದಿನೇಶ್ ಹಾಗೂ ಶ್ರೀಮತಿ ಜಯಲಕ್ಷ್ಮಿಯವರ ಪುತ್ರಿ, ಶಾರದಾ ವಿಲಾಸ ಕಾಲೇಜಿನ ವಾಣಿಜ್ಯ ವಿಭಾಗದ ದ್ವಿತೀಯ ಪಿಯುಸಿ ವಿದ್ಯಾರ್ಥಿನಿ ಸೌಜನ್ಯ ಡಿ. 600ಕ್ಕೆ 556 (ಶೇ.92.66) ಅಂಕಗಳನ್ನು ಗಳಿಸಿದ್ದಾರೆ. ಕನ್ನಡದಲ್ಲಿ 97, ಇಂಗ್ಲಿಷ್ 90, ಅರ್ಥಶಾಸ್ತ್ರ 85, ಭೂಗೋಳ ಶಾಸ್ತ್ರ 99, ವ್ಯವಹಾರ ಅಧ್ಯಯನ 93, ಲೆಕ್ಕಶಾಸ್ತ್ರ 92 ಹೀಗೆ ಒಟ್ಟು 556 ಅಂಕಗಳನ್ನು ಗಳಿಸಿ ಅತ್ಯುನ್ನತ ಶ್ರೇಣಿಯಲ್ಲಿ ತೇರ್ಗಡೆ ಹೊಂದಿದ್ದಾರೆ.

ಜೆಎಸ್‌ಎಸ್ ಪಿಯು ಕಾಲೇಜಿಗೆ ಶೇ.99 ಫಲಿತಾಂಶ

ಮೈಸೂರು,ಏ.11–ಮೈಸೂರಿನ ಮಾನಸಗಂಗೋತ್ರಿಯಲ್ಲಿರುವ ಜೆಎಸ್‌ಎಸ್ ಪಿಯು ಕಾಲೇಜಿನ ವಿಜ್ಞಾನ ವಿಭಾಗದ ಪಿಸಿಎಂಬಿಯಲ್ಲಿ ಶೇ.99 ಫಲಿತಾಂಶ ಬಂದಿದೆ. ಒಟ್ಟು 95 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿದ್ದು, 94 ಮಂದಿ ಉತ್ತೀರ್ಣರಾಗಿ 30 ವಿದ್ಯಾರ್ಥಿಗಳು ಅತ್ಯುನ್ನತ ದರ್ಜೆಯಲ್ಲಿ, 56 ವಿದ್ಯಾರ್ಥಿಗಳು ಪ್ರಥಮ, 7 ವಿದ್ಯಾರ್ಥಿಗಳು ದ್ವಿತೀಯ ದರ್ಜೆಯಲ್ಲಿ ಮತ್ತು ಒಬ್ಬ ತೃತೀಯ ದರ್ಜೆಯಲ್ಲಿ ಉತ್ತೀರ್ಣರಾಗಿದ್ದಾರೆ ಎಂದು ಪ್ರಾಂಶುಪಾಲ ಶಾಂತಮಲ್ಲಪ್ಪ ತಿಳಿಸಿದ್ದಾರೆ.

ಶೇಷಾದ್ರಿಪುರಂ ಪಿಯು ಕಾಲೇಜಿಗೆ ಉತ್ತಮ ಫಲಿತಾಂಶ


ಅನಿಶ್ ಭಟ್


ರಕ್ಷಿತಾ


ಭವಂತ್


ಅಕ್ಷತಾ


ಚಂದನಶ್ರೀ

ಮೈಸೂರು, ಏ. 11– ಮೈಸೂರಿನ ಶೇಷಾದ್ರಿಪುರಂ ಸ್ವತಂತ್ರ ಪದವಿ ಪೂರ್ವ ಕಾಲೇಜು 2023–24ನೇ ಸಾಲಿನ ದ್ವಿತೀಯ ಪಿ.ಯು.ಸಿ ವಾರ್ಷಿಕ ಪರೀಕ್ಷೆಯಲ್ಲಿ ಅತ್ಯುತ್ತಮ ಫಲಿತಾಂಶ ಗಳಿಸಿದೆ.

ವಾಣಿಜ್ಯ ವಿಭಾಗದಲ್ಲಿ ಇ.ಬಿ.ಎ.ಬಿ ವಿಭಾಗದಲ್ಲಿ ಅನೀಶ್ ಎನ್ ಭಟ್ 586 ಅಂಕಗಳು ರಾಜ್ಯಕ್ಕೆ 12ನೇ ಟಾಪರ್, ರಕ್ಷಿತ.ಬಿ.ಎಸ್.585 ಅಂಕಗಳು, ರಾಜ್ಯಕ್ಕೆ 13ನೇ ಟಾಪರ್ ಆಗಿದ್ದಾರೆ.

ಪಿ.ಸಿ.ಎಂ.ಬಿ ವಿಭಾಗದಲ್ಲಿ ಭವಂತ್. ಆರ್. 581 ಅಂಕಗಳನ್ನು ಪಡೆದು ರಾಜ್ಯಕ್ಕೆ 18ನೇ ಟಾಪರ್, ಅಕ್ಷತ.ಎಸ್.ಕೊಟ್ಟೂರು 579, ಚಂದನಶ್ರೀ. ಜಿ.ಎನ್. 579 ಅಂಕಗಳನ್ನು ಪಡೆದು ರಾಜ್ಯಕ್ಕೆ 20ನೇ ಟಾಪರ್ ಆಗಿದ್ದಾರೆ. ಇ.ಬಿ.ಎ.ಎಸ್ ವಿಭಾಗದಲ್ಲಿ ಸಿಂಚಲ್ ಕೆ.ಎಸ್. 560 ಅಂಕಗಳು. ಇ.ಬಿ.ಎ.ಸಿ ವಿಭಾಗದಲ್ಲಿ ಅನುಜ ಎಂ.ಎಸ್ 576 ಅಂಕಗಳನ್ನು ಪಡೆದು ಕಾಲೇಜಿನಲ್ಲಿ ಅತೀ ಹೆಚ್ಚು ಅಂಕಗಳನ್ನು ಪಡೆದ ವಿದ್ಯಾರ್ಥಿಗಳಾಗಿದ್ದಾರೆ. ಪಿ.ಸಿ.ಎಂ.ಸಿ ವಿಭಾಗದಲ್ಲಿ ಭೂಮಿಕ.ಡಿ 563 ಅಂಕಗಳನ್ನು ಪಡೆದಿರುತ್ತಾರೆ.

ದ್ವಿತೀಯ ಪಿ.ಯು.ಸಿ ಪರೀಕ್ಷೆಯಲ್ಲಿ ಶೇಷಾದ್ರಿಪುರಂ ಸ್ವತಂತ್ರ ಪದವಿ ಪೂರ್ವ ಕಾಲೇಜಿಗೆ ಶೇಕಡಾ 96.43 ಫಲಿತಾಂಶ ಬಂದಿದೆ. 308 ವಿದ್ಯಾರ್ಥಿಗಳು ವಾರ್ಷಿಕ ಪರೀಕ್ಷೆಗೆ ಹಾಜರಾಗಿದ್ದು, ವಿಜ್ಞಾನ ವಿಭಾಗದ 184 ವಿದ್ಯಾರ್ಥಿಗಳಲ್ಲಿ 55 ವಿದ್ಯಾರ್ಥಿಗಳು ಡಿಸ್ಟಿಂಕ್ಷನ್, 104 ಮಂದಿ ಪ್ರಥಮ ಶ್ರೇಣಿ ಹಾಗೂ ವಾಣಿಜ್ಯ ವಿಭಾಗದಲ್ಲಿ 125 ವಿದ್ಯಾರ್ಥಿಗಳಲ್ಲಿ 38 ವಿದ್ಯಾರ್ಥಿಗಳು ಡಿಸ್ಟಿಂಕ್ಷನ್, 58 ವಿದ್ಯಾರ್ಥಿಗಳು ಪ್ರಥಮ ಶ್ರೇಣಿ ಹಾಗೂ 10 ವಿದ್ಯಾರ್ಥಿಗಳು 100ಕ್ಕೆ 100 ಅಂಕಗಳನ್ನು ಪಡೆದು ಕಾಲೇಜಿಗೆ ಹೆಮ್ಮೆ ತಂದಿದ್ದಾರೆ.

ವಿವೇಕ ವಿದ್ಯಾಲಯ ಕಾಲೇಜಿಗೆ ಉತ್ತಮ ಫಲಿತಾಂಶ


ಅನನ್ಯ


ಟಿ.ಪೂಜಾ


ಚಿರಾಗ್


ಅಂಶುಲಾ


ಉಲ್ಲಾಸ್

ಮೈಸೂರು, ಏ. 11–ಶ್ರೀರಾಂಪುರದಲ್ಲಿರುವ ಶ್ರೀ ವಿವೇಕ ವಿದ್ಯಾಲಯ ಪಿ.ಯು. ಕಾಲೇಜಿಗೆ ದ್ವಿತೀಯ ಪಿಯು ಪರೀಕ್ಷೆಯಲ್ಲಿ ಉತ್ತಮ ಫಲಿತಾಂಶ ಬಂದಿದೆ.

ಅನನ್ಯ ಎಸ್.ಶಾಸ್ತ್ರೀ ಹಾಗೂ ಪೂಜಾ. (97.3) 584/600 ಅಂಕಗಳೊಂದಿಗೆ ಕಾಲೇಜಿಗೆ ಪ್ರಥಮ ಸ್ಥಾನ ಗಳಿಸಿದ್ದಾರೆ. ದ್ವಿತೀಯ ಸ್ಥಾನವನ್ನು ಚಿರಾಗ್ ಕಮರವಳ್ಳಿ (97) 581/600, ತೃತೀಯ ಸ್ಥಾನವನ್ನು ಅಂಶುಲಾ ಅಶೋಕ್‌ಬಾಬು (96.3), ಉಲ್ಲಾಸ್ ಪಿ (95.), ರಾಕೇಶ್ ಹೆಚ್ ಎನ್ (95), ಶ್ರಾವ್ಯ ಎಂ.ವಿ (94), ಕೀರ್ತನ .ಎಸ್ (93.8), ಕಿಶನ್. ಡಿ (93), ಧ್ರುವರಾಜ್ ಬಿ. ಜಿ (91.6) ಪಡೆದಿದ್ದಾರೆ. ಪರೀಕ್ಷೆಗೆ ಹಾಜರಾದ ಒಟ್ಟು 80 ವಿದ್ಯಾರ್ಥಿಗಳಲ್ಲಿ 34 ವಿದ್ಯಾರ್ಥಿಗಳು ಅತ್ಯುತ್ತಮ ಶ್ರೇಣಿಯಲ್ಲಿ, 43 ಮಂದಿ ಪ್ರಥಮ ಹಾಗೂ ಮೂವರು ವಿದ್ಯಾರ್ಥಿಗಳು ದ್ವಿತೀಯ ದರ್ಜೆಯಲ್ಲಿ ಉತ್ತೀರ್ಣರಾಗಿದ್ದಾರೆ.


ರಾಕೇಶ್

ಚೇತನ್‌ಕುಮಾರ್‌ಗೆ 591 ಅಂಕ




ಮೈಸೂರು,ಏ.11–ಬನ್ನೂರಿನ ಸರ್ಕಾರಿ ಪದವಿ ಪೂರ್ವ ಕಾಲೇಜಿನ ದ್ವಿತೀಯ ಪಿಯುಸಿ ವಿದ್ಯಾರ್ಥಿ ಚೇತನ್‌ಕುಮಾರ್ ಕೆ. 600ಕ್ಕೆ 591 ಅಂಕಗಳನ್ನು ಗಳಿಸಿ ಶೇ.98.5ರಷ್ಟು ಫಲಿತಾಂಶ ಪಡೆದು ಅತ್ಯುನ್ನತ ಶ್ರೇಣಿಯಲ್ಲಿ ತೇರ್ಗಡೆ ಹೊಂದಿದ್ದಾರೆ. ಕನ್ನಡದಲ್ಲಿ 100ಕ್ಕೆ 100, ಇಂಗ್ಲೀಷ್‌ನಲ್ಲಿ 96, ಭೌತಶಾಸ್ತ್ರ 97, ರಸಾಯನಶಾಸ್ತ್ರ 98, ಗಣಿತಶಾಸ್ತ್ರ 100, ಜೀವಶಾಸ್ತ್ರ 100 ಅಂಕಗಳನ್ನು ಪಡೆದಿದ್ದಾರೆ. ಚೇತನ್‌ಕುಮಾರ್ ಅವರು ಜೀವವಿಮಾ ನಿಗಮದ ಪ್ರತಿನಿಧಿ ಕೆಂಪರಾಜ್ ಹಾಗೂ ಶ್ರೀಮತಿ ರೂಪ ಅವರ ಪುತ್ರ.

ಆಸ್ತಿ ತೆರಿಗೆ ಪಾವತಿಸಲು ಅಗತ್ಯ ವ್ಯವಸ್ಥೆ ಮಾಡದ ಮಹಾನಗರ ಪಾಲಿಕೆ ಆಡಳಿತ ವರ್ಗ; ತಾಂತ್ರಿಕ ದೋಷಕ್ಕೆ ಜನರ ಹಿಡಿಶಾಪ

ಮೈಸೂರು, ಏ.11 (ಎಂಟಿವೈ)– ಮೈಸೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿರುವ ಆಸ್ತಿಗಳಿಗೆ ತೆರಿಗೆ ಪಾವತಿಸಲು ಜನ ಸಿದ್ಧರಿದ್ದರೂ, ತಾಂತ್ರಿಕ ದೋಷದಿಂದಾಗಿ ಆನ್‌ಲೈನ್ ಮೂಲಕ ತೆರಿಗೆ ಪಾವತಿಸಲು ಅಡಚಣೆಯಾಗುತ್ತಿದೆ. ಆಫ್‌ಲೈನ್ ಮೂಲಕ ತೆರಿಗೆ ಪಾವತಿಸಲು ಸಾಲುಗಟ್ಟಿ ನಿಲ್ಲಬೇಕಾದ ಅನಿವಾರ್ಯತೆ ಎದುರಾಗಿದೆ.

ಪ್ರಸಕ್ತ ಸಾಲಿನ ಪಾಲಿಕೆ ವ್ಯಾಪ್ತಿಯ ಮನೆ, ನಿವೇಶನ, ವಾಣಿಜ್ಯ ಕಟ್ಟಡಗಳೂ ಸೇರಿದಂತೆ ಇತರೆ ಆಸ್ತಿಗಳ ತೆರಿಗೆ ಪಾವತಿಸಲು ಆಸ್ತಿ ಮಾಲೀಕರು ಕಚೇರಿ ಮುಂದೆ ಸಾಲುಗಟ್ಟಿ ನಿಲ್ಲುವುದನ್ನು ತಪ್ಪಿಸಲು ಮೈಸೂರು ಮಹಾನಗರ ಪಾಲಿಕೆ ಈ ಹಿಂದೆಯೇ ಆನ್‌ಲೈನ್ ಪಾವತಿ ವ್ಯವಸ್ಥೆ ಜಾರಿಗೆ ತಂದಿದೆಯಾದರೂ, ಪದೇ ಪದೆ ತಾಂತ್ರಿಕ ಸಮಸ್ಯೆ ಉಂಟಾಗಿ ಆನ್‌ಲೈನ್ ಮೂಲಕ ತೆರಿಗೆ ಪಾವತಿಸಲು ಸಾಧ್ಯವಾಗುತ್ತಿಲ್ಲ. ಆಸ್ತಿ ತೆರಿಗೆ ಪಾವತಿಸಿ ಶೇ.5 ರಷ್ಟು ರಿಯಾಯಿತಿ ಸೌಲಭ್ಯ ಪಡೆದುಕೊಳ್ಳಲು ಜನ ಮುಂದೆ ಬಂದರೂ, ಸಮರ್ಪಕ ವ್ಯವಸ್ಥೆ ಇಲ್ಲದ ಕಾರಣ ಅನೇಕರು ತೀವ್ರ ಬೇಸರ ವ್ಯಕ್ತಪಡಿಸಿದ್ದಾರೆ.

ಆಫ್‌ಲೈನ್‌ನಲ್ಲಿ ಸುಸೂತ್ರ: ಆಫ್‌ಲೈನ್ ಮೂಲಕ ತೆರಿಗೆ ಪಾವತಿ ಸುಸೂತ್ರವಾಗಿ ಸಾಗುತ್ತಿದೆ. ಆದರೆ, ಬಿರು ಬಿಸಿಲಲ್ಲಿ ಕಚೇರಿಗೆ ಬಂದು ಸರದಿ ಸಾಲಿನಲ್ಲಿ ನಿಲ್ಲಬೇಕಾದ ಅನಿವಾರ್ಯತೆಯಿಂದಾಗಿ ಜನರು ಹಿಂದೇಟು ಹಾಕುವಂತಾಗಿದೆ.


ಮೈಸೂರಿನ ಶಾರದಾದೇವಿನಗರದಲ್ಲಿರುವ ಪಾಲಿಕೆ ವಲಯ ಕಚೇರಿ–3ರಲ್ಲಿ ಆಸ್ತಿ ತೆರಿಗೆ ಪಾವತಿಸಲು ನಿಂತಿರುವ ಜನ.

ಮೈಸೂರು ಮಹಾನಗರಪಾಲಿಕೆಯ 9 ವಲಯ ಕಚೇರಿಗಳಲ್ಲೂ ಆಫ್‌ಲೈನ್ ಹಾಗೂ ಆನ್‌ಲೈನ್ ಮೂಲಕ ಆಸ್ತಿ ತೆರಿಗೆ ಪಾವತಿಗೆ ವ್ಯವಸ್ಥೆ ಮಾಡಲಾಗಿತ್ತು. ಆದರೆ, ಆನ್‌ಲೈನ್ ತೆರಿಗೆ ಪಾವತಿ ವ್ಯವಸ್ಥೆ ಅಸ್ತವ್ಯಸ್ತವಾಗಿದೆ. ಈ ಸಂಬಂಧ ನಗರಪಾಲಿಕೆ ಅಧಿಕಾರಿಗಳ ಗಮನಕ್ಕೆ ತಂದಿದ್ದರೂ, ಇದುವರೆಗೆ ದೋಷ ಸರಿಪಡಿಸಲು ಸಾಧ್ಯವಾಗಿಲ್ಲ. ಇದರಿಂದ ತೆರಿಗೆದಾರರು ವಲಯ ಕಚೇರಿಗಳಿಗೆ ಅಲೆಯುವ ಸ್ಥಿತಿ ನಿರ್ಮಾಣವಾಗಿದೆ.

ಪಿಐಡಿ ನಂಬರ್ ಕೊಟ್ಟು ಪರಿಶೀಲಿಸಿಕೊಳ್ಳಿ: ಆಸ್ತಿ ಮಾರ್ಗಸೂಚಿ ಮೌಲ್ಯಕ್ಕೆ ಅನುಗುಣವಾಗಿ ಈ ಬಾರಿ ತೆರಿಗೆ ಪ್ರಮಾಣದಲ್ಲಿ ಹೆಚ್ಚಳವಾಗಿದೆ. ಇದು ಆನ್‌ಲೈನ್ ಮೂಲಕ ತೆರಿಗೆ ಪಾವತಿಸಲು ಸಮಸ್ಯೆಯಾಗಿ ಪರಿಣಮಿಸಿದೆ ಎಂದು ಕೆಲವು ಸಾರ್ವಜನಿಕರು ಆರೋಪಿಸಿದ್ದಾರೆ.

ಆನ್‌ಲೈನ್ ಮೂಲಕ ತೆರಿಗೆ ಪಾವತಿಸಲು ಎಷ್ಟೇ ಪ್ರಯತ್ನಿಸಿದರೂ ಯಾವುದೇ ಪ್ರಯೋಜನವಾಗಲಿಲ್ಲ. ಆದರೆ, ಕಚೇರಿ ಬಂದು ವಿಚಾರಿಸಿದಾಗ ಪಿಐಡಿ ನಂಬರ್ ಪಡೆದು ಸ್ಲಿಪ್‌ವೊಂದನ್ನು ನೀಡಿದರು. ಅದರಲ್ಲಿ ಕಟ್ಟಬೇಕಾದ ತೆರಿಗೆ ಮೊತ್ತ ಸ್ವಲ್ಪ ಹೆಚ್ಚಾಗಿತ್ತು. ಆಗ ಸಿಬ್ಬಂದಿಗಳನ್ನು ಕೇಳಿದಾಗ ಆಸ್ತಿ ಮೌಲ್ಯಕ್ಕೆ ಅನುಗುಣವಾಗಿ ತೆರಿಗೆ ದರ ಹೆಚ್ಚಳವಾಗಿದೆ. ಈ ಹಿನ್ನೆಲೆಯಲ್ಲಿ ದರದ ವ್ಯತ್ಯಾಸದಿಂದ ಕೆಲವೊಮ್ಮೆ ಆನ್‌ಲೈನ್‌ನಲ್ಲಿ ತೆರಿಗೆ ಪಾವತಿಸಲು ಸಾಧ್ಯವಾಗುತ್ತಿಲ್ಲ ಎಂದು ಸ್ಪಷ್ಟನೆ ನೀಡಿದರು ಎಂದು ವ್ಯಕ್ತಿಯೊಬ್ಬರು ಅಸಮಾಧಾನ ವ್ಯಕ್ತಪಡಿಸಿದರು.

ಪಾಲಿಕೆಗೂ ನಷ್ಟ ಜನರಿಗೂ ತೊಂದರೆ: ಕುವೆಂಪುನಗರದ ನಿವಾಸಿ ಪೃಥ್ವಿ ಎಂಬುವರು 'ಮೈಸೂರು ಮಿತ್ರ'ನೊಂದಿಗೆ ಮಾತನಾಡಿ, ಏಪ್ರಿಲ್‌ನಲ್ಲಿ ಆಸ್ತಿ ತೆರಿಗೆ ಪಾವತಿಸಿದರೆ, ತೆರಿಗೆ ಮೊತ್ತದಲ್ಲಿ ಶೇ.5ರಷ್ಟು ರಿಯಾಯಿತಿ ನೀಡುವುದಾಗಿ ಪಾಲಿಕೆ ಘೋಷಿಸಿದೆ. ಈಗಾಗಲೇ ವರ್ಷದಿಂದ ವರ್ಷಕ್ಕೆ ತೆರಿಗೆ ದರವೂ ಹೆಚ್ಚಾಗುತ್ತಿದೆ. ಶೇ.5ರಷ್ಟು ರಿಯಾಯ್ತಿಯಡಿ ಆಸ್ತಿ ತೆರಿಗೆ ಪಾವತಿಸಲು ಪ್ರಯತ್ನಿಸುತ್ತಿದ್ದರೂ, ಆನ್‌ಲೈನ್‌ನಲ್ಲಿ ತೆರಿಗೆ ಕಟ್ಟಲು ಸಾಧ್ಯವಾಗುತ್ತಿಲ್ಲ. ತಂತ್ರಜ್ಞಾನ ಬೆಳೆದಂತೆ ಎಲ್ಲಾ ವ್ಯವಹಾರವೂ ಆನ್‌ಲೈನ್ ಮೂಲಕ ನಡೆಸಲಾಗುತ್ತಿದೆ. ಆದರೆ, ತಾಂತ್ರಿಕ ದೋಷದಿಂದಾಗಿ ಆನ್‌ಲೈನ್‌ನಲ್ಲಿ ತೆರಿಗೆ ಪಾವತಿಸಲು ಸಾಧ್ಯವಾಗುತ್ತಿಲ್ಲ.

ನಗರಪಾಲಿಕೆ ಅಧಿಕಾರಿಗಳು ತಾಂತ್ರಿಕ ದೋಷ ಸರಿಪಡಿಸಿದರೆ, ನಿಗದಿತ ಸಮಯದಲ್ಲಿ ಹೆಚ್ಚಿನ ಪ್ರಮಾಣದ ತೆರಿಗೆ ಸಂಗ್ರಹವಾಗಿ, ಪಾಲಿಕೆಗೂ ಆದಾಯ ಸಂಗ್ರಹವಾಗುತ್ತದೆ ಎಂದು ಅಭಿಪ್ರಾಯಪಟ್ಟರು.

ತಾಂತ್ರಿಕ ದೋಷ ಸರಿಪಡಿಸಲು ಕ್ರಮ

ಆನ್‌ಲೈನ್ ಮೂಲಕ ಆಸ್ತಿ ತೆರಿಗೆ ಪ್ರಕ್ರಿಯೆ ಸುಗಮವಾಗಿ ನಡೆಯುತ್ತಿತ್ತು. ಆದರೆ ತಾಂತ್ರಿಕ ದೋಷದಿಂದ ಸರಿ ಮಾಡಲು ಅಗತ್ಯ ಕ್ರಮ ಕೈಗೊಳ್ಳಲಾಗುವುದು. ಎಲ್ಲಾ ವಲಯ ಕಚೇರಿಗಳ ಸಹಾಯಕ ಆಯುಕ್ತರಿಂದ ಮಾಹಿತಿ ಪಡೆದು, ಸಮಸ್ಯೆ ಬಗೆಹರಿಸಲಾಗುವುದು.

–ಡಾ.ಎನ್.ಎನ್.ಮಧು, ಆಯುಕ್ತರು, ಮಹಾನಗರಪಾಲಿಕೆ

ಹರಿ ವಿದ್ಯಾಲಯಕ್ಕೆ ಶೇ.95ರಷ್ಟು ಫಲಿತಾಂಶ



ಮೈಸೂರು,ಏ.11–ಮೈಸೂರಿನ ಬೋಗಾದಿಯಲ್ಲಿರುವ ಹರಿ ವಿದ್ಯಾಲಯ ಸಂಯುಕ್ತ ಪದವಿ ಪೂರ್ವ ಕಾಲೇಜಿನ ದ್ವಿತೀಯ ಪಿಯುಸಿ ವಿದ್ಯಾರ್ಥಿಗಳು 2023–24ರ ಶೈಕ್ಷಣಿಕ ವರ್ಷದ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಯಲ್ಲಿ ವಿಜ್ಞಾನ ವಿಭಾಗದಲ್ಲಿ ನಾಲ್ವರು ಉನ್ನತ ಶ್ರೇಣಿ, ವಾಣಿಜ್ಯ ವಿಭಾಗದಲ್ಲಿ ಇಬ್ಬರು ಉನ್ನತ ಶ್ರೇಣಿ ಹಾಗೂ ಒಟ್ಟಾರೆ ಶೇ.95ರಷ್ಟು ಫಲಿತಾಂಶವನ್ನು ಗಳಿಸಿದೆ.

ರಜತ್ ಆರ್.ಪ್ರಸಾದ್ ಶೇ.95, ಎಚ್.ಸಿ. ಶ್ರೀರಕ್ಷಾ ಶೇ. 93.5, ಎಚ್.ಎಸ್. ಅನನ್ಯಾ ಶೇ. 90.8, ಸುಪ್ರೀತಾರಾಣಿ ಶೇ. 86.5, ಕೆ. ಪೂರ್ವಿಕಾ ಶೇ. 83.83, ಕೆ. ಸ್ನೇಹಾ ಶೇ. 83.66, ಬಿ. ಕೃಷ್ಣ ಶೇ. 83.33, ಎಲ್. ಮಂಜುನಾಥ್ ಪ್ರಸಾದ್ ಶೇ. 91, ಎಂ.ಬಿ. ರಾಘವಾಂಕ ಶೇ. 90.33 ಅಂಕಗಳನ್ನು ಗಳಿಸಿದ್ದಾರೆ.

ಜಿ.ಎಸ್.ಮೋನಿಕಾಗೆ ಅತ್ಯುನ್ನತ ಶ್ರೇಣಿ



ಮೈಸೂರು,ಏ.11–ಮೈಸೂರು ಬಿಜಿಎಸ್ ಕುವೆಂಪುನಗರ ಕಾಲೇಜು ವಿದ್ಯಾರ್ಥಿನಿ ಜಿ.ಎಸ್.ಮೋನಿಕಾ ದ್ವಿತೀಯ ಪಿಯುಸಿ ವಿಜ್ಞಾನ ವಿಭಾಗದಲ್ಲಿ 580 ಅಂಕ ಗಳಿಸಿ ಅತ್ಯುನ್ನತ ಶ್ರೇಣಿಯಲ್ಲಿ ತೇರ್ಗಡೆ ಹೊಂದಿದ್ದಾರೆ. ಈಕೆ ಮೈಸೂರು ತಾಲೂಕು ಗೋಪಾಲಪುರ ಶ್ರೀ ಮಾರಮ್ಮ ದೇವಸ್ಥಾನ ಸೇವಾ ಸಮಿತಿ ಟ್ರಸ್ಟ್ ಅಧ್ಯಕ್ಷ ಜಿ.ಎಸ್.ಶಿವಕುಮಾರ್ ಹಾಗೂ ಶ್ರೀಮತಿ ಸವಿತಾ ಅವರ ಪುತ್ರಿ. ಕನ್ನಡ 95, ಇಂಗ್ಲೀಷ್ 95, ಭೌತಶಾಸ್ತ್ರ 97, ರಸಾಯನಶಾಸ್ತ್ರ 98, ಗಣಿತಶಾಸ್ತ್ರ 99, ಜೀವಶಾಸ್ತ್ರದಲ್ಲಿ 96 ಅಂಕ ಗಳಿಸಿದ್ದಾರೆ.

ಅತ್ಯುನ್ನತ ಶ್ರೇಣಿಯಲ್ಲಿ ತೇರ್ಗಡೆ



ಮೈಸೂರು,ಏ.11–ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಮೈಸೂರು ತಾಲೂಕು ಜಯಪುರ ಹೋಬಳಿ ದೂರ ಗ್ರಾಮದ ಎಂ.ಸ್ವಾಮಿ ಮತ್ತು ಆರ್.ಪೂರ್ಣಿಮಾ ದಂಪತಿ ಪುತ್ರಿ ಡಿ.ಎಸ್.ವಿಜಯಲಕ್ಷ್ಮಿ 576 ಅಂಕದೊಂದಿಗೆ ಅತ್ಯುನ್ನತ ಶ್ರೇಣಿಯಲ್ಲಿ ತೇರ್ಗಡೆ ಹೊಂದಿದ್ದಾರೆ. ಈಕೆ ಮೈಸೂರು ಮರಿಮಲ್ಲಪ್ಪ ಶಾಲೆ ವಿದ್ಯಾರ್ಥಿನಿ. ಕನ್ನಡ 98, ಇಂಗ್ಲೀಷ್ 91, ಇತಿಹಾಸ 98, ಅರ್ಥಶಾಸ್ತ್ರ 100, ಭೂಗೋಳಶಾಸ್ತ್ರ 95, ರಾಜ್ಯಶಾಸ್ತ್ರದಲ್ಲಿ 93 ಅಂಕ ಗಳಿಸಿದ್ದಾರೆ.

ಮಂಜೂಷಾ ವಿಂಟೇಜ್ ಮ್ಯೂಸಿಯಂಗೆ ಮಾರುತಿ ಸುಜುಕಿ ಜೆನ್ ಕೊಡುಗೆ

ಮೈಸೂರು,ಏ.11–ಏಪ್ರಿಲ್ 7ರಂದು 'ಸ್ಟಾರ್ ಆಫ್ ಮೈಸೂರ್' ಪತ್ರಿಕೆಯಲ್ಲಿ 'ಪಯಣ, ಕಾರುಗಳಿಗೆ ಒಂದು ಅಭಯಾರಣ್ಯ' `Payana, a sanctuary for cars' ಶೀರ್ಷಿಕೆಯಡಿ ಪ್ರಕಟವಾಗಿರುವ ಮೈಸೂರು–ಬೆಂಗಳೂರು ಹೆದ್ದಾರಿಯಲ್ಲಿ ತೆರೆಯಲಾಗಿರುವ ಹೊಸ ವಿಂಟೇಜ್ ಕಾರ್ ಮ್ಯೂಸಿಯಂ ಬಗೆಗಿನ ವಿಶೇಷ ಲೇಖನ ಗಮನ ಸೆಳೆಯಿತು. ಈ ಸಂಬಂಧ 'ಸ್ಟಾರ್ ಆಫ್ ಮೈಸೂರ್' ಓದುಗರೊಬ್ಬರು ಧರ್ಮಸ್ಥಳದಲ್ಲಿರುವ ಮೂಲ ಮಂಜೂಷಾ ವಿಂಟೇಜ್ ಕಾರ್ ಮ್ಯೂಸಿಯಂಗೆ ಐಕಾನಿಕ್ ಕಾರನ್ನು ಕೊಡುಗೆಯಾಗಿ ನೀಡಿರುವುದಾಗಿ ಕಚೇರಿಗೆ ಇ–ಮೇಲ್ ಕಳುಹಿಸಿದ್ದರು.



'ಪಯಣ, ಕಾರುಗಳಿಗೆ ಒಂದು ಅಭಯಾರಣ್ಯ' `Payana, a sanctuary for cars' ಮತ್ತು ಮಂಜೂಷಾ ವಿಂಟೇಜ್ ಕಾರ್ ಮ್ಯೂಸಿಯಂ ಈ ಎರಡೂ ಮ್ಯೂಸಿಯಂಗಳು ದಾನಿಗಳು ಮತ್ತು ದಕ್ಷಿಣ ಕನ್ನಡ ಜಿಲ್ಲೆಯ ಶ್ರೀ ಕ್ಷೇತ್ರ ಧರ್ಮಸ್ಥಳದ ಧರ್ಮಾಧಿಕಾರಿಯೂ ಆದ ಡಾ.ಡಿ. ವೀರೇಂದ್ರ ಹೆಗ್ಗಡೆಯವರ ಕನಸಿನ ಕೂಸು. ಮೈಸೂರಿನ ಜಯಲಕ್ಷ್ಮಿಪುರಂನ ಗೋಕುಲಂ ರಸ್ತೆ ನಿವಾಸಿ ಡಾ.ಮಾಚರಂಡ ಮಾದಪ್ಪ ಉತ್ತಪ್ಪ ಅವರು ಮಾರುತಿ ಸುಜುಕಿ ಜೆನ್ VXI Deluxe (KA-05-ME-9001) ಅನ್ನು ಕೊಡುಗೆಯಾಗಿ ನೀಡಿದ್ದಾರೆ. ಈ ವಾಹನವನ್ನು ಏ.9, 2023ರಂದು ಈ ವಾಹನಕ್ಕೆ ಸಂಬಂಧಿಸಿದ ದಾಖಲಾತಿಗಳೊಂದಿಗೆ ತಾವೇ ಖುದ್ದಾಗಿ ಧರ್ಮಸ್ಥಳದಲ್ಲಿ ಡಾ.ವೀರೇಂದ್ರ ಹೆಗ್ಗಡೆ ಅವರಿಗೆ ಹಸ್ತಾಂತರಿಸಿದರು.




ಈ ಸಂಬಂಧ 'ಮೈಸೂರು ಮಿತ್ರ'ನೊಂದಿಗೆ ಮಾತನಾಡಿದ ಉತ್ತಪ್ಪ, ಮಂಜೂಷಾ ವಿಂಟೇಜ್ ಕಾರ್ ಮ್ಯೂಸಿಯಂಗೆ ಭೇಟಿ ನೀಡಿದ ನಂತರ ಅಲ್ಲಿಡಲಾಗಿದ್ದ ವಾಹನಗಳ ಅತ್ಯಾಕರ್ಷಕ ಪ್ರದರ್ಶನ ಮತ್ತು ನಿರ್ವಹಣೆಗೆ ಆಳವಾಗಿ ಪ್ರಭಾವಿತನಾದೆ. ಅಲ್ಲಿ ವಾಹನ ಪರಂಪರೆಯನ್ನು ಸಂರಕ್ಷಿಸುವ ಮಹತ್ವ ಗುರುತಿಸಿ, ವಾಹನವನ್ನು ಕೊಡುಗೆಯಾಗಿ ನೀಡಲು ನಿರ್ಧರಿಸಿದೆ ಎಂದರು.

'ಮೈಸೂರು ವೆಸ್ಟ್ ಆರ್‌ಟಿಓದಲ್ಲಿ ನೋಂದಣಿಯಾಗಿರುವ ಜೆನ್ ವಿಎಕ್ಸ್‌ಐ ಡಿಲಕ್ಸ್ ಕಾರನ್ನು ಮಂಜೂಷಾ ಕಾರ್ ಮ್ಯೂಸಿಯಂಗೆ ನೀಡಿರುವುದು ಕಾರಿನ ಹಕ್ಕನ್ನು ಭದ್ರಪಡಿಸುವುದಲ್ಲದೆ ಒಂದು ಇತಿಹಾಸ ಹೊಂದಿರುವ ಸ್ಥಳಕ್ಕೆ ನೀಡಿರುವುದಾಗಿ ನಂಬಿದ್ದೇನೆ ಎಂದರು.

ಡಾ.ಉತ್ತಪ್ಪ ಅವರು ಜೆನ್ ವಿಎಕ್ಸ್‌ಐ ಡಿಲಕ್ಸ್ ಕಾರನ್ನು ಕೊಡುಗೆಯಾಗಿ ನೀಡಿರುವುದರ ಜೊತೆಗೆ ತಮ್ಮ ತಂದೆಯವರ ಪೀಚೆಕತ್ತಿ ಮತ್ತು ಚೇಲೆ (ಸಾಂಪ್ರದಾಯಿಕ ಕೊಡವರ ಉಡುಪಿನ ಭಾಗಗಳು)ಗಳನ್ನು ಅದೇ ದಿನ ಮ್ಯೂಸಿಯಂಗೆ ನೀಡಿದರು.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

12.04.2024 ಶುಕ್ರವಾರ, ಮಳೆ ನಕ್ಷತ್ರ: ರೇವತಿ 31.03.2024ರಿಂದ 12.04.2024
ಕ್ರೋಧಿ ಸಂವತ್ಸರ, ಉತ್ತರಾಯಣ, ವಸಂತ ಋತು, ಚೈತ್ರ ಮಾಸ, ಶುಕ್ಲ ಪಕ್ಷ,
ತಿಥಿ: ಚೌತಿ, ನಕ್ಷತ್ರ: ರೋಹಿಣಿ, ರಾಹುಕಾಲ: ಬೆಳಗ್ಗೆ 10.30 ರಿಂದ 12 ರವರೆಗೆ

■ **ರಾಮ್‌ಸನ್ಸ್ ಬೊಂಬೆ ಮನೆ:** ದಸರೆ ಬೊಂಬೆ ಪ್ರದರ್ಶನ, ಸ್ಥಳ: ರಾಮ್‌ಸನ್ಸ್ ಬೊಂಬೆ ಮನೆ, ನಜರ್‌ಬಾದ್ ಮುಖ್ಯ ರಸ್ತೆ, ಬೆಳಗ್ಗೆ 10 ರಿಂದ ಸಂಜೆ 7 ರವರೆಗೆ

■ **ಶ್ರೀ ರಾಮಸೇವಾ ಮಂಡಳಿ ಚಾರಿಟೆಬಲ್ ಟ್ರಸ್ಟ್:** 30ನೇ ವರ್ಷದ ಶ್ರೀ ರಾಮನವಮಿ ಸಂಗೀತೋತ್ಸವ, ಸಂಜೆ 5.15 ರಿಂದ ಎಸ್.ಎಸ್. ಸುಭಾಷಿಣಿ, ಪ್ರೇರಣಾ ಪ್ರವೀಣ್, ಸ್ಕಂದ ಭಾರದ್ವಾಜ್ ಅವರಿಂದ ಗಾಯನ, ಸಂಜೆ 6.15 ರಿಂದ ವಿದುಷಿ ವೃಂದ ಆಚಾರ್ಯ ಅವರಿಂದ ಗಾಯನ, ವಿದುಷಿ ಅದಿತಿ ಕೃಷ್ಣಪ್ರಕಾಶ್–ಪಿಟೀಲು, ವಿದ್ವಾನ್ ಅರ್ಜುನ್ ಕುಮಾರ್–ಮೃದಂಗ, ವಿದ್ವಾನ್ ಎಸ್. ಮಂಜುನಾಥ್ –ಘಟಂ, ಸ್ಥಳ: ಶ್ರೀಪ್ರಸನ್ನ ಪಾರ್ವತಿ ಕಲ್ಯಾಣ ಮಂಟಪ, ವಿ.ವಿ. ಮೊಹಲ್ಲಾ.

■ **ಸೆಂಟರ್ ಆಫ್ ಇಂಡಿಯನ್ ಟ್ರೇಡ್ ಯೂನಿಯನ್ಸ್, ಮೈಸೂರು ಜಿಲ್ಲಾ ಸಮಿತಿ:** ದುಂಡು ಮೇಜಿನ ಸಭೆ, ಭಾಗವಹಿಸುವವರು: ಸಿಐಟಿಯು ರಾಜ್ಯಾಧ್ಯಕ್ಷೆ ಎಸ್.ವರಲಕ್ಷ್ಮಿ, ಎಐಟಿಯುಸಿ ರಾಷ್ಟ್ರೀಯ ಉಪಾಧ್ಯಕ್ಷ ಹೆಚ್.ಆರ್. ಶೇಷಾದ್ರಿ, ಎಐಸಿಸಿಟಿಯು ಮುಖಂಡ ನಾ.ದಿವಾಕರ, ಸ್ಥಳ: ರೋಟರಿ ಸಭಾಂಗಣ, ಬೆಳಗ್ಗೆ 11.15ಕ್ಕೆ.

■ **ತ್ರಯೀನ್ಯಾಸ್ ಶ್ರೀವಿದ್ಯಾ ಫೌಂಡೇಷನ್ :** 15ನೇ ವರ್ಷದ ವಸಂತ ನವರಾತ್ರಿ ಮಹೋತ್ಸವ, ಬೆಳಗ್ಗೆ 8.30ರಿಂದ ಮಹಾಭಿಷೇಕ, ಸಪ್ತಶತಿ ಪಾರಾಯಣ, ಲಲಿತೋಪಾಖ್ಯಾನ ಪಾರಾಯಣ, ಶ್ರೀಚಕ್ರಾರ್ಚನೆ, ಸಂಜೆ 5.30ರಿಂದ ವಿವಿಧ ಗಣಪತಿ ಮತ್ತು ಶ್ರೀ ವಾಂಛಾಕಲ್ಪಲತಾ ಶ್ರೀ ವಿದ್ಯಾಗಣೇಶ ಪರ್ಯಾಯ ಹೋಮ, ಶ್ರೀ ಮಹಾಗಣಪತಿ, ಶ್ರೀ ಹರಿದ್ರಾಗಣಪತಿ, ಶ್ರೀ ಉಚ್ಛಿಷ್ಟ ಗಣಪತಿ, ಶ್ರೀ ಹೇರಂಬ ಗಣಪತಿ, ಶ್ರೀ ಋಣನಾಶನ ಗಣಪತಿ, ಶ್ರೀ ಕ್ಷಿಪ್ರಗಣಪತಿ, ಶ್ರೀ ಬಾಲಗಣಪತಿ, ಶ್ರೀ ಚೋರಗಣಪತಿ ಹೋಮ, ಪೂರ್ಣಾಹುತಿ, ಕುಂಕುಮಾರ್ಚನೆ, ಮಹಾಮಂಗಳಾರತಿ, ಪ್ರಸಾದ ವಿನಿಯೋಗ, ಸ್ಥಳ: ತ್ರಯೀನ್ಯಾಸ್ ಫೌಂಡೇಷನ್, ಜಯಲಕ್ಷ್ಮಿಪುರಂ.

■ **ಶ್ರೀ ಗಣಪತಿ ಸೇವಾ ಮಂಡಳಿ ಟ್ರಸ್ಟ್:** ರಾಮೋತ್ಸವ ಕಾರ್ಯಕ್ರಮ, ಸ್ವರಾಂಜಲಿ ಸಂಗೀತ ಕೇಂದ್ರದವರಿಂದ ಭಜನೆ, ವಿದ್ವಾನ್ ಸಮೀರ್ ರಾವ್ ಅವರಿಂದ ಬಾನ್ಸುರಿ ವಾದನ, ವಿದ್ವಾನ್ ಆದರ್ಶ ಶೆಣೈ–ತಬಲ, ಸ್ಥಳ: ಗಣಪತಿ ದೇವಸ್ಥಾನ, ಐ ಬ್ಲಾಕ್, ರಾಮಕೃಷ್ಣನಗರ, ಸಂಜೆ 6ಕ್ಕೆ.

■ **ರಂಗಾಯಣ:** ಚಿಣ್ಣರ ಮೇಳ–2024, ಸಂಜೆ 5ಕ್ಕೆ ಮಕ್ಕಳ ರಂಗ ತರಬೇತಿ ಶಿಬಿರ 'ಸಮರಸವೇ ಜೀವನ' ಉದ್ಘಾಟನಾ ಸಮಾರಂಭ, ಉದ್ಘಾಟನೆ: ಇಂಡಿಯಾ ಬುಕ್ ಆಫ್ ರೆಕಾರ್ಡ್ಸ್ ದಾಖಲಿಸಿದ ಬಾಲ ರಂಗ ಕಲಾವಿದ ಗೋಕುಲ ಸಹೃದಯ, ಅಧ್ಯಕ್ಷತೆ: ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಜಂಟಿ ನಿರ್ದೇಶಕ ವಿ.ಎನ್.ಮಲ್ಲಿಕಾರ್ಜುನಸ್ವಾಮಿ, ಮುಖ್ಯ ಅತಿಥಿಗಳು: ಕಲಾವಿದೆ ಶ್ರೀಮತಿ ಎಂ.ಎಸ್. ನುಡಿ, ರಂಗಾಯಣ ಉಪನಿರ್ದೇಶಕರಾದ ಶ್ರೀಮತಿ ನಿರ್ಮಲಾ ಮಠಪತಿ, ಚಿಣ್ಣರ ಮೇಳ ಸಂಚಾಲಕರಾದ ಶ್ರೀಮತಿ ಗೀತಾ ಮೋಂಟಡ್ಕ, ಸಂಜೆ 6.30ಕ್ಕೆ ಗೋಕುಲ ಸಹೃದಯ ಅಭಿನಯದ 'ಚಿಟ್ಟೆ' ನಾಟಕ ಪ್ರದರ್ಶನ, ರಚನೆ: ಬೇಲೂರು ರಘುನಂದನ, ನಿರ್ದೇಶನ: ಕೃಷ್ಣಮೂರ್ತಿ ಕವತ್ತಾರು, ಸ್ಥಳ: ವನರಂಗ ಬಯಲು ರಂಗಮಂದಿರ, ರಂಗಾಯಣ.

■ **ಕೆಎಂಪಿಕೆ ಚಾರಿಟೆಬಲ್ ಟ್ರಸ್ಟ್:** ಯುಗಾದಿ ಹಬ್ಬದ ಅಂಗವಾಗಿ ನಡೆದ ರಂಗೋಲಿ ಸ್ಪರ್ಧೆ ವಿಜೇತರಿಗೆ ಬಹುಮಾನ ವಿತರಣಾ ಕಾರ್ಯಕ್ರಮ, ಮುಖ್ಯ ಅತಿಥಿಗಳು : ಮೈಸೂರು ನಗರ ಮತ್ತು ಜಿಲ್ಲಾ ಬ್ರಾಹ್ಮಣ ಸಂಘದ ಅಧ್ಯಕ್ಷ ಡಿ.ಟಿ. ಪ್ರಕಾಶ್, ಹಿರಿಯ ಸಮಾಜ ಸೇವಕ ಡಾ.ಕೆ. ರಘುರಾಂ ವಾಜಪೇಯಿ, ಬಿಜೆಪಿ ನಗರ ಉಪಾಧ್ಯಕ್ಷೆ ಹೇಮಾ ನಂದೀಶ್, ಮಾಜಿ ಪಾಲಿಕೆ ಸದಸ್ಯ ಬಿ.ವಿ. ಮಂಜುನಾಥ್, ಜೀವಧಾರ ರಕ್ತನಿಧಿ ಕೇಂದ್ರದ ನಿರ್ದೇಶಕ ಗಿರೀಶ್, ಸ್ಥಳ: ನಮೋ ಯೋಗ ಭವನ, ರಾಮಾನುಜ ರಸ್ತೆ, ಸಂಜೆ 4ಕ್ಕೆ.

■ **ಶ್ರೀ ಕೃಷ್ಣ ಮಿತ್ರ ಮಂಡಳಿ:** 48ನೇ ವಾರ್ಷಿಕೋತ್ಸವ ಕಾರ್ಯಕ್ರಮ, ಉಪಸ್ಥಿತರು: ಪ್ರೊ.ಭಾಷ್ಯಂ ಸ್ವಾಮೀಜಿ, ಖ್ಯಾತ ಶಿಲ್ಪಿ ಅರುಣ್ ಯೋಗಿರಾಜ್, ಕು. ಮೇಧಾ ವಿದ್ಯಾಭೂಷಣ್, ಸ್ಥಳ: ಶ್ರೀ ಕೃಷ್ಣಧಾಮ, ಸರಸ್ವತಿಪುರಂ, ಸಂಜೆ 5ಕ್ಕೆ.

■ **ಸ್ವರಾಮೃತ ಮೆಲೋಡೀಸ್:** ನಟ ಸಾರ್ವಭೌಮ ಡಾ.ರಾಜ್‌ಕುಮಾರ್ ಅವರ 18ನೇ ಪುಣ್ಯಸ್ಮರಣೆ ಅಂಗವಾಗಿ ಅವರೇ ಹಾಡಿರುವ ಜನಪ್ರಿಯ ಚಲನಚಿತ್ರ ಗೀತೆಗಳ ಗಾಯನ ಸಂಜೆ, ನಿಮದೇ ನೆನಪು ದಿನವೂ ಮನದಲ್ಲಿ, ಸ್ಥಳ: ನಾದಬ್ರಹ್ಮ ಸಂಗೀತ ಸಭಾಂಗಣ, ನಂಜುಮಳಿಗೆ, ಲಕ್ಷ್ಮೀಪುರಂ, ಸಂಜೆ 5.30ಕ್ಕೆ

■ **ಭಾರತೀ ಸ್ತ್ರೀ ಸಮಾಜ ಸಾಂಸ್ಕೃತಿಕ ಮತ್ತು ಶೈಕ್ಷಣಿಕ ಚಾರಿಟೆಬಲ್ ವಿಶ್ವಸ್ಥ ಮಂಡಳಿ :** ಶ್ರೀರಾಮೋತ್ಸವ ಅಂಗವಾಗಿ ಸಂಗೀತ ಕಛೇರಿ ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳು, ಗುರು ಡಾ. ಚೇತನ ರಾಧಾಕೃಷ್ಣರವರ ಶಿಷ್ಯ ವೃಂದದವರಿಂದ ಗುರುದೇವ ಲಲಿತ ಕಲಾ ಅಕಾಡೆಮಿ ಅವರಿಂದ ನೃತ್ಯ ಪ್ರದರ್ಶನ, ಸ್ಥಳ: ಭಾರತೀ ಸ್ತ್ರೀ ಸಮಾಜದ ಆವರಣ, ಯಾದವಗಿರಿ, ಸಂಜೆ 6ಕ್ಕೆ.

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಮತ್ತು ಸಂಜೆ 6.10ಕ್ಕೆ ಬಣ್ಣದ ಬಾನಾಡಿಗಳು–ಬಾನುಲಿ ಸರಣಿ, ರಚನೆ–ಲೀಲಾ ಅಪ್ಪಾಜಿ, ಪ್ರಸ್ತುತಿ–ಜಿ.ಶಾಂತಕುಮಾರ್, 6.40 ಕರಾಮುವಿವಿ ಮುಕ್ತವಾಣಿ–ಕರ್ನಾಟಕ ರಾಜ್ಯ ಮುಕ್ತ ವಿಶ್ವ ವಿದ್ಯಾನಿಲಯದ ಅಧ್ಯಯನ ಅವಕಾಶಗಳನ್ನು ಕುರಿತ ಪ್ರಾಯೋಜಿತ ಬಾನುಲಿ ಸರಣಿ. ಭಾಗವಹಿಸುತ್ತಾರೆ–ಡಾ.ಆರ್.ಸಂತೋಷ್ ನಾಯಕ್, ಮುಖ್ಯಸ್ಥರು, ಸಮಾಜಶಾಸ್ತ್ರ ವಿಭಾಗ, ಪ್ರಸ್ತುತಿ–ಎನ್.ಕೇಶವಮೂರ್ತಿ, 6.50 ರೈತರಿಗೆ ಸಲಹೆ, 7.15 ಭಾವಗೀತೆ, 9.10 ನಮ್ಮ ಆರೋಗ್ಯ, 10.00 ಡಿ.ಕೆ.ಜಯರಾಮನ್–ಹಾಡುಗಾರಿಕೆ, 11.00 ಮಿತ್ರ ಮಾಧುರ್ಯ **ಮಧ್ಯಾಹ್ನ:** 12.30ದೇವರನಾಮ, 12.45ಕಾದಂಬರಿ ವಿಹಾರ–ನಾ ಕಸ್ತೂರಿ ಅವರ ರಂಗನಾಯಕಿ ಕಾದಂಬರಿಯ ಬಾನುಲಿ ಓದು, ಪ್ರಸ್ತುತಿ– ಉಮೇಶ್ ಎಸ್.ಎಸ್., 1.20 ಭಾವಗೀತೆ, 1.30 ಸಂದೇಶ ಆಧಾರಿತ ಶ್ರೋತೃಗಳ ಮೆಚ್ಚಿನ ಚಿತ್ರಗೀತೆಗಳ ಕಾರ್ಯಕ್ರಮ, 3.00 ಟಿ. ರುಕ್ಮಿಣಿ–ವಯೋಲಿನ್, 4.00 ಮಹಿಳಾರಂಗ–ಆಕಾಶವಾಣಿ ಅಡುಗೆ ಮನೆ, ಪ್ರಸ್ತುತಿ– ಕೆ.ಬಿ.ಮೀನಾ ಹಾಗೂ ತೇಜಸ್ವಿನಿ, 4.30 ವೃತ್ತಿ ಮಾರ್ಗದರ್ಶನ, 5.45 ಕರಾಮುವಿವಿ ಮುಕ್ತವಾಣಿ–ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಅಧ್ಯಯನ ಅವಕಾಶಗಳನ್ನು ಕುರಿತ ಪ್ರಾಯೋಜಿತ ಬಾನುಲಿ ಸರಣಿ. ಭಾಗವಹಿಸುತ್ತಾರೆ–ಡಾ.ಆರ್.ಸಂತೋಷ್ ನಾಯಕ್, ಮುಖ್ಯಸ್ಥರು, ಸಮಾಜಶಾಸ್ತ್ರ ವಿಭಾಗ, ಪ್ರಸ್ತುತಿ–ಎನ್.ಕೇಶವಮೂರ್ತಿ, 6.55 ಕೃಷಿರಂಗ, ನಾಟಕ–ಬಲಿಪಶು, ರಚನೆ–ಡಾ. ಎಲ್. ಮಂಜುನಾಥ್ ಮತ್ತು ಡಾ.ಕೆ.ಸತ್ಯ, ನಿರ್ಮಾಣ–ಪ್ರಭುಸ್ವಾಮಿ ಮಳೀಮಠ್, ಕೃಷಿಲೋಕ, ಪ್ರಸ್ತುತಿ–ಆರ್. ಲೋಕೇಶ್ವರಿ, 8.00 ಕನ್ನಡ ಭಾರತಿ, 9.30 ಲೋಕ್ ಪ್ರಸಾರಕ್ ಕೇ ಸಾಥ್ ಲೋಕ್ ನಿರ್ಣಯ್–2024, 10.00 ಹಳ್ಳಿ ಹಾಡು, ಪ್ರಸ್ತುತಿ–ಡಾ.ಮೈಸೂರು ಉಮೇಶ್, 10.30 ಸವಿನೆನಪು



ನಾಗಮಂಗಲದಲ್ಲಿ ಕಾಂಗ್ರೆಸ್ ಗ್ಯಾರಂಟಿ ಕಾರ್ಡ್‌ಗಳ ವಿತರಣೆ





ನಾಗಮಂಗಲ ತಾಲೂಕು ತುಪ್ಪದಮಡ ಗ್ರಾಮದಲ್ಲಿ ಕಾಂಗ್ರೆಸ್ ಅಭ್ಯರ್ಥಿ ವೆಂಕಟರಮಣೇಗೌಡ (ಸ್ಟಾರ್ ಚಂದ್ರು) ಕಾಂಗ್ರೆಸ್ ಗ್ಯಾರಂಟಿ ಕಾರ್ಡ್ ವಿತರಿಸಿ, ಮತಯಾಚಿಸಿದರು.

ನಾಗಮಂಗಲ, ಏ.11– ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಮತ್ತು ನಮ್ಮ ನಾಯಕ ರಾಹುಲ್ ಗಾಂಧಿ ಅವರು ಕಾಂಗ್ರೆಸ್ ಪ್ರಣಾಳಿಕೆಯಲ್ಲಿ ಪಂಚ ಗ್ಯಾರಂಟಿಗಳನ್ನು ಒಳಗೊಂಡ 25 ಭರವಸೆಗಳನ್ನು ಘೋಷಿಸಿದ್ದಾರೆ. ಕೇಂದ್ರದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬರುವುದು ನಿಶ್ಚಿತವಾಗಿದ್ದು ಎಲ್ಲಾ ಭರವಸೆಗಳನ್ನು ಕಾಂಗ್ರೆಸ್ ಸರ್ಕಾರ ಈಡೇರಿಸಲಿದೆ ಎಂದು ಮಂಡ್ಯ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ವೆಂಕಟರಮಣೇಗೌಡ (ಸ್ಟಾರ್ ಚಂದ್ರು) ಹೇಳಿದರು.

ನಾಗಮಂಗಲ ತಾಲೂಕು ತುಪ್ಪದಮಡ ಗ್ರಾಮದಲ್ಲಿ ಎಐಸಿಸಿ ಘೋಷಣೆ ಮಾಡಿರುವ ಗ್ಯಾರಂಟಿ ಕಾರ್ಡ್‌ಗಳನ್ನು ಮಂಡ್ಯ ಜಿಲ್ಲಾ ಉಸ್ತುವಾರಿ ಸಚಿವ ಚಲುವರಾಯಸ್ವಾಮಿ ಅವರೊಂದಿಗೆ ವಿತರಣೆ ಮಾಡಿ ಅವರು ಮಾತನಾಡಿದರು. ಪಂಚ ಗ್ಯಾರಂಟಿಗಳು ಜನತೆಯ ಕೈ ಹಿಡಿದಿವೆ. ಈಗ ಎಐಸಿಸಿಯಿಂದ ಬಿಡುಗಡೆ ಮಾಡಿರುವ ನ್ಯಾಯ ಪತ್ರವು ಮಹಿಳೆಯರ ಸಬಲೀಕರಣ, ಯುವಕರಿಗೆ ಉದ್ಯೋಗ, ಮೀಸಲಾತಿ, ಸಾಮಾಜಿಕ ನ್ಯಾಯವನ್ನು ಒಳಗೊಂಡಿದೆ ಎಂದರಲ್ಲದೆ, ಕೆಲವು ಮಹಿಳೆಯರಿಗೆ ಸಾಂಕೇತಿಕವಾಗಿ ಗ್ಯಾರಂಟಿ ಕಾರ್ಡ್‌ಗಳನ್ನು ವಿತರಣೆ ಮಾಡಲಾಗಿದೆ. ನಮ್ಮ ಕಾರ್ಯಕರ್ತರು ಮನೆಮನೆಗೆ ಗ್ಯಾರಂಟಿ ಕಾರ್ಡ್‌ಗಳನ್ನು ತಲುಪಿಸಲಿದ್ದು ಜನ ನಮ್ಮ ಕೈ ಹಿಡಿಯಲಿದ್ದಾರೆ ಎಂದರು.

ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ ಮಾತನಾಡಿ, ವಿಧಾನಸಭಾ ಚುನಾವಣೆಯಲ್ಲಿ ಮೂರು ಪಕ್ಷದಿಂದ ಗ್ಯಾರಂಟಿ ಘೋಷಿಸಲಾಯಿತು. ಆದರೆ ಜನ ನಮ್ಮ ಕೈ ಹಿಡಿದರು. ಕಾರಣ ನಮ್ಮ ಮೇಲಿನ ನಂಬಿಕೆ. ಬರಗಾಲದಲ್ಲಿ ಗ್ಯಾರಂಟಿಗಳು ಜನರಿಗೆ ಸಹಕಾರಿಯಾಗಿದೆ ಎಂದರು. ದಕ್ಷಿಣ ಭಾರತದಲ್ಲಿ 100 ಕ್ಕೂ ಹೆಚ್ಚು ಸ್ಥಾನಗಳನ್ನು ಕಾಂಗ್ರೆಸ್ ಗೆಲ್ಲಲಿದ್ದು ಕೇಂದ್ರದಲ್ಲಿ ನೂರಕ್ಕೆ ನೂರರಷ್ಟು ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬರಲಿದೆ. ಅಲ್ಲೂ ಕೂಡ ಗ್ಯಾರಂಟಿ ಜಾರಿ ಮಾಡುತ್ತೇವೆ. ಜನರು ಗ್ಯಾರಂಟಿಗಳನ್ನು ಜಾರಿಗೆ ತಂದವರ ಪರವಾಗಿ ನಿಲ್ಲಬೇಕು ಎಂದರು. ಬಿಜೆಪಿ, ಜೆಡಿಎಸ್‌ನವರು ಗ್ಯಾರಂಟಿಗಳನ್ನು ವಿರೋಧಿಸಿ ಸುಪ್ರೀಂಕೋರ್ಟ್‌ನಲ್ಲಿ ಕೇಸ್ ಹಾಕಿದ್ದಾರೆ. ಇನ್ನು ಸರ್ಕಾರ ಬಂದರೆ ಗ್ಯಾರಂಟಿ ನಿಲ್ಲಿಸದೆ ಇರುತ್ತಾರಾ? ನಿಮಗೆ ಗ್ಯಾರಂಟಿ ಕೊಟ್ಟವರು ಬೇಕಾ ಅಥವಾ ಅದನ್ನು ನಿಲ್ಲಿಸುವವರು ಬೇಕಾ? ಎಂದು ಮತದಾರರನ್ನು ಕೇಳಿದರು.

ಜೆಡಿಎಸ್ ತೊರೆದು ಕಾಂಗ್ರೆಸ್ ಸೇರ್ಪಡೆ: ನಾಗಮಂಗಲ ತಾಲೂಕು ತುಪ್ಪದಮಡ ಗ್ರಾಮಪಂಚಾಯತಿಯಲ್ಲಿ ಜೆಡಿಎಸ್‌ನ ಹಲವು ಕಾರ್ಯಕರ್ತರು ಕಾಂಗ್ರೆಸ್‌ಗೆ ಸೇರ್ಪಡೆಯಾದರು. ಬೆಟ್ಟೇಗೌಡ, ಸೂರಿ, ರವಿ, ಪ್ರತಾಪ್ ಮತ್ತು ಸಂಗಡಿಗರು, ಪ್ರದೀಪ್, ಉಮೇಶ್, ಸೋಮಣ್ಣ, ದೊಡ್ಡನಗೌಡರು, ಚಿಕ್ಕಣ್ಣ, ಜಯರಾಮ್, ನಾಗರಾಜ್, ಶಿಕಾರಿಪುರ ಗ್ರಾಮದ ಮುಖಂಡರು ಸೇರಿದಂತೆ ಹಲವು ಜೆಡಿಎಸ್ ಕಾರ್ಯಕರ್ತರಿಗೆ ಸಚಿವ ಚಲುವರಾಯಸ್ವಾಮಿ, ಅಭ್ಯರ್ಥಿ ವೆಂಕಟರಮಣೇಗೌಡ ಅವರು ಶಾಲು ಹಾಕಿ ಪಕ್ಷಕ್ಕೆ ಬರಮಾಡಿಕೊಂಡರು. ಈ ವೇಳೆ ಕಾಂಗ್ರೆಸ್ ಮುಖಂಡರಾದ ಪ್ರಸನ್ನ, ಕೃಷ್ಣಪ್ಪ, ಲಕ್ಷ್ಮಿಕಾಂತ್, ಹೆಚ್.ಡಿ.ಪ್ರಸನ್ನ, ರಮೇಶ್, ಸಾವಿತ್ರಮ್ಮ, ದೇವರಾಜ್, ಕುಮಾರ್, ಪುಟ್ಟಸ್ವಾಮಿ, ನಾಗರಾಜ್, ಗೋವಿಂದ್ ಸೇರಿದಂತೆ ನಾನಾ ಮುಖಂಡರು ಉಪಸ್ಥಿತರಿದ್ದರು. ಕೃಷಿ ಹಾಗೂ ಮಂಡ್ಯ ಜಿಲ್ಲಾ ಉಸ್ತುವಾರಿ ಸಚಿವರಾದ ಚಲುವರಾಯಸ್ವಾಮಿ, ಶಾಸಕರುಗಳಾದ ನರೇಂದ್ರಸ್ವಾಮಿ, ಗಣಿಗ ರವಿ, ಉದಯ್, ರಮೇಶ್ ಬಾಬು ಬಂಡಿಸಿದ್ದೇಗೌಡ, ಸೇರಿದಂತೆ ಉಪ್ಪಾರರ ಸಮಾಜದ ಮುಖಂಡರು ಭಾಗವಹಿಸಿದ್ದರು.

ಪೊನ್ನಂಪೇಟೆ ತಾಲೂಕಲ್ಲಿ ಕಾಂಗ್ರೆಸ್ ಅಭ್ಯರ್ಥಿ ಎಂ.ಲಕ್ಷ್ಮಣ ಮತಯಾಚನೆ



ಪೊನ್ನಂಪೇಟೆ ತಾಲೂಕಲ್ಲಿ ಕಾಂಗ್ರೆಸ್ ಅಭ್ಯರ್ಥಿ ಎಂ.ಲಕ್ಷ್ಮಣ ಪ್ರಚಾರ ನಡೆಸಿದರು.

ವಿರಾಜಪೇಟೆ,ಏ.11– ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಎಂ.ಲಕ್ಷ್ಮಣ ಅವರು ವಿರಾಜಪೇಟೆ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಗೆ ಒಳಪಡುವ ಪೊನ್ನಂಪೇಟೆ ತಾಲೂಕು ಕುಟ್ಟ ಹಾಗೂ ಹುದಿಕೇರಿಗೆ ಭೇಟಿ ನೀಡಿ, ಶಾಸಕ ಎ.ಎಸ್ ಪೊನ್ನಣ್ಣ ನೇತೃತ್ವದಲ್ಲಿ ಮತಯಾಚನೆ ಮಾಡಿದ್ದರು.

ಈ ವೇಳೆ ಶಾಸಕ ಎ.ಎಸ್ ಪೊನ್ನಣ್ಣ ನೇತೃತ್ವದಲ್ಲಿ ಆಯೋಜಿಸಿದ್ದ ಸಭೆಯಲ್ಲಿ ಮೊದಲಿಗೆ ಮತದಾರರ ಹಕ್ಕುಗಳ ಬಗ್ಗೆ ತಿಳಿಸಿ, ದೇಶದಲ್ಲಿ ಮತದಾನ ಎಷ್ಟು ಮಹತ್ವವಾದುದ್ದು ಎಂಬುದರ ಬಗ್ಗೆ ಅರಿವು ಮೂಡಿಸಲಾಯಿತು. ಶಾಸಕ ಎಎಸ್ ಪೊನ್ನಣ್ಣ ಮಾತನಾಡಿ, ಬಡವರು ಮತ್ತು ಜನಸಾಮಾನ್ಯರ ಪರ ಕೆಲಸ ಮಾಡಿ ಅವರ ಕುಂದು ಕೊರತೆಗಳಿಗೆ ಸ್ಪಂದಿಸುವ ಸರಕಾರ ಇದ್ದರೆ ಅದು ಕಾಂಗ್ರೆಸ್ ಸರಕಾರ ಮಾತ್ರ. ಕೂಲಿ ಕಾರ್ಮಿಕರಿಗೆ ಉತ್ತಮ ಜೀವನ ನಡೆಸಲು ಬೇಕಾದ ಸೌಲಭ್ಯ ಒದಗಿಸಲು ಕೇಂದ್ರದಲ್ಲಿ ಮತ್ತೆ ಕಾಂಗ್ರೆಸ್ ಪಕ್ಷ ಗೆದ್ದು ಬರಬೇಕು ಎಂದರು.

ಅಭ್ಯರ್ಥಿಯಾಗಿರುವ ಲಕ್ಷ್ಮಣ ಅವರು ಸಾಮಾನ್ಯ ಮನುಷ್ಯರಂತೆ ನಮ್ಮ ಜೊತೆ ಇದ್ದ ವ್ಯಕ್ತಿ. ಪ್ರಚಾರ ಮಾಡಲಿಕ್ಕೆ ಒಂದು ದಿನ ಬಸ್‌ನಲ್ಲಿ ಬಂದಿದ್ದರು. ಕಾರಿನಲ್ಲಿ ಬನ್ನಿ ಎಂದು ನಾನೇ ಹೇಳಿದೆ. ಅಷ್ಟೊಂದು ಸರಳ ವ್ಯಕ್ತಿ ನಮ್ಮ ಲಕ್ಷ್ಮಣ. ಸಾಮಾನ್ಯ ಜನರ ಕಷ್ಟ ಸಾಮಾನ್ಯರಿಗೆ ತಾನೇ ಗೊತ್ತಾಗುತ್ತದೆ. ಹಿಂದೆ ಇದ್ದ ಸಂಸದ ಪ್ರತಾಪ್ ಸಿಂಹ ನಮ್ಮ ಕ್ಷೇತ್ರಕ್ಕೆ ಬಂದೇ ಇರಲಿಲ್ಲ. ಆದರೆ ಲಕ್ಷ್ಮಣರನ್ನು ತಿಂಗಳಲ್ಲಿ 15 ದಿನಗಳ ಕಾಲ ನಮ್ಮ ಕ್ಷೇತ್ರದಲ್ಲಿ ನೋಡಬಹುದು ಎಂದು ನಾನು ಭರವಸೆ ನೀಡುತ್ತೇನೆ. ಈ ಬಾರಿ ಲಕ್ಷ್ಮಣ ಗೆಲ್ಲುತ್ತಾರೆ ಎಂಬ ವಿಶ್ವಾಸ ನನಗೆ ಇದೆ ಎಂದು ಹೇಳಿದ್ದರು.

ಅಭ್ಯರ್ಥಿ ಎಂ.ಲಕ್ಷ್ಮಣ ಮಾತನಾಡಿ, ಬಹಳ ಮಹತ್ವಾದ ಈ ಚುನಾವಣೆಯಲ್ಲಿ ಸೂಕ್ತ ವ್ಯಕ್ತಿಯನ್ನು ಆಯ್ಕೆ ಮಾಡುವ ಜವಾಬ್ದಾರಿ ನಿಮ್ಮ ಕೈಯಲ್ಲಿ ಇದೆ. ಹತ್ತು ವರ್ಷದಿಂದ ಇಬ್ಬರು ವ್ಯಾಪಾರಸ್ಥರು ಸೇರಿಕೊಂಡು ಇನ್ನೂ ಇಬ್ಬರು ವ್ಯಾಪಾರಸ್ಥರಿಗೆ ಅಭಿವೃದ್ಧಿ ಕಾರ್ಯವನ್ನು ಮಾರಿಬಿಟ್ಟಿದ್ದಾರೆ. ದೇಶ ಕಟ್ಟಿದ್ದು ಯಾರು ಎಂದು ನಿಮಗೆಲ್ಲ ತಿಳಿದೆ ಇದೆ. ನಿಮಗೆಲ್ಲ ನಮ್ಮ ಪಕ್ಷದ ಒಂದಲ್ಲ ಒಂದು ಗ್ಯಾರಂಟಿ ಯೋಜನೆ ಉಪಯೋಗವಾಗಿದೆ ಎಂದುಕೊಳ್ಳುತ್ತೇನೆ. ಕೇಂದ್ರದಲ್ಲೂ ಕೂಡ ನ್ಯಾಯಗಳು ಸಿದ್ಧಗೊಂಡಿವೆ. ರಾಹುಲ್‌ಗಾಂಧಿ ಮತ್ತು ಮಲ್ಲಿಕಾರ್ಜುನ ಖರ್ಗೆ ಸಹಿ ಮಾಡಿರುವ ಗ್ಯಾರಂಟಿ ಕಾರ್ಡ್ ನಿಮ್ಮ ಮನೆಗೆ ಕೊಡುತ್ತೇವೆ. ಈ ಗ್ಯಾರಂಟಿ ಕಾರ್ಡ್‌ನಲ್ಲಿರುವುದನ್ನು ನೂರಕ್ಕೆ ನೂರು ಜಾರಿಗೆ ತರುತ್ತೇವೆ. ಈಗಾಗಲೇ ಟ್ಯಾಕ್ಸ್ ಎಂಬ ಭೂತ ತಂದು ಬಡವರ ರಕ್ತ ಹೀರುವ ಕೆಲಸಕ್ಕೆ ಮಾಡುತ್ತಿದ್ದಾರೆ. ಪ್ರತಾಪ್‌ಸಿಂಹ ಅವರು ನಿಮ್ಮ ವಿರಾಜಪೇಟೆಯಲ್ಲಿ ಕಚೇರಿಯತ್ತ ಭೇಟಿ ಕೊಡುತ್ತಿದ್ದರಾ? ಜನಗಳ ಬಳಿ ಬೇರೆಯುತ್ತಿದ್ದರಾ? ಎಂದು ಪ್ರಶ್ನಿಸಿದ ಅವರು, ನಮ್ಮ ಶಾಸಕ ಪೊನ್ನಣ್ಣ ಮಾಡಿರುವ ಅಭಿವೃದ್ಧಿಯನ್ನು ನೋಡಿ. ವಿರಾಜಪೇಟೆಯಲ್ಲಿ ಪೊನ್ನಣ್ಣನವರು ತಮ್ಮ ಅಭಿವೃದ್ಧಿ ಕೆಲಸ ಮೂಲಕ ಬಿಜೆಪಿಯವರನ್ನು ಖಾಲಿ ಮಾಡಿಸಿದ್ದಾರೆ ಎಂದು ಬೆಂಗಳೂರಿನಲ್ಲಿ ಹೇಳುತ್ತಾರೆ. ಅಭಿವೃದ್ಧಿ ಕಾರ್ಯಗಳು ಎಂದಿಗೂ ಕುಂಠಿತಗೊಳ್ಳಬಾರದು. ಅದಕ್ಕೆ ನಮ್ಮ ಕಾಂಗ್ರೆಸ್ ಪಕ್ಷ ಅವಕಾಶ ಮಾಡಿಕೊಡುವುದಿಲ್ಲ. ಕಾಂಗ್ರೆಸ್ ಗೆದ್ದರೆ ಮತ್ತಷ್ಟು ಅನುದಾನವನ್ನು ನಿಮ್ಮ ಕ್ಷೇತ್ರಕ್ಕೆ ಸಿಎಂ ನೀಡುತ್ತಾರೆ. ದಯಮಾಡಿ ನನಗೊಂದು ಅವಕಾಶ ಮಾಡಿಕೊಡಿ ಎಂದು ಮನವಿ ಮಾಡಿದರು.

ಈ ವೇಳೆ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ದರ್ಮಜ ಉತ್ತಪ್ಪ, ಬ್ಲಾಕ್ ಅಧ್ಯಕ್ಷ ಮಿದೇರೀರಾ ನವೀನ್, ಅಕ್ರಮ ಸಕ್ರಮ ಸಮಿತಿ ಅಧ್ಯಕ್ಷ ಅಪ್ಪಣ್ಣ, ತಾಲೂಕು ಪಂಚಾಯತ್ ಸದಸ್ಯರಾದ ಪಲ್ವಿನ್, ಎಂ.ಬಿ ಗಣೇಶ್, ಡಿಸಿಸಿಸಿ ಸದಸ್ಯ ನವೀನ್ ಅಯ್ಯಪ್ಪ ಇನ್ನಿತರರಿದ್ದರು.

ಬಂಡಾಯ ಅಭ್ಯರ್ಥಿಯಾಗಿ ಇಂದು ಈಶ್ವರಪ್ಪ ನಾಮಪತ್ರ ಸಲ್ಲಿಕೆ



ಶಿವಮೊಗ್ಗ, ಏ.11– ಲೋಕಸಭಾ ಚುನಾವಣೆಗೆ ಬಿಜೆಪಿಯು ತಮ್ಮ ಪುತ್ರನಿಗೆ ಟಿಕೆಟ್ ಕೊಡದಿದ್ದಕ್ಕೆ ಅಸಮಾಧಾನಗೊಂಡಿರುವ ಮಾಜಿ ಸಚಿವ ಕೆ.ಎಸ್.ಈಶ್ವರಪ್ಪ ಅವರು ಬಂಡಾಯ ಅಭ್ಯರ್ಥಿಯಾಗಿ ಶುಕ್ರವಾರ ನಾಮಪತ್ರ ಸಲ್ಲಿಸಲಿದ್ದಾರೆ.

ಶಿವಮೊಗ್ಗದಲ್ಲಿ ಮಾತನಾಡಿದ ಅವರು, ಈ ಚುನಾವಣೆಯಲ್ಲಿ ನೂರಕ್ಕೆ ನೂರು ಗೆಲ್ಲುತ್ತೇನೆ, ನಾಳೆ ಬೆಳಗ್ಗೆ 10 ಗಂಟೆಗೆ ರಾಮಣ್ಣ ಶ್ರೇಷ್ಠಿ ಪಾರ್ಕ್ ಗಣಪತಿ ದೇವಸ್ಥಾನದಲ್ಲಿ ವಿಶೇಷ ಪೂಜೆ ಸಲ್ಲಿಸಿ ಮೆರವಣಿಗೆ ಮೂಲಕ ಗೋಪಿ ವೃತ್ತಕ್ಕೆ ಬಂದು ಸಭೆ ನಡೆಸಲಾಗುವುದು. ನಂತರ ನಾಮಪತ್ರ ಸಲ್ಲಿಸಲಾಗುವುದು. ಬೈಂದೂರು ಸೇರಿದಂತೆ ಶಿವಮೊಗ್ಗ ಲೋಕಸಭಾ ಕ್ಷೇತ್ರದ ಎಲ್ಲಾ ಕಡೆಗಳಿಂದ ರಾಷ್ಟ್ರಭಕ್ತರು ಬರಲಿದ್ದಾರೆ ಎಂದರು.

ನನ್ನ ಅಭಿಮಾನಿಗಳು ನಿರೀಕ್ಷೆ ಮೀರಿ ಕೆಲಸ ಮಾಡ್ತಿದ್ದಾರೆ. ಸೋಲಿನ ಭಯದಲ್ಲಿ ಅಪಪ್ರಚಾರ ಆಗುತ್ತಿದೆ. ಈಶ್ವರಪ್ಪ ವಾಪಸ್ ತಗೋತಾರೆ ಯಾಕೆ ಬೆಂಬಲ ಕೊಡ್ತೀರಾ ಅಂತಿದ್ದಾರೆ. ಅಪಪ್ರಚಾರಕ್ಕೆ ಕಾರ್ಯಕರ್ತರು ಕಿವಿಗೊಡಬಾರದು. ನಾನು ನಿಂತೇ ನಿಲ್ಲುತ್ತೇನೆ. ಇದರಲ್ಲಿ ಯಾವುದೇ ಅನುಮಾನ ಇಲ್ಲ. ವ್ಯವಸ್ಥಿತವಾಗಿ ಚುನಾವಣಾ ಪ್ರಚಾರ ಆಗ್ತಿದೆ ಎಂದು ವಾಗ್ದಾಳಿ ನಡೆಸಿದರು. ಕಾಂಗ್ರೆಸ್–ಜೆಡಿಎಸ್‌ನವರು ಬೆಂಬಲ ಕೊಡ್ತಿದ್ದಾರೆ. ಕಾಂಗ್ರೆಸ್ ಕ್ಯಾಂಡಿಡೇಟು ವೀಕ್ ಅದಕ್ಕೆ ನಿಮಗೆ ಬೆಂಬಲ ಕೊಡ್ತೀವಿ ಅಂತಿದ್ದಾರೆ. ನಾಳೆ ಎಲ್ಲರೂ ನಾಮಪತ್ರ ಸಲ್ಲಿಸಲು ಬರುತ್ತಿದ್ದಾರೆ. ಇಷ್ಟರಮಟ್ಟಿಗೆ ಬೆಂಬಲ ಸಿಗುತ್ತದೆ ಅಂತಾ ನಾನು ನಿರೀಕ್ಷೆ ಮಾಡಿರಲಿಲ್ಲ ಎಂದು ಈಶ್ವರಪ್ಪ ಹೇಳಿದರು.

ನಾಳೆಯಿಂದ 18 ರವರೆಗೆ ಅಂಚೆ ಮತಪತ್ರದ ಮತದಾನಕ್ಕೆ ಅವಕಾಶ

ಮೈಸೂರು,ಏ.11– ಲೋಕಸಭಾ ಚುನಾವಣೆ ಸಂಬಂಧ 85 ವರ್ಷ ಮೇಲ್ಪಟ್ಟ ಹಿರಿಯ ನಾಗರಿಕರು ಮತ್ತು ಶೇ.40 ಕ್ಕಿಂತ ಹೆಚ್ಚಿನ ಅಂಗವಿಕಲತೆಯುಳ್ಳ ವಿಶೇಷಚೇತನ ಮತದಾರರಿಗೆ ಅಂಚೆ ಮತಪತ್ರದ ಮೂಲಕ ಮತದಾನ ಮಾಡಲು ಏ.13 ರಿಂದ ಏ.18 ರವರೆಗೆ ಮತದಾನ ದಿನಾಂಕವನ್ನು ನಿಗದಿಪಡಿಸಿದ್ದು, ಅದರಂತೆ 22–ಚಾಮರಾಜನಗರ (ಪ.ಜಾ) ಲೋಕಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಒಟ್ಟು 982 ಜನ 85 ವರ್ಷ ಮೇಲ್ಪಟ್ಟ ಹಿರಿಯ ನಾಗರಿಕ ಮತದಾರರು ಹಾಗೂ 445 ಜನ ವಿಶೇಷಚೇತನ ಮತದಾರರಿಗೆ ಮನೆಯಲ್ಲಿಯೇ ಮತದಾನ ಮಾಡಲು ಅವಕಾಶ ಕಲ್ಪಿಸಲಾಗಿರುತ್ತದೆ ಎಂದು ಚಾಮರಾಜನಗರದ ಜಿಲ್ಲಾಧಿಕಾರಿ ಹಾಗೂ 22–ಚಾಮರಾಜನಗರದ (ಪಜಾ) ಲೋಕಸಭಾ ಕ್ಷೇತ್ರದ ಚುನಾವಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಯದುವೀರ್ ಪರ ಮಾಜಿ ಮೇಯರ್ ಶಿವಕುಮಾರ್ ಪ್ರಚಾರ



ಮೈಸೂರು, ಏ.11(ಎಂಕೆ)– ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಯದುವೀರ್ ಪರ ಮಾಜಿ ಮೇಯರ್ ಶಿವಕುಮಾರ್ ಮನೆ ಮನೆಗೆ ತೆರಳಿ ಮತಯಾಚಿಸಿದರು. ನಗರಪಾಲಿಕೆ ವಾರ್ಡ್ ನಂ.47ರ ವ್ಯಾಪ್ತಿಯ ಮನೆ ಮನೆಗೆ ತೆರಳಿ ಪ್ರಧಾನಿ ಮೋದಿಯವರ ಹತ್ತು ವರ್ಷದ ಸಾಧನೆಗಳ ಮಾಹಿತಿಯುಳ್ಳ ಕರಪತ್ರಗಳನ್ನು ಹಂಚಿಕೆ ಮಾಡುವ ಮೂಲಕ ಮತದಾರರು ಮನವೊಲಿಸಲಾಯಿತು. ಈ ವೇಳೆ ಪ್ರಧಾನಿ ನರೇಂದ್ರ ಮೋದಿಯವರನ್ನು ನಿಮ್ಮೊಳಗೊಬ್ಬ ಎಂದುಕೊಂಡು ಅವರನ್ನು ಮತ್ತೊಮ್ಮೆ ಪ್ರಧಾನ ಮಂತ್ರಿಯನ್ನಾಗಿ ಮಾಡಲು ಎಲ್ಲರೂ ಸಹಕರಿಸಿ. ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದ ನಮ್ಮ ಅಭ್ಯರ್ಥಿ ಯದುವೀರ್ ಅವರನ್ನು ಗೆಲ್ಲಿಸುವ ಮೂಲಕ ಪ್ರಧಾನಿಗಳ ಕೈ ಬಲಪಡಿಸಬೇಕು ಎಂದು ಮನವಿ ಮಾಡಿದರು. ಮುಡಾ ಮಾಜಿ ಸದಸ್ಯೆ ಲಕ್ಷ್ಮಿದೇವಿ, ಬಿಜೆಪಿ ಹಿಂದುಳಿದ ಮೋರ್ಚಾ ಕಾರ್ಯದರ್ಶಿ ಉಪೇಂದ್ರ ಕುಮಾರ್, ಕೇಬಲ್ ಸೋಮು, ಮುಖಂಡರಾದ ಶಾಂತವೀರಪ್ಪ, ಅನ್ನಪೂರ್ಣ ಮತ್ತಿತರರು ಉಪಸ್ಥಿತರಿದ್ದರು.

ಸೋಲಿನ ಹತಾಶೆಯಿಂದ ಕಾಂಗ್ರೆಸ್, ಬಿಜೆಪಿ ಕಾರ್ಯಕರ್ತರ ಮೇಲೆ ಹಲ್ಲೆಗೆ ಮುಂದಾಗಿದೆ

• ಈಗಾಗಲೇ ಬೆಂಗಳೂರು ಗ್ರಾಮಾಂತರದಲ್ಲಿ ಬಿಜೆಪಿ ಕಾರ್ಯಕರ್ತರ ಮೇಲೆ ಮಾರಣಾಂತಿಕ ಹಲ್ಲೆ • ಕಾಂಗ್ರೆಸ್ ಗ್ಯಾರಂಟಿ ಒಂದು ಕೈಯ್ಯಲ್ಲಿ ಕೊಟ್ಟು, ಮತ್ತೊಂದು ಕೈಯ್ಯಲ್ಲಿ ಕಿತ್ತುಕೊಳ್ಳುವ ತಂತ್ರ • ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ವಾಗ್ದಾಳಿ • ಕಾಂಗ್ರೆಸ್ ರಾಜ್ಯ ಪ್ರಧಾನ ಕಾರ್ಯದರ್ಶಿ ಗುರುಪಾದಸ್ವಾಮಿ ಸೇರಿ ಇತರರು ಬಿಜೆಪಿ ಸೇರ್ಪಡೆ



ಬಿಜೆಪಿ ಸೇರಿದ ಗುರುಪಾದಸ್ವಾಮಿ ಅವರಿಗೆ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಪಕ್ಷದ ಧ್ವಜ ನೀಡಿ ಸ್ವಾಗತಿಸಿದರು.

ಮೈಸೂರು, ಏ.11(ಎಸ್‌ಬಿಡಿ)– ವಾಸ್ತವ ಸ್ಥಿತಿ ಅರಿವಾಗಿ ನಮ್ಮ ಕಾರ್ಯಕರ್ತರ ಮೇಲೆ ಹಲ್ಲೆ ನಡೆಸಿ, ಬೆದರಿಕೆ ಹಾಕಲು ಕಾಂಗ್ರೆಸ್ ಮುಂದಾಗಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಗಂಭೀರ ಆರೋಪ ಮಾಡಿದರು.

ಮೈಸೂರಿನ ಬಿಜೆಪಿ ಕಚೇರಿಯಲ್ಲಿ ಗುರುವಾರ ರಾಜ್ಯ ಕಾಂಗ್ರೆಸ್(ಕೆಪಿಸಿಸಿ) ಪ್ರಧಾನ ಕಾರ್ಯದರ್ಶಿ ಗುರುಪಾದಸ್ವಾಮಿ ಹಾಗೂ ಅವರ ಬೆಂಬಲಿಗರನ್ನು ಬಿಜೆಪಿ ಪಕ್ಷಕ್ಕೆ ಬರಮಾಡಿಕೊಂಡ ಬಳಿಕ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಕಾಂಗ್ರೆಸ್ ನಾಯಕರು ದಿನೇ ದಿನೇ ಹತಾಶರಾಗುತ್ತಿದ್ದಾರೆ. ಮೊನ್ನೆ ಬೆಂಗಳೂರು ಗ್ರಾಮಾಂತರ ಕ್ಷೇತ್ರದಲ್ಲಿ ನಮ್ಮ ಪಕ್ಷದ ಕಾರ್ಯಕರ್ತರ ಮೇಲೆ ಮಾರಣಾಂತಿಕ ಹಲ್ಲೆ ಮಾಡಿದ್ದಾರೆ ಎಂದರು.

ಕಾಂಗ್ರೆಸ್ ನಾಯಕರು ಲೋಕಸಭಾ ಚುನಾವಣೆಯಲ್ಲಿ 18–20 ಸ್ಥಾನಗಳಲ್ಲಿ ಗೆಲ್ಲುತ್ತೇವೆಂಬ ಭ್ರಮೆಯಲ್ಲಿದ್ದರು. ಆದರೀಗ ಅವರಿಗೆ ಜ್ಞಾನೋದಯವಾಗಿ ವಾಸ್ತವ ಪರಿಸ್ಥಿತಿ ಸಿಎಂ, ಡಿಸಿಎಂ ಹಾಗೂ ಕಾಂಗ್ರೆಸ್ ಮುಖಂಡರಿಗೆ ಅರ್ಥ ಆಗುತ್ತಿದೆ. ಹಾಗಾಗಿ ಈ ರೀತಿಯ ಘಟನೆಗಳಾಗುವುದು ಸಹಜ. ಚುನಾವಣೆ ಹತ್ತಿರವಾದಂತೆಲ್ಲಾ ಬಿಜೆಪಿ– ಜೆಡಿಎಸ್ ಕಾರ್ಯಕರ್ತರ ಮೇಲೆ ಹಲ್ಲೆ ನಡೆಸೋದು ಹೆಚ್ಚಾಗುತ್ತದೆ. ಆದರೆ ಒಗ್ಗಟ್ಟಾಗಿ ನಮ್ಮ ಅಭ್ಯರ್ಥಿಗಳನ್ನು ಗೆಲ್ಲಿಸುವ ನಿಟ್ಟಿನಲ್ಲಿ ಮುನ್ನುಗ್ಗುತ್ತಿರುವ ಬಿಜೆಪಿ–ಜೆಡಿಎಸ್ ಕಾರ್ಯಕರ್ತರು ಈ ರೀತಿಯ ಯಾವುದೇ ಘಟನೆಗಳಿಂದ ಬಗ್ಗುವುದಿಲ್ಲ. ಯಾರಿಂದಲೂ ನಮ್ಮ ಉತ್ಸಾಹ ಕುಗ್ಗಿಸಲು ಸಾಧ್ಯವಿಲ್ಲ. ಗೊಡ್ಡು ಬೆದರಿಕೆಗೆ ಹೆದರುವುದಿಲ್ಲ. ದೇಶದ ಭವಿಷ್ಯ ರೂಪಿಸುವ ಈ ಚುನಾವಣೆಯಲ್ಲಿ ಬಿಜೆಪಿ ಹಾಗೂ ಜೆಡಿಎಸ್ ಒಟ್ಟಾಗಿ ರಾಜ್ಯದಲ್ಲಿ ಹೊಸ ಇತಿಹಾಸ ಸೃಷ್ಟಿಸುವುದು ಶತಸಿದ್ಧ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಜನರ ಮುಂದಿಡುತ್ತೇವೆ: ಕಾಂಗ್ರೆಸ್ ಸರ್ಕಾರ ಬಂದ ನಂತರ ರಾಜ್ಯದಲ್ಲಿ ಅಭಿವೃದ್ಧಿ ಶೂನ್ಯವಾಗಿದೆ. ಪ್ರಧಾನಮಂತ್ರಿ ಕಿಸಾನ್ ಸಮ್ಮಾನ್ ಯೋಜನೆಯಡಿ ಯಡಿಯೂರಪ್ಪನವರು ಸಿಎಂ ಆಗಿದ್ದಾಗ ನೀಡುತ್ತಿದ್ದ 4 ಸಾವಿರ ಸಹಾಯ ಧನ, ಪರಿಶಿಷ್ಟ ಜಾತಿ ಮತ್ತು ಪಂಗಡ, ಹಿಂದುಳಿದ ವರ್ಗದ ಬಡ ವಿದ್ಯಾರ್ಥಿಗಳಿಗೆ ನೀಡುತ್ತಿದ್ದ ವಿದ್ಯಾರ್ಥಿ ವೇತನವನ್ನು ನಿಲ್ಲಿಸಿದ್ದಾರೆ. ಹಾಲಿನ ದರ ಹೆಚ್ಚಾದರೂ ಅದರ ಲಾಭ ರೈತರಿಗೆ ಸಿಗುತ್ತಿಲ್ಲ. ವಿದ್ಯುತ್ ದರವನ್ನು ಯೂನಿಟ್‌ಗೆ 4.10 ರೂ.ನಿಂದ 8.20 ರೂ.ಗೆ ಏರಿಕೆ ಮಾಡಿದ್ದಾರೆ. ಕೃಷಿ ಪಂಪ್‌ಸೆಟ್‌ಗೆ ಟ್ರಾನ್ಸ್‌ಫಾರ್ಮರ್ ಹಾಕಿಸಲು 25 ಸಾವಿರ ಕಟ್ಟಿದರೆ ಸಾಕಿತ್ತು. ಆದರೆ ರೈತರ ಪರ ಎಂದು ಹೇಳಿಕೊಳ್ಳುವ ಸಿದ್ದರಾಮಯ್ಯರ ಸರ್ಕಾರದಲ್ಲಿ 3.15 ಲಕ್ಷ ಖರ್ಚಾಗುತ್ತಿದೆ. ಹಾಲಿನ ಪ್ರೋತ್ಸಾಹ ಧನವನ್ನು 680 ಕೋಟಿ ರೂ. ಬಾಕಿ ಉಳಿಸಿಕೊಂಡಿದ್ದಾರೆ. 24 ಸಾವಿರ ಕೋಟಿ ಎಸ್‌ಸಿಪಿ, ಟಿಎಸ್‌ಪಿ ಹಣವನ್ನು ಅನ್ಯ ಕಾರ್ಯಗಳಿಗೆ ವರ್ಗಾವಣೆ ಮಾಡಿಕೊಂಡಿದ್ದಾರೆ. ಗ್ಯಾರಂಟಿ ನೆಪದಲ್ಲಿ ಒಂದು ಕೈಯ್ಯಲ್ಲಿ ಕೊಟ್ಟು, ಮತ್ತೊಂದು ಕೈಯ್ಯಲ್ಲಿ ಕಿತ್ತುಕೊಳ್ಳುತ್ತಿದ್ದಾರೆ. ಮಹಿಳೆಯರಿಗೆ ಉಚಿತ ಬಸ್ ಪ್ರಯಾಣ ಎಂದು ಶೇ.30–40ರಷ್ಟು ಟಿಕೆಟ್ ದರ ಹೆಚ್ಚಿಸಿ, ಪುರುಷ ಪ್ರಯಾಣಿಕರ ಜೇಬಿಗೆ ಕತ್ತರಿ ಹಾಕಿದ್ದಾರೆ. ಹೀಗೆ ರಾಜ್ಯದ ಜನರ ಕಣ್ಣಿಗೆ ಮಣ್ಣೆರಚುತ್ತಿರುವ ಕಾಂಗ್ರೆಸ್ ನಡೆ ಹಾಗೂ ಮೋದಿ ಅವರು ಹತ್ತು ವರ್ಷದಲ್ಲಿ ನೀಡಿದ ಯೋಜನೆಗಳನ್ನು ಜನರ ಮುಂದಿಡುತ್ತೇವೆ. ದೇಶದ ಭವಿಷ್ಯದ ದೃಷ್ಟಿಯಿಂದ ಮತದಾರರು ಮೋದಿ ಅವರನ್ನು ಹಾಗೂ ಬಿಜೆಪಿ–ಜೆಡಿಎಸ್ ಮೈತ್ರಿ ಅಭ್ಯರ್ಥಿಗಳನ್ನು ಬೆಂಬಲಿಸುತ್ತಾರೆಂಬ ವಿಶ್ವಾಸವಿದೆ ಎಂದರು.

ಹೈ ಪ್ರೊಫೈಲ್ ಕಣ: ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರ ಹೈಪ್ರೊಫೈಲ್ ಕಣವಾಗಿದೆ. ಒಂದು ಕಡೆ ಹಣ–ಹೆಂಡ, ಅಧಿಕಾರ ದರ್ಪದಿಂದ ಗೆಲ್ಲುತ್ತೇವೆಂದು ವರ್ತಿಸುತ್ತಿರುವ ಕಾಂಗ್ರೆಸ್ ಅಭ್ಯರ್ಥಿ ವಿರುದ್ಧ ಆರೋಗ್ಯ ಕ್ಷೇತ್ರದಲ್ಲಿ ಸೇವೆ ಸಲ್ಲಿಸಿರುವ ಸಜ್ಜನ, ಯೋಗ್ಯ ಅಭ್ಯರ್ಥಿ ಡಾ.ಸಿ.ಎನ್.ಮಂಜುನಾಥ್ ಅವರು ಸ್ಪರ್ಧಿಸಿದ್ದಾರೆ. ಹಾಗಾಗಿ ಆ ಕ್ಷೇತ್ರದಿಂದಲೇ ಕಾಂಗ್ರೆಸ್‌ನವರು ನಮ್ಮ ಕಾರ್ಯಕರ್ತರ ಮೇಲೆ ದುಂಡಾವರ್ತನೆ ಶುರು ಮಾಡಿದ್ದಾರೆ. ಆದರೆ ನಾವು ಯಾವ ಬೆದರಿಕೆಗೂ ಬಗ್ಗುವುದಿಲ್ಲ ಎಂದು ಹೇಳಿದರು.

ಪ್ರಭಾವ ಕುಸಿದಿದೆ: ಹೆಚ್.ಡಿ.ಕುಮಾರಸ್ವಾಮಿ ಆದಿಚುಂಚನಗಿರಿ ಸ್ವಾಮೀಜಿಯವರ ದೂರವಾಣಿ ಸಂಭಾಷಣೆಯನ್ನು ಕದ್ದಾಲಿಕೆ ಮಾಡಿದ್ದಾರೆಂಬ ಆರೋಪಕ್ಕೆ ಪ್ರತಿಕ್ರಿಯಿಸಿ, ಸಿಎಂ, ಡಿಸಿಎಂ ಪ್ರಭಾವ ಹಾಗೂ ಶಕ್ತಿ ಕುಸಿಯುತ್ತಿದೆ ಎಂಬ ಭಾವನೆಯಿಂದ ಈ ರೀತಿ ಹೇಳಿಕೆ ಕೊಡುತ್ತಿದ್ದಾರೆ. ಏನಾದರೂ ಹೇಳಲಿ ರಾಜ್ಯದ ಜನ ಎಲ್ಲವನ್ನೂ ಗಮನಿಸುತ್ತಿದ್ದಾರೆ. ಚುನಾವಣೆ ವೇಳೆ ಎಲ್ಲಾ ಪಕ್ಷದ ಅಭ್ಯರ್ಥಿಗಳೂ ಸ್ವಾಮೀಜಿಗಳ ಆಶೀರ್ವಾದ ಪಡೆಯುವುದು ವಾಡಿಕೆ. ಇದನ್ನೂ ಟೀಕೆ ಮಾಡುತ್ತಾರೆ ಎಂದರೆ ಅದಕ್ಕೆ ಹತಾಶೆಯೇ ಕಾರಣ ಎಂದರು. ಶಿವಮೊಗ್ಗದಲ್ಲಿ ಕೆ.ಎಸ್.ಈಶ್ವರಪ್ಪ ನಾಮಪತ್ರ ಸಲ್ಲಿಸಲು ನಿರ್ಧರಿಸಿರುವ ಬಗ್ಗೆ ಪ್ರತಿಕ್ರಿಯಿಸಿ, ಈ ಬಗ್ಗೆ ಮಾತನಾಡ್ತೀವಿ ಎಂದಷ್ಟೇ ಹೇಳಿದರು.

ಕಾಂಗ್ರೆಸ್ ಪಕ್ಷದಲ್ಲಿ ಹಲವಾರು ವರ್ಷಗಳಿಂದ ಸಂಘಟನೆಯಲ್ಲಿ ತೊಡಗಿದ್ದ ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಗುರುಪಾದಸ್ವಾಮಿ ಅವರು ದೇಶದಲ್ಲಿ ಮೋದಿ ಮತ್ತೆ ಪ್ರಧಾನಿ ಆಗಬೇಕು, ಬಿಜೆಪಿ ನೇತೃತ್ವದ ಎನ್‌ಡಿಎ ಸರ್ಕಾರ ರಚನೆಯಾಗಬೇಕು ಎಂಬ ಆಶಯದೊಂದಿಗೆ ಯಾವುದೇ ಷರತ್ತು ಇಲ್ಲದೆ, ಬಿಜೆಪಿ ಕಾರ್ಯಕರ್ತನಾಗಿ ದುಡಿಯುವುದಾಗಿ ಅಪಾರ ಬೆಂಬಲಿಗರೊಂದಿಗೆ ಬಿಜೆಪಿ ಸೇರುವ ಮೂಲಕ ಪಕ್ಷದ ಶಕ್ತಿ ಹೆಚ್ಚಿಸಿದ್ದಾರೆ ಎಂದು ಸಂತಸ ವ್ಯಕ್ತಪಡಿಸಿದರು.

ಈ ವೇಳೆ ಬಿಜೆಪಿ ನಗರಾಧ್ಯಕ್ಷ ಎಲ್.ನಾಗೇಂದ್ರ, ಜಿಲ್ಲಾಧ್ಯಕ್ಷ ಎಲ್.ಆರ್.ಮಹದೇವಸ್ವಾಮಿ, ಶಾಸಕ ಶ್ರೀವತ್ಸ, ಚಾಮರಾಜನಗರ ಲೋಕಸಭಾ ಕ್ಷೇತ್ರದ ಅಭ್ಯರ್ಥಿ ಬಾಲರಾಜ್, ಮಾಜಿ ಶಾಸಕರಾದ ನಿರಂಜನ್ ಕುಮಾರ್, ಸಿದ್ದರಾಜು, ರಾಜ್ಯ ಉಪಾಧ್ಯಕ್ಷ ಎಂ.ರಾಜೇಂದ್ರ, ಮುಖಂಡರಾದ ಜಯಪ್ರಕಾಶ್, ಅರುಣ್ ಕುಮಾರ್ ಗೌಡ, ಮೋಹನ್, ಕೇಬಲ್ ಮಹೇಶ್, ಅನಿಲ್ ಥಾಮಸ್ ಮತ್ತಿತರರಿದ್ದರು.

ಗುರುಪಾದಸ್ವಾಮಿ ನೇತೃತ್ವದಲ್ಲಿ ಹಲವರು ಕಾಂಗ್ರೆಸ್ ತೊರೆದು ಬಿಜೆಪಿ ಸೇರ್ಪಡೆ

ಮೈಸೂರು: ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಗುರುಪಾದಸ್ವಾಮಿ ಅವರೊಂದಿಗೆ ಸಂಯೋಜಕ ಎನ್.ಎಸ್.ರಾಜೇಂದ್ರ, ಸೇವಾದಳ ಸಂಚಾಲಕ ಸಿ.ರಂಗನಾಥ್ (ಬಂಗಾರಪ್ಪ), ಮಾಜಿ ಕಾರ್ಪೊರೇಟರ್ ರತ್ನಮ್ಮ ಶಾಂತವೀರೇಂದ್ರ ಸ್ವಾಮಿ, ಕಾಂಗ್ರೆಸ್ ಮುಖಂಡರಾದ ಚಾಮುಂಡೇಶ್ವರಿ ಕ್ಷೇತ್ರದ ವೈ.ಜೆ.ನವೀನ್ ಕುಮಾರ್, ವರುಣ ಕ್ಷೇತ್ರದ ಬೆಟ್ಟಯ್ಯ ಭುಗತಗಳ್ಳಿ, ಅಶೋಕ, ಬೋವಿ ಸಮಾಜದ ಮುಖಂಡ ಗಣೇಶ್ ಹುಣಸೂರು, ವಕೀಲ ಡಿ.ಎಂ.ಲವಕುಮಾರ್ ಪಿರಿಯಾಪಟ್ಟಣ, ಹಿರಿಯ ಮುಖಂಡ ಬಿ.ರಾಜಣ್ಣ ಪಿರಿಯಾಪಟ್ಟಣ, ಕುರುಬ ಸಮಾಜದ ಮುಖಂಡ ಟಿ.ಶಂಕರ ತಿಮ್ಮೇಗೌಡ, ನಗರ ಕಾಂಗ್ರೆಸ್ ಸೇವಾದಳ ಸಮಿತಿಯ ಕೆ.ರಾಜಶೇಖರ್ ಮತ್ತಿತರರು ಬಿಜೆಪಿ ಸೇರಿದರು.

ಏ.14ರಂದು ಮೈಸೂರಲ್ಲಿ ಪ್ರಧಾನಿ ಮೋದಿ ಪ್ರಚಾರ



ಪ್ರಧಾನಿ ಮೋದಿ

ಮೈಸೂರು, ಏ.11(ಎಸ್‌ಬಿಡಿ)– ಮೈಸೂರಿನಲ್ಲಿ ಏ.14ರಂದು ಬೃಹತ್ ಚುನಾವಣಾ ಸಮಾವೇಶ ಆಯೋಜಿಸಲಾಗಿದ್ದು, ಪ್ರಧಾನಿ ಮೋದಿ ಅವರು ಭಾಗವಹಿಸಲಿದ್ದಾರೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ತಿಳಿಸಿದರು.

ಮೈಸೂರು ಬಿಜೆಪಿ ಕಚೇರಿಯಲ್ಲಿ ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ಮೈಸೂರಿನ ಮಹಾರಾಜ ಕಾಲೇಜು ಮೈದಾನದಲ್ಲಿ ಏ.14ರಂದು ಸಂಜೆ 4ಕ್ಕೆ ಬೃಹತ್ ಸಮಾವೇಶ ಆಯೋಜಿಸಲಾಗಿದೆ. ಮೈಸೂರು–ಕೊಡಗು, ಮಂಡ್ಯ ಹಾಗೂ ಚಾಮರಾಜನಗರ ಲೋಕಸಭಾ ಕ್ಷೇತ್ರಗಳನ್ನೊಳಗೊಂಡ ಬೃಹತ್ ಚುನಾವಣಾ ಪ್ರಚಾರ ಸಭೆಯಲ್ಲಿ ಪ್ರಧಾನಿ ಮೋದಿ ಅವರು ಭಾಗವಹಿಸುವ ಮೂಲಕ ಮತ್ತಷ್ಟು ಶಕ್ತಿ ತುಂಬಲಿದ್ದಾರೆ. ಮಂಡ್ಯ ಲೋಕಸಭಾ ಕ್ಷೇತ್ರದ ಎನ್‌ಡಿಎ ಅಭ್ಯರ್ಥಿ, ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ, ಮಾಜಿ ಸಿಎಂ ಬಿ.ಎಸ್.ಯಡಿಯೂರಪ್ಪ ಸೇರಿದಂತೆ ಬಿಜೆಪಿ ಹಾಗೂ ಜೆಡಿಎಸ್‌ನ ಹಿರಿಯ ಮುಖಂಡರು ಭಾಗವಹಿಸಲಿದ್ದಾರೆ ಎಂದರು.

ಈಗಾಗಲೇ ಯದುವೀರ್, ಹೆಚ್.ಡಿ.ಕುಮಾರಸ್ವಾಮಿ ಹಾಗೂ ಬಾಲರಾಜ್ ಗೆಲ್ಲುವ ವಾತಾವರಣ ನಿರ್ಮಾಣ ಆಗಿದೆ. ಪ್ರಧಾನಿಯವರ ಭೇಟಿಯಿಂದ ಇವರು ದೊಡ್ಡ ಅಂತರದಲ್ಲಿ ಗೆಲ್ಲಲು ಅನುಕೂಲವಾಗುತ್ತದೆ. ಕಾರ್ಯಕ್ರಮ ಯಶಸ್ಸಿಗೆ ಎಲ್ಲಾ ಮುಖಂಡರು ಕಾರ್ಯಕ್ರಮ ಸ್ವರೂಪ ನಿಶ್ಚಯ ಮಾಡಿದ್ದು, ಎರಡೂ ಪಕ್ಷದ ಕಾರ್ಯಕರ್ತರು ಲಕ್ಷಾಂತರ ಸಂಖ್ಯೆಯಲ್ಲಿ ಭಾಗವಹಿಸಲಿದ್ದಾರೆ ಎಂದು ತಿಳಿಸಿದರು.

ನಕ್ಕರೆ ಅದೇ ಸ್ವರ್ಗ

ಮನೆ ಮಾಲೀಕ (ಬಾಡಿಗೆ ಕೇಳೋಕೆ ಬಂದು) :
"ಏನ್ ಸತಾಯಿಸ್ತೀರಿ, ಏಳು ತಿಂಗಳಿಂದ ಬಾಡಿಗೆ ಕೊಟ್ಟಿಲ್ಲ"
ಬಾಡಿಗೆದಾರ : "ಬೇಜಾರು ಮಾಡಿಕೊಳ್ಳಬೇಡಿ ಸಾರ್, ಕಷ್ಟದಲ್ಲಿ ಇದ್ದೇನೆ, ಹೇಗಾದರೂ ಮಾಡಿ ಬಾಡಿಗೆ ಕೊಡ್ತೀನಿ, ಕೊನೆಗೆ ಏನೂ ಆಗದಿದ್ದರೆ ಈ ಮನೆಯನ್ನಾದರೂ ಅಡವಿಟ್ಟು ಕೊಡ್ತೀನಿ!"

ಮೈಸೂರು ಮಿತ್ರ

ಶುಕ್ರವಾರ, 12 ಏಪ್ರಿಲ್ 2024

ಸತ್ಯೇನೋತ್ತಭಿತಾ ಭೂಮಿಃ!! ನಹಿ ಸತ್ಯಾತ್ಪರೋ ಧರ್ಮಃ!
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ *M.A.*

ಅಮೃತವಾಹಿನಿ.........

ಎಲ್ಲಾ ಮಹಾನ್ ಸಾಧನೆಗಳು ದಿಢೀರ್ ಎಂದು ಆಗುವುದಿಲ್ಲ. ಸಾಕಷ್ಟು ಸಮಯ ಬೇಕಾಗುತ್ತದೆ. ತಾಳ್ಮೆ ಮುಖ್ಯ – ಮಾಯಾ ಏಂಜೆಲೊ

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ಮಗ ಸಣ್ಣವನಾದರೂ, ಮಾತು ಸಣ್ಣದಲ್ಲ

ನಿಮ್ಮ ಪತ್ರಗಳು

ಒಂದೇ ಹೆಸರಿನ ಅಭ್ಯರ್ಥಿಗಳ ಸ್ಪರ್ಧೆಯಿಂದ ಮತದಾರನ ದಾರಿ ತಪ್ಪಿಸಲು ಸಾಧ್ಯವೇ?

ಮಾನ್ಯರೆ,

ಚುನಾವಣೆ ಸಂದರ್ಭದಲ್ಲಿ ಮತದಾರರಿಗೆ ಗೊಂದಲ ಉಂಟು ಮಾಡಲು ಅಥವಾ ಮತದಾರರನ್ನು ದಾರಿ ತಪ್ಪಿಸುವ ಉದ್ದೇಶದಿಂದ ಒಂದೇ ಹೆಸರಿನ ಹಲವು ಅಭ್ಯರ್ಥಿಗಳನ್ನು ಪಕ್ಷೇತರ ಅಭ್ಯರ್ಥಿಯಾಗಿ ಸ್ಪರ್ಧಿಸುವಂತೆ ಮಾಡುವ ಮೂಲಕ ಗೆಲ್ಲುವ ಅಭ್ಯರ್ಥಿಗೆ ತೊಂದರೆ ಕೊಡುವುದು ರಾಜಕೀಯ ಪಕ್ಷಗಳ ಉದ್ದೇಶವಾಗಿರುತ್ತದೆ.

ಆದರೆ ಇಂದಿನ ಕಾಲಘಟ್ಟದಲ್ಲಿ ಮತದಾರರು ಸಾಕಷ್ಟು ಪ್ರಜ್ಞಾವಂತರಾಗಿದ್ದಾರೆ. ಯಾರಿಗೆ ಮತ್ತು ಯಾವ ಪಕ್ಷದ ಅಭ್ಯರ್ಥಿಗೆ ಮತ ಹಾಕಬೇಕೆಂದು ಮೊದಲೇ ನಿರ್ಧರಿಸಿರುತ್ತಾನೆ.

ಎಲ್ಲಕ್ಕಿಂತ ಮುಖ್ಯವಾಗಿ ಆಯಾಯ ಪಕ್ಷದ ಕಾರ್ಯಕರ್ತರು, ಪಕ್ಷದ ಚಿಹ್ನೆ, ಅಭ್ಯರ್ಥಿಯ ಹೆಸರು ಮತ್ತು ಕ್ರಮಸಂಖ್ಯೆಯನ್ನು ಮತದಾರರಿಗೆ ಮನದಟ್ಟು ಮಾಡಿಕೊಟ್ಟಿರುತ್ತಾರೆ. ಇದರಿಂದಾಗಿ ಮತಗಟ್ಟೆಗೆ ಹೋಗಿ ಮತದಾನ ಮಾಡುವ ಹಳ್ಳಿಯ ಅನಕ್ಷರಸ್ಥರನ್ನು ಕೇವಲ ಹೆಸರಿನಿಂದ ದಿಕ್ಕು ತಪ್ಪಿಸಲು ಸಾಧ್ಯವಿಲ್ಲ. ಇದೊಂದು ರಾಜಕೀಯ ಪಕ್ಷಗಳ ವ್ಯರ್ಥ ಪ್ರಯತ್ನವೆಂದೇ ಹೇಳಬೇಕು.

ಇದಕ್ಕೊಂದು ಉದಾಹರಣೆ ಎಂದರೆ, ಕಳೆದ ಲೋಕಸಭಾ ಚುನಾವಣೆಯಲ್ಲಿ ಮಂಡ್ಯ ಲೋಕಸಭಾ ಕ್ಷೇತ್ರದಿಂದ ಪಕ್ಷೇತರ ಅಭ್ಯರ್ಥಿಯಾಗಿ ಸ್ಪರ್ಧಿಸಿದ್ದ ಸುಮಲತಾ ಅವರನ್ನು ಸೋಲಿಸಲು, ಸುಮಲತಾ ಎಂಬ ಹೆಸರಿನ ನಾಲ್ಕು ಜನ ಅಭ್ಯರ್ಥಿಗಳನ್ನು ಪಕ್ಷೇತರರಾಗಿ ನಿಲ್ಲಿಸಿದರೂ, ಸುಮಲತಾ ಅಂಬರೀಶ್ ಅವರೇ ಜಯಗಳಿಸಿದರು. ಒಂದೇ ಹೆಸರಿನ ಹಲವು ಅಭ್ಯರ್ಥಿಗಳಿಂದ ಗೆಲ್ಲುವ ಅಭ್ಯರ್ಥಿಗೆ ಯಾವುದೇ ತೊಂದರೆಯಾಗುವುದಿಲ್ಲ.

–ಬೂಕನಕೆರೆ ವಿಜೇಂದ್ರ, ಕುವೆಂಪು ನಗರ, ಮೈಸೂರು

ಗ್ರಾಮ ಆಡಳಿತ ಅಧಿಕಾರಿ ನೇಮಕಾತಿ ಗರಿಷ್ಠ ವಯೋಮಿತಿ ಹೆಚ್ಚಿಸಿ

ಮಾನ್ಯರೆ,

ಕರ್ನಾಟಕ ಸರ್ಕಾರದ ಕಂದಾಯ ಇಲಾಖೆಯಲ್ಲಿ ಖಾಲಿ ಇರುವ ಒಟ್ಟು 1000 ಗ್ರಾಮ ಆಡಳಿತ ಅಧಿಕಾರಿ ಹುದ್ದೆಗಳಿಗೆ ಸ್ಪರ್ಧಾತ್ಮಕ ಪರೀಕ್ಷೆಯ ಮೂಲಕ ನೇರ ನೇಮಕಾತಿಗಾಗಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಮುಖಾಂತರ ಆನ್‌ಲೈನ್ ಅರ್ಜಿ ಸಲ್ಲಿಕೆ ಈಗಾಗಲೇ ಪ್ರಾರಂಭವಾಗಿರುವುದು ಹುದ್ದೆಯ ಆಕಾಂಕ್ಷಿಗಳಿಗೆ ಸಂತೋಷದ ವಿಷಯ. ಈ ಹಿಂದೆ ಸದರಿ ಹಂತದ ಹುದ್ದೆಗಳಿಗೆ ಸ್ಪರ್ಧಾತ್ಮಕ ಪರೀಕ್ಷೆ ಮಾಡದೆ, ದ್ವಿತೀಯ ಪಿಯುಸಿ ಶೇಕಡವಾರು ಅಂಕಗಳ ಮೇಲೆ ನೇರ ನೇಮಕಾತಿ ಮಾಡಲಾಗುತ್ತಿತ್ತು. ಕೋವಿಡ್ ಸಂದರ್ಭದಲ್ಲಿ ದ್ವಿತೀಯ ಪಿಯುಸಿ ಪರೀಕ್ಷೆ ನಡೆಸಲು ಆಗದೆ ಹೆಚ್ಚು ಕಡಿಮೆ ಎಲ್ಲಾ ವಿದ್ಯಾರ್ಥಿಗಳು ಉತ್ತಮ ಶೇಕಡವಾರು ಅಂಕಗಳೊಂದಿಗೆ ಕಾಲೇಜು ಹಂತದಲ್ಲಿಯೇ ಪಾಸಾಗಿರುತ್ತಾರೆ, ಈ ಅಂಕಗಳನ್ನು ಪರಿಗಣಿಸದೇ ಸ್ಪರ್ಧಾತ್ಮಕ ಪರೀಕ್ಷೆಯ ಮೂಲಕ ನೇಮಕಾತಿಯನ್ನು ಮಾಡುತ್ತಿರುವುದು ಅಭಿನಂದನಾರ್ಹ ಹಾಗೂ ಉತ್ತಮ ಬೆಳವಣಿಗೆ.

ಇದರೊಂದಿಗೆ, ಕಳೆದ ಮೂರು ನಾಲ್ಕು ವರ್ಷಗಳಲ್ಲಿ ಕೋವಿಡ್ ಕಾರಣದಿಂದಾಗಿ ಈ ಹಂತದ ಹುದ್ದೆಗಳಿಗೆ ಸರಿಯಾಗಿ ನೇಮಕಾತಿ ಪ್ರಕಟಣೆ ಆಗಿರುವುದಿಲ್ಲ ಹಾಗೂ ಇಷ್ಟು ಹೆಚ್ಚಿನ ಸಂಖ್ಯೆಯ ಹುದ್ದೆಗಳ ನೇಮಕಾತಿಗಾಗಿ ಮುಂದಾಗಿರುವುದು ಇದೇ ಮೊದಲು. ಆದರೆ ಅಭ್ಯರ್ಥಿಗಳ ವಯೋಮಿತಿಯನ್ನು ಮಾತ್ರ ಈ ಒಂದು ಬಾರಿಗಾದರೂ ಸದರಿ ಇರುವ ಗರಿಷ್ಠ ವಯೋಮಿತಿ ನಿಯಾಮಾವಳಿ ಜೊತೆಗೆ 3 ವರ್ಷವನ್ನು ಸೇರಿಸಿ ಅವಕಾಶ ಮಾಡಿಕೊಟ್ಟರೆ ಬಹುತೇಕ ಅಭ್ಯರ್ಥಿಗಳಿಗೆ ಸಹಾಯವಾಗುತ್ತದೆ ಹಾಗೂ ಸರ್ಕಾರಿ ಹುದ್ದೆಯನ್ನು ಪಡೆದು ಸಾರ್ವಜನಿಕ ಸೇವೆ ಮಾಡಬೇಕೆಂಬ ಎಷ್ಟೋ ಅಭ್ಯರ್ಥಿಗಳ ಕನಸು ನನಸಾಗುತ್ತದೆ. ಈಗಾಗಲೇ ಪ್ರಸಕ್ತ 2024ನೇ ಸಾಲಿನ ಕೆ.ಎ.ಎಸ್‌ನಂತಹ ಮಹತ್ವದ ಹುದ್ದೆಗಳ ನೇಮಕಾತಿಗಾಗಿ ಒಂದು ಬಾರಿ ಗರಿಷ್ಟ ವಯೋಮಿತಿಯಲ್ಲಿ 3 ವರ್ಷಗಳನ್ನು ಹೆಚ್ಚಿಸಿ ಅಭ್ಯರ್ಥಿಗಳಿಗೆ ಅನುಕೂಲ ಮಾಡಿಕೊಟ್ಟಿರುವ ಸರ್ಕಾರದ ಮಹತ್ ಕಾರ್ಯವನ್ನು ಇಲ್ಲಿ ಸ್ಮರಿಸಬಹುದಾಗಿದೆ. ಈ ಎಲ್ಲಾ ಅಂಶಗಳನ್ನು ಗಣನೆಗೆ ತೆಗೆದುಕೊಂಡು ಗ್ರಾಮ ಆಡಳಿತ ಅಧಿಕಾರಿ ನೇಮಕಾತಿಯ ಗರಿಷ್ಟ ವಯೋಮಿತಿಯನ್ನು ಒಂದು ಬಾರಿ ಮಾತ್ರ ಸಲ್ಲುವಂತೆ 3 ವರ್ಷಗಳನ್ನು ಹೆಚ್ಚಿಸಬೇಕೆಂದು ಹಲವು ಅಭ್ಯರ್ಥಿಗಳ ಕೊನೆಯ ಬೇಡಿಕೆ ಹಾಗೂ ಮನವಿ.

–ಪಿ.ಎ.ಪ್ರಶಾಂತ್ ಕುಮಾರ್, ಸಹಾಯಕ ಪ್ರಾಧ್ಯಾಪಕರು, ಮೈಸೂರು.

ಮತದಾನ ಮಾಡಿ ಪ್ರಜಾಪ್ರಭುತ್ವ ಗೆಲ್ಲಿಸಿ

ಮಾನ್ಯರೇ,

ಮತ್ತೊಮ್ಮೆ ಚುನಾವಣೆ ಬಂದಿದೆ. ಆದರೆ ಈ ಬಾರಿ ಲೋಕಸಭೆಗೆ. ಎನ್ನುವುದು ವಿಶೇಷ. ಮತದಾನ ಮಾಡಿ ಎಂದು ಚುನಾವಣಾ ಆಯೋಗ, ನಗರಪಾಲಿಕೆಗಳು ಈ ಬಗ್ಗೆ ಸಾಕಷ್ಟು ಪ್ರಚಾರ ನೀಡುತ್ತಿವೆ. ಬೀದಿ ನಾಟಕಗಳು, ಪ್ರಸಿದ್ಧ ಸಿನಿಮಾ ತಾರೆಯರು, ಕ್ರಿಕೆಟ್ ಆಟಗಾರರು, ಕ್ರೀಡಾಪಟುಗಳನ್ನು ಚುನಾವಣಾ ರಾಯಭಾರಿ (Brand Ambassador) ಗಳನ್ನಾಗಿ ಮಾಡಿ ಮತದಾನದ ಹೆಚ್ಚಳಕ್ಕೆ ಮಹತ್ವ ನೀಡಲಾಗಿದೆ. ಸಾಮಾಜಿಕ ತಾಣದಲ್ಲೂ ಸಾಕಷ್ಟು ಮಾಹಿತಿಗಳು, ಕೋರಿಕೆಗಳು ಮತದಾನ ಮಾಡಲು ಮತದಾರರನ್ನು ಪ್ರೇರೇಪಿಸುತ್ತಿದೆ.

ಹೌದು ಇವೆಲ್ಲವೂ ಸ್ವಾಗತಾರ್ಹ ಹಾಗೂ ಈ ಕ್ಷಣದ ಅತ್ಯವಶ್ಯವೂ ಹೌದು. ಆದರೆ ವಾಸ್ತವವಾಗಿ ಮತದಾರ ಇಂದಿನ ಪ್ರಸಕ್ತ ಪರಿಸ್ಥಿತಿಯಲ್ಲಿ ಶುದ್ಧ ಹಸ್ತನಾಗಿ ಉಳಿದಿದ್ದಾನೆಯೇ? ಖಂಡಿತಾ ಇಲ್ಲ. ಕೆಲವು ನಗರ ಪ್ರದೇಶಗಳಲ್ಲಿ ಹಾಗೂ ದಕ್ಷಿಣ ಕನ್ನಡ ಜಿಲ್ಲೆಯನ್ನು ಬಿಟ್ಟರೆ ಬಹುಪಾಲು ಮತದಾರರು ರಾಜಕೀಯ ಪಕ್ಷಗಳ ಕುಕ್ಕರ್, ಟಿವಿ, ಲ್ಯಾಪ್‌ಟಾಪ್ ಇತರೆ ವಸ್ತುಗಳು ಹಾಗೂ ಸಿಕ್ಕಾಪಟ್ಟೆ ಹಣ, ಹೆಂಡ, ಗ್ಯಾರಂಟಿ ಆಮಿಷಗಳಿಗೆ ಮರುಳಾಗಿ ಚುನಾವಣೆಯ ಕೊನೆಯ ವಾರದಲ್ಲಿ ಬದಲಾವಣೆ ಆಗುತ್ತಿರುವುದು. ಜಾತಿ, ಧರ್ಮ ರಾಜಕೀಯ ಮಾಡುವಲ್ಲಿ ಯಾವ ಪಕ್ಷವೂ ಬೇರೆಯದೆ ಆಗಿ ಉಳಿದಿರುವುದು ಪ್ರಜಾಪ್ರಭುತ್ವದ ದುರಂತವಾಗಿರುವುದು ದುರದೃಷ್ಟಕರ. ಇಂತಹ ಮತದಾರರು ಪ್ರಜ್ಞಾವಂತರಾಗಲು ಹೇಗೆ ಸಾಧ್ಯವಾದೀತು.

ಅಭಿವೃದ್ಧಿ ಕಾರ್ಯ, ಹೆದ್ದಾರಿ, ಚತುಷ್ಪಥ ರಸ್ತೆ ಸಾಮಾಜಿಕ ಪಿಡುಗುಗಳ (ಕೊರೊನಾ) ನಿಯಂತ್ರಣ, ಇವೆಲ್ಲವೂ ಮತದಾರರನ್ನು ಸೆಳೆಯಲು ರಾಜಕೀಯ ಪಕ್ಷಗಳು ಹೇಗೆ ಯಶಸ್ವಿಯಾಗುತ್ತದೆ. ಹಾಗೆಯೇ ಮತದಾರ ತನ್ನ ಹಕ್ಕಿನ ದಾನಕ್ಕೆ ನಿಜವಾದ ಅರ್ಥ ಕೊಟ್ಟಾನೆಯೇ ಅಥವಾ ಅರ್ಥ (ಹಣ)ಕ್ಕೆ ಬೆಲೆ ನೀಡುತ್ತಾನೆಯೇ ಕಾದು ನೋಡೋಣ.. ಆಮಿಷಕ್ಕೊಳಗಾಗದೇ ಪವಿತ್ರ ಕಾರ್ಯವಾದ ಮತದಾನ ಮಾಡಿ ಪ್ರಜಾಪ್ರಭುತ್ವ ಗೆಲ್ಲಿಸಿ ಎಂಬುದು ನಮ್ಮ ಕಳಕಳಿಯ ಮನವಿ

–ಶಿವಮೊಗ್ಗ ನಾ. ದಿನೇಶ್ ಅಡಿಗ, ಮೈಸೂರು.



ಡಾ. ವಿ. ರಂಗನಾಥ್
ಲೇಖಕರು ಹಾಗೂ ನಿವೃತ್ತ ತಹಸೀಲ್ದಾರರು
ಮೊ: 94482 08746/ 97421 79000

ಚಿಂತನೆ

ಚುನಾವಣೆ ಉತ್ಸಾಹವಿದ್ದರೆ ಉತ್ಸವ...!

ಇದೀಗ ಲೋಕಸಭೆಗೆ ಚುನಾವಣೆ ನಡೆಯುತ್ತಿದೆ. ಭಾರತ ಚುನಾವಣಾ ಆಯೋಗವು ದೇಶದ ಲೋಕಸಭೆಯ ಎಲ್ಲಾ 543 ಸ್ಥಾನಗಳಿಗೆ ಏಳು ಹಂತದಲ್ಲಿ ಚುನಾವಣೆ ನಡೆಸುತ್ತಿದೆ. ಸುರಕ್ಷತೆ, ನ್ಯಾಯ–ಸಮ್ಮತ ಚುನಾವಣೆಗಾಗಿ ಬಹು ಹಂತದಲ್ಲಿ ಚುನಾವಣೆ ನಡೆಸಲಾಗುತ್ತಿದೆ. ಮೊದಲೆಲ್ಲಾ ಗರಿಷ್ಠ ಸಾಮಾನ್ಯವಾಗಿ ಐದು ಹಂತಗಳಲ್ಲಿ ಚುನಾವಣೆ ನಡೆಯುತ್ತಿತ್ತು. ಆದರೆ ಈ ವರ್ಷ ಏಳು ಹಂತದಲ್ಲಿ ನಡೆಯುತ್ತಿದೆ.

ದೇಶದ ಚುನಾವಣಾ ವ್ಯವಸ್ಥೆಯಲ್ಲಿ ಕೇಂದ್ರ ಚುನಾವಣಾ ಆಯೋಗ ಹಾಗೂ ರಾಜ್ಯ ಚುನಾವಣಾ ಆಯೋಗಗಳ ಪಾತ್ರ ಪ್ರಮುಖವಾದುದು. ರಾಜ್ಯ ಚುನಾವಣಾ ಆಯೋಗ ಸ್ಥಳೀಯ ಸಂಸ್ಥೆಗಳ ಚುನಾವಣೆ ನಡೆಸುವ ಜವಾಬ್ದಾರಿ ಹೊಂದಿರುತ್ತದೆ. ಅಂದರೆ ಗ್ರಾಮ ಪಂಚಾಯತಿ, ತಾಲೂಕು ಪಂಚಾಯತಿ, ಪುರಸಭೆ, ನಗರಸಭೆ, ನಗರಪಾಲಿಕೆ ಮುಂತಾದ ಚುನಾವಣೆಗಳ ಈ ಆಯೋಗ ನಡೆಸುತ್ತದೆ. ಎಲ್ಲ ರಾಜ್ಯಗಳಲ್ಲೂ ರಾಜ್ಯ ಚುನಾವಣಾ ಆಯೋಗಗಳಿರುತ್ತವೆ.

ಇನ್ನು ವಿಧಾನಸಭೆ, ವಿಧಾನಪರಿಷತ್, ಲೋಕಸಭೆ, ರಾಜ್ಯಸಭೆ, ರಾಷ್ಟ್ರಪತಿ, ಉಪರಾಷ್ಟ್ರಪತಿಗಳ ಚುನಾವಣೆಯಲ್ಲಿ ಭಾರತ ಚುನಾವಣಾ ಆಯೋಗ ಪ್ರಧಾನ ಪಾತ್ರ ವಹಿಸುತ್ತದೆ. ಮತದಾರರ ಪಟ್ಟಿಯು ರಾಜ್ಯ ವಿಧಾನಸಭೆಗೆಂದು ಸಿದ್ಧಪಡಿಸುವ ಮತದಾರರ ಪಟ್ಟಿಯೇ ಆಗಿರುತ್ತದೆ. ಅದನ್ನು ಕ್ಷೇತ್ರಗಳ ಅನುಸಾರ ವಿಂಗಡಿಸಲಾಗುತ್ತದೆ. ಈಗ ನಡೆಯುತ್ತಿರುವ ಲೋಕಸಭಾ ಚುನಾವಣೆಗೆ ದಿನಾಂಕಗಳನ್ನು ಘೋಷಿಸಲಾಗಿದೆ. ಚುನಾವಣಾ ಆಯೋಗಗಳು ಸರ್ಕಾರದ ನಿಯಂತ್ರಣದಲ್ಲಿಲ್ಲದ ಸ್ವಾಯತ್ತ ಸಂಸ್ಥೆಗಳಾಗಿವೆ. ಹಾಗಾಗಿ ಚುನಾವಣಾ ಆಯೋಗದ ಆದೇಶವನ್ನು ಪಾಲಿಸುವುದು ಎಲ್ಲರ ಕರ್ತವ್ಯವಾಗಿದೆ. ಅದನ್ನು ಸಾಮಾನ್ಯವಾಗಿ ನ್ಯಾಯಾಲಯಗಳಲ್ಲಿ ಪ್ರಶ್ನಿಸಲಾಗುವುದಿಲ್ಲ.

ಸಾಮಾನ್ಯ ಜನರಿಗೆ ಚುನಾವಣೆ ಎಂದರೆ ಮತದಾನದ ದಿನ. ಮತಗಟ್ಟೆಗೆ ಹೋಗಿ ಮತ ಚಲಾಯಿಸುವುದು ಎಂಬುದಷ್ಟೇ ಅರಿವಿರುತ್ತದೆ. ಆದರೆ ಒಂದು ಚುನಾವಣೆ ನಡೆಸಬೇಕಾದರೆ ಅಧಿಕಾರಿ ವಲಯದಲ್ಲಿ ಸಾಕಷ್ಟು ಮುಂಚಿತವಾಗಿ ತಯಾರಿ ನಡೆಯುತ್ತದೆ. ಮೊದಲು ಮತದಾರರ ಪಟ್ಟಿಗಳನ್ನು ತಯಾರಿಸಬೇಕಾಗುತ್ತದೆ. ಇದಕ್ಕಾಗಿ ಮತದಾರರ ನೋಂದಣಾಧಿಕಾರಿಗಳು ತಿಂಗಳುಗಟ್ಟಲೆ ಶ್ರಮ ಹಾಕಬೇಕಾಗುತ್ತದೆ. ಮೊದಲು ಆಯಾ ವರ್ಷದ ಜನವರಿ ತಿಂಗಳ 1 ನೇ ತಾರೀಖಿಗೆ ಹದಿನೆಂಟು ವರ್ಷ ತುಂಬುವ ಮತದಾರರ ಹೆಸರನ್ನು ಮತದಾರರ ಪಟ್ಟಿಗೆ ಸೇರಿಸಬೇಕಾಗುತ್ತದೆ. ಇದಕ್ಕಾಗಿ ಸಾಕಷ್ಟು ಪ್ರಚಾರ ನೀಡಲಾಗುತ್ತದೆ. ಕೆಲವೊಮ್ಮೆ ಮನೆಮನೆಗೆ ಭೇಟಿ ನೀಡಿ ಅರ್ಜಿಗಳನ್ನು ಪಡೆಯಲಾಗುತ್ತದೆ. ನಂತರ ಮೃತರ ಹೆಸರನ್ನು ಮತದಾರರ ಪಟ್ಟಿಯಿಂದ ಕೈಬಿಡಬೇಕಾಗುತ್ತದೆ. ಇದಲ್ಲದೆ ಬಾಡಿಗೆ ಮನೆಯಲ್ಲಿರುವವರು ಹಾಗೂ ಹೊಸದಾಗಿ ಮನೆಕಟ್ಟಿ ಅಲ್ಲಿಗೆ (ಬೇರೆ ಮತಕ್ಷೇತ್ರ) ವಾಸಕ್ಕೆ ಹೋಗುವವರು, ಬೇರೆ ಊರಿಗೆ ಹೋಗಿ ನೆಲೆಸುವವರ ಬಗ್ಗೆ ಮಾಹಿತಿ ಸಂಗ್ರಹಿಸಿ ಅವರ ಹೆಸರನ್ನು ಮತದಾರರ ಪಟ್ಟಿಯಿಂದ ಕೈಬಿಡಬೇಕಾಗುತ್ತದೆ. ಅಲ್ಲದೆ ಈಗಾಗಲೇ ಪ್ರಕಟವಾಗಿರುವ ಮತದಾರರ ಪಟ್ಟಿಯಲ್ಲಿ ಯಾವುದಾದರೂ ತಪ್ಪುಗಳಿದ್ದಲ್ಲಿ ಹಾಗೂ ಅದನ್ನು ಸರಿಪಡಿಸಲು ಮತದಾರರು ಕೋರಿದಲ್ಲಿ ಅದನ್ನು ಸರಿಪಡಿಸಬೇಕಾಗುತ್ತದೆ. ಆರಂಭದಲ್ಲಿ ಮತದಾರರ ಕರಡನ್ನು ಸಿದ್ಧಪಡಿಸಿ ಅದನ್ನು ಮತದಾರರ ಗಮನಕ್ಕೆ ತರಬೇಕಾಗುತ್ತದೆ. ನಂತರ ಮೇಲ್ಕಂಡ ಎಲ್ಲಾ ಪ್ರಕ್ರಿಯೆಗಳನ್ನು ಮುಗಿಸಿ ನಂತರ ಅಂತಿಮ ಮತದಾರರ ಪಟ್ಟಿಯನ್ನು ಪ್ರಕಟಿಸಲಾಗುತ್ತದೆ. ಇದರ ಆಧಾರದ ಮೇಲೆಯೇ ಚುನಾವಣೆಗಳು ನಡೆಯುವುದು.

ಇಷ್ಟೆಲ್ಲಾ ಕ್ರಮಗಳು ಮತದಾರರು ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರು ಕೈಬಿಟ್ಟುಹೋಗದಂತೆ ಹಾಗೂ ತಪ್ಪುಗಳಿದ್ದಲ್ಲಿ ಸರಿಪಡಿಸಿಕೊಳ್ಳಲು ಅವಕಾಶ ನೀಡುವುದಕ್ಕಾಗಿರುತ್ತದೆ. ಇದಕ್ಕಾಗಿ ಮತದಾರರ ನೋಂದಣಾಧಿಕಾರಿಗಳು ಹಾಗೂ ಭಾರತ ಚುನಾವಣಾ ಆಯೋಗ ಸಾಕಷ್ಟು ಪ್ರಚಾರ ಮಾಡಿರುತ್ತದೆ. ಎಲ್ಲಿಗೆ ಹೋಗಿ ತಮ್ಮ ಹೆಸರನ್ನು ಸೇರಿಸಿಕೊಳ್ಳಬೇಕು ಎಂಬ ಬಗ್ಗೆಯೂ ಪ್ರಚಾರ ಮಾಡಲಾಗುತ್ತದೆ. ಮತದಾರರು ತಾವು ಮತ ಚಲಾಯಿಸುವ ಮತದಾನ ಕೇಂದ್ರದಲ್ಲಿ ನಿಗದಿತ ಅವಧಿಯಲ್ಲಿ ಮತದಾರರ ಪಟ್ಟಿ ಪರಿಶೀಲಿಸಲು ಅವಕಾಶ ನೀಡಲಾಗಿರುತ್ತದೆ. ಇತ್ತೀಚೆಗೆ ಆನ್‌ಲೈನ್‌ನಲ್ಲೂ ಮತದಾರರು ಮತದಾರರ ಪಟ್ಟಿ ಲಭ್ಯವಿದ್ದು, ತಮ್ಮ ಹೆಸರು ಪಟ್ಟಿಯಲ್ಲಿ ಸೇರಿದೆಯೇ ಎಂದು ಪರಿಶೀಲಿಸಲು ಅವಕಾಶವಿದೆ. ಇಂದು ಎಲ್ಲರ ಕೈಯಲ್ಲೂ ಇಂಟರ್‌ನೆಟ್ ಇರುವ ಮೊಬೈಲುಗಳಿದ್ದು, ಅದರ ಸಹಾಯದಿಂದ ನೋಡಿಕೊಳ್ಳಬಹುದಾಗಿದೆ.

ಇಷ್ಟಾದರೂ ತಮ್ಮ ಹೆಸರು ಮತದಾರರ ಪಟ್ಟಿಯಲ್ಲಿ ಇದೆಯೇ, ಇಲ್ಲವೇ ಎಂದು ಪರಿಶೀಲಿಸಿಕೊಳ್ಳಲು ಹೋಗದ ಜನರು (ಅದರಲ್ಲೂ ವಿದ್ಯಾವಂತರು) ಮತದಾನದ ದಿನ ಮತಗಟ್ಟೆಗೆ ಹೋಗಿ ತಮ್ಮ ಹೆಸರು ಮತದಾರರ ಪಟ್ಟಿಯಲ್ಲಿ ಇಲ್ಲದಿದ್ದಲ್ಲಿ ಇದಕ್ಕೆ ಇತರರ ಬೇಜವಾಬ್ದಾರಿ ಎಂದು ದೂರುತ್ತಾರೆ. ಇದು ಸರಿಯಾದ ಕ್ರಮವಲ್ಲ.

ಕೇವಲ ಮತದಾರರ ಪಟ್ಟಿ ತಯಾರಿಸಲು ಇಷ್ಟೆಲ್ಲಾ ಪ್ರಕ್ರಿಯೆಗಳಿರುತ್ತವೆ. ಮತದಾರರ ಪಟ್ಟಿ ಸಿದ್ಧವಾದ ನಂತರವೇ ಚುನಾವಣೆಗಳನ್ನು ಘೋಷಣೆ ಮಾಡಲಾಗುತ್ತದೆ. ಮತದಾರರ ಪಟ್ಟಿಯಲ್ಲಿ ನಮ್ಮ ಹೆಸರಿರಬೇಕು ಎಂಬುದು ಮತದಾರರ ಹಕ್ಕು ನಿಜ. ಆದರೆ ಅದರಲ್ಲಿ ನಮ್ಮ ಹೆಸರಿದೆಯೋ ಇಲ್ಲವೋ ಎಂದು ಪರಿಶೀಲಿಸಿಕೊಳ್ಳುವುದು ನಮ್ಮ ಕರ್ತವ್ಯವೂ ಆಗಿದೆ.

ಇದೀಗ ಲೋಕಸಭೆಯ ಚುನಾವಣೆ ಘೋಷಣೆಯಾಗಿದೆ. ನಮ್ಮ ಮೈಸೂರು–ಕೊಡಗು, ಚಾಮರಾಜನಗರ, ಮಂಡ್ಯ, ಹಾಸನ ಕ್ಷೇತ್ರ ಸೇರಿದಂತೆ ದಕ್ಷಿಣ ಕರ್ನಾಟಕದ 14 ಸ್ಥಾನಗಳಿಗೆ ಇದೇ 26 ರಂದು ಮತದಾನ ನಡೆಯಲಿದೆ. ಭಾರತ ಚುನಾವಣಾ ಆಯೋಗವು ಚುನಾವಣಾ ದಿನಾಂಕ ಘೋಷಣೆ ಮಾಡಿದ ದಿನದಿಂದ ಮತಗಳ ಎಣಿಕೆಯಾಗುವ ದಿನದವರೆವಿಗೂ ಮಾದರಿ ನೀತಿ ಸಂಹಿತೆ ಜಾರಿಯಲ್ಲಿರುತ್ತದೆ. ಮಾದರಿ ನೀತಿ ಸಂಹಿತೆ ಎಂದರೆ ಮತದಾರರಿಗೆ ಯಾವುದೇ ಪ್ರಲೋಭನೆ ಮಾಡದಂತೆ ತಡೆಯುವ ವಿಧಾನವಾಗಿದೆ. ಜೊತೆಗೆ ರಾಜಕೀಯ ಪಕ್ಷಗಳ ನಡವಳಿಕೆ ಹೇಗಿರಬೇಕು ಎಂಬುದನ್ನೂ ಅದು ಸೂಚಿಸುತ್ತದೆ. ಇದಕ್ಕೆ ಸಹಕರಿಸುವುದು ಎಲ್ಲ ನಾಗರಿಕರ ಕರ್ತವ್ಯವಾಗಿದೆ.

ಚುನಾವಣೆಗೆ ರಾಷ್ಟ್ರೀಯ ಪಕ್ಷಗಳು, ರಾಜ್ಯದ ರಾಜಕೀಯ ಪಕ್ಷಗಳು, ನೋಂದಾಯಿತ ಪಕ್ಷಗಳು ಹಾಗೂ ಪಕ್ಷೇತರರು ಸ್ಪರ್ಧೆ ಮಾಡಬಹುದಾಗಿದೆ. ಮತದಾರರ ಪಟ್ಟಿಯಲ್ಲಿ ಹೆಸರಿರುವವರು ಮಾತ್ರ ಸ್ಪರ್ಧಿಸಬಹುದಾಗಿದೆ. ರಾಷ್ಟ್ರ ಹಾಗೂ ರಾಜ್ಯ ಪಕ್ಷಗಳು ಅಭ್ಯರ್ಥಿಗಳಿಗೆ ಒಬ್ಬರು ಸೂಚಕರು, ಇತರರಿಗೆ ಹತ್ತು ಸೂಚಕರು ಸಹಿ ಮಾಡಬೇಕಾಗುತ್ತದೆ. ರಾಷ್ಟ್ರ ಹಾಗೂ ರಾಜ್ಯದ ಪಕ್ಷಗಳು ಹಾಗೂ ನೋಂದಾಯಿತ ಪಕ್ಷಗಳಿಗೆ ಅವರ ಪಕ್ಷದ ನಿಗದಿತ ಚಿಹ್ನೆಯನ್ನೇ ನೀಡಲಾಗುತ್ತದೆ. ಇದೀಗ ಮೇಲ್ಕಂಡ ಕ್ಷೇತ್ರಗಳಲ್ಲಿ ಅಭ್ಯರ್ಥಿಗಳು ನಾಮಪತ್ರ ಸಲ್ಲಿಸುವುದು, ಅವುಗಳ ಪರಿಶೀಲನೆ ಹಾಗೂ ನಾಮಪತ್ರ ವಾಪಸ್ಸು ಪಡೆಯುವ ಹಂತ ಮುಗಿದಿದ್ದು, ಅಧಿಕಾರಿಗಳು ಮತದಾನದ ದಿನದ ಸಿದ್ಧತೆಯಲ್ಲಿ ತೊಡಗಿದ್ದಾರೆ. ಇದಕ್ಕಾಗಿ ಹಲವಾರು ರೀತಿಯ ಚಟುವಟಿಕೆಗಳು ಚುನಾವಣಾಧಿಕಾರಿಗಳ ನೇತೃತ್ವದಲ್ಲಿ ನಡೆಯುತ್ತದೆ. ಶಾಂತಿಯುತ ಮತದಾನಕ್ಕೆ ಎಲ್ಲ ಅಗತ್ಯ ಕ್ರಮಗಳನ್ನೂ ಕೈಗೊಳ್ಳಲಾಗುತ್ತದೆ.

ಇದಿಷ್ಟನ್ನು ಹೇಳಿದ ಉದ್ದೇಶ ಎಂದರೆ ಚುನಾವಣೆ ಎಂದರೆ ಕೇವಲ ಮತಗಟ್ಟೆಗೆ ಹೋಗಿ ಮತ ಚಲಾಯಿಸುವುದಷ್ಟೇ ಅಲ್ಲ, ಅದರ ಹಿಂದೆ ಸಾಕಷ್ಟು ಕ್ರಮ ಹಾಗೂ ಶ್ರಮ ಇರುತ್ತದೆ ಎಂದು ಗಮನಿಸಬೇಕು ಎಂಬುದಾಗಿದೆ.

ಇನ್ನು ಮತದಾನ ಮುಗಿದ ನಂತರ ಪತ್ರಿಕೆಗಳಲ್ಲಿ ವರದಿಯಾಗುವುದನ್ನು ಗಮನಿಸಬೇಕು. ಸಾಕಷ್ಟು ಜನರು ತಮ್ಮ ಹೆಸರು ಮತದಾರರ ಪಟ್ಟಿಯಲ್ಲಿ ಇಲ್ಲದಿರುವ ಬಗ್ಗೆ ದೂರಿರುತ್ತಾರೆ. ತಮ್ಮ ಮತಗಟ್ಟೆ ಯಾವುದೆಂದು ತಿಳಿಯದೇ ಮತದಾರರು ಸುತ್ತಾಡಿ ಬಸವಳಿದರು ಎಂಬುದು ಒಂದು ರೀತಿಯ ವರದಿಯಾದರೆ, ಮತದಾನವಾದ ಶೇಕಡಾ ಪ್ರಮಾಣವನ್ನು ವರದಿಗಳು ತಿಳಿಸುತ್ತವೆ. ಸಾಮಾನ್ಯವಾಗಿ ನಗರ ಪ್ರದೇಶಗಳಲ್ಲಿ 55–60% ಮತದಾನವಾದರೆ ಹೆಚ್ಚು ಎಂಬಂತಾಗಿರುತ್ತದೆ. ಗ್ರಾಮೀಣ ಭಾಗದಲ್ಲಿ ಮತದಾರರು ಮತದಾನವನ್ನು ಸಂಭ್ರಮದಿಂದ ನೋಡುತ್ತಾರೆ. ಕೆಲವೆಡೆ ಮತದಾನದ ಯಂತ್ರಗಳಿಗೆ ಪೂಜೆಯನ್ನೂ ಸಲ್ಲಿಸಿ ಮತದಾನ ಮಾಡುತ್ತಾರೆ. ಹಾಗಾಗಿ ಅಲ್ಲಿ 75–80% ಗಿಂತ ಹೆಚ್ಚಿನ ಮತದಾನವಾಗುತ್ತದೆ. ನಗರ ಪ್ರದೇಶಗಳಲ್ಲಿ ಹೆಚ್ಚು ಮತದಾನವಾಗಬೇಕೆಂದು ಚುನಾವಣಾ ಆಯೋಗ ಸತತವಾಗಿ ಪ್ರಯತ್ನಿಸುತ್ತದೆ. ಆದರೆ ಈವರೆವಿಗೆ ಗಮನಾರ್ಹ ಪ್ರಗತಿಯಾಗದಿರುವುದು ಬೇಸರದ ಸಂಗತಿ.



ಸಾಂದರ್ಭಿಕ ಚಿತ್ರ

> **ಇದೀಗ ಲೋಕಸಭೆಯ ಚುನಾವಣೆ ಘೋಷಣೆಯಾಗಿದೆ. ನಮ್ಮ ಮೈಸೂರು–ಕೊಡಗು, ಚಾಮರಾಜನಗರ, ಮಂಡ್ಯ, ಹಾಸನ ಕ್ಷೇತ್ರ ಸೇರಿದಂತೆ ದಕ್ಷಿಣ ಕರ್ನಾಟಕದ 14 ಸ್ಥಾನಗಳಿಗೆ ಇದೇ 26ರಂದು ಮತದಾನ ನಡೆಯಲಿದೆ. ಭಾರತ ಚುನಾವಣಾ ಆಯೋಗವು ಚುನಾವಣಾ ದಿನಾಂಕ ಘೋಷಣೆ ಮಾಡಿದ ದಿನದಿಂದ ಮತಗಳ ಎಣಿಕೆಯಾಗುವ ದಿನದವರೆವಿಗೂ ಮಾದರಿ ನೀತಿ ಸಂಹಿತೆ ಜಾರಿಯಲ್ಲಿರುತ್ತದೆ. ಮಾದರಿ ನೀತಿ ಸಂಹಿತೆ ಎಂದರೆ ಮತದಾರರಿಗೆ ಯಾವುದೇ ಪ್ರಲೋಭನೆ ಮಾಡದಂತೆ ತಡೆಯುವ ವಿಧಾನವಾಗಿದೆ. ಜೊತೆಗೆ ರಾಜಕೀಯ ಪಕ್ಷಗಳ ನಡವಳಿಕೆ ಹೇಗಿರಬೇಕು ಎಂಬುದನ್ನೂ ಅದು ಸೂಚಿಸುತ್ತದೆ. ಇದಕ್ಕೆ ಸಹಕರಿಸುವುದು ಎಲ್ಲ ನಾಗರಿಕರ ಕರ್ತವ್ಯವಾಗಿದೆ.**

ಮತದಾರರ ಪಟ್ಟಿಯಲ್ಲಿ ನಮ್ಮ ಹೆಸರಿರಬೇಕು ಎಂಬುದು ನಮ್ಮ ಹಕ್ಕು. ಹಾಗೆಯೇ ಮತದಾನ ಮಾಡುವುದು ನಮ್ಮ ಕರ್ತವ್ಯ ಎಂಬುದನ್ನು ನಾವು ಮರೆಯಬಾರದು. ಹಕ್ಕು ಪ್ರತಿಪಾದಿಸುವವರು ಕರ್ತವ್ಯದ ಬಗ್ಗೆಯೂ ಗಮನಹರಿಸಬೇಕಾಗುತ್ತದೆ. ಚುನಾವಣೆಯನ್ನು ಪ್ರಜಾಪ್ರಭುತ್ವದ ಹಬ್ಬ ಎನ್ನಲಾಗುತ್ತದೆ.


ಮನೆಯಲ್ಲಿ ಯಾವುದೇ ಹಬ್ಬವನ್ನು ಮಾಡಿದರೂ (ಇತ್ತೀಚೆಗೆ ಯುಗಾದಿ ಹಬ್ಬ ಆಚರಿಸಿದ್ದೇವೆ) ಅದರಲ್ಲಿ ಮನೆಯವರೆಲ್ಲರ ಪಾಲುದಾರಿಕೆ ಅವಶ್ಯಕ, ಹಾಗಾದಾಗ ಹಬ್ಬಕ್ಕೆ ಕಳೆ ಬರುತ್ತದೆ. ಇದನ್ನು ಅರ್ಥ ಮಾಡಿಕೊಂಡು ಮತದಾನ ಮಾಡಬೇಕು. ಸಾಮಾನ್ಯವಾಗಿ ನಗರ ಪ್ರದೇಶಗಳಲ್ಲಿ ಅಕ್ಷರಸ್ಥರು ಹೆಚ್ಚಿರುತ್ತಾರೆ. ಅವರಿಗೆ ದೇಶ, ದೇಶದ ಪ್ರಗತಿ, ದೇಶದ ಹಣಕಾಸಿನ ಸ್ಥಿತಿ, ದೇಶದ ಯೋಜನೆಗಳು ಎಲ್ಲವೂ ಗೊತ್ತಿರುತ್ತದೆ. ಇವೆಲ್ಲವೂ ಜಾರಿಯಾಗುವುದು ನಾವು ಚುನಾಯಿಸಿ ಕಳುಹಿಸುವ ಅಭ್ಯರ್ಥಿ ಹಾಗೂ ಅವರು ಪ್ರತಿನಿಧಿಸುವ ಪಕ್ಷಗಳಿಂದ ಎಂಬುದೂ ಗೊತ್ತಿರುತ್ತದೆ. ಆದರೂ ಹೆಚ್ಚಿನ ಪ್ರಮಾಣದಲ್ಲಿ ಮತದಾನವಾಗುವುದಿಲ್ಲ. ಇದಕ್ಕೆ ಕಾರಣ ಎಂದರೆ ಸ್ಪರ್ಧಿಸಿರುವ ಎಲ್ಲಾ ಅಭ್ಯರ್ಥಿಗಳೂ ಪ್ರಯೋಜನವಿಲ್ಲ. ಆದ್ದರಿಂದ ನಾನು ಯಾರಿಗೂ ಮತ ಹಾಕುವುದಿಲ್ಲ ಎಂಬುದು ಒಂದು ವಾದ. ಮತ್ತೊಂದು ನಾನೊಬ್ಬ ಮತ ಹಾಕದಿದ್ದರೆ ಅಂತಹ ಯಾವ ವ್ಯತ್ಯಾಸವೂ ಆಗುವುದಿಲ್ಲ ಎಂಬ ನಿರಾಶದಾಯಕ ಮನೋಭಾವ. ಏನಾದರೂ ಮತಗಟ್ಟೆಗೆ ಮತದಾರರು ಬರಬೇಕು ಎಂಬ ಉದ್ದೇಶದಿಂದ 'ನಿಮಗೆ ಯಾರಿಗೂ ಮತಹಾಕಲು ಇಷ್ಟವಿಲ್ಲದಿದ್ದರೆ ಅದನ್ನಾದರೂ ತಿಳಿಸಿ' ಎಂದು ಹೊಸ ವಿಧಾನ 'ನೋಟಾ' (NOTA- None Of The Above) ಎಂಬುದನ್ನು ಚುನಾವಣಾ ಆಯೋಗ ಮತದಾನ ಯಂತ್ರದಲ್ಲಿ ಅಳವಡಿಸಿತು. ಆದರೆ ಎಷ್ಟೋ ಕಡೆ ಗೆದ್ದ ಅಭ್ಯರ್ಥಿಯ ನಂತರ ಎರಡನೇ ಅಭ್ಯರ್ಥಿ ಪಡೆದ ಮತಕ್ಕಿಂತ ನೋಟಾ ಮತವೇ ಹೆಚ್ಚಾಗಿದ್ದ ಬಗ್ಗೆ ವರದಿಗಳಾಗುತ್ತವೆ. ಇದು ಸರಿಯಾದ ಕ್ರಮವಲ್ಲ, ನಾವು ಪ್ರಜಾಪ್ರಭುತ್ವ ವ್ಯವಸ್ಥೆ ಒಪ್ಪಿಕೊಂಡಿರುವುದರಿಂದ ಸ್ಪರ್ಧಿಸಿರುವ ಅಭ್ಯರ್ಥಿಗಳ ಪೈಕಿ ಸ್ವಲ್ಪವಾದರೂ ಉತ್ತಮ ಎನ್ನಿಸುವವರಿಗಾದರೂ ಮತ ಚಲಾಯಿಸಬೇಕು. ಆದ್ದರಿಂದಲೇ ಹೇಳುವುದು "ನೋಟಾದತ್ತ ಕುಮೆ ನೋಟವಿರಲಿ" ಎಂದು. ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಮತದಾನ ಮಾಡದಿದ್ದರೆ ಹಾಗೂ ನಿಗದಿತ ಯಾವುದೇ ಅಭ್ಯರ್ಥಿಗೆ ಮತ ಚಲಾಯಿಸದಿದ್ದರೆ ಮುಂದೆ ಸರ್ಕಾರಗಳನ್ನು ಟೀಕೆ ಮಾಡುವ ಯಾವ ಅಧಿಕಾರವೂ ನಮಗೆ ಇರುವುದಿಲ್ಲ. ಮತದಾನ ನೀರಸ ಪ್ರಕ್ರಿಯೆಯಲ್ಲ. ಹಾಗಾಗಿ ನಾಮಪತ್ರ ಹಿಂಪಡೆದ ನಂತರ ಸುಮಾರು ಎರಡು ವಾರಗಳಿಗೂ ಹೆಚ್ಚಿನ ಸಮಯ ಅಭ್ಯರ್ಥಿಗಳಿಗೆ ಪ್ರಚಾರ ಮಾಡಲು ಅವಕಾಶವಿರುತ್ತದೆ. ಅಷ್ಟರಲ್ಲಿ ಚುನಾವಣೆಗೆ ಸ್ಪರ್ಧಿಸಿರುವವರು ತಮ್ಮ ಬಗ್ಗೆ, ತಮ್ಮ ಪಕ್ಷದ ಬಗ್ಗೆ ಹಾಗೂ ತಾವು ಗೆದ್ದರೆ ಏನು ಮಾಡುತ್ತೇವೆ ಎಂಬ ಬಗ್ಗೆ ಸಾಕಷ್ಟು ಮಾಹಿತಿ ನೀಡುತ್ತಾರೆ, ಪ್ರಚಾರ ಸಭೆಗಳನ್ನು ನಡೆಸುತ್ತಾರೆ, ಕರಪತ್ರ ವಿತರಿಸುತ್ತಾರೆ, ಸಾರ್ವಜನಿಕ ಸಭೆಗಳು, ರೋಡ್ ಶೋಗಳ ಮೂಲಕ ತಮ್ಮ ಪರಿಚಯ ಮಾಡಿಕೊಳ್ಳುತ್ತಾರೆ. ಅವನ್ನು ಗಮನಿಸಿ ನಾವು ಯಾವುದಾದರೂ ಅಭ್ಯರ್ಥಿಗೆ ಮತ ಚಲಾಯಿಸುವ ನಿರ್ಣಯ ಮಾಡಬೇಕು. ಇಷ್ಟಾಗಿಯೂ ಯಾರೂ ಪ್ರಯೋಜನವಿಲ್ಲ ಎನಿಸಿದಾಗ ಮಾತ್ರ ಮತಗಟ್ಟೆಗೆ ತೆರಳಿ ನೋಟಾಕ್ಕೆ ಮತ ಹಾಕಬಹುದು.

ಮತದಾನ ಹೆಸರೇ ಹೇಳುವಂತೆ ಮತವನ್ನು 'ದಾನ' ಮಾಡುವ ಪ್ರಕ್ರಿಯೆ. ಮತಗಳು ಮಾರಾಟವಾಗಬಾರದು. ಮತದಾರರು ಯಾವುದೇ ಪ್ರಲೋಭನೆಗೂ ಒಳಗಾಗಬಾರದು. ವಿವೇಚಿಸಿ ಮತದಾನ ಮಾಡಬೇಕು. ಮೇಲೆ ತಿಳಿಸಿದಂತೆ ಒಂದು ಚುನಾವಣೆ ಮಾಡಲು ಸಾಕಷ್ಟು ಸಿದ್ಧತೆಗಳಾಗಿರುತ್ತದೆ, ಸಾಕಷ್ಟು ಹಣವೂ ಖರ್ಚಾಗುತ್ತದೆ. ಇವೆಲ್ಲಾ ನಾಗರಿಕರ ತೆರಿಗೆ ಹಣ. ಅದು ವ್ಯರ್ಥವಾಗಬಾರದು. ಎಲ್ಲರೂ ಮುಕ್ತ ಮನದಿಂದ ಮತ ಚಲಾಯಿಸಬೇಕು ಎಂಬುದು ಆಗ್ರಹ.

ಸ್ವಾಮೀಜಿ ಫೋನ್ ಟ್ಯಾಪ್ ಮಾಡಿಸಿದವರು ಈಗ ಅವರ ಬಳಿ ಆಶೀರ್ವಾದ ಪಡೆಯುವುದು ಸರಿಯೇ!?

- ಕೃಷಿ ಸಚಿವ ಚಲುವರಾಯಸ್ವಾಮಿ ವ್ಯಂಗ್ಯ: ಮಾಜಿ ಸಿಎಂ ಕುಮಾರಸ್ವಾಮಿ ವಿರುದ್ಧ ವಾಗ್ದಾಳಿ
- ರಾಜಕೀಯ ಬೇಳೆ ಬೇಯಿಸಿಕೊಳ್ಳಲು ಈಗ ಮತ ಮಂತ್ರ ಜಪಿಸುತ್ತಿರುವ ರಾಜಕಾರಣಿಗಳು

ಬೆಂಗಳೂರು, ಏ.11– ಲೋಕಸಭೆ ಚುನಾವಣೆ ಸಮೀಪಿಸುತ್ತಿದ್ದಂತೆಯೆ ಮತ ರಾಜಕೀಯ ತೀವ್ರ ಸ್ವರೂಪ ಪಡೆದುಕೊಳ್ಳುತ್ತಿದೆ. ಜೆಡಿಎಸ್–ಬಿಜೆಪಿ ಮತ್ತು ಕಾಂಗ್ರೆಸ್ ಅಭ್ಯರ್ಥಿಗಳು ಒಕ್ಕಲಿಗರ ಪ್ರಭಾವಿ ಮಠಾಧೀಶರಾದ ಆದಿ ಚುಂಚನಗಿರಿಯ ನಿರ್ಮಲಾನಂದನಾಥ ಸ್ವಾಮೀಜಿಯ ಭೇಟಿಗೆ ಮುಗಿಬೀಳುತ್ತಿದ್ದಾರೆ.




ಅಭ್ಯರ್ಥಿಗಳ ಈ ಭೇಟಿ ಕಾಂಗ್ರೆಸ್ ಮತ್ತು ಜೆಡಿಎಸ್ ನಾಯಕರ ನಡುವಿನ ವಾಕ್ಸಮರಕ್ಕೆ ದಾರಿ ಮಾಡಿಕೊಟ್ಟಿದೆ. ಮಾಜಿ ಸಿಎಂ ಹೆಚ್.ಡಿ.ಕುಮಾರಸ್ವಾಮಿ ಆದಿ ಚುಂಚನಗಿರಿ ಮಠಕ್ಕೆ ಭೇಟಿ ನೀಡಿದ ವಿಷಯಕ್ಕೆ ಸಂಬಂಧಿಸಿದಂತೆ ಸಚಿವ ಎನ್.ಚಲುವರಾಯಸ್ವಾಮಿ ವಾಗ್ದಾಳಿ ನಡೆಸಿದ್ದಾರೆ. ತಮ್ಮ ಅಧಿಕಾರ ಅವಧಿಯಲ್ಲಿ ಕುಮಾರ ಸ್ವಾಮಿಯವರು ನಿರ್ಮಲಾನಂದನಾಥ ಶ್ರೀಗಳ ಫೋನ್ ಟ್ಯಾಪ್ ಮಾಡಿಸಿದ್ದರು ಎಂದು ಗಂಭೀರ ಆರೋಪ ಮಾಡಿದ್ದಾರೆ. ಅಂದು ಶ್ರೀಗಳ ಫೋನ್ ಟ್ಯಾಪ್ ಮಾಡಿಸಿದ್ದವರು ಇಂದು ಆಶೀರ್ವಾದ ಪಡೆಯಲು ಮಠಕ್ಕೆ ಹೋಗಲು ಹೇಗೆ ಸಾಧ್ಯ? ಎಂದು ಪ್ರಶ್ನಿಸಿದ್ದಾರೆ. ನಾವು ಸಹ ಜೆಎಸ್‌ಎಸ್, ಸಿದ್ದಗಂಗಾ, ಚುಂಚನಗಿರಿ ಮಠಗಳಿಗೆ ಹೋಗುತ್ತೇವೆ. ಅವರೂ ಹೋಗಿದ್ದಾರೆ. ಇದು ಚುನಾವಣೆ ವೇಳೆ ಸಹಜ. ಆದರೆ ಕುಮಾರಸ್ವಾಮಿ, ಸ್ವಾಮೀಜಿ ಫೋನ್ ಟಾಪ್ ಮಾಡಿಸಿದ್ದಾರೆ. ಸ್ವಾಮಿಜಿಗಳು ಯಾರಿಗೂ ಪ್ರಚಾರ ಮಾಡೋಕೆ ಆಗಲ್ಲ. ಚುಂಚನಗಿರಿ ಮಠ ಒಕ್ಕಲಿಗ ಸಮುದಾಯ ಮಠ. ಆದರೂ ಸಹ ರಾಜ್ಯದಲ್ಲಿ ಅತ್ಯಂತ ಜಾತ್ಯತೀತ ಮಠವಾಗಿದೆ. ಎಲ್ಲಾ ಜಾತಿಗಳನ್ನು ಪ್ರೀತಿಸಿ ಬೆಳೆಸಿದವರು ಬಾಲಗಂಗಾಧರನಾಥ ಶ್ರೀಗಳು. ಜೆಡಿಎಸ್‌ನವರು ಬಾಲಗಂಗಾಧರನಾಥ ಶ್ರೀಗಳಿಗೆ ಎಷ್ಟು ಕಿರುಕುಳ ಕೊಟ್ಟರು ಎಂಬುದು ಸಹ ಗೊತ್ತಿದೆ. ಅವರು ಆದಿ ಚುಂಚನಗಿರಿ ಮಠವನ್ನು ವಿಭಜಿಸಿದ್ದರು. ಈಗ ಚುನಾವಣೆ ಬಂದಿದೆ. ಅದಕ್ಕೆ ಮಠಕ್ಕೆ ಕುಮಾರಸ್ವಾಮಿ ಹೋಗುತ್ತಿದ್ದಾರೆ ಅಷ್ಟೇ ಎಂದು ಚಲುವರಾಯಸ್ವಾಮಿ ವ್ಯಂಗ್ಯವಾಡಿದ್ದಾರೆ.

ದಾಖಲೆಗಳಿವೆ: ನಿರ್ಮಲಾನಂದನಾಥ ಸ್ವಾಮೀಜಿಗಳ ಫೋನ್ ಟ್ಯಾಪಿಂಗ್ ಗೊತ್ತಿರುವ ವಿಚಾರ. ಈ ಬಗ್ಗೆ ದಾಖಲೆಗಳಿವೆ ಎಂದು ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದರು. ಕುಮಾರಸ್ವಾಮಿಯವರು ನಿರ್ಮಲಾನಂದ ಸ್ವಾಮೀಜಿಗಳ ಫೋನ್ ಕದ್ದಾಲಿಕೆ ಮಾಡಿದ್ದರು ಎಂಬ ಸಚಿವ ಚಲುವರಾಯಸ್ವಾಮಿ ಅವರ ಹೇಳಿಕೆ ವಿಚಾರವಾಗಿ ಮಾಧ್ಯಮಗಳ ಪ್ರಶ್ನೆಗೆ ಉತ್ತರಿಸಿದ ಅವರು ಇದು ಗೊತ್ತಿರುವ ವಿಚಾರವೇ. ಈ ಬಗ್ಗೆ ಮಾತನಾಡಲು ನೋವಾ ಗುತ್ತದೆ. ಈ ವಿಚಾರವಾಗಿ ಎಲ್ಲಾ ದಾಖಲೆಗಳು ಇವೆ. ಆದರೂ ಈ ಬಗ್ಗೆ ಈಗ ಮಾತನಾಡುವುದು ಸೂಕ್ತವಲ್ಲ. ಮುಂದೆ ಮಾತನಾಡುತ್ತೇನೆ ಎಂದರು.

ಹೆಚ್‌ಡಿಕೆ ಗರಂ: ಆದಿ ಚುಂಚನಗಿರಿ ಶ್ರೀಗಳ ಫೋನ್ ಟ್ಯಾಪಿಂಗ್ ಬಗ್ಗೆ ಸಚಿವ ಚಲುವರಾಯಸ್ವಾಮಿ ಮಾಡಿರುವ ಆರೋಪದ ಬಗ್ಗೆ ತೀಕ್ಷ್ಣವಾಗಿ ಪ್ರತಿಕ್ರಯಿಸಿದ ಕುಮಾರಸ್ವಾಮಿ, ನಾನು ಫೋನ್ ಟ್ಯಾಪಿಂಗ್ ಮಾಡಿಕೊಳ್ಳುತ್ತಿದ್ದರೆ ನನ್ನ ಸರಕಾರವನ್ನು ಯಾಕೆ ಬೀಳಿಸಿಕೊಳ್ಳುತ್ತಿದ್ದೆ? ಅವರು ತನಿಖೆ ಮಾಡಿಕೊಳ್ಳಲಿ. ಈ ವರೆಗೆ ತನಿಖೆ ಮಾಡಿದರಲ್ಲಾ ಅದು ಏನಾಯಿತು ಎಂದು ತರಾಟೆಗೆ ತೆಗೆದುಕೊಂಡರು. ಆದಿ ಚುಂಚನಗಿರಿ ಮಠಕ್ಕೆ ಪರ್ಯಾಯವಾಗಿ ಮಠ ಮಾಡಿದರು ಎಂಬ ಬಗ್ಗೆ ಕೇಳಲಾದ ಪ್ರಶ್ನೆಗೆ ಖಾರವಾಗಿ ಉತ್ತರಿಸಿದ ಅವರು, ಬೇರೆ ಸಮುದಾಯಗಳಲ್ಲೂ ಎಷ್ಟು ಮಠಗಳಿಲ್ಲ? ನಮ್ಮ ಸಮುದಾಯವನ್ನು ಅಂತಹ ಬೆಳವಣಿಗೆಗಳು ಆಗಲಿ ಎಂದು ಇನ್ನೊಬ್ಬರಿಗೆ ಸಹಾಯ ಮಾಡಿದ್ದೇನೆ ಇದರಲ್ಲ ಏನಿದೆ? ಇದನ್ನು ರಾಜಕೀಯಕ್ಕೆ ಬಳಸಿಕೊಳ್ಳಬೇಕಾ? ಎಂದು ಪ್ರಶ್ನಿಸಿದರು.

ಪಿಯು ಪರೀಕ್ಷೆಯಲ್ಲಿ ಸಿಂಚನಾಗೆ 581 ಅಂಕ




ಮೈಸೂರು: ನಗರದ ಎಸ್.ವಿ.ಜೆ ಕಾಲೇಜಿನ ದ್ವಿತೀಯ ಪಿಯುಸಿ ವಿದ್ಯಾರ್ಥಿನಿ ಆರ್. ಸಿಂಚನ ವಿಜ್ಞಾನ ವಿಭಾಗದಲ್ಲಿ 600ಕ್ಕೆ 581 ಅಂಕಗಳನ್ನು ಪಡೆದಿದ್ದಾರೆ. ಈಕೆ ತಬಲ ಕಲಾವಿದರಾದ ರಘುನಾಥ್ ಮತ್ತು ರಮ್ಯಾ ದಂಪತಿಯ ಪುತ್ರಿ.

ಇಂದಿನಿಂದ ಚಿಣ್ಣರಮೇಳ


ಮೈಸೂರು,ಏ.11–ರಂಗಾಯಣದ ವತಿಯಿಂದ ಚಿಣ್ಣರಮೇಳ–2024ರ ಮಕ್ಕಳ ರಂಗ ತರಬೇತಿ ಶಿಬಿರವನ್ನು ಏ.12ರಿಂದ ಮೇ 7ರವರೆಗೆ ರಂಗಾಯಣದ ಆವರಣದಲ್ಲಿ ಹಮ್ಮಿಕೊಳ್ಳಲಾಗಿದೆ. ಏ.12ರಂದು ಸಂಜೆ 5ಕ್ಕೆ ವನರಂಗ ಬಯಲು ರಂಗಮಂದಿರದಲ್ಲಿ ಇಂಡಿಯಾ ಬುಕ್ ಆಫ್ ರೆಕಾರ್ಡ್‌ನ ಬಾಲರಂಗ ಕಲಾವಿದ ಕು. ಗೋಕುಲ ಕಾರ್ಯಕ್ರಮ ಉದ್ಘಾಟಿಸಲಿದ್ದು, ಕನ್ನಡ–ಸಂಸ್ಕೃತಿ ಇಲಾಖೆ ಮೈಸೂರು ವಿಭಾಗದ ಜಂಟಿ ನಿರ್ದೇಶಕ ಮಲ್ಲಿಕಾರ್ಜುನಸ್ವಾಮಿ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಯಾಗಿ ರಂಗ ಕಲಾವಿದರಾದ ನುಡಿ ಎಂ.ಎಸ್ ಭಾಗವಹಿಸಲಿದ್ದಾರೆ.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy News papers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com, website: www.mysurumithra.com



ಈ ರಸ್ತೆಯ ನಾಲ್ಕು ದಿಕ್ಕಿಗೆ ನಾಲ್ಕು ಕ್ಷೇತ್ರ

4 ಹೆಜ್ಜೆ ಇಟ್ಟರೆ 4 ವಿಧಾನಸಭಾ ಕ್ಷೇತ್ರಕ್ಕೆ ಎಂಟ್ರಿ!!



ಚಾಮರಾಜನಗರ: ರಸ್ತೆಗಳು ಒಂದು ಇಲ್ಲವೇ ಎರಡು ವಿಧಾನಸಭಾ ಕ್ಷೇತ್ರಗಳ ಗಡಿ ಹಂಚಿಕೊಂಡಿರುವುದನ್ನು ಸಾಮಾನ್ಯವಾಗಿ ನೋಡಿರುತ್ತೇವೆ. ಆದರೆ, ಇಲ್ಲೊಂದು ರಸ್ತೆ ನಾಲ್ಕು ದಿಕ್ಕಿಗೆ ನಾಲ್ಕು ವಿಧಾನಸಭಾ ಕ್ಷೇತ್ರಗಳನ್ನು ಹೊಂದಿರುವುದು ವಿಶೇಷವಾಗಿದೆ.

ಚಾಮರಾಜನಗರ ತಾಲೂಕಿನ ಹೆಗ್ಗವಾಡಿ ಕ್ರಾಸ್ ಎಂಬ ರಸ್ತೆಯು ಬೆಂಗಳೂರು–ದಿಂಡಿಗಲ್ ರಾಷ್ಟ್ರೀಯ ಹೆದ್ದಾರಿಯನ್ನು ಹಾದು ಹೋಗಿದ್ದು, ತನ್ನ 4 ಪಾರ್ಶ್ವಕ್ಕೆ 4 ಕ್ಷೇತ್ರಗಳನ್ನು ಹೊಂದಿದೆ. ಹೆಗ್ಗವಾಡಿ ಕ್ರಾಸ್ ಚಾಮರಾಜನಗರ ಹಾಗೂ ಮೈಸೂರಿನ ಗಡಿಯಾಗಿದ್ದು, ಮುಂದಕ್ಕೆ ಚಲಿಸಿದರೆ ಚಾಮರಾಜನಗರ ವಿಧಾನಸಭಾ ಕ್ಷೇತ್ರ ಸಿಗಲಿದೆ. ಹಿಂದಕ್ಕೆ ಹೊರಳಿದರೆ ನಂಜನಗೂಡು, ಎಡಕ್ಕೆ ತಿರುಗಿದರೇ ವರುಣ ಹಾಗೂ ಬಲಭಾಗಕ್ಕೆ 4 ಹೆಜ್ಜೆ ಇಟ್ಟರೇ ಗುಂಡ್ಲುಪೇಟೆ ವಿಧಾನಸಭಾ ಕ್ಷೇತ್ರಕ್ಕೆ ಎಂಟ್ರಿ ಪಡೆಯುತ್ತೇವೆ.

ಮೈಸೂರು ಜಿಲ್ಲೆಯ ವರುಣ ಮತ್ತು ನಂಜನಗೂಡು ವಿಧಾನಸಭಾ ಕ್ಷೇತ್ರಗಳು, ಚಾಮರಾಜನಗರ ಜಿಲ್ಲೆಯ ಚಾಮರಾಜನಗರ ಹಾಗೂ ಗುಂಡ್ಲುಪೇಟೆ ಕ್ಷೇತ್ರಗಳು ಚಾಮರಾಜನಗರ ಲೋಕಸಭಾ ಕ್ಷೇತ್ರಕ್ಕೆ ಒಳಪಟ್ಟಿವೆ. ವರುಣ ಕ್ಷೇತ್ರವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಪ್ರತಿನಿಧಿಸಿದ್ದು, ನಂಜನಗೂಡು ಕ್ಷೇತ್ರವನ್ನು ದರ್ಶನ್ ಧ್ರುವನಾರಾಯಣ, ಗುಂಡ್ಲುಪೇಟೆಯನ್ನು ಗಣೇಶ್ ಪ್ರಸಾದ್ ಹಾಗೂ ಚಾಮರಾಜನಗರ ಕ್ಷೇತ್ರವನ್ನು ಸಿ.ಪುಟ್ಟರಂಗಶೆಟ್ಟಿ ಪ್ರತಿನಿಧಿಸುತ್ತಿದ್ದಾರೆ. ಇನ್ನೊಂದು ವಿಶೇಷವೆಂದರೆ ಈ ನಾಲ್ಕು ವಿಧಾನಸಭಾ ಕ್ಷೇತ್ರಗಳಲ್ಲಿ ಕಾಂಗ್ರೆಸ್ ಗೆಲುವು ಸಾಧಿಸಿದೆ. ಇನ್ನೊಂದೆಡೆ 2019ರಲ್ಲಿ ಚಾಮರಾಜನಗರ ಲೋಕಸಭಾ ಕ್ಷೇತ್ರದಿಂದ ಬಿಜೆಪಿ ಅಭ್ಯರ್ಥಿಯಾಗಿ ಶ್ರೀನಿವಾಸ್ ಸಂಸದರಾಗಿದ್ದಾರೆ.

ನಾಳೆ ಕೆ.ಆರ್.ಕ್ಷೇತ್ರದ ಕಾಂಗ್ರೆಸ್ ಕಾರ್ಯಕರ್ತರ ಸಭೆ; ಸಿಎಂ, ಡಿಸಿಎಂ ಸೇರಿ ಹಲವು ನಾಯಕರು ಭಾಗಿ

ಮೈಸೂರು, ಏ.11(ಎಂಟಿವೈ)– ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಎಂ.ಲಕ್ಷ್ಮಣ ಪರ ಏ.13ರಂದು ಬೆಳಗ್ಗೆ 11 ಗಂಟೆಗೆ ವಿದ್ಯಾರಣ್ಯಪುರಂನ ಭೂತಾಳೆ ಮೈದಾನದಲ್ಲಿ ಕೆ.ಆರ್.ಕ್ಷೇತ್ರದ ಕಾರ್ಯಕರ್ತರ ಸಭೆ ಆಯೋಜಿಸಲಾಗಿದ್ದು, ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸೇರಿದಂತೆ ಸಚಿವರು, ರಾಜ್ಯಮಟ್ಟದ ನಾಯಕರು ಪಾಲ್ಗೊಳ್ಳಲಿದ್ದಾರೆ ಎಂದು ಮಾಜಿ ಶಾಸಕ ಎಂ.ಕೆ.ಸೋಮಶೇಖರ್ ತಿಳಿಸಿದ್ದಾರೆ.

ಸಮಾವೇಶಕ್ಕಾಗಿ ಸಿದ್ಧಪಡಿಸುತ್ತಿರುವ ವೇದಿಕೆ ಕಾಮಗಾರಿ ಪರಿಶೀಲಿಸಿದ ಬಳಿಕ ಮಾತನಾಡಿದ ಅವರು, ಲೋಕಸಭಾ ಚುನಾವಣೆ ಅಂಗವಾಗಿ ಕೆ.ಆರ್.ಕ್ಷೇತ್ರದ ಕಾರ್ಯಕರ್ತರ ಸಭೆ ಆಯೋಜಿಸಲಾಗಿದ್ದು, ಈ ಸಭೆಯಲ್ಲಿ 15ರಿಂದ 20 ಸಾವಿರ ಕಾರ್ಯಕರ್ತರು ಪಾಲ್ಗೊಳ್ಳಲಿದ್ದಾರೆ. ಏ.13ರಂದು ಬೆಳಗ್ಗೆ 11ಕ್ಕೆ ಆರಂಭವಾಗುವ ಸಮಾವೇಶದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ, ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್, ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ, ಚಾಮರಾಜನಗರ ಜಿಲ್ಲೆ ಉಸ್ತುವಾರಿ ಸಚಿವ ಕೆ.ವೆಂಕಟೇಶ್, ಶಾಸಕ, ಕೆಪಿಸಿಸಿ ಕಾರ್ಯಾಧ್ಯಕ್ಷ ತನ್ವೀರ್ ಸೇಠ್, ಶಾಸಕರಾದ ಕೆ.ಹರೀಶ್‌ಗೌಡ, ಡಿ.ರವಿಶಂಕರ್, ಗಣೇಶ್ ಪ್ರಸಾದ್, ದರ್ಶನ್ ಧ್ರುವನಾರಾಯಣ್, ಅನಿಲ್‌ಕುಮಾರ್, ಡಾ. ಯತೀಂದ್ರ, ಹೆಚ್.ಪಿ. ಮಂಜುನಾಥ್, ಮುಡಾ ಅಧ್ಯಕ್ಷ ಕೆ.ಮರೀಗೌಡ, ಮೈಸೂರು ನಗರ ಕಾಂಗ್ರೆಸ್ ಅಧ್ಯಕ್ಷ ಆರ್.ಮೂರ್ತಿ, ಗ್ರಾಮಾಂತರ ಅಧ್ಯಕ್ಷ ಡಾ.ಬಿ.ಜೆ. ವಿಜಯ್ ಕುಮಾರ್ ಸೇರಿದಂತೆ ವಿವಿಧ ಘಟಕಗಳ ಮುಖಂಡರು ಪಾಲ್ಗೊಳ್ಳಲಿದ್ದಾರೆ ಎಂದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ ಜನಪರ ಆಡಳಿತ ನೀಡುತ್ತಿದ್ದು, ಇಡೀ ದೇಶವೇ ರಾಜ್ಯದತ್ತ ತಿರುಗಿ ನೋಡುತ್ತಿದೆ. 5 ಗ್ಯಾರಂಟಿಗಳ ಮೂಲಕ 1 ಕೋಟಿಗೂ ಹೆಚ್ಚು ಕುಟುಂಬಗಳು ಬಡತನದಿಂದ ಚೇತರಿಸಿಕೊಂಡಿವೆ. ಸುಭದ್ರ ಆಡಳಿತವನ್ನು ನೀಡುತ್ತಿರುವ ಸಿದ್ದರಾಮಯ್ಯ, ಡಿ.ಕೆ.ಶಿವಕುಮಾರ್ ಸಾಕಷ್ಟು ಅಭಿವೃದ್ಧಿ ಕಾರ್ಯಕ್ರಮಗಳು ಮತ್ತು ಗ್ಯಾರಂಟಿ ಯೋಜನೆಗಳನ್ನು ನೀಡಿದ್ದು ಜನ ಕಾಂಗ್ರೆಸ್ ಸರ್ಕಾರದ ಮೇಲೆ ಭರವಸೆ ಹೆಚ್ಚಿಸಿದೆ ಎಂದರು.

ಈ ಸಂದರ್ಭದಲ್ಲಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಜಿ.ಸೋಮಶೇಖರ್, ಶ್ರೀಧರ್, ಪಾಲಿಕೆ ಮಾಜಿ ಸದಸ್ಯ ಎಂ.ಸುನಿಲ್, ಕಾಂಗ್ರೆಸ್ ಮುಖಂಡರಾದ ಹೆಚ್.ಶೇಖರ್, ರವಿಶಂಕರ್, ವಿಜಯ್‌ಕುಮಾರ್, ಕೇಬಲ್ ಶೇಖರ್, ಅಸಂಘಟಿತ ಕಾರ್ಮಿಕರ ಸಂಘಟನೆ ಅಧ್ಯಕ್ಷ ವಿನಯ್ ಕುಮಾರ್ ಜೆ., ಓಬಿಸಿ ಘಟಕದ ಅಧ್ಯಕ್ಷ ಕುಮಾರ್ ಕುಮ್ಮಿ, ಯುವ ಮುಖಂಡರಾದ ಶಂಕರ್, ಸುಂದರ್, ಮಹಾದೇವ್, ಮರಾಠಿ ರಮೇಶ್, ಯುವ ಕಾಂಗ್ರೆಸ್ ಅಧ್ಯಕ್ಷ ರಾಕೇಶ್, ಆಶ್ರಯ ಮೂರ್ತಿ, ಧರ್ಮೇಂದ್ರ ಗೃಹಶೋಭೆ ಕೃಷ್ಣ, ಸಂತು, ಮಧುರಾಜ್, ರೂಪೇಶ್, ನಾಗ, ಬುಜ್ಜಿ ರೇಸ್ ಕುಮಾರ್, ರಾಜೇಶ್ ಇದ್ದರು.



ಮೈಸೂರಿನ ವಿದ್ಯಾರಣ್ಯಪುರಂನಲ್ಲಿರುವ ಭೂತಾಳೆ ಮೈದಾನದಲ್ಲಿ ಏ.13ರಂದು ನಡೆಯುವ ಕೆ.ಆರ್.ಕ್ಷೇತ್ರದ ಕಾಂಗ್ರೆಸ್ ಕಾರ್ಯಕರ್ತರ ಸಮಾವೇಶಕ್ಕೆ ನಿರ್ಮಿಸುತ್ತಿರುವ ವೇದಿಕೆಯನ್ನು ಮಾಜಿ ಶಾಸಕ ಎಂ.ಕೆ.ಸೋಮಶೇಖರ್ ಪರಿಶೀಲಿಸಿದರು.



ಚಾಮರಾಜನಗರ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಸುನೀಲ್ ಬೋಸ್ ಗುರುವಾರ ವಿಧಾನಪರಿಷತ್ ಮಾಜಿ ಸದಸ್ಯರೂ ಆದ ಹಿರಿಯ ಕಾಂಗ್ರೆಸ್ ನಾಯಕರಾದ ಸಂದೇಶ್ ನಾಗರಾಜು ಅವರನ್ನು ಭೇಟಿಯಾಗಿ ಅಭಿನಂದಿಸಿದರು. ಈ ವೇಳೆ ಉದ್ಯಮಿ ಹಾಗೂ ಯುವ ಕಾಂಗ್ರೆಸ್ ಮುಖಂಡ ಎನ್.ಸಂದೇಶ್, ಮೈಸೂರು ಡೈರಿ ನಿರ್ದೇಶಕ ಚಲುವರಾಜು, ಕಾಂಗ್ರೆಸ್ ಮುಖಂಡ ನಜರ್‌ಬಾದ್ ನಟರಾಜ್, ಲಕ್ಷ್ಮಿನಾರಾಯಣ ಇತರರು ಉಪಸ್ಥಿತರಿದ್ದರು.

ಹಿರಿಯ ಪತ್ರಕರ್ತ ದೀಪಕ್ ತಿಮ್ಮಯ್ಯ ಕಾಂಗ್ರೆಸ್ ಸೇರ್ಪಡೆ

ಕೆಪಿಸಿಸಿ ಅಧ್ಯಕ್ಷರ ರಾಜಕೀಯ, ಸಂವಹನ ಕಾರ್ಯದರ್ಶಿಯಾಗಿ ನೇಮಕ

ಬೆಂಗಳೂರು,ಏ.11–ಹಿರಿಯ ಪತ್ರಕರ್ತ ದೀಪಕ್ ತಿಮ್ಮಯ್ಯ ಅವರನ್ನು ಕೆಪಿಸಿಸಿ ಅಧ್ಯಕ್ಷರು ಹಾಗೂ ಡಿಸಿಎಂ ಡಿ.ಕೆ.ಶಿವಕುಮಾರ್, ಗುರುವಾರ ಕಾಂಗ್ರೆಸ್ ಪಕ್ಷಕ್ಕೆ ಸೇರ್ಪಡೆ ಮಾಡಿಕೊಂಡರು.

ಸದಾಶಿವನಗರ ನಿವಾಸದಲ್ಲಿ ದೀಪಕ್ ತಿಮ್ಮಯ್ಯ ಅವರನ್ನು ಪಕ್ಷಕ್ಕೆ ಬರಮಾಡಿಕೊಂಡ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಡಿ.ಕೆ.ಶಿವಕುಮಾರ್, ಹಿರಿಯ ಪತ್ರಕರ್ತರಾದ ದೀಪಕ್ ತಿಮ್ಮಯ್ಯ ಅವರನ್ನು ಕೆಪಿಸಿಸಿ ಅಧ್ಯಕ್ಷರ ರಾಜಕೀಯ ಹಾಗೂ ಸಂವಹನ ಕಾರ್ಯದರ್ಶಿಯಾಗಿ ನೇಮಕ ಮಾಡಲಾಗಿದ್ದು, ಅವರಿಗೆ ಕಾಂಗ್ರೆಸ್ ಕಚೇರಿಯಲ್ಲಿ ಪ್ರತ್ಯೇಕ ಕೊಠಡಿ ನೀಡಲಾಗುವುದು.



ಪಕ್ಷದ ವಿಚಾರವಾಗಿ ಯಾರೇ ನನ್ನನ್ನು ಸಂಪರ್ಕ ಮಾಡಲು ಅವರು ಸಹಕಾರ ನೀಡಲಿದ್ದಾರೆ ಎಂದು ತಿಳಿಸಿದರು.

ಮಾಧ್ಯಮ ಕ್ಷೇತ್ರದಲ್ಲಿ ಸುಮಾರು 30–40 ವರ್ಷಗಳ ಅನುಭವವಿರುವ ದೀಪಕ್ ತಿಮ್ಮಯ್ಯ, ತಮ್ಮದೇ ಆದ ಸಂಸ್ಥೆ ಮೂಲಕ ಮಕ್ಕಳನ್ನು ನಾಯಕರನ್ನಾಗಿ ರೂಪಿಸುವ ಕೆಲಸ ಮಾಡಿಕೊಂಡು ಬಂದಿದ್ದಾರೆ. ನಾಯಕರನ್ನು ಸೃಷ್ಟಿಸುವವನು ನಾಯಕನೇ ಹೊರತು ಹಿಂಬಾಲಕರನ್ನು ಸೃಷ್ಟಿಸುವವನು ಅಲ್ಲ ಎಂಬಂತೆ ಕೆಲಸ ಮಾಡುತ್ತಿದ್ದಾರೆ. ಕಳೆದ ಕೆಲವು ವರ್ಷಗಳಿಂದ ಕಾಂಗ್ರೆಸ್ ಪಕ್ಷದ ತತ್ವ ಸಿದ್ಧಾಂತ, ವಿಚಾರವಾಗಿ ಅವರು ನನಗೆ ಅನೇಕ ಉತ್ತಮ ಸಲಹೆಗಳನ್ನು ನೀಡಿದ್ದಾರೆ. ಹೀಗಾಗಿ ಅವರಿಗೆ ಕಾಂಗ್ರೆಸ್ ಪಕ್ಷದ ಭಾಗವಾಗುವಂತೆ ಮನವಿ ಮಾಡಿದ್ದೆ. ಅದನ್ನು ಒಪ್ಪಿ ಅವರು ಇಂದು ಪಕ್ಷಕ್ಕೆ ಸೇರ್ಪಡೆ ಆಗಿದ್ದು, ಈ ಜವಾಬ್ದಾರಿ ತೆಗೆದುಕೊಳ್ಳುತ್ತಿದ್ದಾರೆ ಎಂದು ಉಪಮುಖ್ಯಮಂತ್ರಿ ಮಾಹಿತಿ ನೀಡಿದರು.

ಬಿಜೆಪಿ ಶಾಸಕ ಶಿವರಾಂ ಹೆಬ್ಬಾರ್ ಪುತ್ರ ವಿವೇಕ್ ಹೆಬ್ಬಾರ್ ಕಾಂಗ್ರೆಸ್ ಸೇರ್ಪಡೆ



ಕಾರವಾರ, ಏ.11– ಕೇಸರಿ ಪಕ್ಷ ಬಿಜೆಪಿಯಲ್ಲಿದ್ದರೂ ಅಂತರ ಕಾಯ್ದುಕೊಂಡು ಬಂದಿರುವ ಯಲ್ಲಾಪುರ ಕ್ಷೇತ್ರದ ಶಾಸಕ ಶಿವರಾಂ ಹೆಬ್ಬಾರ್ ಅವರ ಪುತ್ರ ವಿವೇಕ್ ಹೆಬ್ಬಾರ್ ಕಾಂಗ್ರೆಸ್ ಸೇರ್ಪಡೆಗೊಂಡಿದ್ದಾರೆ.

ಉತ್ತರ ಕನ್ನಡ ಜಿಲ್ಲೆಯ ಬನವಾಸಿಯಲ್ಲಿ ಜಿಲ್ಲಾ ಕೈ ನಾಯಕರ ಸಮ್ಮುಖದಲ್ಲಿ ಕಾಂಗ್ರೆಸ್ ಸೇರ್ಪಡೆಯಾಗಿದ್ದಾರೆ. ಯಲ್ಲಾಪುರ ಬಿಜೆಪಿ ಶಾಸಕ ಶಿವರಾಂ ಹೆಬ್ಬಾರ್ 2023ರ ವಿಧಾನಸಭಾ ಚುನಾವಣೆ ಬಳಿಕ ಬಿಜೆಪಿಯಿಂದ ಅಂತರ ಕಾಯ್ದುಕೊಂಡಿದ್ದರು. ಹಲವು ಸಭೆಗಳನ್ನೂ ನಡೆಸಿದ್ದ ಹೆಬ್ಬಾರ್, ರಾಜ್ಯಸಭಾ ಚುನಾವಣೆ ವೇಳೆ ಮತದಾನ ಮಾಡದೇ ದೂರ ಉಳಿದಿದ್ದರು. ಇತ್ತೀಚೆಗೆ ಕಾಂಗ್ರೆಸ್ ನಾಯಕರನ್ನು ಭೇಟಿ ಮಾಡಿ ಸುದ್ದಿಯಾಗಿದ್ದರು.

ಈಗ ಲೋಕಸಭಾ ಚುನಾವಣೆ ಪ್ರಚಾರದ ಭರಾಟೆ ಜೋರಾಗಿದ್ದರೂ ಉತ್ತರ ಕನ್ನಡ ಜಿಲ್ಲೆಯಲ್ಲಿ ಶಿವರಾಂ ಹೆಬ್ಬಾರ್ ಬಿಜೆಪಿ ಅಭ್ಯರ್ಥಿ ಪರ ಪ್ರಚಾರಕ್ಕಿಳಿದಿಲ್ಲ.



ಚಾಮರಾಜನಗರ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಸುನೀಲ್ ಬೋಸ್ ಪರ ನಂಜನಗೂಡು ತಾಲೂಕಿನ ಹದಿನಾರು ಗ್ರಾಮದಲ್ಲಿ ಮಾಜಿ ಶಾಸಕ ಡಾ.ಯತೀಂದ್ರ ಮತ ಯಾಚಿಸಿದರು. ಈ ವೇಳೆ ಹದಿನಾರು ಗ್ರಾಮದ ಮುಖಂಡರು, ವರುಣ ಕ್ಷೇತ್ರದ ಕಾಂಗ್ರೆಸ್ ಮುಖಂಡರು ಭಾಗವಹಿಸಿದ್ದರು.

ಮೈಸೂರು–ಕೊಡಗು, ಚಾಮರಾಜನಗರದ ಕಾಂಗ್ರೆಸ್ ಅಭ್ಯರ್ಥಿಗಳ ಗೆಲುವಿಗೆ ಪರಿಶ್ರಮ

ಸಂಸದ ವಿ.ಶ್ರೀನಿವಾಸಪ್ರಸಾದ್ ಅಭಿಮಾನಿಗಳು, ಬೆಂಬಲಿಗರ ಘೋಷಣೆ

ಮೈಸೂರು,ಏ.11(ಜಿಎ)–ಲೋಕಸಭಾ ಚುನಾವಣೆಯಲ್ಲಿ ಮೈಸೂರು–ಕೊಡಗು ಮತ್ತು ಚಾಮರಾಜನಗರ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿಗಳ ಗೆಲುವಿಗಾಗಿ ವಿ.ಶ್ರೀನಿವಾಸ್ ಪ್ರಸಾದ್ ಅಭಿಮಾನಿಗಳು, ಬೆಂಬಲಿಗರು ಹಾಗೂ ಹಿತೈಷಿಗಳು ಒಗ್ಗೂಡಿ ಶ್ರಮಿಸುತ್ತೇವೆ ಎಂದು ಯುವ ಮುಖಂಡ ಭರತ್ ರಾಮಸ್ವಾಮಿ ತಿಳಿಸಿದ್ದಾರೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನಾವುಗಳು ವಿ.ಶ್ರೀನಿವಾಸ್‌ಪ್ರಸಾದ್ ಅವರ ಅತ್ಯಾಪ್ತ ವರ್ಗದಲ್ಲಿ ಗುರುತಿಸಿಕೊಂಡವರಾಗಿದ್ದು, ಅವರ ರಾಜಕೀಯ, ಸಾಮಾಜಿಕ ಚಟುವಟಿಕೆಗಳಲ್ಲಿ ಅವರೊಟ್ಟಿಗೆ ಹೆಜ್ಜೆ ಹಾಕಿದ್ದೇವೆ. ಹಾಗೇ ಅವರು ಯಾವುದೇ ಪಕ್ಷದಲ್ಲಿದ್ದರೂ ಅವರೊಂದಿಗೆ ಇದ್ದು ಅವರ ನಿಲುವುಗಳನ್ನು ಒಪ್ಪಿಕೊಂಡಿದ್ದೇವೆ ಎಂದರು.

ಈಗ ಅವರು ರಾಜಕೀಯ ನಿವೃತ್ತಿ ಘೋಷಿಸಿ ಯಾವ ರಾಜಕೀಯ ಪಕ್ಷದೊಂದಿಗೂ ಗುರುತಿಸಿಕೊಳ್ಳುವುದಿಲ್ಲ ಎಂದು ಘೋಷಿಸಿದ್ದಾರೆ. ಆದರೆ, ಬಿಜೆಪಿ ನಾಯಕರು ಪ್ರಸಾದ್ ಅವರು ರಾಜಕೀಯವಾಗಿ ಬಿಜೆಪಿಯಲ್ಲೇ ಗುರುತಿಸಿಕೊಂಡಿದ್ದಾರೆ ಎಂದು ವದಂತಿ ಹಬ್ಬಿಸುತ್ತಿರುವುದು ಬೇಸರದ ಸಂಗತಿ ಎಂದರು.

ನಾವು ಅವರೊಂದಿಗೆ ನಮ್ಮ ರಾಜಕೀಯ ಭವಿಷ್ಯದ ಕುರಿತಾಗಿ ಚರ್ಚಿಸಿ, ಕಾಂಗ್ರೆಸ್ ಪಕ್ಷ ಸೇರ್ಪಡೆಯಾಗುವ ನಿರ್ಧಾರವನ್ನು ತಿಳಿಸಿದಾಗ ಸೂಕ್ತ ಮಾರ್ಗದರ್ಶನ ನೀಡಿದ್ದಾರೆ. ನಾವು ಮೂಲತಃ ಕಾಂಗ್ರೆಸ್ಸಿಗರೇ ಆಗಿದ್ದು ಅನಿವಾರ್ಯವಾಗಿ ಶ್ರೀನಿವಾಸ್ ಪ್ರಸಾದ್ ಅವರ ನಿರ್ಧಾರವನ್ನು ಗೌರವಿಸಿ, ಅವರೊಂದಿಗೆ ಬಿಜೆಪಿ ಪಕ್ಷಕ್ಕೆ ಸೇರಿದ್ದೆವು. ಆ ಪಕ್ಷಕ್ಕೆ ಸೇರಿದ್ದರೂ ನಮ್ಮ ಸಿದ್ಧಾಂತಗಳಿಗೆ ಧಕ್ಕೆ ಬಾರದಂತೆ ರಾಜಕೀಯ ಮಾಡಿದ್ದೇವೆ ಎಂದು ವಿವರಿಸಿದರು.

ಬಿಜೆಪಿಯಲ್ಲಿ ಶ್ರೀನಿವಾಸ್‌ಪ್ರಸಾದ್ ಅವರ ಹಿರಿತನ ಹಾಗೂ ನಾಯಕತ್ವಕ್ಕೆ ಸಿಗಬೇಕಾದ ಗೌರವ, ಮನ್ನಣೆಗಳು ಸಿಗಲಿಲ್ಲ. ನಿಗಮ ಮಂಡಳಿ ನೇಮಕಾತಿ, ಎಂಎಲ್‌ಸಿ ಚುನಾವಣೆ ಮತ್ತು ಲೋಕಸಭಾ ಚುನಾವಣೆಯಲ್ಲಿ ಅಭ್ಯರ್ಥಿಗಳ ಆಯ್ಕೆ ಸೇರಿದಂತೆ ಅನೇಕ ವಿಚಾರದಲ್ಲಿ ಅವರ ಮಾತಿಗೆ ಮನ್ನಣೆ ಸಿಗದೇ ಇರುವುದು ಶ್ರೀನಿವಾಸ್‌ಪ್ರಸಾದ್ ಹಾಗೂ ನಮಗೆ ತೀವ್ರ ಬೇಸರ ಉಂಟುಮಾಡಿದೆ. ಆದ್ದರಿಂದ ಮೈಸೂರು, ಚಾಮರಾಜನಗರ ಜಿಲ್ಲೆಯ ಅಪಾರ ಸಂಖ್ಯೆಯ ಬೆಂಬಲಿಗರು ಅಭಿಮಾನಿಗಳು ಸಭೆ ಸೇರಿ ಚರ್ಚಿಸಿ, ಕಾಂಗ್ರೆಸ್ ಪಕ್ಷ ಸೇರಲು ನಿರ್ಧರಿಸಿದೆವು ಎಂದು ತಿಳಿಸಿದರು.

ಈ ನಿರ್ಧಾರವನ್ನು ಶ್ರೀನಿವಾಸ್‌ಪ್ರಸಾದ್ ಅವರ ಗಮನಕ್ಕೆ ತಂದಾಗ ಸಂತಸ ವ್ಯಕ್ತಪಡಿಸಿ ಮುಂದುವರೆಯುವಂತೆ ಸೂಚನೆ ನೀಡಿದರು. ಅದರಂತೆ ಮುಖ್ಯಮಂತ್ರಿಗಳು ಮತ್ತು ಜಿಲ್ಲಾ ಉಸ್ತುವಾರಿ ಸಚಿವರ ಸಮ್ಮುಖದಲ್ಲಿ ಕಾಂಗ್ರೆಸ್ ಪಕ್ಷವನ್ನು ಸೇರ್ಪಡೆಗೊಂಡು ಈ ಬಾರಿ ಲೋಕಸಭಾ ಚುನಾವಣೆಯಲ್ಲಿ ಮೈಸೂರು–ಕೊಡಗು ಮತ್ತು ಚಾಮರಾಜನಗರ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿಗಳ ಗೆಲುವಿಗಾಗಿ ವಿ.ಶ್ರೀನಿವಾಸ್‌ಪ್ರಸಾದ್ ಅಭಿಮಾನಿಗಳು, ಬೆಂಬಲಿಗರು ಹಾಗೂ ಹಿತೈಷಿಗಳು ಒಗ್ಗೂಡಿ ಶ್ರಮಿಸುತ್ತೇವೆ ಎಂದರು.

ಸುದ್ದಿಗೋಷ್ಠಿಯಲ್ಲಿ ಮುಖಂಡರಾದ ಸಿ.ಎಂ.ರಮೇಶ್, ಅಯ್ಯನಪುರ ಶಿವಕುಮಾರ್, ಸಿ.ಜಿ.ಶಿವಕುಮಾರ್, ಶಾಂತರಾಮ್ ಶೆಟ್ಟಿ ಉಪಸ್ಥಿತರಿದ್ದರು.

ಕಾಂಗ್ರೆಸ್ ಬೆಂಬಲಿಸುವಂತೆ ದಸಂಸ ಮನವಿ

ಮೈಸೂರು, ಏ.11(ಜಿಎ)– ಈ ಬಾರಿ ಲೋಕಸಭಾ ಚುನಾವಣೆಯಲ್ಲಿ ಬಿಜೆಪಿಗೆ ಮತವನ್ನು ನೀಡದೆ ತಿರಸ್ಕರಿಸಬೇಕು. ಸಂವಿಧಾನಕ್ಕೆ ಗೌರವ ನೀಡುವುದರ ಜೊತೆಗೆ ಬಡ ಕುಟುಂಬಗಳು ಆರ್ಥಿಕತೆಯಿಂದ ಸದೃಢತೆಗೆ ಪಣ ತೊಟ್ಟಿರುವ ಕಾಂಗ್ರೆಸ್ ಪಕ್ಷಕ್ಕೆ ಮತ ನೀಡಬೇಕೆಂದು ಕರ್ನಾಟಕ ರಾಜ್ಯ ದಲಿತ ಸಂಘರ್ಷ ಸಮಿತಿಯ ರಾಜ್ಯ ಘಟಕದ ರಾಜ್ಯ ಸಂಚಾಲಕ ಡಿ.ಜಿ.ಸಾಗರ್ ಮನವಿ ಮಾಡಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಈ ಹಿಂದೆ ಬಿಜೆಪಿ. ಸರ್ಕಾರ ಚುನಾವಣೆಗಳನ್ನು ದೃಷ್ಟಿಯಲ್ಲಿಟ್ಟುಕೊಂಡು ಒಳಮೀಸಲಾತಿ ವರ್ಗೀಕರಣ ಮಾಡಿ, ಕೇಂದ್ರಕ್ಕೆ ಶಿಫಾರಸು ಮಾಡಿರುವುದು ನಿಜವಾದರೆ ಕೇಂದ್ರ ಸರ್ಕಾರ ಒಳಮೀಸಲಾತಿ ಏಕೆ ಜಾರಿ ಮಾಡಲಿಲ್ಲ. ಇದು ಕೇವಲ ಬಿಜೆಪಿ. ಚುನಾವಣೆ ತಂತ್ರವಾಗಿದೆ. ರಾಜ್ಯಕ್ಕೆ ತೆರಿಗೆಯಲ್ಲಿ ಕೂಡ ಅನ್ಯಾಯ. ಬರಗಾಲವಿದ್ದರೂ ಬರಪರಿಹಾರ ಕೊಡುತ್ತಿಲ್ಲ. ಮೀಸಲಾತಿಯಲ್ಲಿಯೂ ಅನ್ಯಾಯ ಮಾಡುತ್ತಿದೆ ಎಂದು ದೂರಿದರು.

ಈ ಚುನಾವಣೆಯಲ್ಲಿ ಬಿಜೆಪಿ ವಿರುದ್ಧ ಮತ ನೀಡಿ, ಅವರನ್ನು ಕಿತ್ತು ಹಾಕದಿದ್ದರೆ ಪ್ರಜಾಪ್ರಭುತ್ವ ಕೊನೆಯಾಗುತ್ತದೆ. ಆದ್ದರಿಂದ ಪ್ರಜಾಪ್ರಭುತ್ವ ಮತ್ತು ಸಂವಿಧಾನ ಗೌರವಿಸುವ ಕಾಂಗ್ರೆಸ್‌ಗೆ ಮತ ನೀಡಿ, ಬಹುಮತದಿಂದ ಜಯಶೀಲರನ್ನಾಗಿಸಬೇಕು ಎಂದರು. ಸುದ್ದಿಗೋಷ್ಠಿಯಲ್ಲಿ ದಲಿತ ಸಂಘರ್ಷ ಸಮಿತಿ ರಾಜ್ಯ ಘಟಕದ ಜಿಲ್ಲಾ ಸಂಘಟನಾ ಸಂಚಾಲಕ ಮಯೂರ, ಜಿಲ್ಲಾ ಸಂಘಟನಾ ಸಂಚಾಲಕ ಮಲ್ಲೇಶ, ಚಾಮರಾಜನಗರ ಜಿಲ್ಲಾ ಸಂಚಾಲಕ ಶಿವಣ್ಣ ಮಂಡ್ಯ ಜಿಲ್ಲಾ ಸಂಚಾಲಕ ಕೃಷ್ಣ, ಮೈಸೂರು ಜಿಲ್ಲಾ ಸಂಘಟನಾ ಸಂಚಾಲಕ ರಾಜಣ್ಣ ಇದ್ದರು.



ಮೈಸೂರಿನ ನಮೋ ಬ್ರಿಗೇಡ್ ಕಚೇರಿಯಲ್ಲಿ ಡಾ.ಸುಧಾಕರ ಹೊಸಳ್ಳಿ ಮತ್ತು ಪ್ರವೀಣ್‌ಕುಮಾರ್ ಮಾವಿನಕಾಡು ರಚಿಸಿರುವ ಡಾ.ಅಂಬೇಡ್ಕರ್ ಜೀವನ ಆಧಾರಿತ ಸಂಶೋಧಿತ ನಾಟಕ ಕಿರು ಪುಸ್ತಕವನ್ನು ಚಾಮರಾಜನಗರ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಎಸ್.ಬಾಲರಾಜ್, ಪ್ರವೀಣ್‌ಕುಮಾರ್ ಅವರಿಗೆ ವಿತರಿಸಿದರು. ಮುಖಂಡರಾದ ಮಹದೇವಯ್ಯ, ಡಾ.ರೇವಣ್ಣ, ಗಣೇಶ್, ಅನಿಲ್ ಕುಮಾರ್, ಮಹೇಶ್ ನಾಯಕ, ಶಕ್ತಿ ಪ್ರಶಾಂತ್ ಇದ್ದರು.

ಮೈಸೂರು–ಕೊಡಗು, ಚಾ.ನಗರ ಲೋಕಸಭಾ ಚುನಾವಣೆ

ರಾಜ್ಯ ಕಾಯಕ ಸಮಾಜಗಳ ಒಕ್ಕೂಟದಿಂದ ಕಾಂಗ್ರೆಸ್‌ಗೆ ಬೆಂಬಲ

ಮೈಸೂರು,ಏ.11(ಜಿಎ)–ಈ ಬಾರಿಯ ಲೋಕಸಭಾ ಚುನಾವಣೆಯಲ್ಲಿ ಕರ್ನಾಟಕ ರಾಜ್ಯ ಕಾಯಕ ಸಮಾಜಗಳ ಒಕ್ಕೂಟ ಮೈಸೂರು–ಕೊಡಗು ಮತ್ತು ಚಾಮರಾಜನಗರ ಲೋಕಸಭಾ ಕ್ಷೇತ್ರದಿಂದ ಸ್ಪರ್ಧಿಸಿರುವ ಕಾಂಗ್ರೆಸ್ ಅಭ್ಯರ್ಥಿಗಳಿಗೆ ಬೆಂಬಲ ಸೂಚಿಸಿದೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಒಕ್ಕೂಟದ ರಾಜ್ಯಾಧ್ಯಕ್ಷ ಕೆ.ಸಿ.ಪುಟ್ಟಸಿದ್ದಶೆಟ್ಟಿ ಈ ವಿಷಯ ತಿಳಿಸಿ, ಕೋಮುವಾದಿ ಬಿಜೆಪಿ ದುರಾಡಳಿತ ಹಾಗೂ ಸಿದ್ದರಾಮಯ್ಯ ಅವರ ಸರ್ಕಾರದ ಐದು ಗ್ಯಾರಂಟಿ ಕಾರ್ಯಕ್ರಮ, ಕಾಂಗ್ರೆಸ್‌ನ ನ್ಯಾಯಪತ್ರಗಳ ಬಗ್ಗೆ ಒಕ್ಕೂಟ ಒಲವು ಹೊಂದಿದ್ದು, ಈ ಬಾರಿಯ ಲೋಕಸಭಾ ಚುನಾವಣೆ ವೇಳೆ ಮೈಸೂರು– ಕೊಡಗು ಕ್ಷೇತ್ರದಲ್ಲಿ ಎಂ.ಲಕ್ಷ್ಮಣ್ ಹಾಗೂ ಚಾಮರಾಜನಗರ ಕ್ಷೇತ್ರದಲ್ಲಿ ಸುನಿಲ್ ಬೋಸ್ ಅವರನ್ನು ಬೆಂಬಲಿಸಲಿದೆ ಎಂದು ತಿಳಿಸಿದರು.

2014 ಮತ್ತು 19ರ ಚುನಾವಣೆಯಲ್ಲಿ ಗೆದ್ದ ಬಳಿಕ ಬಿಜೆಪಿ ಶ್ರೀಮಂತರ ಮತ್ತು ಆರ್‌ಎಸ್‌ಎಸ್ ಕೈಗೊಂಬೆಯಾಗಿ ಅನೇಕ ಪ್ರಮಾದ ಮಾಡಿದೆ. 2014ರಲ್ಲಿ ಬಿಜೆಪಿ ಪ್ರಣಾಳಿಕೆಯನ್ನು ನಂಬಿ ಮತ ಹಾಕಿದವರ ಖಾತೆಗೆ 15 ಲಕ್ಷ ರೂ. ಜಮಾ ಆಗಿಲ್ಲ. ವರ್ಷಕ್ಕೆ ಎರಡು ಕೋಟಿ ಉದ್ಯೋಗ ಸೃಷ್ಟಿ ಆಗಲಿಲ್ಲ. ನೋಟು ಅಮಾನ್ಯೀಕರಣ ಅನೇಕ ಅನಾಹುತ ಸೃಷ್ಟಿಸಿದೆ. ಕೋವಿಡ್ ನಿರ್ವಹಣೆ ವೈಫಲ್ಯದಿಂದ ಲಕ್ಷಾಂತರ ಜನರು ಸಾವಿಗೀಡಾದರು. ಸಡನ್ ಲಾಕ್‌ಡೌನ್‌ನಿಂದ 45 ಕೋಟಿ ಅಸಂಘಟಿತ ಕಾರ್ಮಿಕರು ಬೀದಿಪಾಲಾದರು. ಇದಲ್ಲದೆ, ಚುನಾವಣಾ ಬಾಂಡ್‌ಗಳ ಮೂಲಕ ಲಕ್ಷಾಂತರ ಕೋಟಿ ಹಣ ಉದ್ಯಮಿಗಳಿಂದ ಪಡೆದಿದ್ದಾರೆ. ಹೀಗಾಗಿ ಬಿಜೆಪಿ ಸಂಪೂರ್ಣ ವಿಫಲವಾಗಿರುವ ಕಾರಣ ಕಾಂಗ್ರೆಸ್ ಬೆಂಬಲಿಸಲಾಗುತ್ತಿದೆ ಎಂದರು. ಸುದ್ದಿಗೋಷ್ಠಿಯಲ್ಲಿ ನಂಜಪ್ಪ, ದಾಸಪ್ಪಶೆಟ್ಟಿ, ಕೆಂಪಶೆಟ್ಟಿ, ಭದ್ರಶೆಟ್ಟಿ ಉಪಸ್ಥಿತರಿದ್ದರು.

ನರೇಂದ್ರ ಮೋದಿ ಫೋಟೋ ಕೈಬಿಟ್ಟು; ತಂದೆ, ತಮ್ಮನ ಫೋಟೋ ಇಟ್ಟುಕೊಂಡು ರಾಘವೇಂದ್ರ ಪ್ರಚಾರ ಮಾಡಲಿ!

ಶಿವಮೊಗ್ಗ, ಏ.11– ಬಿ.ವೈ.ರಾಘವೇಂದ್ರ ಅವರು ಪ್ರಧಾನಿ ನರೇಂದ್ರ ಮೋದಿ ಫೋಟೋ ಕೈಬಿಟ್ಟು, ಯಡಿಯೂರಪ್ಪ ಹಾಗೂ ವಿಜಯೇಂದ್ರ ಅವರ ಫೋಟೋ ಹಾಕಿಕೊಂಡು ಚುನಾವಣೆ ಪ್ರಚಾರ ನಡೆಸಲಿ ಎಂದು ಬಿಜೆಪಿ ಬಂಡಾಯ ಅಭ್ಯರ್ಥಿ ಕೆ.ಎಸ್.ಈಶ್ವರಪ್ಪ ಸವಾಲು ಹಾಕಿದ್ದಾರೆ.

ತಮ್ಮ ಚುನಾವಣಾ ಕಚೇರಿಯಲ್ಲಿ ಇಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಬಿ.ಎಸ್.ಯಡಿಯೂರಪ್ಪ ಬಿಜೆಪಿ ಬಿಟ್ಟು ಕೆಜೆಪಿ ಕಟ್ಟಿ ಗೆದ್ದಿದ್ದು ಕೇವಲ ಆರು ಸೀಟು ಮಾತ್ರ. ಮೋದಿ ಫೋಟೋ ನನ್ನ ಹೃದಯದಲ್ಲಿದೆ. ಅದನ್ನು ವ್ಯತ್ಯಾಸ ಮಾಡಲು ಆಗಲ್ಲ. ನನಗೆ ಮೋದಿ ಫೋಟೋ ಹಾಕಿಕೊಳ್ಳಬೇಡಿ ಎಂದು ಹೇಳಲು ಅವರು ಯಾರು, ಅವರಿಗೆ ಅಧಿಕಾರ ಕೊಟ್ಟವರು ಯಾರು ಎಂದು ಪ್ರಶ್ನಿಸಿದರು.



ನರೇಂದ್ರ ಮೋದಿ ವಿಶ್ವ ನಾಯಕ. ಅವರು ನನಗೆ ಮಾದರಿ ನಾಯಕರು. ಕೋರ್ಟ್ ಏನು ಹೇಳುತ್ತೆ ನೋಡೋಣ. ಅಪ್ಪ–ಮಕ್ಕಳು ಮೂರು ಜನರ ಫೋಟೋ ಹಾಕಿಕೊಂಡು ಹೋಗಲಿ. ಎಷ್ಟು ಮತ ಬರುತ್ತದೆ ನೋಡೋಣ ಎಂದು ಈಶ್ವರಪ್ಪ ಹೇಳಿದರು.

ಮಾತುಕತೆ ಮುಗಿದ ಅಧ್ಯಾಯ: ಮಾತುಕತೆಗೆ ಕೂರುವುದು ಈಗ ಮುಗಿದ ಅಧ್ಯಾಯ. ನಾನು ಯಾರ ಜತೆಗೂ ಮಾತುಕತೆಗೆ ಕೂರಲ್ಲ. ನಾನು ಚುನಾವಣಾ ರಣರಂಗಕ್ಕೆ ಇಳಿದಿದ್ದೇನೆ. ನನ್ನೊಂದಿಗೆ ಹತ್ತಾರು ಸಾವಿರ ಜನ ರಣರಂಗದಲ್ಲಿಳಿದು ಕೆಲಸ ಮಾಡುತ್ತಿದ್ದಾರೆ. ನಾನು ವಾಪಸ್ ಹೋದರೆ, ನನ್ನ ಕಾರ್ಯಕರ್ತರಿಗೆ ಅನ್ಯಾಯ ಮಾಡಿದಂತಾಗುತ್ತದೆ. ನಡುನೀರಿನಲ್ಲಿ ಕೈಬಿಟ್ಟು ಹೋದಂತಾಗುತ್ತದೆ. ಈ ಚುನಾವಣೆಯಲ್ಲಿ ನಾನು ಗೆದ್ದೇ ಗೆಲ್ಲುತ್ತೇನೆ ಎಂದು ಈಶ್ವರಪ್ಪ ವಿಶ್ವಾಸ ವ್ಯಕ್ತಪಡಿಸಿದರು.

ನಾಳೆ ಎಲ್ಲರೂ ನಾಮಪತ್ರ ಸಲ್ಲಿಕೆಗೆ ಬರ್ತಾರೆ. ಸಾಮಾನ್ಯ ಜನರೇ ನನಗೆ ಸ್ಟಾರ್ ಪ್ರಚಾರಕರು. ರಾಷ್ಟ್ರೀಯ ಹಾಗೂ ರಾಜ್ಯ ನಾಯಕರು ಬರಲು ಆಗಲ್ಲ. ಆದರೂ ಗೂಳಿಹಟ್ಟಿ ಶೇಖರ್, ಮಡಿವಾಳ ಸಮಾಜದ ಅಧ್ಯಕ್ಷರಾದ ಎನ್.ವೀರಪ್ಪ ಬಂದಿದ್ದಾರೆ. ನಾನು ಯಾರನ್ನೂ ಕರೆದಿಲ್ಲ ಎಂದು ಹೇಳಿದರು.

ಸಿ.ಟಿ.ರವಿ ಅಸಮಾಧಾನಗೊಂಡಿದ್ದಾರೆ ಎಂದು ನಾನು ಹೇಳಿಲ್ಲ. ರವಿ, ಪ್ರತಾಪ್ ಸಿಂಹ ಅವರಿಗೆ ಸೀಟು ಯಾಕೆ ಕೊಟ್ಟಿಲ್ಲ ಅಂತ ಕೇಳುತ್ತಿದ್ದೇನೆ. ಯತ್ನಾಳರನ್ನು ಪಕ್ಕಕ್ಕೆ ಸರಿಸಿದ್ದು ಯಾಕೆ?. ಅವರು ಅಸಮಾಧಾನ ಎಲ್ಲಿ ವ್ಯಕ್ತಪಡಿಸಿದ್ದಾರೆ ಎಂದು ನಾನು ಆಮೇಲೆ ಹೇಳುತ್ತೇನೆ ಎಂದು ಹೇಳಿದರು.

ಮೈಸೂರು ಮಿತ್ರ ಶುಕ್ರವಾರ 12 ಏಪ್ರಿಲ್ 2024

ತಮಿಳುನಾಡಿಗೆ ನೀರು ಬಿಟ್ಟು ಮಂಡ್ಯ ಜಿಲ್ಲೆಯನ್ನು ಬರಡು ಮಾಡಿದ ಕಾಂಗ್ರೆಸ್ ಪಕ್ಷವನ್ನು ತಿರಸ್ಕರಿಸಿ

ಕುಮಾರಸ್ವಾಮಿ ಪರ ಮತಯಾಚಿಸಿದ ಮಾಜಿ ಸಚಿವ ನಾರಾಯಣಗೌಡ ಮನವಿ



ಸಭೆಯಲ್ಲಿ ಮಾತನಾಡುತ್ತಿರುವ ಮಾಜಿ ಸಚಿವ ಕೆ.ಸಿ.ನಾರಾಯಣಗೌಡ.

ಕೆ.ಆರ್.ಪೇಟೆ,ಏ.11– ಮಂಡ್ಯ ಜಿಲ್ಲೆಯ ರೈತರು ಬರೋಬ್ಬರಿ 150 ದಿನಗಳ ಕಾಲ ಕಾವೇರಿ ನೀರನ್ನು ತಮಿಳುನಾಡಿಗೆ ಬಿಡ ಬಾರದೆಂದು ಅನಿರ್ದಿಷ್ಟಾವಧಿ ಧರಣಿ ನಡೆಸಿದರೂ ಸಹ ರೈತರ ಹಿತವನ್ನು ಕಡೆ ಗಣಿಸಿ ತಮಿಳುನಾಡಿಗೆ ನೀರು ಹರಿಸಿ, ಮಂಡ್ಯ ಜಿಲ್ಲೆಯನ್ನು ಬರಡು ಭೂಮಿಯ ನ್ನಾಗಿಸಿದ ಕಾಂಗ್ರೆಸ್ ಪಕ್ಷವನ್ನು ಜಿಲ್ಲೆಯ ಮತದಾರರು ತಿರಸ್ಕರಿಸಬೇಕು. ಕಾವೇರಿ ಮತ್ತು ಮಂಡ್ಯ ಜಿಲ್ಲೆಯ ರೈತರ ಹಿತರ ಕ್ಷಣೆಗಾಗಿ ಮಂಡ್ಯ ಲೋಕಸಭಾ ಕ್ಷೇತ್ರದ ಎನ್.ಡಿ.ಎ ಮೈತ್ರಿ ಅಭ್ಯರ್ಥಿ ಹೆಚ್.ಡಿ.ಕುಮಾ ರಸ್ವಾಮಿ ಅವರನ್ನು ಕನಿಷ್ಠ 3 ಲಕ್ಷ ಮತ ಗಳ ಅಂತರದಿಂದ ಗೆಲ್ಲಿಸಬೇಕು ಎಂದು ಮಾಜಿ ಸಚಿವರಾದ ಕೆ.ಸಿ.ನಾರಾಯಣ ಗೌಡ ಮತದಾರರಲ್ಲಿ ಮನವಿ ಮಾಡಿದರು.

ಲೋಕಸಭಾ ಅಭ್ಯರ್ಥಿ ಹೆಚ್.ಡಿ.ಕುಮಾ ರಸ್ವಾಮಿ ಅವರ ಪರ ತಾಲೂಕಿನ ಸಂತೇ ಬಾಚಹಳ್ಳಿ ಹೋಬಳಿಯ ಅಘಲಯ, ರಂಗನಾಥಪುರ ಕ್ರಾಸ್, ಭಾರತೀಪುರ ಕ್ರಾಸ್, ಸಾರಂಗಿ, ಮಾಕವಳ್ಳಿ, ಹರಿಹರ ಪುರ ಗ್ರಾಮ ಪಂಚಾಯಿತಿ ಕೇಂದ್ರಗಳಲ್ಲಿ ಶಾಸಕ ಹೆಚ್.ಟಿ.ಮಂಜು ಹಾಗೂ ಜೆಡಿಎಸ್ –ಬಿಜೆಪಿ ಮುಖಂಡರೊಂದಿಗೆ ಜಂಟಿ ಪ್ರಚಾರ ಸಭೆ ನಡೆಸಿ ಮಾತನಾಡಿದರು. ಇದಕ್ಕೂ ಮೊದಲು ದೊಡ್ಡ ಕ್ಯಾತನಹಳ್ಳಿ ಗ್ರಾಮದಲ್ಲಿರುವ ಶ್ರೀರಾಮ ದೇವಾಲ ಯದಲ್ಲಿ ವಿಶೇಷ ಪೂಜೆ ಸಲ್ಲಿಸಿ ಪ್ರಚಾ ರಕ್ಕೆ ಚಾಲನೆ ನೀಡಲಾಯಿತು.

ನಮ್ಮ ದೇಶದ ಜನರು ನರೇಂದ್ರ ಮೋದಿ ಅವರ ಕಾರ್ಯಕ್ರಮಗಳನ್ನು ಮೆಚ್ಚಿ ಬಿಜೆಪಿಗೆ ಮತ ನೀಡಲು ತುದಿಗಾಲಲ್ಲಿ ನಿಂತಿದ್ದಾರೆ. ಮೋದಿಯ ವರಿಗೆ ನಮ್ಮ ದೇಶದ ಮಾಜಿ ಪ್ರಧಾನ ಮಂತ್ರಿಗಳು, ರಾಜಕೀಯ ಭೀಷ್ಮ ಹೆಚ್.ಡಿ. ದೇವೇಗೌಡ ಅವರೇ ಬೆಂಬಲ ನೀಡಿ ದ್ದಾರೆ. ನರೇಂದ್ರ ಮೋದಿ ಅವರು ಹ್ಯಾಟ್ರಿಕ್ ಅವಧಿಗೆ ಪ್ರಧಾನಿಯಾಗಲು ನಮ್ಮ ಅಭ್ಯರ್ಥಿ ಕುಮಾರಸ್ವಾಮಿ ಅವರನ್ನು ಗೆಲ್ಲಿಸಿ ಕೇಂದ್ರ ಸರ್ಕಾರದಲ್ಲಿ ಕ್ಯಾಬಿನೆಟ್ ಮಂತ್ರಿಯಾಗಿ ಸೇವೆ ಸಲ್ಲಿಸಲು ಅವಕಾಶ ಮಾಡಿಕೊಡು ವಂತೆ ಮತದಾರರಲ್ಲಿ ಮನವಿ ಮಾಡಿದರು.

ಶಾಸಕ ಹೆಚ್.ಟಿ.ಮಂಜು ಮಾತನಾಡಿ, ರೈತರ ಹಿತ ಚಿಂತಕ, ಎರಡು ಬಾರಿ ಮುಖ್ಯ ಮಂತ್ರಿಯಾಗಿ 22ಲಕ್ಷ ರೈತರ ಇಪ್ಪತ್ತೈದು ಸಾವಿರ ಕೋಟಿಗಿಂತಲೂ ಹೆಚ್ಚು ಸಾಲ ಮನ್ನಾ ಮಾಡಿದ ಕೀರ್ತಿ ಕುಮಾರಣ್ಣ ಅವರಿಗೆ ಸಲ್ಲುತ್ತದೆ. 2016ರಲ್ಲಿ ಮಂಡ್ಯ ಜಿಲ್ಲೆಯ ರೈತರು ಸಾಲದ ಸುಳಿಗೆ ಸಿಲುಕಿ ಆತ್ಮಹತ್ಯೆ ಮಾಡಿಕೊಳ್ಳುತ್ತಿದ್ದ ಸಂದರ್ಭದಲ್ಲಿ ರೈತರ ಮನೆ ಮನೆಗೆ ಹೋಗಿ ತಲಾ 50 ಸಾವಿರ ಪರಿಹಾರ ನೀಡಿ ರೈತರ ಕುಟುಂಬ ದವರಿಗೆ ಸಾಂತ್ವನ ಹೇಳುವ ರೈತರ ಪರವಾಗಿ ನಿಂತಿದ್ದ ಏಕೈಕ ವ್ಯಕ್ತಿ ಕುಮಾರಣ್ಣ ಎಂದರು.

ಮನ್‌ಮುಲ್ ನಿರ್ದೇಶಕ ಡಾಲು ರವಿ, ಜೆಡಿಎಸ್ ತಾಲೂಕು ಅಧ್ಯಕ್ಷ ಜಾನಕೀರಾಂ, ಬಿಜೆಪಿ ಅಧ್ಯಕ್ಷ ಸಾರಂಗಿ ನಾಗಣ್ಣ, ರಾಜ್ಯ ಸಹಕಾರ ಮಹಾ ಮಂಡಳ ನಿರ್ದೇಶಕ ರಾದ ಮೋಹನ್, ಎ.ಆರ್.ರಘು, ಮುಡಾ ಮಾಜಿ ಅಧ್ಯಕ್ಷ ಕೆ.ಶ್ರೀನಿವಾಸ್, ತಾ.ಪಂ. ಮಾಜಿ ಸದಸ್ಯರಾದ ಬಿಲ್ಲೇನಹಳ್ಳಿ ಕುಮಾರ್, ಮೋಹನ್, ಮುಖಂಡರಾದ ಎ.ಆರ್.ರಘು, ತೋಟಪ್ಪಶೆಟ್ಟಿ, ಸಾಮಿಲ್ ರವಿಕುಮಾರ್, ಬಿಜೆಪಿ ಮಾಜಿ ಅಧ್ಯಕ್ಷ ಪರಮೇಶ್ ಅರ ವಿಂದ್, ಡಿ.ಪಿ.ಪರಮೇಶ್, ಹುಬ್ಬನಹಳ್ಳಿ ಬಲ ರಾಮು, ಅಘಲಯ ಅಜಯ್, ಬಿಜೆಪಿ ಪ್ರಧಾನ ಕಾರ್ಯದರ್ಶಿ ಚೋಕನಹಳ್ಳಿ ಪ್ರಕಾಶ್, ಇತರರು ಉಪಸ್ಥಿತರಿದ್ದರು.

ಎಲ್ಲಾ ವರ್ಗದ ಬೆಂಬಲ, ಕಾಂಗ್ರೆಸ್‌ಗೆ ಬಲ

ಮಂಡ್ಯ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಸ್ಟಾರ್ ಚಂದ್ರು ವಿಶ್ವಾಸ



ಮಂಡ್ಯ ಜಿಲ್ಲೆಯಾದ್ಯಂತ ಭರ್ಜರಿ ಚುನಾವಣಾ ಪ್ರಚಾರ ಕೈಗೊಂಡಿರುವ ಕಾಂಗ್ರೆಸ್ ಅಭ್ಯರ್ಥಿ ಸ್ಟಾರ್ ಚಂದ್ರು ಮತ್ತು ಜಿಲ್ಲಾ ಉಸ್ತುವಾರಿ ಸಚಿವ ಚಲುವರಾಯಸ್ವಾಮಿ ಅವರುಗಳು ಗುರುವಾರ ನಾಗಮಂಗಲದಲ್ಲಿ ಮತಯಾಚಿಸಿದರು.

ನಾಗಮಂಗಲ,ಏ.11– ಸರ್ವರಿಗೂ ಸಮ ಬಾಳು ಎಲ್ಲರಿಗೂ ಸಮಪಾಲು ಎಂಬ ತತ್ವ ಸಿದ್ಧಾಂತಗಳನ್ನು ಕಾಂಗ್ರೆಸ್ ಅಳವಡಿಸಿ ಕೊಂಡಿದೆ. ಕಾಂಗ್ರೆಸ್ ಸರ್ಕಾರದ ಪಂಚ ಗ್ಯಾರಂಟಿಗಳು ಎಲ್ಲಾ ವರ್ಗದ ಜನತೆ ಯನ್ನು ತಲುಪುತ್ತಿವೆ. ಈ ಚುನಾವಣೆ ಯಲ್ಲಿ ಎಲ್ಲಾ ವರ್ಗದ ಜನತೆ ನನ್ನನ್ನು ಬೆಂಬಲಿಸುವ ಮೂಲಕ ಕಾಂಗ್ರೆಸ್‌ಗೆ ಬಲ ತುಂಬಲಿದ್ದಾರೆ ಎಂದು ಮಂಡ್ಯ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ವೆಂಕಟರಮ ಣೇಗೌಡ (ಸ್ಟಾರ್ ಚಂದ್ರು) ಹೇಳಿದರು.

ಮಂಡ್ಯ ಜಿಲ್ಲೆಯಾದ್ಯಂತ ಭರ್ಜರಿ ಚುನಾವಣಾ ಪ್ರಚಾರ ನಡೆಸುತ್ತಿರುವ ಸ್ಟಾರ್ ಚಂದ್ರು ಗುರುವಾರ ನಾಗಮಂಗಲದ ಕಾಂಗ್ರೆಸ್ ಕಚೇರಿಯಲ್ಲಿ ಮಾಧ್ಯಮದ ವರೊಂದಿಗೆ ಮಾತನಾಡಿ, ಸಮಾಜದ ಸರ್ವರಿಗೂ ಸರ್ಕಾರಿ ಯೋಜನೆಗಳು ತಲುಪಬೇಕು. ಆರ್ಥಿಕವಾಗಿ ಹಿಂದುಳಿ ದವರನ್ನು ಸಬಲರನ್ನಾಗಿ ಮಾಡುವ ಉದ್ದೇ ಶದಿಂದ ಪಂಚ ಗ್ಯಾರಂಟಿಗಳನ್ನು ಒಳ ಗೊಂಡ 25 ಭರವಸೆಗಳನ್ನು ಕಾಂಗ್ರೆಸ್ ಘೋಷಣೆ ಮಾಡಿದೆ. ಕಾಂಗ್ರೆಸ್ ಪ್ರಣಾ ಳಿಕೆಯ ಘೋಷಣೆಗಳು ಸಾಕಷ್ಟು ಜನಮ ನ್ನಣೆ ಪಡೆಯುತ್ತಿದ್ದು ಜನ 'ಕೈ' ಹಿಡಿಯ ಲಿದ್ದಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ದೇಶ ಕಟ್ಟುವ ಕೆಲಸಕ್ಕೆ ಕಾಂಗ್ರೆಸ್ ಮುಂದಾ ಗಿದೆ. ರಾಜ್ಯ ಕಾಂಗ್ರೆಸ್ ಸರ್ಕಾರ ಬಡ ವರ, ದೀನದಲಿತರ ಪರವಾಗಿ ಹತ್ತು ಹಲವು ಯೋಜನೆಗಳನ್ನು ಕಾರ್ಯರೂಪಕ್ಕೆ ತಂದಿದೆ. ಜನಪರ ಕಾರ್ಯಕ್ರಮಗಳಿಗೆ ಮನ್ನಣೆ ಸಿಗಲಿದೆ ಎಂಬುದಕ್ಕೆ ಪ್ರಚಾರದ ಸಂದರ್ಭದಲ್ಲಿ ನೆರೆದಿರುವ ಜನಸ್ತೋ ಮವೇ ಸಾಕ್ಷಿ. ಬಿರುಬಿಸಿಲಿನಲ್ಲೂ ಜನರು ಆಗಮಿಸುತ್ತಿದ್ದಾರೆ ಎಂದರೆ ಅದಕ್ಕೆ ಕಾಂಗ್ರೆಸ್ ನ ಕಾರ್ಯಕ್ರಮಗಳೇ ಕಾರಣ ಎಂದರು.

ಜಿಲ್ಲೆಯ ಜನತೆ ನನ್ನ ಕೈ ಹಿಡಿಯ ಲಿದ್ದಾರೆ. ಈ ಜಿಲ್ಲೆಯ ಸ್ವಾಭಿಮಾನದ ಚುನಾವಣೆ ಇದಾಗಿದೆ. ನನ್ನ ಗೆಲುವು ರೈತರ ಗೆಲುವು. ಈ ಮಣ್ಣಿನ ಮಗನನ್ನು ಆಶೀರ್ವದಿಸಿ ಸಂಸತ್ತಿಗೆ ಕಳುಹಿಸುತ್ತಾರೆ ಎಂಬ ಅಚಲವಾದ ನಂಬಿಕೆಯಿದೆ. ಈ ಬಾರಿ ಕಾಂಗ್ರೆಸ್ ಅಧಿಕಾರಕ್ಕೆ ಬರುವುದು ನಿಶ್ಚಿತ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಇದೇ ಸಂದರ್ಭದಲ್ಲಿ ಜಿಲ್ಲೆಯ ಈಡಿಗ, ಕುರುಬ, ಉಪ್ಪಾರ, ದಲಿತ ಸಂಘರ್ಷ ಸಮಿತಿ ಗಳು ಇಂದು ನಾಗಮಂಗಲ ಮತ್ತು ಮಂಡ್ಯ ದಲ್ಲಿ ಜಾಗೃತಿ ಸಭೆ ನಡೆಸಿ ಕಾಂಗ್ರೆಸ್‌ಗೆ ಬೆಂಬಲ ವ್ಯಕ್ತಪಡಿಸಿದವು. ಹಿಂದುಳಿದ ಸಮುದಾಯಕ್ಕೆ ಕಾಂಗ್ರೆಸ್ ನಾನಾ ಕಾರ್ಯ ಕ್ರಮಗಳನ್ನು ಜಾರಿಗೆ ತಂದಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿ ವಕುಮಾರ್ ಅವರ ಕೈ ಬಲಪಡಿಸಲು ಕಾಂಗ್ರೆಸ್‌ಗೆ ಬೆಂಬಲ ಸೂಚಿಸುವುದಾಗಿ ಸಮುದಾಯದ ಮುಖಂಡರು ಹೇಳಿದರು.

ಕ್ರೈಸ್ತ ಸಮುದಾಯದ ಮುಖಂಡರ ಭೇಟಿ: ಮಂಡ್ಯ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ವೆಂಕಟರಮಣೇಗೌಡ (ಸ್ಟಾರ್ ಚಂದ್ರು) ಅವರು ಫಾದರ್ ದೇವ್ ಕುಮಾರ್ ಅವರ ಮುಂದಾಳತ್ವದಲ್ಲಿ ಮಂಡ್ಯದ ಆರ್. ಪಿ ರಸ್ತೆಯಲ್ಲಿ ಕ್ರೈಸ್ತ ಸಮುದಾಯದ ವರನ್ನು ಭೇಟಿಯಾಗಿ ಮತಯಾಚಿಸಿದರು.

ಕಾರ್ಯಕರ್ತರು ಕಾಂಗ್ರೆಸ್ ಸೇರ್ಪಡೆ: ನಾಗಮಂಗಲ ತಾಲೂಕು ತುಪ್ಪ ದಮಡ ಗ್ರಾಮದಲ್ಲಿ ಹಮ್ಮಿಕೊಂಡಿದ್ದ ಕಾಂಗ್ರೆಸ್ ಗ್ಯಾರಂಟಿ ಕಾರ್ಡ್‌ಗಳ ವಿತರಣೆ ಸಮಾರಂ ಭದಲ್ಲಿ 30ಕ್ಕೂ ಅಧಿಕ ಜೆಡಿಎಸ್ ಕಾರ್ಯ ಕರ್ತರು ಸಚಿವ ಚಲುವರಾಯಸ್ವಾಮಿ ಅವರ ಸಮ್ಮುಖದಲ್ಲಿ ಕಾಂಗ್ರೆಸ್‌ಗೆ ಸೇರ್ಪಡೆಯಾದರು.

ಶಾರ್ಟ್ ಸರ್ಕ್ಯೂಟ್‌ನಿಂದ ಆಸ್ಪತ್ರೆಗೆ ಬೆಂಕಿ: ದಾಖಲೆಗಳು ಭಸ್ಮ



ನಾಗಮಂಗಲ: ವಿದ್ಯುತ್ ಶಾರ್ಟ್ ಸರ್ಕ್ಯೂಟ್‌ನಿಂದ ಆಸ್ಪತ್ರೆಯ ಕೆಲ ಕೊಠಡಿಗೆ ಬೆಂಕಿ ಬಿದ್ದು ಡಿ ಫ್ರಿಜ್ ಸೇರಿದಂತೆ ಬೀರುವಿನಲ್ಲಿಟ್ಟಿದ್ದ ದಾಖಲೆಗಳು ಬೆಂಕಿಗಾಹುತಿಯಾದ ಘಟನೆ ತಾಲೂಕಿನ ದೇವಲಾಪುರ ಹೋಬಳಿಯ ಹರದನಹಳ್ಳಿ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ನಡೆದಿದೆ. ಇಂದು ಬೆಳಿಗ್ಗೆ 9 ಘಂಟೆಯ ಸಮಯದಲ್ಲಿ ಆಸ್ಪತ್ರೆಯ ಕೊಠಡಿಯಿಂದ ಹೊಗೆ ಬರುತ್ತಿರುವುದನ್ನು ಕಂಡ ಆಸ್ಪತ್ರೆಯ ಮಹಿಳಾ ನೌಕರರಾದ ಸುನೀತ ಅವರು ಹೋಗಿ ನೋಡಿ ಬೆಂಕಿ ಉರಿಯುತ್ತಿರುವುದನ್ನು ಕಂಡು ಅಧಿಕಾರಿಗಳಿಗೆ ತಿಳಿಸಿದರು. ಅಧಿಕಾರಿಗಳು ತಕ್ಷಣ ಅಗ್ನಿಶಾಮಕ ದಳಕ್ಕೆ ವಿಷಯ ತಿಳಿಸಲಾಗಿ ಸಿಬ್ಬಂದಿ ಸ್ಥಳಕ್ಕಾಗಮಿಸಿ ಸತತ ಮೂರು ಘಂಟೆಗಳ ಕಾರ್ಯಾಚರಣೆ ನಡೆಸಿ ಬೆಂಕಿ ನಂದಿಸುವಲ್ಲಿ ಯಶಸ್ವಿಯಾದರಾ ದರೂ ಅಷ್ಟರಲ್ಲಿ ಮೂರು ಕೋಣೆಗಳಲ್ಲಿದ್ದ ಡಿ ಫ್ರಿಜ್, ವ್ಯಾಕ್ಸಿನ ಫ್ರಿಜ್ ಮತ್ತು ಬೀರುವಿನಲ್ಲಿದ್ದ ಆಸ್ಪತ್ರೆಗೆ ಸಂಬಂಧಿಸಿದ ದಾಖಲೆಗಳು ಬೆಂಕಿಗೆ ಆಹುತಿಯಾಗಿದ್ದವು. ಸುಮಾರು 2 ಲಕ್ಷ ರೂ.ಗಳಿಗೂ ಹೆಚ್ಚು ನಷ್ಟ ಉಂಟಾಗಿದೆಯೆಂದು ತಿಳಿದು ಬಂದಿದೆ. ವಿಷಯ ತಿಳಿಯುತ್ತಿದ್ದಂತೆ ತಾಲೂಕು ಆರೋಗ್ಯಾಧಿಕಾರಿ ಡಾ.ರಮೇಶ್ ಅವರ ಅನುಪಸ್ಥಿತಿಯಲ್ಲಿ ಡಾ.ನಾರಾಯಣ್ ಭೇಟಿ ನೀಡಿ ಪರಿಶೀಲಿಸಿದರು.

ಸಂಭ್ರಮದಿಂದ ರಂಜಾನ್ ಆಚರಣೆ



ನಾಗಮಂಗಲ: ಕಳೆದ ಒಂದು ತಿಂಗಳ ಕಾಲ ಉಪವಾಸ ವ್ರತದಲ್ಲಿದ್ದ ಮುಸ್ಲಿಂ ಬಾಂಧವರು ಇಂದು ಈದ್ ಉಲ್ ಫಿತರ್ ರಂಜಾನ್ ಹಬ್ಬವನ್ನು ಸಡಗರ ಸಂಭ್ರಮದಿಂದ ಆಚರಿಸಿದರು.

ಭಾರಿ ಬಿಸಿಲಿನ ಝಳದ ಕಾರಣ ಮುಂಜಾನೆ ಒಂಬತ್ತು ಗಂಟೆಗೆ ಮೆರವಣಿಗೆಯ ಮೂಲಕ ಹಿರಿಕೆರೆ ಬಳಿಯಿರುವ ದರ್ಗಾದಲ್ಲಿ ವಿಶೇಷ ಪ್ರಾರ್ಥನೆ ಸಲ್ಲಿಸಿದರು. ಧರ್ಮಗುರುಗಳಾದ ಹಾಜಿ ಶೌಖತ್ ಅಲೀ ಮತ್ತು ಹಾಜಿ ಜಮಾರವರು ರಂಜಾನ್ ಹಬ್ಬದಲ್ಲಿ ಮತ್ತು ಆ ದಿನಗಳಲ್ಲಿ ನಡೆದುಕೊಳ್ಳಬೇಕಾದ ನಿಯಮಗಳನ್ನು ಬಾಂದವರಿಗೆ ತಿಳಿಸಿದರು. ಪ್ರಾರ್ಥನೆ ಸಲ್ಲಿಸಿದ ನಂತರ ಒಬ್ಬರಿಗೊಬ್ಬರು ರಂಜಾನ್ ಶುಭಾಷಯಗಳನ್ನು ವಿನಿಮಯ ಮಾಡಿಕೊಂಡರು.

ಎಸ್‌ಟಿಜಿ ಶಿಕ್ಷಣ ಸಂಸ್ಥೆಗೆ ಶೇ.100ರಷ್ಟು ಫಲಿತಾಂಶ

ಜಿಲ್ಲೆಗೆ ಇಬ್ಬರು ಟಾಪರ್



ಜೀವನ್‌ಗೌಡ



ಬಿ.ಆರ್.ಪ್ರಗತಿ

ಚಿನಕುರಳಿ,ಏ.11– ಚಿನಕುರಳಿ ಗ್ರಾಮದಲ್ಲಿ ಮಾಜಿ ಸಚಿವ ಸಿ.ಎಸ್.ಪುಟ್ಟರಾಜು ಒಡೆತನದ ಪ್ರತಿಷ್ಠಿತ ಎಸ್‌ಟಿಜಿ ಶಿಕ್ಷಣ ಸಂಸ್ಥೆಗೆ 2023–24ನೇ ಸಾಲಿನ ದ್ವಿತೀಯ ಪಿಯುಸಿಯಲ್ಲಿ ಶೇ.100ರಷ್ಟು ಫಲಿತಾಂಶ ಬಂದಿದೆ. ಕಾಲೇಜಿನ ಇಬ್ಬರು ವಿದ್ಯಾರ್ಥಿಗಳು ಜಿಲ್ಲೆಗೆ ಟಾಪರ್ ಆಗಿದ್ದಾರೆ. ಎಸ್‌ಟಿಜಿ ಶಿಕ್ಷಣ ಸಂಸ್ಥೆಯ ವಿದ್ಯಾರ್ಥಿಗಳಾದ ಬಿ.ಆರ್.ಪ್ರಗತಿ 592 ಹಾಗೂ ಬಿ.ಎಸ್.ಜೀವನ್ ಗೌಡ 592 ಅಂಕ ಗಳಿಸುವ ಮೂಲಕ ಮಂಡ್ಯ ಜಿಲ್ಲೆಗೆ ಟಾಪರ್ ಆಗಿದ್ದು, ರಾಜ್ಯ ಮಟ್ಟದಲ್ಲಿ ದ್ವಿತೀಯ ಸ್ಥಾನಗಳಿಸುವ ಮೂಲಕ ಜಿಲ್ಲೆಗೆ ಹಾಗೂ ಕಾಲೇಜಿಗೆ ಕೀರ್ತಿ ತಂದಿದ್ದಾರೆ.

ಕಾಲೇಜಿನಲ್ಲಿ 401 ವಿದ್ಯಾರ್ಥಿಗಳು ಪರೀಕ್ಷೆ ಎದುರಿಸಿದ್ದು ಎಲ್ಲಾ ವಿದ್ಯಾರ್ಥಿಗಳು ತೇರ್ಗಡೆ ಹೊಂದಿದ್ದಾರೆ. ಇದರಲ್ಲಿ 373 ವಿದ್ಯಾರ್ಥಿಗಳು ಉನ್ನತ ಶ್ರೇಣಿಯಲ್ಲಿ, 28 ವಿದ್ಯಾರ್ಥಿಗಳು ಪ್ರಥಮ ಶ್ರೇಣಿಯಲ್ಲಿ ತೇರ್ಗಡೆ ಹೊಂದಿದ್ದಾರೆ. ಗಣಿತ ವಿಷಯದಲ್ಲಿ 230, ಜೀವಶಾಸ್ತ್ರದಲ್ಲಿ 22, ಹಾಗೂ ಕನ್ನಡ ವಿಷಯದಲ್ಲಿ 1 ವಿದ್ಯಾರ್ಥಿಗಳು 100ಕ್ಕೆ 100 ಅಂಕಗಳಿಸುವ ಮೂಲಕ ಕಾಲೇಜಿಗೆ ಕೀರ್ತಿ ತಂದಿದ್ದಾರೆ.

ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಉತ್ತಮ ಅಂಕ ಗಳಿಸುವ ಮೂಲಕ ಕಾಲೇಜಿಗೆ ಕೀರ್ತಿ ತಂದುಕೊಟ್ಟ ಎಲ್ಲಾ ವಿದ್ಯಾರ್ಥಿಗಳಿಗೆ, ಉತ್ತಮ ಫಲಿತಾಂಶ ಬರಲು ಶ್ರಮಿಸಿದ ಕಾಲೇಜಿನ ಉಪನ್ಯಾಸಕರು ಹಾಗೂ ಸಿಬ್ಬಂದಿಗಳಿಗೆ ಸಂಸ್ಥೆಯ ಅಧ್ಯಕ್ಷರಾದ ಮಾಜಿ ಸಚಿವ ಸಿ.ಎಸ್.ಪುಟ್ಟರಾಜು, ಸಿಇಓ ಸಿ.ಪಿ.ಶಿವರಾಜು ಹಾಗೂ ಪ್ರಾಂಶುಪಾಲರು, ಆಡಳಿತ ಮಂಡಳಿಯ ಸದಸ್ಯರು ಅಭಿನಂದನೆ ಸಲ್ಲಿಸಿದ್ದಾರೆ.

ಯುಗಾದಿ ಸಂಗೀತೋತ್ಸವಕ್ಕೆ ತೆರೆ



ವಿದ್ವಾನ್ ಸಿ.ಎಸ್.ಕೇಶವ ಚಂದ್ರ ಮತ್ತು ತಂಡ ಕರ್ನಾಟಕ ಶಾಸ್ತ್ರೀಯ ದ್ವಂದ್ವ ವೇಣುವಾದನ ಪ್ರಸ್ತುತಪಡಿಸಿದರು.

ಮೈಸೂರು, ಏ.11(ಎಂಕೆ)– ಭಕ್ತಿಭಾವ ಗೀತೆಗಳ ಗಾನ ಲಹರಿ, ಕರ್ನಾಟಕ ಶಾಸ್ತ್ರೀಯ ದ್ವಂದ ವೇಣುವಾದನ ಹಾಗೂ ಸ್ವರ ವೈಭವ ದೊಂದಿಗೆ ಯುಗಾದಿ ಸಂಗೀತೋತ್ಸವ ತೆರೆಕಂಡಿತು. ಮೈಸೂರು ಅರಮನೆ ಆವರಣದಲ್ಲಿ ಕಳೆದ ಮೂರು ದಿನಗಳಿಂದ ಸಂಗೀತ ಪ್ರಿಯರ ಮನತಣಿಸಿದ ಯುಗಾದಿ ಸಂಗೀತೋತ್ಸವಕ್ಕೆ ಗುರುವಾರ ಯಶಸ್ವಿ ತೆರೆಬಿದ್ದಿತು. ಕಡೆಯ ದಿನ ಚಲನಚಿತ್ರ ನಿರ್ದೇಶಕ ಡಿ.ರಾಮಕೃಷ್ಣ ಮತ್ತು ತಂಡ ಭಕ್ತಿಭಾವ ಗೀತೆಗಳ ಗಾನ ಲಹರಿ ಮೂಲಕ ಶ್ರೋತೃಗಳ ಮನ ಗೆದ್ದರು.

ನಂತರ ಸಂಗೀತ ವಿದ್ವಾನ್ ಪ್ರೊ.ಸಿ.ಎ. ಶ್ರೀಧರ ಮತ್ತು ಸಂಗೀತ ವಿದ್ವಾನ್ ಸಿ.ಎಸ್. ಕೇಶವ ಚಂದ್ರ ಮತ್ತು ತಂಡದ ಕರ್ನಾಟಕ ಶಾಸ್ತ್ರೀಯ ದ್ವಂದ್ವ ವೇಣುವಾದನ ಕೇಳುಗರ ಮನಸ್ಸಿಗೆ ಮುದ ನೀಡಿತು. ಅಂತಿಮವಾಗಿ ಸಾಯಿ ವಿಘ್ನೇಶ್ ಮತ್ತು ಲಕ್ಷ್ಮಿನಾಗರಾಜ್ ಹಾಗೂ ಎಂ.ಎಲ್.ಆನಂದ್ ತಂಡ ಸ್ವರ ವೈಭವ ಯುಗಾದಿ ಹಬ್ಬದ ಸಡಗರ–ಸಂಭ್ರಮ ದಲ್ಲಿ ಸಂಗೀತ ಪ್ರೇಮಿಗಳು ಮಿಂದೇಳು ವಂತೆ ಮಾಡಿತು. ಅರಮನೆ ಮಂಡಳಿ ಉಪ ನಿರ್ದೇಶಕ ಟಿ.ಎಸ್.ಸುಬ್ರಹ್ಮಣ್ಯ ಮತ್ತಿತರರು ಉಪಸ್ಥಿತರಿದ್ದರು.

ಮುಂಬೈಗೆ ಜಯ: ಆರ್‌ಸಿಬಿಗೆ ಸತತ 4ನೇ ಸೋಲು



ಮುಂಬೈ, ಏ.11– ಬುಮ್ರಾ ಅವರ ಮಾರಕ ಬೌಲಿಂಗ್ ದಾಳಿ ಹಾಗೂ ಮುಂಬೈ ಇಂಡಿಯನ್ಸ್ ಬ್ಯಾಟ್ಸ್‌ಮನ್‌ಗಳ ಅಬ್ಬರಕ್ಕೆ ತತ್ತರಿಸಿದ ರಾಯಲ್ ಚಾಲೆಂ ಜರ್ಸ್ ಬೆಂಗಳೂರು ಟೂರ್ನಿಯಲ್ಲಿ ಸತತ 4ನೇ ಸೋಲು ಅನುಭವಿಸಿದೆ. ಆ ಮೂಲಕ 7 ವಿಕೆಟ್‌ಗಳ ಭರ್ಜರಿ ಗೆಲುವು ದಾಖ ಲಿಸಿದ ಮುಂಬೈ ಇಂಡಿಯನ್ಸ್ ಅಂಕ ಪಟ್ಟಿಯಲ್ಲಿ 7ನೇ ಸ್ಥಾನ ಅಲಂಕರಿಸಿದೆ.

ಇಲ್ಲಿನ ವಾಂಖೇಡೆ ಮೈದಾನದಲ್ಲಿ ಬೆಂಗಳೂರು ನೀಡಿದ 197 ರನ್‌ಗಳ ಬೃಹತ್ ಗೆಲುವಿನ ಗುರಿ ಬೆನ್ನತ್ತಿದ ಮುಂಬೈ ಇಂಡಿ ಯನ್ಸ್‌ಗೆ ಮೊದಲ ವಿಕೆಟ್‌ಗೆ 101 ರನ್‌ಗಳ ಜೊತೆಯಾಟವಾಡುವ ಮೂಲಕ ಮಾಜಿ ನಾಯಕ ರೋಹಿತ್ ಶರ್ಮಾ ಹಾಗೂ ಇಶಾನ್ ಕಿಶನ್ ಉತ್ತಮ ಆರಂಭ ಒದಗಿ ಸಿದರು. ಈ ವೇಳೆ 34 ಎಸೆತಗಳಲ್ಲಿ 5 ಸಿಕ್ಸರ್, 7 ಬೌಂಡರಿ ಒಳಗೊಂಡ 69 ರನ್ ಗಳಿಸಿ ಇಶಾನ್ ಕಿಶನ್ ವಿಕೆಟ್ ಒಪ್ಪಿಸಿದರು. ಮತ್ತೊಂದೆಡೆ ಉತ್ತಮವಾಗಿ ಆಡುತ್ತಿದ್ದ ರೋಹಿತ್ ಕೂಡ ತಲಾ 3 ಸಿಕ್ಸರ್, ಬೌಂಡರಿ ಒಳಗೊಂಡ 38 ರನ್ ಗಳಿಸಿ ನಿರ್ಗಮಿಸಿದರು. ಗಾಯಗೊಂಡು ತಂಡದಿಂದ ಹೊರಗಿದ್ದ ಸೂರ್ಯಕುಮಾರ್ ಯಾದವ್ ತಮ್ಮ ಎಂದಿನ ಲಯದಲ್ಲಿ ಬ್ಯಾಟ್ ಬೀಸಿದರು. ಕೇವಲ 19 ಎಸೆತದಲ್ಲಿ 5 ಬೌಂಡರಿ, 4 ಸಿಕ್ಸರ್ ಒಳಗೊಂಡ 52 ರನ್ ಸಿಡಿಸಿ ವಿಕೆಟ್ ಒಪ್ಪಿಸಿದರು. ಕೊನೆ ಯಲ್ಲಿ ನಾಯಕ ಹಾರ್ದಿಕ್ ಪಾಂಡ್ಯ 21, ತಿಲಕ್ ವರ್ಮಾ ಅಜೇಯ 16 ರನ್ ಗಳಿಸಿ ದರು. ಅಂತಿಮವಾಗಿ ಮುಂಬೈ 15.3 ಓವರ್‌ಗಳಲ್ಲಿ 3 ವಿಕೆಟ್ ನಷ್ಟಕ್ಕೆ 199 ರನ್ ಗಳಿಸುವ ಮೂಲಕ ಜಯದ ನಗೆ ಬೀರಿತು. ಆರ್‌ಸಿಬಿ ಪರ ವಿಲ್ ಜಾಕ್ಸ್, ಆಕಾಶ್ ದೀಪ್ ಹಾಗೂ ವಿಜಯ್ ಕುಮಾರ್ ವೈಶಾಖ್ ತಲಾ ಒಂದೊಂದು ವಿಕೆಟ್ ಪಡೆದರು.

ಇದಕ್ಕೂ ಮುನ್ನಾ ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿದ ರಾಯಲ್ ಚಾಲೆಂಜರ್ಸ್ ಬೆಂಗಳೂರು 20 ಓವರ್ ಗಳಲ್ಲಿ 8 ವಿಕೆಟ್ ನಷ್ಟಕ್ಕೆ 196 ರನ್ ಗಳಿಸಿತು. ಆರ್‌ಸಿಬಿ ಪರ ನಾಯಕ ಡುಪ್ಲೆಸಿಸ್ 40 ಎಸೆತಗಳಲ್ಲಿ 4 ಬೌಂಡರಿ, 3 ಸಿಕ್ಸರ್ ಒಳ ಗೊಂಡ 61, ರಜತ್ ಪಾಟೀದಾರ್ 26 ಎಸೆತಗಳಲ್ಲಿ 3 ಬೌಂಡರಿ, 4 ಸಿಕ್ಸರ್ ಒಳ ಗೊಂಡ 50 ಹಾಗೂ ದಿನೇಶ್ ಕಾರ್ತಿಕ್ 23 ಎಸೆತಗಳಲ್ಲಿ 5 ಬೌಂಡರಿ, 4 ಸಿಕ್ಸರ್ ಒಳಗೊಂಡ 53 ರನ್ ಗಳಿಸಿದರು. ಉಳಿದ ವರು ಎರಡಂಕಿ ಮೊತ್ತ ದಾಖಲಿಸಲು ವಿಫಲವಾದರು. ಮುಂಬೈ ಪರ ಜಸ್‌ಪ್ರೀತ್ ಬುಮ್ರಾ 5 ವಿಕೆಟ್ ಪಡೆದು ಮಿಂಚಿದರೇ, ಶ್ರೇಯಸ್ ಗೋಪಾಲ್, ಆಕಾಶ್ ಮದ್ವಲ್ ಹಾಗೂ ಜೆರಾಲ್ಡ್ ಕೊಯೆಟ್ಜಿ ತಲಾ ಒಂದೊಂದು ವಿಕೆಟ್ ಕಬಳಿಸಿದರು. ಮುಂಬೈ ಪರ ಜಸ್‌ಪ್ರೀತ್ ಬುಮ್ರಾ ಪಂದ್ಯಶ್ರೇಷ್ಠ ಪ್ರಶಸ್ತಿಗೆ ಭಾಜನರಾದರು.

ಇಂದಿನ ಪಂದ್ಯ (ಏ.12)
ಲಕ್ನೋ ಸೂಪರ್ ಜೈಂಟ್ಸ್ / ಡೆಲ್ಲಿ ಕ್ಯಾಪಿಟಲ್ಸ್
ಸ್ಥಳ: ಲಕ್ನೋ, ಭಾರತ್‌ರತ್ನ ಶ್ರೀ ಅಟಲ್ ಬಿಹಾರಿ ವಾಜಪೇಯಿ ಏಕನಾ ಕ್ರೀಡಾಂಗಣ.
ಸಮಯ: ಸಂಜೆ 7.30ಕ್ಕೆ

ದೆಹಲಿ ಅಬಕಾರಿ ನೀತಿ ಹಗರಣ

ಕೆಸಿಆರ್ ಪುತ್ರಿ ಕೆ.ಕವಿತಾ ಬಂಧಿಸಿದ ಸಿಬಿಐ!



ನವದೆಹಲಿ, ಏ.11– ದೆಹಲಿ ಅಬಕಾರಿ ನೀತಿ ಹಗರಣಕ್ಕೆ ಸಂಬಂಧಿಸಿದ ಭ್ರಷ್ಟಾ ಚಾರ ಪ್ರಕರಣದಲ್ಲಿ ರಾಷ್ಟ್ರೀಯ ತನಿಖಾ ದಳ (CBI) ಭಾರತ್ ರಾಷ್ಟ್ರ ಸಮಿತಿ (ಬಿಆರ್‌ಎಸ್) ಮುಖಂಡ ಕೆ. ಕವಿತಾ ರನ್ನು ಇಂದು ಬಂಧಿಸಿದೆ.

ತೆಲಂಗಾಣ ಮಾಜಿ ಮುಖ್ಯಮಂತ್ರಿ ಕೆ.ಚಂದ್ರಶೇಖರ ರಾವ್ ಅವರ ಪುತ್ರಿ ಕೆ. ಕವಿತಾ ಅವರನ್ನು ಜಾರಿ ನಿರ್ದೇಶನಾಲಯ (ಇಡಿ) ಬಂಧಿಸಿತ್ತು. ಸದ್ಯ ತಿಹಾರ್ ಜೈಲಿನಲ್ಲಿದ್ದ ಕವಿತಾರನ್ನು ಅಲ್ಲಿಂದ ಸಿಬಿಐ ಬಂಧಿಸಿದೆ. ಆಕೆಯ ಬಂಧನದ ನಂತರ ದೆಹಲಿಯ ರೋಸ್ ಅವೆನ್ಯೂ ಕೋರ್ಟ್‌ಗೆ ಹಾಜರುಪಡಿಸಲಾಗುವುದು.

ಇದಕ್ಕೂ ಮುನ್ನ ಸಿಬಿಐ ಅಧಿಕಾರಿಗಳು ವಿಶೇಷ ನ್ಯಾಯಾಲಯದಿಂದ ಅನುಮತಿ ಪಡೆದು ಜೈಲು ಪ್ರವೇಶಿಸಿದ್ದು ಕವಿತಾರನ್ನು ವಿಚಾರಣೆ ನಡೆಸಿದ್ದರು. ಈ ವೇಳೆ ಕವಿತಾ ಅವರು ಸಹ ಆರೋಪಿಗಳ ಫೋನ್‌ನಿಂದ ವಶಪಡಿಸಿಕೊಂಡ ಭೂ ವ್ಯವಹಾರಕ್ಕೆ ಸಂಬಂಧಿಸಿದ ವಾಟ್ಸಾಪ್ ಚಾಟ್‌ಗಳು ಮತ್ತು ದಾಖಲೆಗಳ ಬಗ್ಗೆ ಪ್ರಶ್ನಿಸಲಾಯಿತು. ಅಬಕಾರಿ ನೀತಿಯನ್ನು ಬದಲಾಯಿಸಲು ಆಮ್ ಆದ್ಮಿ ಪಕ್ಷಕ್ಕೆ (ಎಎಪಿ) 100 ಕೋಟಿ ಲಂಚ ನೀಡಲಾಗಿದೆ ಎಂದು ಆರೋಪಿಸ ಲಾಗಿದೆ. ಈ ಪ್ರಕರಣದಲ್ಲಿ ಬಿಆರ್‌ಎಸ್ ನಾಯಕನನ್ನು ವಿಚಾರಣೆಗೆ ಒಳಪಡಿಸಲು ಸಿಬಿಐ ಅಧಿಕಾರಿಗಳು ಶನಿವಾರ ತಿಹಾರ್ ಜೈಲಿಗೆ ತೆರಳಿದ್ದರು ಎಂದು ವರದಿಯಾಗಿದೆ.

ಮಾರ್ಚ್ 15ರಂದು ಹೈದರಾಬಾದ್‌ನ ಬಂಜಾರಾ ಹಿಲ್ಸ್‌ನಲ್ಲಿರುವ ಕವಿತಾರ ನಿವಾಸದಿಂದ ಇಡಿ ಅವರನ್ನು ಬಂಧಿ ಸಿತ್ತು. ಅಲ್ಲದೆ ನ್ಯಾಯಾಂಗ ಬಂಧನವನ್ನು ಏ.23 ರವರೆಗೆ ವಿಸ್ತರಿಸಲಾಗಿದೆ. ಇಡಿ ನ್ಯಾಯಾಲಯದ ಮುಂದೆ ಬಿಆರ್‌ಎಸ್ ಎಂಎಲ್‌ಸಿ ಕೆ. ಕವಿತಾ ಸಾಕ್ಷಿಗಳ ಮೇಲೆ ಪ್ರಭಾವ ಬೀರಲು ಯತ್ನಿಸಿದ್ದಾರೆ. ಅಲ್ಲದೆ ಸಾಕ್ಷ್ಯವನ್ನು ಹಾಳು ಮಾಡಿದ್ದಾರೆ ಎಂದು ಆರೋಪಿಸಿದೆ.

ಕೆ.ಕವಿತಾ ಅವರು ಆಮ್ ಆದ್ಮಿ ಪಕ್ಷದ ನಾಯಕರೊಂದಿಗೆ ಪಿತೂರಿ ನಡೆಸಿದ್ದಾರೆ ಎಂದು ಇಡಿ ಹೇಳಿಕೊಂಡಿದೆ. ಇದರ ಅಡಿಯಲ್ಲಿ ದೆಹಲಿ ಮದ್ಯ ನೀತಿಯಲ್ಲಿ ಪ್ರಯೋಜನಗಳನ್ನು ಪಡೆಯಲು ಎಎಪಿ ನಾಯಕರಿಗೆ ಸುಮಾರು 100 ಕೋಟಿ ರೂ. ಕೆ. ಕವಿತಾ ಲಂಚ ನೀಡಿದ್ದಾರೆ ಎಂದು ಹೇಳಲಾಗುತ್ತಿದೆ. ದೆಹಲಿ ಮದ್ಯ ನೀತಿ ಪ್ರಕರಣದಲ್ಲಿ ಇಡಿ ಇದುವರೆಗೆ ದೇಶಾದ್ಯಂತ 245 ಸ್ಥಳಗಳಲ್ಲಿ ದಾಳಿ ನಡೆಸಿದ್ದು, ದೆಹಲಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್, ಮನೀಶ್ ಸಿಸೋಡಿಯಾ, ಸಂಜಯ್ ಸಿನ್ಹಾ ಮತ್ತು ವಿಜಯ್ ನಾಯರ್ ಸೇರಿದಂತೆ 15 ಜನರನ್ನು ಬಂಧಿಸಲಾಗಿದೆ.

ಕಾಂಗ್ರೆಸ್‌ಗೆ ನೀಡುವ ಪ್ರತಿ ಮತ ಭ್ರಷ್ಟಾಚಾರ, ದೇಶದ ಅಭದ್ರತೆಗೆ ನಾಂದಿ

- ಮಾಜಿ ಸಿಎಂ ಯಡಿಯೂರಪ್ಪ ಎಚ್ಚರಿಕೆ
- ಪ್ರಧಾನಿ ಮೋದಿಯಿಂದಲೇ ದೇಶ ಸದೃಢ, ಸುರಕ್ಷಿತ; ಆರ್ಥಿಕ ಪ್ರಗತಿ
- ಕಳೆದ ಹತ್ತು ತಿಂಗಳಿಂದ ಸಿಎಂ ಸಿದ್ದರಾಮಯ್ಯ ಜಪ



ಸುದ್ದಿಗೋಷ್ಠಿಯಲ್ಲಿ ಮಾಜಿ ಸಿಎಂ ಬಿ.ಎಸ್.ಯಡಿಯೂರಪ್ಪ ಮಾತನಾಡಿದರು.

ಬೆಂಗಳೂರು, ಏ.11(ಕೆಎಂಶಿ)– ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್‌ಗೆ ಕೊಡುವ ಮತ ಭ್ರಷ್ಟಾಚಾರಕ್ಕೆ ಮತ್ತು ದೇಶದ ಅಭದ್ರತೆಗೆ ನೀಡುವ ಮತ ವಾಗಿರುತ್ತದೆ ಎಂದು ಮಾಜಿ ಮುಖ್ಯ ಮಂತ್ರಿ ಬಿ.ಎಸ್.ಯಡಿಯೂರಪ್ಪ ಇಂದಿಲ್ಲಿ ತಿಳಿಸಿದ್ದಾರೆ.

ಪ್ರಧಾನಿ ನರೇಂದ್ರ ಮೋದಿ ಅವರ ನಾಯಕತ್ವ ಮತ್ತು ಅವರ ಗ್ಯಾರಂಟಿಗೆ ಮತ ನೀಡುವುದರಿಂದ ಸದೃಢ, ಸುರಕ್ಷಿತ ಭಾರತದ ಆರ್ಥಿಕ ಪ್ರಗತಿಗೆ ಹಾಗೂ ದೇಶದ ಸರ್ವಾಂಗೀಣ ಅಭಿವೃದ್ಧಿಗೆ ಸಹಕಾರಿಯಾಗಲಿದೆ ಎಂದಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಾಂಗ್ರೆಸ್‌ಗೆ ಮತ ನೀಡಿದರೆ ಆಂತರಿಕ ಸುರಕ್ಷತೆಯ ಅಪಾಯಕ್ಕೆ ನಾಂದಿಯಾಗುತ್ತದೆ. ಮತ ನೀಡುವ ಮುನ್ನ ರಾಷ್ಟ್ರದ ಭದ್ರತೆ ಮತ್ತು ಐಕ್ಯತೆ ಯನ್ನು ಗಮನದಲ್ಲಿಟ್ಟುಕೊಂಡು ಎನ್‌ಡಿಎ ಅಭ್ಯರ್ಥಿಗಳಿಗೆ ಮತ ಹಾಕಿ ಎಂದು ಮನವಿ ಮಾಡಿದರು. ದೇಶ ವಿಭಜನೆಯ ಅಪಸ್ವರ ಎತ್ತುವವರನ್ನು, ಜನರನ್ನು ಭಾಷೆ, ಜಾತಿ ಮತ್ತು ಧರ್ಮದ ಹೆಸರಿ ನಲ್ಲಿ ಒಡೆಯುವ ಇಂಡಿಯಾ ಮೈತ್ರಿ ಕೂಟವನ್ನು ಜನತೆ ಸಾರಾಸಗಟಾಗಿ ತಿರಸ್ಕರಿಸುವಂತೆ ಕೋರಿದರು. ಮೋದಿ ಅವರು ಗ್ಯಾರಂಟಿ ನೀಡಿದರೆ ಅದು ಜಾರಿಗೆ ಬಂದೇ ಬರುತ್ತದೆ, ಪೊಳ್ಳು ಆಶ್ವಾಸನೆ ನೀಡುವ ಪ್ರಶ್ನೆಯೇ ಇಲ್ಲವಾಗಿದೆ ಎಂಬುದನ್ನು ರಾಷ್ಟ್ರದ ಜನತೆ ನಂಬಿದ್ದಾರೆ. ಕಾಂಗ್ರೆಸ್ ಪಕ್ಷ ಸುಳ್ಳಿನ ಕಂತೆಯ ಪ್ರಣಾಳಿಕೆಯಂತೆ, ಬಿಜೆಪಿ ಜನರ ದಾರಿ ತಪ್ಪಿಸುವ ಕೆಲಸ ಮಾಡುವುದಿಲ್ಲ ಎಂದು ಸ್ಪಷ್ಟನೆ ನೀಡಿದರು. ರಾಜ್ಯದಲ್ಲಿ ಕಳೆದ 10 ತಿಂಗಳಲ್ಲಿ ಯಾವುದೇ ಅಭಿವೃದ್ಧಿಯನ್ನು ಮಾಡದೆ, ಸಿದ್ದರಾಮಯ್ಯ ಸರ್ಕಾರ ಬರೀ ಗ್ಯಾರಂಟಿಯಲ್ಲೇ ಜಪ ಮಾಡಿ ಕೊಂಡು ಕಳೆದಿದೆ, ಇಂತಹವರಿಗೆ ಮತ ನೀಡಿ ವ್ಯರ್ಥ ಮಾಡಿಕೊಳ್ಳಬೇಡಿ ಎಂದರು. ಸಿದ್ದರಾಮಯ್ಯ ಸೇರಿದಂತೆ ಅವರ ಸಂಪುಟ ಸದಸ್ಯರು ಕೇಂದ್ರ ಸರ್ಕಾರದ ವಿರುದ್ಧ ಪದೇ ಪದೆ ಹರಿ ಹಾಯುತ್ತಲೇ ಬಂದಿದ್ದಾರೆ. ಎರಡು ಕೋಟಿ ಉದ್ಯೋಗ ಕೊಟ್ಟರಾ ಎಂದು ಪ್ರಶ್ನೆ ಮಾಡುತ್ತಿದ್ದಾರೆ. 2014ರಿಂದ ಈವರೆಗೂ 7 ಕೋಟಿ ಹೊಸ ಉದ್ಯೋಗ ಸೇರ್ಪಡೆಯಾಗಿದೆ, ಎಂಎಸ್‌ಎಂಇ ಸಂಖ್ಯೆ ಕೂಡ ಹೆಚ್ಚಳವಾಗಿದೆ ಎಂದರು.

ರಾಷ್ಟ್ರೀಯ ಹೆದ್ದಾರಿ 3,234 ಕಿ.ಮೀ ಬಿಜೆಪಿ ಅವಧಿಯಲ್ಲಿ ಆಗಿದೆ, ಪ್ರತಿ ದಿನ 33 ಕಿ.ಮೀ ರಸ್ತೆ ಮಾಡಲಾಗು ತ್ತಿದೆ, ಕರ್ನಾಟಕದಲ್ಲಿ ರೈಲ್ವೇ ಯೋಜನೆಯನ್ನು ವಿದ್ಯುದ್ದೀಕರಣ ಮಾಡಲಾಗಿದೆ. ಆರು ವಂದೇ ಭಾರತ್ ರೈಲು ಸಂಚಾರ ಮಾಡುತ್ತಿವೆ.


ರಾಜ್ಯದ 54 ಲಕ್ಷ ರೈತರಿಗೆ ಕಿಸಾನ್ ಸಮ್ಮಾನ್ ಯೋಜನೆ ಮೂಲಕ ಆರು ಸಾವಿರ ರೂ. ಕೊಡಲಾಗುತ್ತಿದೆ. ಇದ ರೊಂದಿಗೆ ಬಿಜೆಪಿ ಅಧಿಕಾರದಲ್ಲಿದ್ದಾಗ ಹೆಚ್ಚುವರಿಯಾಗಿ ನಾಲ್ಕು ಸಾವಿರ ರೂ. ರೈತರಿಗೆ ನೀಡುತ್ತಿದ್ದೆವು, ಈಗಿನ ರಾಜ್ಯ ಸರ್ಕಾರ ಅದನ್ನು ನಿಲ್ಲಿಸಿದೆ.

ಕೇಂದ್ರದ ಹತ್ತು ವರ್ಷಗಳ ಸಾಧನೆ ಭಾರತವನ್ನು ಅಭಿವೃದ್ಧಿಯತ್ತ ಕೊಂಡೊ ಯ್ಯುತ್ತಿದೆ, ವಿಶ್ವದ ಆರ್ಥಿಕ ಅಭಿವೃದ್ಧಿ ಯಲ್ಲಿ ಐದನೇ ಸ್ಥಾನದಲ್ಲಿ ಭಾರತ ಇದೆ. ಇದಕ್ಕೆ ಕಾರಣ ಪ್ರಧಾನಿ ನರೇಂದ್ರ ಮೋದಿ. ಅಯೋಧ್ಯೆಯಲ್ಲಿ ರಾಮ ಮಂದಿರ ನಿರ್ಮಾಣ, ಕೇದಾರನಾಥ ಜೀರ್ಣೋದ್ಧಾರ, ಎಕ್ಸ್‌ಪ್ರೆಸ್ ಕಾರಿಡಾರ್, ಸಂವಿಧಾನ ವಿಧಿ 370 ರದ್ದು, 21 ಲಕ್ಷ ನಿವೃತ್ತ ಯೋಧರಿಗೆ ಒಂದು ಶ್ರೇಣಿ ಒಂದು ಪೆನ್ಷನ್. ಕೇಂದ್ರದಿಂದ ರಾಜ್ಯಕ್ಕೆ 1.85 ಲಕ್ಷ ಕೋಟಿ ರೂ. ತೆರಿಗೆ ಹಣ ಪಾವತಿಯಾಗಿದೆ. ಜಲ ಜೀವನ್ ಮಿಷನ್ ಯೋಜನೆಯಡಿ ಲಕ್ಷಾಂತರ ಮನೆಗೆ ನಲ್ಲಿ ನೀರು ಹರಿಸಲಾಗಿದೆ, ಸುಕನ್ಯಾ ಸಮೃದ್ಧಿ ಯೋಜನೆ ಜಾರಿಗೆ ತರಲಾಗಿದೆ.

ಗರೀಬ್ ಕಲ್ಯಾಣ ಯೋಜನೆ ಮೂಲಕ 70 ಲಕ್ಷ ಮೆಟ್ರಿಕ್ ಟನ್ ಆಹಾರಧಾನ್ಯ ಬಿಡುಗಡೆ ಮಾಡಲಾಗಿದೆ. ರಾಜ್ಯದಲ್ಲಿ ಐಐಡಿ, ವಿಧಿ ವಿಜ್ಞಾನ ಪ್ರಯೋಗಾ ಲಯಗಳನ್ನು ತೆರೆಯಲಾಗಿದೆ, ಬೆಂಗಳೂರಿನಲ್ಲಿ ಸ್ಯಾಟಲೈಟ್ ರಿಂಗ್ ರೋಡ್ ನಿರ್ಮಾಣಕ್ಕೆ ಭಾರತ್ ಮಾಲಾ ಯೋಜನೆಯಡಿ ಹಣ ಬಿಡುಗಡೆಗೆ ತಯಾರಿ ನಡೆಯುತ್ತಿದೆ.

ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ಟರ್ಮಿನಲ್–2 ಕಾರ್ಯಾ ರಂಭವಾಗಿದೆ ಎಂದು ಯಡಿಯೂ ರಪ್ಪ ಕೇಂದ್ರದಿಂದ ರಾಜ್ಯಕ್ಕೆ ನೀಡಲಾದ ಕಾರ್ಯಕ್ರಮಗಳ ಪಟ್ಟಿ ನೀಡಿದರು.

ಹರ್ಷ ನಿಧನ




ಮೈಸೂರು, ಏ.11– ಮೈಸೂರಿನ ಕುವೆಂಪುನಗರ ನಿವಾಸಿ, ವಿಡಿಯೋ ಛಾಯಾಗ್ರಾಹಕ ಹರ್ಷ(48) ಅನಾರೋಗ್ಯದಿಂದ ಗುರುವಾರ ನಿಧನರಾಗಿದ್ದಾರೆ.

ಮೃತರು ತಾಯಿ, ಪತ್ನಿ, ಓರ್ವ ಪುತ್ರಿ, ಓರ್ವ ಪುತ್ರ ಸೇರಿದಂತೆ ಅಪಾರ ಬಂಧು–ಬಳಗವನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ನಾಳೆ(ಏ.12) ಬೆಳಗ್ಗೆ 11 ಗಂಟೆಗೆ ಕೆ.ಜಿ.ಕೊಪ್ಪಲು ರುದ್ರಭೂಮಿಯಲ್ಲಿ ನೆರವೇರಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಅತ್ಯುನ್ನತ ಶ್ರೇಣಿಯಲ್ಲಿ ತೇರ್ಗಡೆ



ಮೈಸೂರು, ಏ.11– ಕುವೆಂಪುನಗರದ ಬಿಜಿಎಸ್ ಪಿಯು ಕಾಲೇಜಿನ ವಿದ್ಯಾರ್ಥಿನಿ ಹಾಗೂ ಕೆಎಸ್‌ಆರ್‌ಟಿಸಿ ಮೈಸೂರು ವಿಭಾಗದ ಸಿಬ್ಬಂದಿ ಹೆಚ್.ಬಿ.ಬಸವರಾಜು ಮತ್ತು ಬಿ. ಸೌಭಾಗ್ಯ ದಂಪತಿ ಪುತ್ರಿ ಬಿ.ಸೌಂದರ್ಯ ವಿಜ್ಞಾನ ವಿಭಾಗದಲ್ಲಿ 600ಕ್ಕೆ 559 ಅಂಕಗಳಿಸಿದ್ದಾರೆ.



ನುಡಿದಂತೆ ನಡೆದಿದ್ದೇವೆ, ಕಾಂಗ್ರೆಸ್ ಬೆಂಬಲಿಸುವಂತೆ ಧೈರ್ಯವಾಗಿ ಮತ ಕೇಳಿ

ದಲಿತ ಸಮಾಜದ ಮುಖಂಡರ ಸಮಾವೇಶದಲ್ಲಿ ಕಾಂಗ್ರೆಸ್ ಕಾರ್ಯಕರ್ತರಿಗೆ ಸಚಿವ ಕೆ.ಹೆಚ್.ಮುನಿಯಪ್ಪ ಸಲಹೆ

ಮೈಸೂರು,ಏ.11(ಬಿಎಲ್‌ಯು)– ರಾಜ್ಯ ಕಾಂಗ್ರೆಸ್ ಸರ್ಕಾರ ನುಡಿದಂತೆ ನಡೆದಿದ್ದು, ಜನರ ಬಳಿ ಧೈರ್ಯದಿಂದ ಮತ ಕೇಳಿ. ನಿಮ್ಮ ಮನವಿಗೆ ಸ್ಪಂದಿಸಿ ಜನರು ಕಾಂಗ್ರೆಸ್ ಬೆಂಬಲಿಸುತ್ತಾರೆ ಎಂದು ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ಕೆ.ಹೆಚ್.ಮುನಿಯಪ್ಪ ಕಾಂಗ್ರೆಸ್ ಕಾರ್ಯಕರ್ತರಿಗೆ ಸಲಹೆ ನೀಡಿದ್ದಾರೆ.

ಮೈಸೂರಿನ ಹೂಟಗಳ್ಳಿಯ ಖಾಸಗಿ ಕಲ್ಯಾಣ ಮಂಟಪದಲ್ಲಿ ಇಂದು ಮೈಸೂರು ಜಿಲ್ಲಾ ದಲಿತ ಸಂಘಟನೆಗಳ ಒಕ್ಕೂಟ ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷ ಬೆಂಬಲಿಸಿ ಆಯೋಜಿಸಿದ್ದ ದಲಿತ ಸಮಾಜದ ಮುಖಂಡರ ಸಮಾವೇಶ ಉದ್ಘಾಟಿಸಿ ಮಾತನಾಡಿದ ಅವರು, ಕರ್ನಾಟಕದ ಪ್ರತಿಯೊಬ್ಬ ಪ್ರಜೆಗೂ ರಾಜ್ಯ ಕಾಂಗ್ರೆಸ್ ಸರ್ಕಾರದ ಗ್ಯಾರಂಟಿ ಯೋಜನೆಗಳ ಉಪಯೋಗ ದೊರೆತಿದೆ ಎಂದರು.

ಯಾರು ಕೂಡ ಹಸಿವಿನಿಂದ ಬಳಲಬಾರದು ಎಂಬ ದೃಷ್ಟಿಯಿಂದ ಕೇಂದ್ರದ ಅಂದಿನ ಯುಪಿಎ ಸರ್ಕಾರ ರಾಷ್ಟ್ರೀಯ ಆಹಾರ ಭದ್ರತೆ ಕಾಯ್ದೆ ಜಾರಿಗೊಳಿಸಿತು. ನಂತರ ಬಂದ ಬಿಜೆಪಿ ಸರ್ಕಾರ ಅದನ್ನು ಮುಂದುವರೆಸಿತು. ಇಂತಹ ಮಹತ್ವದ ತೀರ್ಮಾನ ಕೈಗೊಂಡ ದೇಶದ ಮೊದಲ ಸರ್ಕಾರ ಕಾಂಗ್ರೆಸ್ ಸರ್ಕಾರ ಎಂದು ಮುನಿಯಪ್ಪ ಹೆಮ್ಮೆಯಿಂದ ನುಡಿದರು.

ಕರ್ನಾಟಕದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ಮೇಲೆ ಅನ್ನಭಾಗ್ಯ ಯೋಜನೆಯಲ್ಲಿ 5 ಕೆ.ಜಿ. ಅಕ್ಕಿ ನೀಡಿತು. ಉಳಿದ 5 ಕೆ.ಜಿ. ಅಕ್ಕಿಗಾಗಿ ಕೇಂದ್ರದ ಬಿಜೆಪಿ ಸರ್ಕಾರಕ್ಕೆ ಮನವಿ ಮಾಡಿದರೆ ಅಕ್ಕಿ ನೀಡದೆ ಮಲತಾಯಿ ಧೋರಣೆ ತಳೆಯಿತು. ಆದ ಕಾರಣ ಅಕ್ಕಿ ಬದಲು ಈಗ ತಲಾ 170 ರೂಪಾಯಿ ನೀಡಲಾಗುತ್ತಿದೆ ಎಂದು ತಿಳಿಸಿದರು.

ಇಂತಹ ಹತ್ತು ಹಲವು ಜನಪರ ನಿರ್ಣಯ ಕೈಗೊಂಡ ಕಾಂಗ್ರೆಸ್ ಸರ್ಕಾರ ನುಡಿದಂತೆ ನಡೆದಿದೆ. ಈ ಹಿನ್ನೆಲೆ ನೀವೆಲ್ಲಾ ಮತದಾರರ ಬಳಿ ಧೈರ್ಯದಿಂದ ಮತ ಕೇಳಿ. ಜನರು ನಿಮಗೆ ಸಕಾರಾತ್ಮಕವಾಗಿ ಸ್ಪಂದಿಸುತ್ತಾರೆ ಎಂದು ಮತ್ತೊಮ್ಮೆ ಸಲಹೆ ನೀಡಿದರು.

ಈ ವೇಳೆ ಮಾತನಾಡಿದ ದಿವಂಗತ ನಿವೃತ್ತ ಐಎಎಸ್ ಅಧಿಕಾರಿ ಕೆ.ಶಿವರಾಂ ಪತ್ನಿ ವಾಣಿ ಶಿವರಾಂ, ಲೋಕಸಭಾ ಚುನಾವಣೆಯಲ್ಲಿ ಟಿಕೆಟ್ ನೀಡುವುದಾಗಿ ಬಿಜೆಪಿ ನಮ್ಮ ಪತಿಗೆ ಭರವಸೆ ನೀಡಿತು. ಅದರಂತೆ ಅವರು ಪಕ್ಷ ಸಂಘಟನೆ ಮಾಡಿದರು. ಆದರೆ ಎರಡು ಬಾರಿ ಟಿಕೆಟ್ ನೀಡದೆ ಬಿಜೆಪಿ ಮೋಸ ಮಾಡಿತು. ಆದ ಕಾರಣ ಈಗ ನೀವೆಲ್ಲಾ ಬಿಜೆಪಿಗೆ ತಕ್ಕ ಪಾಠ ಕಲಿಸಬೇಕು ಎಂದು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ, ಶಾಸಕರಾದ ಹರೀಶ್‌ಗೌಡ, ಡಾ.ತಿಮ್ಮಯ್ಯ, ಮಾಜಿ ಸಂಸದ ಕಾಗಲವಾಡಿ ಶಿವಣ್ಣ, ಮಾಜಿ ಶಾಸಕರಾದ ಎಂ.ಕೆ.ಸೋಮಶೇಖರ್, ಡಾ.ಯತೀಂದ್ರ, ಕೋಟೆ ಶಿವಣ್ಣ, ಮಾಜಿ ಮೇಯರ್ ನಾರಾಯಣ, ಪುರುಷೋತ್ತಮ್ ಸೇರಿದಂತೆ ಇತರರು ವೇದಿಕೆಯಲ್ಲಿ ಉಪಸ್ಥಿತರಿದ್ದರು.



ಮೈಸೂರಿನ ಹೂಟಗಳ್ಳಿಯ ಖಾಸಗಿ ಕಲ್ಯಾಣ ಮಂಟಪದಲ್ಲಿ ಗುರುವಾರ ಮೈಸೂರು ಜಿಲ್ಲಾ ದಲಿತ ಸಂಘಟನೆಗಳ ಒಕ್ಕೂಟ ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ಆಯೋಜಿಸಿದ್ದ ದಲಿತ ಸಮಾಜದ ಮುಖಂಡರ ಸಮಾವೇಶದಲ್ಲಿ ನಾಯಕರು ಒಗ್ಗಟ್ಟು ಪ್ರದರ್ಶಿಸಿದರು.

ಬಿಜೆಪಿ ಬೆಂಬಲಿಸಿದರೆ ಸಂವಿಧಾನ ಬದಲಾವಣೆ ಯತ್ನ

ಮೈಸೂರು: ಬಿಜೆಪಿ ಬೆಂಬಲಿಸಿದರೆ ಸಂವಿಧಾನ ಬದಲಾವಣೆಯಾಗುತ್ತದೆ, ಸಂವಿಧಾನ ಬದಲಾವಣೆಯಾದರೆ ನಮಗೆ, ನಿಮಗೆ ಉಳಿಗಾಲವಿಲ್ಲ ಎಂದು ಮಾಜಿ ಶಾಸಕ ಡಾ.ಯತೀಂದ್ರ ಎಚ್ಚರಿಸಿದ್ದಾರೆ.

ಆರ್‌ಎಸ್‌ಎಸ್ ತತ್ವ ಸಿದ್ಧಾಂತದಂತೆ ಈ ಸರ್ಕಾರ ನಡೆಯುತ್ತಿದೆ. ಬಿಜೆಪಿಯೇನಾದರೂ 400 ಸ್ಥಾನ ಗೆದ್ದರೆ ಖಚಿತವಾಗಿ ಸಂವಿಧಾನ ಬದಲಾವಣೆ ಮಾಡುತ್ತಾರೆ. ಈ ಮಾತನ್ನು ಸಂಸದ ಅನಂತಕುಮಾರ್ ಹೆಗಡೆ ಸೇರಿದಂತೆ ಹಲವು ಈಗಾಗಲೇ ಪುನರುಚ್ಚರಿಸಿದ್ದಾರೆ ಎಂದರು.

ಬಿಜೆಪಿ ಚುನಾವಣೆ ವೇಳೆ ಮಾತ್ರ ದಲಿತರ ಪರವಾಗಿರುತ್ತದೆ. ತರುವಾಯ ಆರ್‌ಎಸ್‌ಎಸ್ ಮಾರ್ಗದರ್ಶದಂತೆ ನಡೆಯುತ್ತದೆ. ಆರ್‌ಎಸ್‌ಎಸ್ ಸಂವಿಧಾನ ವಿರೋಧಿ ಮಾತ್ರವಲ್ಲದೆ ಸಮಾನತೆಯ ವಿರೋಧಿ. ಆರ್‌ಎಸ್‌ಎಸ್ ಎಂದಿಗೂ ಸಂವಿಧಾನ ಒಪ್ಪುವುದಿಲ್ಲ. ಬಿಜೆಪಿಗೆ ಅಧಿಕಾರ ನೀಡಿದರೆ ಆರ್‌ಎಸ್‌ಎಸ್ ತತ್ವ ಸಿದ್ಧಾಂತದಂತೆ ಮತ್ತೆ ಜಾತಿ ವ್ಯವಸ್ಥೆ ಇರುವ ಸನಾತನ ಪದ್ಧತಿ ಜಾರಿಗೊಳಿಸುತ್ತಾರೆ ಎಂದು ಆಪಾದಿಸಿದರು.

ಸಂವಿಧಾನದ ತತ್ವ ಸಿದ್ಧಾಂತದ ವಿರೋಧಿ ನೀತಿ ಆರ್‌ಎಸ್‌ಎಸ್‌ನ ನಿಜವಾದ ಮುಖವಾಡ. ಇದನ್ನು ಅರಿಯದಿದ್ದರೆ ಅಪಾಯ ಕಟ್ಟಿಟ್ಟಬುತ್ತಿ ಎಂದು ಮರು ಎಚ್ಚರಿಸಿದರು. ಸಂವಿಧಾನ ಮುಕ್ತ ಮಾಡಿದರೆ ಪರಿಶಿಷ್ಟ ಜಾತಿ, ಪಂಗಡ ಮತ್ತು ಹಿಂದುಳಿದವರು ಮೀಸಲಾತಿಯಿಂದ ಕೂಡ ಮುಕ್ತವಾಗುತ್ತಾರೆ. ಇದರಿಂದ ಸರ್ಕಾರದಿಂದ ಸಿಗುವ ಸವಲತ್ತು ಇಲ್ಲದಂತಾಗುತ್ತದೆ. ಸಮಾನತೆ ಮಾಯವಾಗುತ್ತದೆ ಎಂದು ತಿಳಿಸಿದರು.

ಬಿಜೆಪಿ ಅಧಿಕಾರಕ್ಕೆ ಬಂದರೆ ಸರ್ವಾಧಿಕಾರ ಮನೋಭಾವದ ಏಕ ವ್ಯಕ್ತಿಗೆ ಅಧಿಕಾರ ಒಪ್ಪಿಸುವ ಹುನ್ನಾರ ನಡೆಯುತ್ತಿದೆ. ತರುವಾಯ ನಾವು, ನೀವೆಲ್ಲಾ ಅಮಾಯಕರಾಗಿ, ಮೂಕರಾಗಿ ನೋಡುತ್ತಾ ಕೈ ಚೆಲ್ಲಿ ಕೂರಬೇಕಾದ ಪರಿಸ್ಥಿತಿ ಬರುತ್ತದೆ ಎಂದು ಎಚ್ಚರಿಕೆ ಸಂದೇಶ ನೀಡಿದರು.

ಈಗಾಗಲೇ ಬಿಜೆಪಿ ಅಧಿಕಾರದಲ್ಲಿರುವ ರಾಜ್ಯಗಳಲ್ಲಿ ದಲಿತರ ಮೇಲಿನ ದೌರ್ಜನ್ಯ ಮಿತಿ ಮೀರಿದೆ. ಶೇಕಡ 45ರಷ್ಟು ಪರಿಶಿಷ್ಟರ ಮೇಲಿನ ದೌರ್ಜನ್ಯವಾದರೆ, ಶೇಕಡ 48ರಷ್ಟು ಪರಿಶಿಷ್ಟ ಪಂಗಡದವರ ಮೇಲೆ ದೌರ್ಜನ್ಯ ನಡೆದಿದೆ. ಇನ್ನು ಆದಿವಾಸಿಗಳಿಗಂತೂ ರಕ್ಷಣೆಯೇ ಇಲ್ಲದಂತಾಗಿದೆ ಎಂದು ದೂರಿದರು.

ಎಡಗೈ ಮತ್ತು ಬಲಗೈ ಸಮುದಾಯದ ಇಬ್ಬರನ್ನು ಕೂರಿಸಿ ಸದಾಶಿವ ಆಯೋಗದ ವರದಿ ಜಾರಿಗಾಗಿ ಒಳ ಮೀಸಲಾತಿಯನ್ನು ನಮ್ಮ ಸರ್ಕಾರ ಶಿಫಾರಸು ಮಾಡಿತ್ತು. ಆದರೆ ದಲಿತ ವಿರೋಧಿ ಬಿಜೆಪಿ ಸರ್ಕಾರ ಸಂಸತ್ತಿನಲ್ಲಿ ಇದನ್ನು ತಿದ್ದುಪಡಿ ತಂದು ಜಾರಿಗೊಳಿಸಲು ಈ ತನಕ ಮುಂದಾಗಿಲ್ಲ. ಈ ಹಿನ್ನೆಲೆ ಸಂವಿಧಾನದ ರಕ್ಷಕನಾಗಿರುವ ಕಾಂಗ್ರೆಸ್ ಬೆಂಬಲಿಸಿ. ಕಾಂಗ್ರೆಸ್ ದಲಿತ ಹಾಗೂ ಹಿಂದುಳಿದ ವರ್ಗದವರ ಪರವಾಗಿ ಕೆಲಸ ಮಾಡಲಿದೆ ಎಂದು ಭರವಸೆ ನೀಡಿದರು.

ಬಿಜೆಪಿ ಕೋಮುವಾದದ ಅಫೀಮು

ಮೈಸೂರು: ಬಿಜೆಪಿಯವರು ಕೋಮುವಾದದ ಅಫೀಮನ್ನು ದೇಶದ ಜನರಲ್ಲಿ ಪ್ರಯೋಗಿಸುತ್ತಿದೆ. ತಲೆಗೆ ತುಂಬುತ್ತಿದ್ದಾರೆ. ಈ ಮೂಲಕ ಭಾವನಾತ್ಮಕ ವಿಚಾರ ಮುಂದಿಟ್ಟು ರಾಜಕೀಯ ಲಾಭ ಪಡೆಯಲು ಮುಂದಾಗಿದ್ದಾರೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ಆರೋಪಿಸಿದ್ದಾರೆ.

ಬಿಜೆಪಿ ಸರ್ಕಾರದ ಅವಧಿಯಲ್ಲಿ ಕೋಮುವಾದ, ಮತೀಯವಾದ ಮತ್ತು ಧರ್ಮ ತೃಷ್ಟೀಕರಣ ಬಿಟ್ಟರೆ ಬೇರೆ ಯಾವುದೇ ರೀತಿಯ ಅಭಿವೃದ್ಧಿ ಮಾಡಿಲ್ಲ. ಇದನ್ನು ಅರಿತು ಲೋಕಸಭಾ ಚುನಾವಣೆಯಲ್ಲಿ ಬಿಜೆಪಿ ಧಿಕ್ಕರಿಸಿ ತಕ್ಕ ಪಾಠ ಕಲಿಸಬೇಕು ಎಂದು ಆಗ್ರಹಿಸಿದರು. ಚಾಮುಂಡೇಶ್ವರಿ ಕ್ಷೇತ್ರದ ಉಪ ಚುನಾವಣೆಯಲ್ಲಿ ಸಿದ್ದರಾಮಯ್ಯ ಅವರ ಮುಂದಿನ ರಾಜಕೀಯ ಭವಿಷ್ಯವಿತ್ತು. ಆ ದಿನದಲ್ಲಿ ದಲಿತ ಹಾಗೂ ಹಿಂದುಳಿದ ವರ್ಗ ಸಿದ್ದರಾಮಯ್ಯ ಅವರ ಕೈ ಹಿಡಿಯಿತು. ಅಂದಿನ ಫಲಿತಾಂಶ ಇತಿಹಾಸದಲ್ಲಿ ದಾಖಲಾಗಿದೆ ಎಂದರು.

ಬಿಜೆಪಿ ಮತ್ತು ಆರ್‌ಎಸ್‌ಎಸ್ ಸಂವಿಧಾನ ಬದಲಾವಣೆಯ ಮಾತುಗಳನ್ನಾಡುತ್ತಿದೆ. ಇದರಿಂದ ಸಂವಿಧಾನ ಬದಲಾವಣೆ ಮಾಡುವ ಹುನ್ನಾರ ನಡೆಯುತ್ತಿದೆ. ಈ ಹಿನ್ನೆಲೆ ಸಂವಿಧಾನ ಅಪಾಯದಲ್ಲಿದೆ ಎಂಬುದನ್ನು ಅರಿಯಿರಿ. ಈ ಮೂಲಕ ಬಿಜೆಪಿ ಧಿಕ್ಕರಿಸಿ, ಸಂವಿಧಾನ ರಕ್ಷನಾಗಿರುವ ಕಾಂಗ್ರೆಸ್ ಬೆಂಬಲಿಸಿ ಎಂದು ಮನವಿ ಮಾಡಿದರು.

ದೇಶದ 145 ಕೋಟಿ ಜನರ ಹಕ್ಕುಗಳನ್ನು ಸಂವಿಧಾನ ರಕ್ಷಿಸುತ್ತಿದೆ. ಸಂವಿಧಾನದ ಜಾಗೃತಿಯಿಂದ ದೇಶದಲ್ಲಿ ಸಂಚಲನವಾಗಿದೆ. ಆದರೆ ಈಗ ಬಿಜೆಪಿ ಸರ್ಕಾರ ಸಂವಿಧಾನವನ್ನೆ ಬದಲಾಯಿಸಿ, ಪರಿಶಿಷ್ಟ ಜಾತಿ, ಪಂಗಡ ಮತ್ತು ಹಿಂದುಳಿದ ವರ್ಗಗಳ ಸವಲತ್ತು ಕಸಿದುಕೊಳ್ಳಲು ಮುಂದಾಗಿದೆ ಎಂದು ಆರೋಪಿಸಿದರು.

ಏಕ ವ್ಯಕ್ತಿ ಪೂಜೆ ಮೂಲಕ ದೇಶದಲ್ಲಿ ಏಕ ಚಕ್ರಾಧಿಪತ್ಯ ಆಡಳಿತ ನಡೆಸುವ ಹುನ್ನಾರ ನಡೆಯುತ್ತಿದೆ. ಈ ಕೆಲಸವನ್ನು ಬಿಜೆಪಿ ಹಾಗೂ ಆರ್‌ಎಸ್‌ಎಸ್ ಮಾಡುತ್ತಿದೆ ಎಂದು ಆಪಾದಿಸಿದರು. ಸಂವಿಧಾನ ಜಾರಿ ಮಾಡುವ ಜಾಗದಲ್ಲಿ ಸಂವಿಧಾನ ವಿರೋಧಿಗಳು ಕುಳಿತಿದ್ದಾರೆ. ಇವರಿಂದ ಸಂವಿಧಾನಕ್ಕೆ ಅಪಾಯ ಆಗುವ ಮೊದಲು ಎಚ್ಚೆತ್ತುಕೊಂಡು ಬಿಜೆಪಿ ಧಿಕ್ಕರಿಸಿ, ಅಧಿಕಾರದಿಂದ ದೂರವಿಡಿ ಎಂದು ಉಸ್ತುವಾರಿ ಸಚಿವ ಡಾ.ಹೆಚ್.ಸಿ. ಮಹದೇವಪ್ಪ ಸಲಹೆ ನೀಡಿದರು.

ನಿವೃತ್ತ ತಹಸೀಲ್ದಾರ್ ಮಹದೇವಯ್ಯ ಇಂದು ಕಾಂಗ್ರೆಸ್ ಸೇರ್ಪಡೆ

ಮೈಸೂರು, ಏ.11(ಜಿಎ)–ಚಾಮರಾಜನಗರ ಕ್ಷೇತ್ರದಿಂದ ಲೋಕಸಭಾ ಚುನಾವಣೆಯಲ್ಲಿ ಬಿಎಸ್‌ಪಿಯಿಂದ ಸ್ಪರ್ಧಿಸಲು ಪ್ರಬಲ ಆಕಾಂಕ್ಷಿಯಾಗಿದ್ದ ನಿವೃತ್ತ ತಹಸೀಲ್ದಾರ್ ಮಹದೇವಯ್ಯ ಏ.12ರಂದು ಮುಖ್ಯಮಂತ್ರಿಗಳ ಸಮ್ಮುಖದಲ್ಲಿ ಕಾಂಗ್ರೆಸ್ ಪಕ್ಷ ಸೇರ್ಪಡೆಯಾಗಲು ನಿರ್ಧರಿಸಿದ್ದಾರೆ.



ಮಹದೇವಯ್ಯ

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಈ ಬಾರಿಯ ಲೋಕಸಭಾ ಚುನಾವಣೆ ವೇಳೆ ಚಾಮರಾಜನಗರ ಕ್ಷೇತ್ರದಿಂದ ಸ್ಪರ್ಧಿಸಲು ತಮಗೆ ಟಿಕೆಟ್ ನೀಡುವುದಾಗಿ ಬಿಎಸ್‌ಪಿ ಪ್ರಕಟಿಸಿತ್ತು. ಆದರೆ ಕೊನೆ ಹಂತದಲ್ಲಿ ಬಿ ಫಾರ್ಮ್ ನೀಡದೇ ವಂಚಿಸಿದೆ. ಈ ಹಿಂದೆಯೂ ಇದೇ ರೀತಿ ಮೋಸ ಮಾಡಿತ್ತು ಹೀಗಾಗಿ ತಾವು ಬಿಎಸ್‌ಪಿ ತೊರೆದು ಏ.12ರಂದು ಕೊಳ್ಳೇಗಾಲದಲ್ಲಿ ಸಿಎಂ ಸಿದ್ದರಾಮಯ್ಯ ಅವರ ಸಮ್ಮುಖದಲ್ಲಿ ಕಾಂಗ್ರೆಸ್ ಸೇರುತ್ತಿರುವುದಾಗಿ ಮಹದೇವಯ್ಯ ತಿಳಿಸಿದರು.

ಬಿಎಸ್‌ಪಿ ಪಕ್ಷ ಸಂಘಟನೆಗಾಗಿ ತಾವು ಅಪಾರ ಶ್ರಮಪಟ್ಟಿದ್ದು, ತಮಗೇ ಟಿಕೆಟ್ ನೀಡುವುದಾಗಿ ನಂಬಿಸಿದ್ದ ಕಾರಣ ಚಾಮರಾಜನಗರ ಕ್ಷೇತ್ರದಲ್ಲಿ ಬಿಎಸ್‌ಪಿಗೆ ಮತ ಸೆಳೆಯಲು ಪ್ರಚಾರ ಸಹಾ ಕೈಗೊಂಡಿದ್ದೆ. ಆದರೆ ಕೊನೆ ಹಂತದಲ್ಲಿ ನಿರಾಕರಿಸಿ ಅಪಮಾನಿಸಿದ್ದಾರೆ. ಹೀಗಾಗಿ ಪಕ್ಷ ತ್ಯಜಿಸುವ ನಿರ್ಧಾರ ಕೈಗೊಂಡಿದ್ದೇನೆ. ಜೊತೆಗೆ ತಮ್ಮ ಬೆಂಬಲಿಗರು ಸಹಾ ಅಂದು ಕಾಂಗ್ರೆಸ್ ಸೇರ್ಪಡೆಯಾಗಲಿದ್ದಾರೆ ಎಂದರು.

ಈ ವೇಳೆ ಕಾಂಗ್ರೆಸ್ ಮುಖಂಡ ಡಾ.ಎಂ.ನಾಗರಾಜು ಮಾತನಾಡಿ, ಮಹದೇವಯ್ಯ ಅವರು ಕಾಂಗ್ರೆಸ್ ಸೇರ್ಪಡೆಯಾಗುವ ಕುರಿತು ಈಗಾಗಲೇ ಪ್ರಮುಖ ಮುಖಂಡರೊಟ್ಟಿಗೆ ಚರ್ಚಿಸಲಾಗಿದ್ದು, ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ಅವರ ಗಮನಕ್ಕೂ ತರಲಾಗಿದೆ. ಮಹದೇವಯ್ಯ ಅವರೊಟ್ಟಿಗೆ ಬೆಂಬಲಿಗರೂ ಕಾಂಗ್ರೆಸ್ ಸೇರ್ಪಡೆಗೊಳ್ಳಲಿದ್ದಾರೆ ಎಂದು ತಿಳಿಸಿದರು.

ಚುನಾವಣೆಯಲ್ಲಿ ಮತದಾರರು ಗ್ಯಾರಂಟಿ ಋಣ ತೀರಿಸಲಿದ್ದಾರೆ

ಕೆಪಿಸಿಸಿ ವಕ್ತಾರ ಹೆಚ್.ಎ.ವೆಂಕಟೇಶ್

ಮೈಸೂರು,ಏ.11(ಜಿಎ)–ಲೋಕಸಭಾ ಚುನಾವಣೆಯಲ್ಲಿ ಸರ್ಕಾರ ಗ್ಯಾರಂಟಿ ಋಣವನ್ನು ಜನತೆ ಮರೆಯದೆ, ಮತ ನೀಡುವ ಮೂಲಕ ಋಣ ತೀರಿಸಿಕೊಳ್ಳಲಿದ್ದಾರೆ ಎಂದು ಕೆಪಿಸಿಸಿ ವಕ್ತಾರ ಹೆಚ್.ಎ.ವೆಂಕಟೇಶ್ ತಿಳಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯದ ಬಗ್ಗೆ ಮಲತಾಯಿ ಧೋರಣೆ ಹೊಂದಿರುವ ಕೇಂದ್ರ ಬಿಜೆಪಿ ಸರ್ಕಾರಕ್ಕೆ ಈ ಬಾರಿ ಲೋಕಸಭಾ ಚುನಾವಣೆಯಲ್ಲಿ ರಾಜ್ಯದ ಮತದಾರರು ತಕ್ಕ ಪಾಠ ಕಲಿಸಲಿದ್ದಾರೆ. ವಿಶ್ವಾಸವಿಟ್ಟು ಕಳೆದ ಬಾರಿ ಅತಿ ಹೆಚ್ಚು ಸ್ಥಾನಗಳನ್ನು ನೀಡಿದ್ದ ರಾಜ್ಯದ ಜನ ಈಗ ಭ್ರಮ ನಿರಸನ ಗೊಂಡಿದ್ದಾರೆ. ಕಾಂಗ್ರೆಸ್‌ನ ಗ್ಯಾರಂಟಿಗಳನ್ನು ಮೆಚ್ಚಿಕೊಂಡಿರುವ ಮತದಾರರು ಕಾಂಗ್ರೆಸ್ ಅಭ್ಯರ್ಥಿಗಳಿಗೆ ಮತ ನೀಡಲಿದ್ದಾರೆ ಎಂದರು.

ರಾಜ್ಯದಿಂದ ಆಯ್ಕೆಯಾದ ಯಾವೊಬ್ಬ ಸಂಸದನೂ ಸಂಸತ್ತಿನಲ್ಲಿ ರಾಜ್ಯದ ಸಮಸ್ಯೆಗಳ ಬಗ್ಗೆ, ರಾಜ್ಯದ ಜನರ ಪರವಾಗಿ ದನಿ ಎತ್ತುವ ಕೆಲಸ ಮಾಡಲಿಲ್ಲ. ಬದಲಿಗೆ ಸದನದಲ್ಲಿ ಮೂಕರಂತೆ ಮೌನವಾಗಿದ್ದರು. ಆ ಮೂಲಕ ರಾಜ್ಯದ ಜನತೆಗೆ ಅಪಮಾನ ಮಾಡಿದರು. ಇದಕ್ಕೆ ಪೂರಕ ಎಂಬಂತೆ ಪ್ರಧಾನಿ ಮೋದಿ ಸಹ ಕರ್ನಾಟಕದ ಜನ ಸಂಕಷ್ಟಕ್ಕೆ ಸಿಲುಕಿದಾಗ ರಕ್ಷಣೆಗೆ ಬರಲಿಲ್ಲ. ಸಹಾಯಹಸ್ತ ಚಾಚಲಿಲ್ಲ. ಬದಲಿಗೆ ಚುನಾವಣೆ ವೇಳೆ ಮತಯಾಚನೆಗೆ ಸಭೆ, ಸಮಾರಂಭ ನಡೆಸಿದರು. ಆದರೆ ಈ ರ‍್ಯಾಲಿಗಳು ರಾಜ್ಯದ ಜನತೆ ಮೇಲೆ ಯಾವುದೇ ಪ್ರಭಾವ ಬೀರಲಿಲ್ಲ ಎಂಬುದು ಕಳೆದ ವಿಧಾನಸಭಾ ಚುನಾವಣೆಯಲ್ಲಿ ಸಾಬೀತಾಗಿದೆ ಎಂದರು.

ಈ ಬಾರಿ ಲೋಕಸಭಾ ಚುನಾವಣೆಯಲ್ಲೂ ಕನ್ನಡಿಗರು ಕೇಂದ್ರ ಸರ್ಕಾರಕ್ಕೆ ತಕ್ಕಪಾಠ ಕಲಿಸುವರು. ವಿಧಾನಸಭಾ ಚುನಾವಣೆಯ ಕಹಿ ಅನುಭವದಿಂದ ಈಗ ಮೋದಿ ಕಾರ್ಯಕ್ರಮಕ್ಕೆ, ಪ್ರಚಾರಕ್ಕೆ ಬೇಡಿಕೆ ಕಡಿಮೆಯಾಗಿದೆ. ಬಿಜೆಪಿ ಅಭ್ಯರ್ಥಿಗಳೇ ಪ್ರಧಾನಿ ರ‍್ಯಾಲಿ ಆಯೋಜನೆಗೆ ಹಿಂದೇಟು ಹಾಕುತ್ತಿದ್ದಾರೆ ಎಂದರು.

ಬರ ಪರಿಹಾರ ವಿತರಣೆಯಲ್ಲಿ ರಾಜ್ಯಕ್ಕೆ ಕೇಂದ್ರ ಸರ್ಕಾರ ಅನ್ಯಾಯ ಮಾಡಿದೆ. ರಾಜ್ಯಕ್ಕೆ ಆಗಿರುವ ಅನ್ಯಾಯದ ಬಗ್ಗೆ ಸರ್ಕಾರ ನ್ಯಾಯಾಲಯದ ಮೊರೆ ಹೋಗುವ ಪರಿಸ್ಥಿತಿ ಬಂದಿದೆ. ನ್ಯಾಯಾಲಯ ಕೂಡ ರಾಜ್ಯಕ್ಕೆ ಆಗಿರುವ ತೊಂದರೆ ಬಗ್ಗೆ ಕೇಂದ್ರ ಸರ್ಕಾರದ ಗಮನಕ್ಕೆ ತಂದಿದೆ. ಈ ರೀತಿಯ ಕೇಂದ್ರದ ಜನವಿರೋಧಿ ನಿಲುವಿನಿಂದ ಜನಸಾಮಾನ್ಯರು ಬೇಸತ್ತಿದ್ದಾರೆ. ಎಲ್ಲಾ ಪಕ್ಷದವರು ಗ್ಯಾರಂಟಿ ಯೋಜನೆಗಳ ಫಲಾನುಭವಿಗಳಾಗಿದ್ದಾರೆ. ಹಾಗಾಗಿ ಮುಂಬರುವ ಲೋಕಸಭಾ ಚುನಾವಣೆಯಲ್ಲಿ ಜನರು ಕಾಂಗ್ರೆಸ್‌ಗೆ ಬೆಂಬಲ ನೀಡುವ ವಿಶ್ವಾಸವಿದೆ ಎಂದರು. ಸುದ್ದಿಗೋಷ್ಠಿಯಲ್ಲಿ ನಗರ ಕಾಂಗ್ರೆಸ್ ಅಧ್ಯಕ್ಷ ಆರ್.ಮೂರ್ತಿ, ಮುಖಂಡರಾದ ಸೀತಾರಾಮು, ಎನ್.ಎಸ್. ಗೋಪಿನಾಥ್, ಭಾಸ್ಕರ್ ಉಪಸ್ಥಿತರಿದ್ದರು.

ಮೈಸೂರು ರೇಷ್ಮೆ ಮಾರುಕಟ್ಟೆಯಲ್ಲಿ ಬೆಳೆಗಾರರಿಗೆ ಅನ್ಯಾಯ

ಏ.19, ರೇಷ್ಮೆ ಮಾರುಕಟ್ಟೆಗೆ ಮುತ್ತಿಗೆ, ಏ.20, ಮಾರುಕಟ್ಟೆ ಬಂದ್

ಇದಕ್ಕೂ ಬಗ್ಗದಿದ್ದರೆ ಲೋಕಸಭಾ ಚುನಾವಣೆ ಬಹಿಷ್ಕಾರ

ಮೈಸೂರು, ಏ.11(ಜಿಎ)–ಮೈಸೂರಿನ ಬಂಡಿಪಾಳ್ಯ ಎಪಿಎಂಸಿ ಆವರಣದಲ್ಲಿರುವ ರೇಷ್ಮೆ ಮಾರುಕಟ್ಟೆಯಲ್ಲಿ ಡೀಲರ್‌ಗಳೊಡನೆ ಅಧಿಕಾರಿಗಳು ಶಾಮೀಲಾಗಿರುವ ಕಾರಣ ರೇಷ್ಮೆ ಬೆಳೆಗಾರರಿಗೆ ರೇಷ್ಮೆಗೂಡಿನ ದರದ ವಿಷಯದಲ್ಲಿ ಅನ್ಯಾಯವಾಗುತ್ತಿದ್ದು, ಇದನ್ನು ವಿರೋಧಿಸಿ ಏ.19ರಂದು ರೇಷ್ಮೆ ಮಾರುಕಟ್ಟೆಗೆ ರೈತರು ಮುತ್ತಿಗೆ ಹಾಕುವುದರೊಂದಿಗೆ ಏ.20ರಂದು ಮಾರುಕಟ್ಟೆ ಬಂದ್ ಮಾಡಲು ಸಾಮೂಹಿಕ ನಾಯಕತ್ವದ ರಾಜ್ಯ ರೈತ ಸಂಘ ನಿರ್ಧರಿಸಿದೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮುಖಂಡ ವಿದ್ಯಾಸಾಗರ್ ಈ ವಿಷಯ ತಿಳಿಸಿ, ವೈಜ್ಞಾನಿಕವಾಗಿ ರೇಷ್ಮೆಗೂಡಿನ ಪರಿಶೀಲನೆ ನಡೆಯುತ್ತಿಲ್ಲ. ಗೂಡಿನ ಗುಣಮಟ್ಟದ ಆಧಾರದ ಮೇಲೆ ಆನ್‌ಲೈನ್‌ನಲ್ಲಿ ಇರುವ ದರ ನಿಗದಿ ಆಗುತ್ತಿಲ್ಲ. ಮಾರುಕಟ್ಟೆಗೆ ಮೊದಲೇ ದಲ್ಲಾಳಿಗಳು ಮತ್ತು ಅಧಿಕಾರಿಗಳು ಶಾಮೀಲಾಗಿ ತಮ್ಮ ಮನಸೋಇಚ್ಛೆ ದರ ನಿಗದಿ ಮಾಡುತ್ತಿದ್ದಾರೆ ಎಂದು ಆರೋಪಿಸಿದರು.

ರಾಮನಗರ ಮಾರುಕಟ್ಟೆಯಲ್ಲಿ ಅತಿ ಕಳಪೆ ಗೂಡಿಗೆ ನಿರ್ಧಾರವಾದ ಬೆಲೆಗಿಂತ ಕಡಿಮೆ ಬೆಲೆಯನ್ನು ಮೈಸೂರಿನ ಉತ್ತಮ ಗೂಡುಗಳಿಗೆ ದರ ನಿಗದಿ ಮಾಡುತ್ತಿದ್ದಾರೆ. ಇದರಿಂದ ಕೆಜಿಗೆ 50ರಿಂದ 60 ರೂ. ಕಡಿಮೆ ದರ ದೊರೆಯುತ್ತಿದೆ. ಅಲ್ಲದೆ, ಮೊದಲನೇ ಹರಾಜು ದರಕ್ಕೆ ಒಪ್ಪದೇ ರೈತ ಎರಡನೇ ಹರಾಜಿಗೆ ಕಾದು ಕುಳಿತಾಗ ಡೀಲರ್‌ಗಳು ಎರಡನೇ ಹರಾಜಿನಲ್ಲಿ ಮೊದಲ ಹರಾಜಿಗಿಂತ ಕೆಜಿಗೆ 15ರಿಂದ 30 ರೂ., ಕಡಿಮೆ ದರಕ್ಕೆ ಕೂಗುತ್ತಿದ್ದಾರೆ. ಈ ಬಗ್ಗೆ ಅಧಿಕಾರಿಗಳನ್ನು ಪ್ರಶ್ನಿಸಿದರೆ, ನಾವೇನೂ ಮಾಡಲಾಗುವುದಿಲ್ಲ ಎಂದು ಉಡಾಫೆ ಉತ್ತರ ನೀಡುತ್ತಿದ್ದಾರೆ. ಹೀಗಾಗಿ ಡೀಲರ್‌ಗಳೊಡನೆ ಶಾಮೀಲಾಗಿರುವ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಬೇಕು. ಉತ್ತಮ ದರ ನಿಗದಿ ಮಾಡಿಸಬೇಕು ಎಂದು ಒತ್ತಾಯಿಸಿ, ಏ.19ರಂದು ಬೆಳಗ್ಗೆ 11 ಗಂಟೆಗೆ ರೇಷ್ಮೆ ಮಾರುಕಟ್ಟೆಗೆ ಮುತ್ತಿಗೆ ಹಾಕಲಾಗುವುದು. ಆಗಲೂ ಸಮಸ್ಯೆ ಬಗೆಹರಿಸದಿದ್ದರೆ ಏ.20ರಂದು ಎಪಿಎಂಸಿ ಸಂಪೂರ್ಣ ಬಂದ್ ಮಾಡಲಾಗುವುದು. ಇದನ್ನು ಸಹಾ ನಿರ್ಲಕ್ಷಿಸಿದಲ್ಲಿ ರೇಷ್ಮೆ ಬೆಳೆಗಾರರು ಲೋಕಸಭಾ ಚುನಾವಣೆ ಬಹಿಷ್ಕರಿಸಲಿದ್ದಾರೆ ಎಂದು ಎಚ್ಚರಿಸಿದರು. ಸುದ್ದಿಗೋಷ್ಠಿಯಲ್ಲಿ ಮುಖಂಡರಾದ ಮಂಜು ಕಿರಣ್, ಇಮ್ಮಾವು ರಘು, ವೆಂಕಟೇಶ್, ಮಾದೇಶ್, ವರಕೋಡು ಕೃಷ್ಣೇಗೌಡ ಉಪಸ್ಥಿತರಿದ್ದರು.



ಮೈಸೂರಿನ ಸುಣ್ಣದಕೇರಿ ಎನ್‌ಎಸ್ ರಸ್ತೆಯಲ್ಲಿರುವ ಮಹದೇಶ್ವರ ದೇವಸ್ಥಾನದಲ್ಲಿ ನೆರವೇರಿದ ಅಮಾವಾಸ್ಯೆ ಪೂಜೆ ವೇಳೆ ವಾಲ್ಮೀಕಿ ಪುತ್ಥಳಿಗೆ ಗೌರವ ಸಲ್ಲಿಸಲಾಯಿತು. ಈ ವೇಳೆ ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಲಕ್ಷ್ಮಣ್, ಶಾಸಕ ಹರೀಶ್‌ಗೌಡ, ಡಿಸಿಸಿ ಕಾರ್ಯದರ್ಶಿ ಗುಡ್ಡಪ್ಪ ಶಿವಣ್ಣ, ಪಾಲಿಕೆ ಮಾಜಿ ಸದಸ್ಯ ಲೋಕೇಶ್ ಪಿಯ, ಮುಖಂಡರಾದ ಶಿವಮಲ್ಲು, ಸತೀಶ್, ನಾಜೀರ್, ಮಹದೇವ್ ಇನ್ನಿತರರು ಉಪಸ್ಥಿತರಿದ್ದರು.

ಮತದಾರರೊಂದಿಗೆ ನಡೆಸುವ ಸಂವಾದ ಕಾರ್ಯಕ್ರಮಗಳ ಒಳಾಂಗಣದಲ್ಲಿ ಆಯೋಜಿಸಿ

ಮೈಸೂರು, ಏ.11– ಲೋಕಸಭಾ ಚುನಾವಣೆ – 2024 ರ ಸಂಬಂಧ ವಿದ್ಯುನ್ಮಾನ ಮಾಧ್ಯಮಗಳು ಅಥವಾ ವಿವಿಧ ಮಾಧ್ಯಮಗಳು ಮತದಾರರೊಂದಿಗೆ ನಡೆಸುವ ಸಂವಾದ ಕಾರ್ಯಕ್ರಮಗಳನ್ನು ಹೊರಾಂಗಣದಲ್ಲಿ ನಡೆಸದೆ, ಒಳಾಂಗಣಗಳಲ್ಲಿ (in door) ಸಹಾಯಕ ಚುನಾವಣಾಧಿಕಾರಿಗಳ ಅನುಮತಿ ಪಡೆದು ಆಯೋಜಿಸಬೇಕು ಎಂದು ಜಿಲ್ಲಾಧಿಕಾರಿಗಳು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಏ.14ಕ್ಕೆ ಮೈಸೂರಿಗೆ ಮೋದಿ: ಪ್ರಚಾರ ಸಭೆ ಸ್ಥಳ ಪರಿಶೀಲಿಸಿದ ಎಸ್‌ಪಿಜಿ



ಮೈಸೂರಿನ ಮಹಾರಾಜ ಕಾಲೇಜು ಮೈದಾನದಲ್ಲಿ ಏ.14ರಂದು ನಡೆಯುವ ಬಿಜೆಪಿ ಕಾರ್ಯಕರ್ತರ ಸಭೆಯಲ್ಲಿ ಪ್ರಧಾನಿ ಮೋದಿ ಪಾಲ್ಗೊಳ್ಳುವುದರಿಂದ ಗುರುವಾರ ಎಸ್‌ಪಿಜಿ ಅಧಿಕಾರಿಗಳು ಸ್ಥಳ ಪರಿಶೀಲನೆ ನಡೆಸಿದರು.

ಮೈಸೂರು,ಏ.11(ಎಂಟಿವೈ)–ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ಸೇರಿದಂತೆ ಹಳೇ ಮೈಸೂರು ಭಾಗದ ಪಕ್ಷದ ಅಭ್ಯರ್ಥಿಗಳ ಪರ ಪ್ರಚಾರಕ್ಕೆ ಏ.14ರಂದು ಪ್ರಧಾನಿ ನರೇಂದ್ರ ಮೋದಿ ಮೈಸೂರು ಆಗಮನದ ಹಿನ್ನೆಲೆಯಲ್ಲಿ ಎಸ್‌ಪಿಜಿ ಅಧಿಕಾರಿಗಳು ಇಂದು ಭೇಟಿ ನೀಡಿ, ಸ್ಥಳ ಪರಿಶೀಲಿಸಿದರು.

ಮೈಸೂರಿನ ಮಹಾರಾಜ ಕಾಲೇಜು ಮೈದಾನದಲ್ಲಿ ಏ.14ರಂದು ಸಂಜೆ ನಡೆಯುವ ಪ್ರಚಾರ ಸಭೆಯಲ್ಲಿ ಪ್ರಧಾನಿ ನರೇಂದ್ರ ಮೋದಿ ಪಾಲ್ಗೊಳ್ಳುವುದರಿಂದ ಎಸ್‌ಪಿಜಿ ಅಧಿಕಾರಿಗಳು ಭದ್ರತಾ ವ್ಯವಸ್ಥೆಯನ್ನು ಪರಾಮರ್ಶಿಸಿದರು.

ಮೈಸೂರು–ಕೊಡಗು ಲೋಕಸಭಾ ಕ್ಷೇತ್ರವನ್ನು ಎರಡೂ ರಾಷ್ಟ್ರೀಯ ಪಕ್ಷಗಳು ಪ್ರತಿಷ್ಠೆಯಾಗಿ ಪರಿಗಣಿಸಿದ್ದು, ಕಣದಲ್ಲಿರುವ ಉಭಯ ಪಕ್ಷಗಳ ಅಭ್ಯರ್ಥಿಗಳ ಪರ ಘಟಾನುಘಟಿಗಳು ಪ್ರಚಾರಕ್ಕೆ ಆಗಮಿಸುತ್ತಿದ್ದು, ಬಿಜೆಪಿ ಅಭ್ಯರ್ಥಿ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ಮಾತ್ರವಲ್ಲದೆ ಮೈಸೂರು ಭಾಗದ ಪಕ್ಷದ ಅಭ್ಯರ್ಥಿಗಳ ಪರ ಮತಯಾಚನೆಗೆ ಪ್ರಧಾನಿ, ಆಗಮಿಸುವುದು ಖಚಿತವಾಗುತ್ತಿದ್ದಂತೆ ದೆಹಲಿಯಿಂದ ಮೂವರು ಎಸ್‌ಪಿಜಿ ಹಿರಿಯ ಅಧಿಕಾರಿಗಳು ಸಮಾವೇಶ ನಡೆಯುವ ಮಹಾರಾಜ ಕಾಲೇಜು ಮೈದಾನದಲ್ಲಿ ಪರಿಶೀಲನೆ ನಡೆಸಿದರು.

ವೇದಿಕೆ, ಪ್ರಧಾನಿ ವೇದಿಕೆಗೆ ಬರಲು ಪ್ರತ್ಯೇಕ ದ್ವಾರ, ರೆಸ್ಟ್ ರೂಮ್, ಮುಖ್ಯ ವೇದಿಕೆಗೂ, ಪಕ್ಷದ ಮುಖಂಡರು ಕುಳಿತುಕೊಳ್ಳುವ ಸ್ಥಳಕ್ಕೂ ಇರಬೇಕಾದ ಅಂತರ ಸೇರಿದಂತೆ ಇನ್ನಿತರ ವಿಷಯಗಳನ್ನು ಗಮನದಲ್ಲಿಟ್ಟುಕೊಂಡು ಪರಿಶೀಲನೆ ನಡೆಸಿದರು. ಈ ವೇಳೆ ಹಿರಿಯ ಅಧಿಕಾರಿಗಳಿಗೆ ಮೊಬೈಲ್ ಮೂಲಕವೇ ಮಾಹಿತಿ ನೀಡಿ, ವೇದಿಕೆ ನಿರ್ಮಾಣ ಕಾರ್ಯ ಪ್ರಗತಿಯಲ್ಲಿರುವ ಮಾಹಿತಿ ನೀಡಿದರು. ಬಳಿಕ ಮೋದಿ ಆಗಮಿಸುವ ಹೆಲಿಕಾಪ್ಟರ್ ಲ್ಯಾಂಡ್ ಆಗುವ ಸ್ಥಳವನ್ನು ಪರಿಶೀಲಿಸಿದರು. ಏ.13ರಂದು ಎಸ್‌ಪಿಜಿ ಅಧಿಕಾರಿಗಳ ಮತ್ತೊಂದು ತಂಡ ಆಗಮಿಸಲಿದ್ದು, ಪೂರ್ಣ ಪ್ರಮಾಣದ ಪರಿಶೀಲಿಸಿ, ವೇದಿಕೆಯಲ್ಲಿ ಯಾವುದಾದರೂ ಮಾರ್ಪಾಡು ಮಾಡಬೇಕಾದರೆ ಸೂಚಿಸಲಿದ್ದಾರೆ.

ಮಹಾರಾಜ ಕಾಲೇಜು ಮೈದಾನದಲ್ಲಿ ಪ್ರಧಾನಿ ಪ್ರಚಾರ ಸಭೆ ವೇದಿಕೆ ನಿರ್ಮಾಣಕ್ಕೆ ಗುದ್ದಲಿಪೂಜೆ



ಮೈಸೂರಿನ ಮಹಾರಾಜ ಕಾಲೇಜು ಮೈದಾನದಲ್ಲಿ ಪ್ರಧಾನಿ ನರೇಂದ್ರ ಮೋದಿ ಪಾಲ್ಗೊಳ್ಳುವ ಸಮಾವೇಶಕ್ಕೆ ವೇದಿಕೆ ನಿರ್ಮಾಣಕ್ಕೆ ಮಾಜಿ ಶಾಸಕ ಎಲ್.ನಾಗೇಂದ್ರ ಗುದ್ದಲಿ ಪೂಜೆ ನೆರವೇರಿಸಿದರು.

ಮೈಸೂರು,ಏ.11(ಎಂಟಿವೈ)– ಮೈಸೂರು ಭಾಗದ ಲೋಕಸಭಾ ಕ್ಷೇತ್ರಗಳಲ್ಲಿ ಪಕ್ಷದ ಅಭ್ಯರ್ಥಿಗಳ ಪರ ಪ್ರಚಾರ ಮಾಡಲು ಏ.14ರಂದು ಮೈಸೂರಿಗೆ ಪ್ರಧಾನಿ ನರೇಂದ್ರ ಮೋದಿ ಆಗಮಿಸುತ್ತಿರುವ ಹಿನ್ನೆಲೆಯಲ್ಲಿ ಮಹಾರಾಜ ಕಾಲೇಜು ಮೈದಾನದಲ್ಲಿ ವೇದಿಕೆ ನಿರ್ಮಾಣಕ್ಕೆ ಬಿಜೆಪಿ ನಗರಾಧ್ಯಕ್ಷರೂ ಆದ ಮಾಜಿ ಶಾಸಕ ಎಲ್.ನಾಗೇಂದ್ರ ಗುದ್ದಲಿ ಪೂಜೆ ನೆರವೇರಿಸಿದರು.

ಮಹಾರಾಜ ಕಾಲೇಜು ಮೈದಾನದಲ್ಲಿ ನಡೆಯುವ ಸಮಾವೇಶದಲ್ಲಿ ಮೈಸೂರು, ಕೊಡಗು, ಚಾಮರಾಜನಗರ, ಮಂಡ್ಯ ಜಿಲ್ಲೆಗಳ ಕಾರ್ಯಕರ್ತರು ಪಾಲ್ಗೊಳ್ಳಲಿದ್ದು, ಒಂದು ಲಕ್ಷಕ್ಕೂ ಅಧಿಕ ಕಾರ್ಯಕರ್ತರು ಪಾಲ್ಗೊಳ್ಳುವ ನಿರೀಕ್ಷೆ ಇದೆ. ಮೋದಿ ಆಗಮನಕ್ಕೆ ಕೇವಲ ಮೂರು ದಿನ ಮಾತ್ರ ಇದ್ದು, ಈ ಹಿನ್ನೆಲೆಯಲ್ಲಿ ವೇದಿಕೆ ನಿರ್ಮಾಣಕ್ಕೆ ಇಂದು ಬೆಳಗ್ಗೆ ಮಾಜಿ ಶಾಸಕರೂ ಆದ, ಬಿಜೆಪಿ ನಗರಾಧ್ಯಕ್ಷ ಎಲ್.ನಾಗೇಂದ್ರ, ಬಿಜೆಪಿ ರಾಜ್ಯ ಉಪಾಧ್ಯಕ್ಷ ಎಂ.ರಾಜೇಂದ್ರ ಗುದ್ದಲಿಪೂಜೆ ನೆರವೇರಿಸಿದರು.

ಬಳಿಕ ಎಲ್.ನಾಗೇಂದ್ರ ಪತ್ರಕರ್ತರೊಂದಿಗೆ ಮಾತನಾಡಿ, ಲೋಕಸಭಾ ಚುನಾವಣೆಯಲ್ಲಿ ಪಕ್ಷದ ಅಭ್ಯರ್ಥಿಗಳ ಪರ ಪ್ರಚಾರ ಸಭೆಯಲ್ಲಿ ಪಾಲ್ಗೊಳ್ಳಲು ಏ.14ರಂದು ಪ್ರಧಾನಿ ನರೇಂದ್ರ ಮೋದಿ ಅವರು ಆಗಮಿಸುತ್ತಿದ್ದಾರೆ. ಈ ಸಮಾವೇಶದಲ್ಲಿ ಲಕ್ಷಕ್ಕೂ ಅಧಿಕ ಕಾರ್ಯಕರ್ತರು ಪಾಲ್ಗೊಳ್ಳಲಿದ್ದಾರೆ. ಅದಕ್ಕಾಗಿ ವೇದಿಕೆ ಹಾಗೂ ಆಸನದ ವ್ಯವಸ್ಥೆ ಕಲ್ಪಿಸಲಾಗುವುದು ಎಂದರು.

ಈ ಸಂದರ್ಭದಲ್ಲಿ ವಿಧಾನಪರಿಷತ್ ಮಾಜಿ ಸದಸ್ಯ ಸಿದ್ದರಾಜು, ಪಾಲಿಕೆ ಮಾಜಿ ಸದಸ್ಯ ಜಗದೀಶ್, ಮುಖಂಡರಾದ ಹೆಚ್.ಜಿ.ಗಿರಿಧರ್, ರಘು ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

ಮೈಸೂರು ಮಿತ್ರ ಶುಕ್ರವಾರ 12 ಏಪ್ರಿಲ್ 2024

ಅರಣ್ಯ ಸಿಬ್ಬಂದಿ, ಮಾವುತನ ಮೇಲೆ ಹೆಜ್ಜೇನು ದಾಳಿ

• ಹರಿಹರ ಗ್ರಾಮದಲ್ಲಿ ಹುಲಿ ಸೆರೆ ಕಾರ್ಯಾಚರಣೆ ವೇಳೆ ಘಟನೆ




ಹೆಜ್ಜೇನು ದಾಳಿಗೆ ಸಿಲುಕಿದ ಮಾವುತ ಕುಳ್ಳ ಹಾಗೂ ಸಾಕಾನೆ ಭೀಮ.

> "ಹರಿಹರ ಸುಬ್ರಹ್ಮಣ್ಯ ದೇವಾಲಯದ ಕೆರೆಯ ಬಳಿ ಮತ್ತೆ ಸಂಜೆ ವೇಳೆ ನೀರು ಕುಡಿಯಲು ಹುಲಿ ಆಗಮಿಸಿದೆ. ನ್ಯಾಷನಲ್ ಟೈಗರ್ ಕನ್ಸರ್ವೇಷನ್ ಸೆಲ್‌ಗೆ ಹುಲಿಯ ಛಾಯಾಚಿತ್ರ ಕಳುಹಿಸಿದಾಗ ನಾಗರ ಹೊಳೆಯಿಂದ ಬಂದಿರುವ 11 ವರ್ಷದ ಹೆಣ್ಣು ಹುಲಿ ಎಂದು ತಿಳಿದು ಬಂದಿದೆ. ಹೀಗಾಗಿ ಹುಲಿ ಸೆರೆಗೆ ಕಾರ್ಯಾಚರಣೆ ನಡೆಸುತ್ತಿದ್ದೇವೆ.
> –ಜಗನ್ನಾಥ್, ವಿರಾಜಪೇಟೆ ಡಿಸಿಎಫ್.

ಗೋಣಿಕೊಪ್ಪ, ಏ.11–ಪೊನ್ನಂಪೇಟೆ ತಾಲೂಕಿನ ಹರಿಹರ ಗ್ರಾಮದಲ್ಲಿ ಗುರುವಾರ ಹುಲಿ ಸೆರೆ ಕಾರ್ಯಾಚರಣೆ ನಡೆಸುತ್ತಿದ್ದ ಅರಣ್ಯ ಸಿಬ್ಬಂದಿ, ಮಾವುತ ಹಾಗೂ ಸಾಕಾನೆ ಮೇಲೆ ಹೆಜ್ಜೇನು ದಾಳಿ ಮಾಡಿದೆ.

ಅರಣ್ಯ ಇಲಾಖೆಯ ಶಾರ್ಪ್ ಶೂಟರ್ ಕನ್ನಂಡ ರಂಜನ್, ಮಾವುತ ಕುಳ್ಳ ಹಾಗೂ ಸಾಕಾನೆ ಭೀಮನ ಮೇಲೆ ಹೆಜ್ಜೇನು ದಾಳಿ ಮಾಡಿದ್ದು, ರಂಜನ್ ಅವರಿಗೆ ಮಡಿಕೇರಿಯ ಜಿಲ್ಲಾಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ. ಉಳಿದವರು ಚೇತರಿಸಿಕೊಂಡಿದ್ದಾರೆ. ಹೆಜ್ಜೇನು ದಾಳಿ ಸಂದರ್ಭ ಸಾಕಾನೆ ಭೀಮ ತಪ್ಪಿಸಿಕೊಳ್ಳಲು ಯತ್ನಿಸಿದ್ದಾನೆ.

ಬುಧವಾರ ಹರಿಹರ ಗ್ರಾಮದ ಶ್ರೀ ಸುಬ್ರಹ್ಮಣ್ಯ ದೇವರ ಮಂಡೆಮುಡಿ ಕೆರೆಯಲ್ಲಿ ಹುಲಿ ನೀರು ಕುಡಿದು ಹೋಗುವ ದೃಶ್ಯವನ್ನು ವ್ಯಕ್ತಿಯೊಬ್ಬರು ಮೊಬೈಲ್‌ನಲ್ಲಿ ಸೆರೆ ಹಿಡಿದಿದ್ದರು. ಈ ವಿಡಿಯೋ ವೈರಲ್ ಆದ ಹಿನ್ನೆಲೆಯಲ್ಲಿ ಸುತ್ತಮುತ್ತಲ ಗ್ರಾಮಸ್ಥರು ಕಾಫಿ ತೋಟ ಹಾಗೂ ಅರಣ್ಯಕ್ಕೆ ಹೊಂದಿಕೊಂಡಿರುವ ಪ್ರದೇಶಗಳಲ್ಲಿ ಹುಲಿ ಇರುವ ಬಗ್ಗೆ ಆತಂಕ ವ್ಯಕ್ತಪಡಿಸಿದ್ದರು.

ಮಾಹಿತಿ ಅರಿತು ಸ್ಥಳಕ್ಕೆ ಭೇಟಿ ನೀಡಿದ್ದ ಅರಣ್ಯ ಇಲಾಖೆ ಸಿಬ್ಬಂದಿ ಹುಲಿ ಹೆಜ್ಜೆ ಗುರುತುಗಳನ್ನು ಆಧರಿಸಿ ಚಲನ ವಲನಗಳನ್ನು ಪತ್ತೆಹಚ್ಚಿ ಹುಲಿ ಸೆರೆಗೆ ಮುಂದಾಗಿದ್ದು, ಗುರುವಾರ ಬೆಳಗ್ಗೆ ಸಾಕಾನೆಗಳಾದ ಭೀಮ ಹಾಗೂ ಮಹೇಂದ್ರನ ಸಹಾಯದಿಂದ ಅರಣ್ಯ ಸಿಬ್ಬಂದಿ ಕಾರ್ಯಾಚರಣೆ ನಡೆಸುತ್ತಿದ್ದರು. ಈ ವೇಳೆ ದಿಢೀರ್ ಹೆಜ್ಜೇನು ದಾಳಿ ಮಾಡಿದೆ.

ಸುರಕ್ಷಿತ ಸ್ಥಳಾಂತರ: ಹರಿಹರ ಸುಬ್ರಹ್ಮಣ್ಯ ದೇವರ ಕೆರೆಯ ಬಳಿ ನೀರು ಕುಡಿಯಲು ಬಂದಿರುವ ಹುಲಿಯ ಕುರಿತು ಮಾಹಿತಿ ನೀಡಿದ ಮಾಜಿ ವೈಲ್ಡ್‌ಲೈಫ್ ವಾರ್ಡನ್ ಹಾಗೂ ಎನ್‌ಟಿಸಿ ನಾಮ ನಿರ್ದೇಶಕ ಕೆ.ಎನ್.ಬೋಸ್ ಮಾದಪ್ಪ, ಹುಲಿಯ ಓಡಾಟ ಗಮನಿಸಿದಾಗ ಅದು ಅಸ್ವಸ್ಥಗೊಂಡಿರುವ ಹುಲಿ ಎಂದು ಕಂಡು ಬರುತ್ತಿದೆ. ಸಿಬ್ಬಂದಿ ಹಾಗೂ ಆಡಳಿತಾಧಿಕಾರಿಗಳು ಮತ್ತು ಗ್ರಾಮಸ್ಥರ ಸಹಾಯದಿಂದ ಕಾರ್ಯಾಚರಣೆ ನಡೆಸಿ ಹುಲಿಯನ್ನು ಸುರಕ್ಷಿತವಾಗಿ ಹಿಡಿದು ಬೇರೆಡೆಗೆ ಸ್ಥಳಾಂತರ ಮಾಡಬೇಕಾಗಿದೆ ಎಂದು ತಿಳಿಸಿದ್ದಾರೆ.

ವಿರಾಜಪೇಟೆಯ ವಿವಿಧೆಡೆ ರಂಜಾನ್ ಆಚರಣೆ



ವಿರಾಜಪೇಟೆಯಲ್ಲಿ ಮುಸ್ಲಿಂ ಬಾಂದವರು ರಂಜಾನ್ ಅಂಗವಾಗಿ ವಿಶೇಷ ಪ್ರಾರ್ಥನೆ ಸಲ್ಲಿಸಿದರು.

ವಿರಾಜಪೇಟೆ, ಏ.11–ನಗರದ ವಿವಿಧ ಮಸೀದಿ ಹಾಗೂ ಈದ್ಗಾ ಮೈದಾನದಲ್ಲಿ ಮುಸ್ಲಿಮರು ಗುರುವಾರ ಪವಿತ್ರ ಹಬ್ಬ ರಂಜಾನ್ ಅನ್ನು ಸಂಭ್ರಮದಿಂದ ಆಚರಿಸಿದರು.

ರಂಜಾನ್ ಪ್ರಯುಕ್ತ ನಗರದ ಮುಖ್ಯ ರಸ್ತೆಯ ಶಾಫಿ ಜುಮಾ ಮಸೀದಿಯಲ್ಲಿ ಮೌಲಾನ(ಧರ್ಮಗುರು) ರವೂಫ್ ಹುದವಿ, ಖಾಸಗಿ ಬಸ್ ನಿಲ್ದಾಣದ ಶಾದುಲಿ ಜುಮಾ ಮಸೀದಿಯಲ್ಲಿ ಮೌ.ಶುಹೈಬ್ ಫೈರಿಝಿ, ಕ್ಲಾಕ್ ಟವರ್ ಸಮೀಪದ ಮುರುಡೇಶ್ವರ್ ನವಾಯತ್ ಬಾದ್‌ಷಾ ಮಸೀದಿಯಲ್ಲಿ ಮೌ.ಮಖ್ಸೂದ್ ಅಹಮದ್, ಕಲ್ಲುಬಾಣೆಯ ಬದ್ರಿಯಾ ಜುಮಾ ಮಸೀದಿಯಲ್ಲಿ ಮೌ.ಮುತ್ತಲಿಬ್ ಅನ್ವರಿ, ವಿದ್ಯಾನಗರ ಬ್ರೈಟ್ ಕ್ಯಾಂಪಸ್‌ನ ಈದ್ಗಾ ಮೈದಾನದಲ್ಲಿ ಮೌ.ಅಬ್ದುಲ್ ಗಫೂರ್ ಉಳಿಯಿಲ್, ಮಲಬಾರ್ ರಸ್ತೆಯ ಸಲಫಿ ಜುಮಾ ಮಸೀದಿಯಲ್ಲಿ ಮೌ.ಸಜ್ಜಾದ್ ಅಲ್ ಹಿಕ್‌ಮಿ ವಿಶೇಷ ಪ್ರಾರ್ಥನೆ ಸಲ್ಲಿಸಿ, ಪ್ರವಚನ ನೀಡಿದರು.

ಅಪ್ಪಯ್ಯಸ್ವಾಮಿ ರಸ್ತೆಯ ಜಾಮಿಯಾ ಮಸೀದಿಯಲ್ಲಿ ಗುಲ್‌ಶದ್ ಅಹಮದ್, ಸುಣ್ಣದ ಬೀದಿಯ ಮದೀನಾ ಮಸೀದಿಯಲ್ಲಿ ಮೌ.ಮುಝಮ್ಮಿಲ್, ಮಸ್ಜಿದ್–ಎ–ಅಝಮ್‌ನಲ್ಲಿ ಮೌ.ಹಸೀಬ್ ಶರೀಫ್ ವಿಶೇಷ ಪ್ರಾರ್ಥನೆ ಸಲ್ಲಿಸಿ, ಸಂದೇಶ ನೀಡಿದರು.

ರಂಜಾನ್ ಅಂಗವಾಗಿ ಹನಫಿ ಮುಸಲ್ಮಾನರು ಗುರುವಾರ ಪಟ್ಟಣದ ಮುಖ್ಯ ಬೀದಿಯಲ್ಲಿ ಮೆರವಣಿಗೆ ನಡೆಸಿದರು. ಈದ್ಗಾ ಮೈದಾನಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಮಹಿಳೆಯರು ಮತ್ತು ಮಕ್ಕಳು ಪಾಲ್ಗೊಂಡಿದ್ದರು. ಪ್ರಾರ್ಥನೆ ನಂತರ ಪರಸ್ಪರ ಶುಭಾಶಯ ವಿನಿಮಯ ಮಾಡಿಕೊಂಡರು. ಕೇರಳದಲ್ಲಿ ಶವ್ವಾಲ್ ತಿಂಗಳಿನ ಚಂದ್ರ ದರ್ಶನವಾದ ಹಿನ್ನೆಲೆಯಲ್ಲಿ ಶಾಫಿ ವಿಭಾಗದವರು ಹಬ್ಬ ಆಚರಿಸಿದರು. ಇದೇ ವೇಳೆ ಪೊಲೀಸ್ ಬಂದೋಬಸ್ತ್ ಏರ್ಪಡಿಸಲಾಗಿತ್ತು.

ಸೋಮವಾರಪೇಟೆ ವ್ಯಾಪ್ತಿ ಎಂ.ಲಕ್ಷ್ಮಣ್ ಪ್ರಚಾರ

ಮಡಿಕೇರಿ, ಏ.11–ಸೋಮವಾರಪೇಟೆ ತಾಲೂಕು ವ್ಯಾಪ್ತಿಯಲ್ಲಿ ಕೊಡಗು–ಮೈಸೂರು ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಎಂ.ಲಕ್ಷ್ಮಣ್ ಮತ್ತು ಪಕ್ಷ ಪ್ರಮುಖರು ಬಿರುಸಿನ ಪ್ರಚಾರ ನಡೆಸಿದರು.

ಕೊಡ್ಲಿಪೇಟೆಯ ಶ್ರೀ ಬಸವೇಶ್ವರ ದೇವಾಲಯದಲ್ಲಿ ಪೂಜೆ ಸಲ್ಲಿಸಿದ ಲಕ್ಷ್ಮಣ್ ಕೊಡ್ಲಿಪೇಟೆ, ಬ್ಯಾಡಗೊಟ್ಟ, ಬೆಸ್ಸೂರು, ಹಂಡ್ಲಿ ಮತ್ತು ಶನಿವಾರಸಂತೆಯಲ್ಲಿ ಮತಯಾಚಿಸಿದರು. ಇದೇ ವೇಳೆ ಕಿರಿಕೊಡ್ಲಿ ಮಠಾಧೀಶರಾದ ಶ್ರೀ ಸದಾಶಿವಸ್ವಾಮೀಜಿ ಅವರಿಂದ ಲಕ್ಷ್ಮಣ್, ಕಾಂಗ್ರೆಸ್ ಜಿಲ್ಲಾಧ್ಯಕ್ಷ ಧರ್ಮಜಾ ಉತ್ತಪ್ಪ, ಕೆಪಿಸಿಸಿ ಮುಖಂಡ ಹೆಚ್.ಎಸ್. ಚಂದ್ರಮೌಳಿ ಸೇರಿದಂತೆ ಕಾಂಗ್ರೆಸ್ ಮುಖಂಡರು ಆಶೀರ್ವಾದ ಪಡೆದರು.



ಕಿರಿಕೊಡ್ಲಿ ಮಠಾಧೀಶರಾದ ಶ್ರೀ ಸದಾಶಿವಸ್ವಾಮೀಜಿ ಅವರಿಂದ ಕಾಂಗ್ರೆಸ್ ಅಭ್ಯರ್ಥಿ ಎಂ.ಲಕ್ಷ್ಮಣ್, ಕಾಂಗ್ರೆಸ್ ಜಿಲ್ಲಾಧ್ಯಕ್ಷ ಧರ್ಮಜಾ ಉತ್ತಪ್ಪ, ಕೆಪಿಸಿಸಿ ಮುಖಂಡ ಹೆಚ್.ಎಸ್.ಚಂದ್ರಮೌಳಿ ಆಶೀರ್ವಾದ ಪಡೆದರು.

ನಂತರ ಹಂಡ್ಲಿ ಸರ್ಕಲ್‌ನಲ್ಲಿ ನಡೆದ ಚುನಾವಣಾ ಪ್ರಚಾರ ಸಭೆಯಲ್ಲಿ ಮಾತನಾಡಿದ ಎಂ.ಲಕ್ಷ್ಮಣ್, ರಾಜ್ಯ ಸರ್ಕಾರದ 5 ಗ್ಯಾರಂಟಿ ಯೋಜನೆಗಳೊಂದಿಗೆ ಕಾಂಗ್ರೆಸ್ ನೇತೃತ್ವದ ಸರ್ಕಾರ ಕೇಂದ್ರದಲ್ಲಿ ಅಧಿಕಾರಕ್ಕೆ ಬಂದಲ್ಲಿ 25 ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತರುವ ಮೂಲಕ ದೇಶದ ಅಭಿವೃದ್ಧಿಗೆ ಮತ್ತಷ್ಟು ವೇಗ ದೊರೆಯಲಿದೆ ಎಂದು ಹೇಳಿದರು.

ಈ ಬಾರಿ ಜನ ಸೇವೆಗೆ ಅವಕಾಶ ನೀಡಿದಲ್ಲಿ ತಿಂಗಳಿಗೆ 15 ದಿನ ಮಡಿಕೇರಿಯಲ್ಲಿ ವಾಸ್ತವ್ಯ ಹೂಡಿ, ನಿಮ್ಮ ಸೇವಕನಾಗಿ ಕಾರ್ಯನಿರ್ವಹಿಸುವುದಾಗಿ ಭರವಸೆ ನೀಡಿದರು. ಶಾಸಕ ಡಾ.ಮಂತರ್‌ಗೌಡ ಮಾತನಾಡಿ, ಸೋಮವಾರಪೇಟೆಯಲ್ಲಿ ನನೆಗುದಿಗೆ ಬಿದ್ದಿದ್ದ ಹಾಕಿ ಟರ್ಫ್ ಗ್ರೌಂಡ್ ಪೂರ್ಣಗೊಳಿಸಲಾಗಿದೆ. ಮಡಿಕೇರಿ ಜಿಲ್ಲಾಸ್ಪತ್ರೆಗೆ ಎಂಆರ್‌ಐ ಸ್ಕ್ಯಾನಿಂಗ್ ಯೂನಿಟ್ ಅನ್ನು ತರಲು ನಾನೇ ಬರಬೇಕಾಯಿತು. ಇದೆಲ್ಲವನ್ನು ಕ್ಷೇತ್ರದಲ್ಲಿ ಸಚಿವರಾಗಿ, ಶಾಸಕರಾಗಿದ್ದವರು ಯಾಕೆ? ಮಾಡಲಿಲ್ಲ ಎಂದು ತೀಕ್ಷ್ಣವಾಗಿ ಪ್ರಶ್ನಿಸಿದರು.

ಕಾಂಗ್ರೆಸ್ ಪ್ರಚಾರ ಸಮಿತಿ ಅಧ್ಯಕ್ಷ ಟಿ.ಪಿ.ರಮೇಶ್, ಜಿಪಂ ಮಾಜಿ ಸದಸ್ಯೆ ಕೆ.ಪಿ. ಚಂದ್ರಕಲಾ, ಸೋಮವಾರಪೇಟೆ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಬಿ.ಬಿ.ಸತೀಶ್ ಹಾಗೂ ಕಾಂಗ್ರೆಸ್ ಮುಖಂಡರು, ಡಿಸಿಸಿ ಸದಸ್ಯರು, ಮುಂಚೂಣಿ ಘಟಕಗಳ ಅಧ್ಯಕ್ಷರು ಹಾಗೂ ಕಾರ್ಯಕರ್ತರು ಹಾಜರಿದ್ದರು.

ಹೊಳೆಯಲ್ಲಿ ಈಜಲು ಹೋದ ವ್ಯಕ್ತಿ ಸಾವು



ಮಡಿಕೇರಿ: ಈಜಲು ನೀರಿಗಿಳಿದ ವ್ಯಕ್ತಿ ಮುಳುಗಿ ಮೃತಪಟ್ಟಿರುವ ಘಟನೆ ನಾಪೋಕ್ಲು ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕೊಳಕೇರಿ ಗ್ರಾಮದ ಕುಪ್ಪೋಟು ಹೊಳೆಯಲ್ಲಿ ಗುರುವಾರ ನಡೆದಿದೆ.

ಕಕ್ಕಬ್ಬೆ ಕುಂಜಿಲ ಗ್ರಾಮದ ವಾಟೆಕಾಡು ನಿವಾಸಿ ದೇವಯ್ಯ(38) ಮೃತರು. ಈತ ತನ್ನ ಸಹೋದರನ ಜೊತೆ ತೋಟದ ಕೆಲಸಕ್ಕೆ ತೆರಳಿದ್ದು, ಬಿಸಿಲಿನ ತಾಪದಿಂದ ಸ್ನಾನ ಮಾಡಲು ಕುವಲೆಕಾಡು ಗ್ರಾಮದ ಕುಪ್ಪೋಟು ಹೊಳೆಗೆ ಇಳಿದಿದ್ದಾರೆ. ಈ ವೇಳೆ ನೀರಿನಲ್ಲಿ ಮುಳುಗಿ ಮೃತಪಟ್ಟಿದ್ದಾರೆ.

ನಾಪೋಕ್ಲು ಠಾಣೆ ಪೊಲೀಸರು ಸ್ಥಳ ಪರಿಶೀಲಿಸಿ, ಸ್ಥಳೀಯ ಈಜುಗಾರರ ಸಹಾಯದಿಂದ ಮೃತದೇಹವನ್ನು ನೀರಿನಿಂದ ಹೊರ ತೆಗೆದರು. ಈ ಸಂಬಂಧ ನಾಪೋಕ್ಲು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಏ.14, ಗೋಣಿಕೊಪ್ಪಲಲ್ಲಿ ಪಂಜಿನ ಮೆರವಣಿಗೆ




ಎನ್.ಯು.ನಾಚಪ್ಪ

ಮಡಿಕೇರಿ, ಏ.11–ಕೊಡವರ ಹೊಸ ವರ್ಷಾಚರಣೆ ಎಡ್ಮ್ಯಾರ್ ಪ್ರಯುಕ್ತ ಕೊಡವ ನ್ಯಾಷನಲ್ ಕೌನ್ಸಿಲ್ ಸಂಘಟನೆ ವತಿಯಿಂದ ಏ.14ರಂದು ಗೋಣಿಕೊಪ್ಪಲಿನಲ್ಲಿ ಪಂಜಿನ ಮೆರವಣಿಗೆ ನಡೆಯಲಿದೆ ಎಂದು ಸಿಎನ್‌ಸಿ ಅಧ್ಯಕ್ಷ ಎನ್.ಯು.ನಾಚಪ್ಪ ತಿಳಿಸಿದ್ದಾರೆ.

ವಸಂತಋತು ಫೆ.15ರಿಂದ ಆರಂಭಗೊಂಡು ಏ.14ಕ್ಕೆ ಕೊನೆಗೊಳ್ಳುವ ಎಡ್ಮ್ಯಾರ್ ಅನ್ನು ಸಿಎನ್‌ಸಿ ಸಂಘಟನೆ ಪ್ರತಿವರ್ಷ ಸಾರ್ವತ್ರಿಕವಾಗಿ ಆಚರಿಸಿಕೊಂಡು ಬರುತ್ತಿದ್ದು, ಇದು 30ನೇ ವರ್ಷದ ಕಾರ್ಯಕ್ರಮವಾಗಿದೆ. ಏ.14ರಂದು ಸಂಜೆ 6.30 ಗಂಟೆಗೆ ಗೋಣಿಕೊಪ್ಪಲಿನ ಶ್ರೀ ಉಮಾಮಹೇಶ್ವರಿ ದೇವಾಲಯ ಬಳಿಯಿಂದ ದುಡಿಕೊಟ್ಟ್ ಪಾಟ್‌ನೊಂದಿಗೆ ಕೊಡವ ಸಾಂಪ್ರದಾಯಿಕ ಉಡುಪಿನಲ್ಲಿ ಪಂಜಿನ ಮೆರವಣಿಗೆ ಸಾಗಿ ಆರ್‌ಎಂಸಿ ಯಾರ್ಡ್‌ನಲ್ಲಿ ಕೊನೆಗೊಳ್ಳಲಿದೆ. ಕೊಡವ ಬುಡಕಟ್ಟು ಜನಾಂಗ ಕೊಡವರ ಹಕ್ಕುಗಳ ಕುರಿತು ಕಾರ್ಯಕ್ರಮದಲ್ಲಿ ಪ್ರತಿಪಾದನೆ ಮಾಡುವ ಮೂಲಕ ಆಡಳಿತ ವ್ಯವಸ್ಥೆ ಮತ್ತು ವಿಶ್ವದ ಗಮನ ಸೆಳೆಯಲಾಗುವುದು. ಹಕ್ಕೊತ್ತಾಯಗಳನ್ನು ಪ್ರಚುರಪಡಿಸಿ ಪ್ರತಿಜ್ಞಾವಿಧಿ ಸ್ವೀಕರಿಸಲಾಗುವುದು ಎಂದು ತಿಳಿಸಿದ್ದಾರೆ.

ಇದಕ್ಕೂ ಮೊದಲು ಬೆಳಗ್ಗೆ 6 ಗಂಟೆಗೆ ಮಡಿಕೇರಿ ತಾಲೂಕಿನ ಮದೆನಾಡಿನ ಬೆಟ್ಟತ್ತೂರು ಗ್ರಾಮದಲ್ಲಿ ಕೂಪದಿರ ಒಕ್ಕದ ಮೋಹನ್ ಅವರ ಭೂಮಿಯಲ್ಲಿ ಉಳುಮೆ ಮಾಡುವ ಮೂಲಕ ಎಡ್ಮ್ಯಾರ್ ಆಚರಣೆಗೆ ಚಾಲನೆ ನೀಡಲಾಗುವುದು ಎಂದು ತಿಳಿಸಿದ್ದಾರೆ.

ಚರ್ಮಗಂಟು ರೋಗಕ್ಕೆ ಜಾನುವಾರುಗಳು ಬಲಿ



ಬೊಳ್ಳೂರು ಗ್ರಾಮದಲ್ಲಿ ಚರ್ಮಗಂಟು ರೋಗದಿಂದ ಮೃತಪಟ್ಟ ಹಸು.

ಕುಶಾಲನಗರ, ಏ.11–ಬೊಳ್ಳೂರು ಗ್ರಾಮದಲ್ಲಿ ಇತ್ತೀಚೆಗೆ ಬಿಸಿಲಿನ ತಾಪಮಾನ ಹಾಗೂ ಚರ್ಮಗಂಟು ರೋಗದಿಂದ ಜಾನುವಾರುಗಳು ಸಾವನ್ನಪ್ಪುತ್ತಿದ್ದು, ಗುರುವಾರ ಮತ್ತೊಂದು ಹಸು ಮೃತಪಟ್ಟಿದೆ.

ಗ್ರಾಮದ ಪ್ರಗತಿಪರ ರೈತ ಪುಲಿಯಂಡ ರಾಮ್ ದೇವಯ್ಯ ಅವರ ಹಸು ಗುರುವಾರ ಮೃತಪಟ್ಟಿದ್ದು, ಇದುವರೆಗೆ ಇವರಿಗೆ ಸೇರಿದ ಐದು ಜಾನುವಾರುಗಳು ಸಾವನ್ನಪ್ಪಿವೆ. ಇದರಿಂದ ಪುಲಿಯಂಡ ರಾಮ್ ದೇವಯ್ಯಗೆ ಲಕ್ಷಾಂತರ ರೂ. ನಷ್ಟ ಉಂಟಾಗಿದ್ದು, ರೈತರು ಹಾಗೂ ಹೈನುಗಾರರು ತೀವ್ರ ಆತಂಕಗೊಂಡಿದ್ದಾರೆ.

ರೈತ ಪುಲಿಯಂಡ ರಾಮ್ ದೇವಯ್ಯ ಗುಜರಾತ್, ರಾಜಸ್ಥಾನದ ಗಿರ್, ಕಾಂಕ್ರೇಜ್ ಹಾಗೂ ದೇಶಿ ತಳಿಯ 50ಕ್ಕೂ ಹೆಚ್ಚು ಜಾನುವಾರುಗಳನ್ನು ಸಾಕಿದ್ದಾರೆ. ಆದರೆ, ಇವುಗಳಲ್ಲಿ ಕೆಲ ಹಸುಗಳಿಗೆ ಚರ್ಮಗಂಟು ರೋಗ ಕಾಣಿಸಿಕೊಂಡಿದೆ. ಹಸುಗಳಿಗೆ ಸೂಕ್ತ ಚಿಕಿತ್ಸೆ ದೊರೆಯದೆ ರೋಗ ಉಲ್ಬಣಗೊಂಡು ಮೃತಪಟ್ಟಿವೆ.

ಈ ಭಾಗದಲ್ಲಿ ಚರ್ಮಗಂಟು ರೋಗಕ್ಕೆ ದನ–ಕರುಗಳಿಗೆ ಸೂಕ್ತ ಚಿಕಿತ್ಸೆ ಇಲ್ಲದೆ ಹೈನುಗಾರರು ಚಿಂತಾಕ್ರಾಂತರಾಗಿದ್ದಾರೆ. ಪಶು ಸಂಗೋಪನಾ ಇಲಾಖೆ ರೈತರ ಪಾಲಿಗೆ ಇದ್ದು ಇಲ್ಲದಂತಾಗಿದೆ. ಜಾನುವಾರುಗಳಿ ರೋಗ ಹರಡುತ್ತಿದ್ದು, ಈ ಭಾಗದಲ್ಲಿ ಹತ್ತಾರು ಜಾನುವಾರುಗಳು ಮೃತಪಟ್ಟಿವೆ. ಇದರಿಂದ ರೈತರು ಹಾಗೂ ಹೈನುಗಾರರಿಗೆ ಹೆಚ್ಚು ಆತಂಕ ಮೂಡಿದೆ.

ಚರ್ಮಗಂಟು ರೋಗ ಅತಿ ವೇಗವಾಗಿ ಹರಡುವುದರಿಂದ ಕೂಡಲೇ ಜಿಲ್ಲಾಡಳಿತ ಮುಂಜಾಗ್ರತಾ ಕ್ರಮ ಕೈಗೊಳ್ಳಬೇಕು. ಪಶು ವೈದ್ಯರು ಗ್ರಾಮೀಣ ಪ್ರದೇಶಗಳಿಗೆ ಭೇಟಿ, ಜಾನುವಾರುಗಳಿಗೆ ಸೂಕ್ತ ಚಿಕಿತ್ಸೆ ನೀಡಬೇಕು ಎಂದು ಹಬ್ಬಟೂರು ಗ್ರಾಮದ ರೈತ ರೋಹಿತ್ ರಾಜುಗೌಡ, ಮುತ್ತುರಾಜು ಹಾಗೂ ಹೈನುಗಾರರು ಆಗ್ರಹಿಸಿದ್ದಾರೆ.

10 ವರ್ಷ ಮೋದಿಯವರ ಪಾರದರ್ಶಕ ಆಡಳಿತ

• ಮೈತ್ರಿ ಅಭ್ಯರ್ಥಿ ಬಾಲರಾಜುಗೆ ಹೆಚ್ಚಿನ ಮತ ನೀಡಿ • ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ಮನವಿ



ಹನೂರಲ್ಲಿ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ರೋಡ್ ಶೋ ಮೂಲಕ ಮೈತ್ರಿ ಅಭ್ಯರ್ಥಿ ಎಸ್.ಬಾಲರಾಜು ಪರ ಪ್ರಚಾರ ನಡೆಸಿದರು.

> ಹನೂರು ವಿಧಾನಸಭಾ ಕ್ಷೇತ್ರದಲ್ಲಿ ಹತ್ತಾರು ಸಮಸ್ಯೆಗಳಿವೆ. ಈ ಸಮಸ್ಯೆಗಳನ್ನು ಬಗೆಹರಿಸಲು ಮೈತ್ರಿ ಅಭ್ಯರ್ಥಿ ಎಸ್.ಬಾಲರಾಜು ಅವರಿಗೆ ಹೆಚ್ಚಿನ ಮತ ನೀಡಿದರೆ, ನಾವಿಬ್ಬರೂ ಕ್ಷೇತ್ರದ ಅಭಿವೃದ್ಧಿ ಮಾಡುತ್ತೇವೆ. ಜೆಡಿಎಸ್ ವರಿಷ್ಠರಾದ ಎಚ್.ಡಿ.ದೇವೇಗೌಡ ಹಾಗೂ ಮಾಜಿ ಮುಖ್ಯಮಂತ್ರಿ ಎಚ್.ಡಿ.ಕುಮಾರಸ್ವಾಮಿ ಅವರು ನರೇಂದ್ರ ಮೋದಿ ಅವರನ್ನು ಮೂರನೇ ಬಾರಿಗೆ ಪ್ರಧಾನಿ ಮಾಡಲು ಮೈತ್ರಿ ಮಾಡಿಕೊಂಡಿದ್ದಾರೆ. ಜೆಡಿಎಸ್ ಕಾರ್ಯಕರ್ತರು ಮೈತ್ರಿ ಪಾಲನೆ ಮಾಡಬೇಕು.
> –ಎಂ.ಆರ್.ಮಂಜುನಾಥ್, ಜೆಡಿಎಸ್ ಶಾಸಕ

ಹನೂರು, ಏ.11–ಹತ್ತು ವರ್ಷಗಳಿಂದ ಭ್ರಷ್ಟಾಚಾರ ರಹಿತ ಹಾಗೂ ಪಾರದರ್ಶಕ ಆಡಳಿತ ನೀಡಿರುವ ನರೇಂದ್ರ ಮೋದಿ ಅವರನ್ನು ಮೂರನೇ ಬಾರಿಗೆ ಪ್ರಧಾನಿಯಾಗಿಸಲು ಎನ್‌ಡಿಎ ಅಭ್ಯರ್ಥಿ ಎಸ್.ಬಾಲರಾಜುಗೆ ಹೆಚ್ಚಿನ ಮತ ನೀಡಬೇಕು ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಮನವಿ ಮಾಡಿದರು.

ಪಟ್ಟಣದಲ್ಲಿ ಗುರುವಾರ ನಡೆದ ರೋಡ್ ಶೋನಲ್ಲಿ ಮಾತನಾಡಿದ ಅವರು, ಹತ್ತು ವರ್ಷಗಳ ಅವಧಿಯಲ್ಲಿ ಪ್ರಧಾನಿ ನರೇಂದ್ರ ಮೋದಿ ಉತ್ತಮ ಆಡಳಿತ ನೀಡಿ, ಇಡೀ ವಿಶ್ವದಲ್ಲೇ ಜನಮನ್ನಣೆ ಗಳಿಸಿದ್ದಾರೆ. ಈ ಬಾರಿ ಬಿಜೆಪಿ 400 ಸ್ಥಾನ ಗೆಲ್ಲುವ ಮೂಲಕ ಹೊಸ ಚರಿತ್ರೆ ಸೃಷ್ಟಿಸಲು ಪಕ್ಷ ಸಂಘಟನೆ ಮಾಡಲಾಗುತ್ತಿದೆ ಎಂದರು.

ಬಿ.ಎಸ್.ಯಡಿಯೂರಪ್ಪ ಮುಖ್ಯಮಂತ್ರಿ ಆಗಿದ್ದಾಗ ಮಲೆಮಹದೇಶ್ವರ ಅಭಿವೃದ್ಧಿ ಪ್ರಾಧಿಕಾರ ರಚನೆ ಮಾಡಿ, 120 ಕೋಟಿ ರೂ. ಅನುದಾನ ನೀಡಿದ್ದರು. ಮಾರ್ಟಳ್ಳಿ ಹಾಗೂ ಹಲಗಾಪುರ ಕೆರೆ ಅಭಿವೃದ್ಧಿಗೆ 150 ಕೋಟಿ ರೂ. ವೆಚ್ಚದಲ್ಲಿ ಕ್ರಿಯಾ ಯೋಜನೆ ರೂಪಿಸಲಾಗಿತ್ತು. ಆದರೆ, ಯಡಿಯೂರಪ್ಪನವರು ಮುಖ್ಯಮಂತ್ರಿ ಸ್ಥಾನದಿಂದ ಕೆಳಗಿಳಿದ ನಂತರ ಈ ಯೋಜನೆ ಸ್ಥಗಿತವಾಯಿತು. ಮುಂದೆ ಬಿಜೆಪಿ ಸರ್ಕಾರ ಬಂದರೆ ಶಾಶ್ವತ ನೀರಾವರಿ ಯೋಜನೆ ಮಾಡಲಾಗುವುದು ಎಂದು ಭರವಸೆ ನೀಡಿದರು.

ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ನಂತರ ವಿದ್ಯುತ್, ಹಾಲಿನ ದರ, ಜಮೀನುಗಳ ಪೋಡು, ಮುದ್ರಾಂಕ ಶುಲ್ಕವನ್ನು ಏರಿಕೆ ಮಾಡಿ ರಾಜ್ಯದ ಜನತೆಗೆ ಸಂಕಷ್ಟ ತಂದಿದ್ದಾರೆ. ಯಡಿಯೂರಪ್ಪನವರು ಮುಖ್ಯಮಂತ್ರಿ ಆಗಿದ್ದಾಗ ರೈತರ ಹೊಸ ಟ್ರಾನ್ಸ್‌ಫಾರಂ ಅಳವಡಿಸಿಕೊಳ್ಳಲು 25 ಸಾವಿರ ರೂ. ನಿಗದಿ ಮಾಡಿದ್ದರು. ಆದರೆ, ಕಾಂಗ್ರೆಸ್ ಸರ್ಕಾರ ಮೂರು ಲಕ್ಷ ರೂ. ನಿಗದಿ ಮಾಡಿರುವುದರಿಂದ ರೈತರಿಗೆ ತುಂಬಾ ತೊಂದರೆಯಾಗುತ್ತಿದೆ ಎಂದು ವಾಗ್ದಾಳಿ ನಡೆಸಿದರು.

ಬಿಜೆಪಿ ಅಭ್ಯರ್ಥಿ ಎಸ್.ಬಾಲರಾಜು ಮಾತನಾಡಿ, ಕಾಂಗ್ರೆಸ್ ಸರ್ಕಾರ ಜಾರಿಗೆ ತಂದಿರುವ ಐದು ಗ್ಯಾರಂಟಿಗಳು ರಾಜ್ಯದಲ್ಲಿ ಸಮರ್ಪಕವಾಗಿ ಜಾರಿಯಾಗಿಲ್ಲ. ಶಕ್ತಿ ಯೋಜನೆಯಡಿ ಉಚಿತ ಬಸ್ ಪ್ರಯಾಣ ಮಾಡಿ ಡಕೋಟಾ ಬಸ್‌ಗಳನ್ನು ಬಿಟ್ಟಿದ್ದಾರೆ. ಯುವ ನಿಧಿ ಯೋಜನೆಯಡಿ 3 ಸಾವಿರ ರೂ. ಕೊಡುವುದಾಗಿ ಹೇಳಿದ್ದರು. ಆದರೆ, ಸರ್ಕಾರ ಬಂದ ನಂತರ ನಿಯಮ ತಂದಿದ್ದಾರೆ. ಇದರಿಂದ ನಿರುದ್ಯೋಗಿಗಳಿಗೆ ಮೋಸ ಮಾಡಿದ್ದಾರೆ. ಈ ನಿಟ್ಟಿನಲ್ಲಿ ಮೋದಿ ಅವರ ಹಲವು ಜನಪರ ಕಾರ್ಯಕ್ರಮಗಳನ್ನು ಬೆಂಬಲಿಸಿ ಬಿಜೆಪಿಗೆ ಹೆಚ್ಚಿನ ಮತ ನೀಡಬೇಕು ಎಂದು ಮನವಿ ಮಾಡಿದರು.

ಬಿಜೆಪಿ ಓಬಿಸಿ ಜಿಲ್ಲಾಧ್ಯಕ್ಷ ಜನಧ್ವನಿ ವೆಂಕಟೇಶ್ ಮಾತನಾಡಿದರು. ಜಿಲ್ಲಾಧ್ಯಕ್ಷ ನಿರಂಜನ್ ಕುಮಾರ್, ಚುನಾವಣಾ ಉಸ್ತುವಾರಿ ಪ್ರಣೇಶ್, ಹನೂರು ಉಸ್ತುವಾರಿ ಡಾ.ಬಾಬು, ಮುಖಂಡರಾದ ಎಸ್.ನಿಶಾಂತ್, ಡಾ.ದತ್ತೇಶ್ ಕುಮಾರ್, ಡಾ.ಪ್ರೀತನ್ ನಾಗಪ್ಪ, ಪಾಳ್ಯ ಸುಂದರ್, ಬಿ.ಕೆ.ಶಿವಕುಮಾರ್, ಮಲೆಮಹದೇಶ್ವರ ಮಂಡಲ ಅಧ್ಯಕ್ಷ ಚಂಗವಾಡಿ ರಾಜು ಇನ್ನಿತರರು ಹಾಜರಿದ್ದರು.

ಯಳಂದೂರಿನಲ್ಲಿ ರಂಜಾನ್ ಆಚರಣೆ




ಯಳಂದೂರಿನ ಈದ್ಗಾ ಮೈದಾನದಲ್ಲಿ ಮುಸ್ಲಿಮರು ವಿಶೇಷ ಪ್ರಾರ್ಥನೆ ಸಲ್ಲಿಸಿದರು.

ಯಳಂದೂರು, ಏ.11–ತಾಲೂಕಿನಾದ್ಯಂತ ಗುರುವಾರ ಮುಸ್ಲಿಮರು ರಂಜಾನ್ (ಈದ್–ಉಲ್–ಫಿತರ್) ಹಬ್ಬವನ್ನು ಸಂಭ್ರಮದಿಂದ ಆಚರಿಸಲಾಯಿತು.

ಪಟ್ಟಣದ ಜಾಮೀಯ ಮಸೀದಿ ಮುಂಭಾಗದಿಂದ ರಾಷ್ಟ್ರೀಯ ಹೆದ್ದಾರಿಯ ಈದ್ಗಾ ಮೈದಾನದವರೆಗೆ ಮೆರವಣಿಗೆ ನಡೆಸಲಾಯಿತು. ನಂತರ ಈದ್ಗಾ ಮೈದಾನದಲ್ಲಿ ವಿಶೇಷ ಪ್ರಾರ್ಥನೆ ಸಲ್ಲಿಸಿದರು.

ಜಾಮೀಯ ಮಸೀದಿಯ ಧರ್ಮಗುರು ಅಬ್ರಾರ್ ಅಹಮ್ಮದ್ ಹಬ್ಬದ ಮಹತ್ವ, ಆಚರಣೆ, ಉಪವಾಸ ಕುರಿತು ಪ್ರವಚನ ನೀಡಿದರು. ನಂತರ ಮಕ್ಕಳು ಸೇರಿದಂತೆ ಎಲ್ಲರೂ ಪರಸ್ಪರ ಶುಭಾಶಯ ವಿನಿಮಯ ಮಾಡಿಕೊಂಡರು.


ಜೈಭಾರತಿ ನಿಧನ



ಚಾಮರಾಜನಗರ, ಏ.11–ನಿವೃತ್ತ ಎಎಸ್‌ಐ ದಿ.ಚಾ.ಜಗದೀಶ್ ಅವರ ಪತ್ನಿ, ನಗರದ ವಿವೇಕ ನಗರ ನಿವಾಸಿ ಜೈ ಭಾರತಿ(73) ಗುರುವಾರ ಮಧ್ಯಾಹ್ನ ನಿಧನರಾದರು.

ಮೃತರು ಸಂಚಾರ ಠಾಣೆಯ ಪೇದೆ ವಸಂತ್ ಕುಮಾರ್, ಅಪಾರ ಬಂಧು–ಬಳಗವನ್ನು ಅಗಲಿದ್ದಾರೆ. ನಗರದ ಜೆಟ್ಟಿ ಸಮಾಜದ ರುದ್ರಭೂಮಿಯಲ್ಲಿ ಅಂತ್ಯಕ್ರಿಯೆ ನಡೆಯಿತು.

ಹೆಚ್.ಸಿ.ಶಿವಕುಮಾರಸ್ವಾಮಿ



ಚಾಮರಾಜನಗರ: ತಾಲೂಕಿನ ಹರವೆ ಗ್ರಾಮದ ಪಟೇಲ್ ಲೇಟ್ ಚನ್ನಬಸಪ್ಪ ಅವರ ಪುತ್ರ ಹಾಗೂ ರೇಷ್ಮೆ ಇಲಾಖೆ ನಿವೃತ್ತ ನೌಕರ ಹೆಚ್.ಸಿ.ಶಿವಕುಮಾರಸ್ವಾಮಿ(73) ಗುರುವಾರ ನಿಧನರಾದರು.

ಮೃತರು ಪತ್ನಿ ಎಚ್.ಎಸ್.ಭಾಗ್ಯಲಕ್ಷ್ಮೀ, ಪುತ್ರರಾದ ವೆಂಕಟಯ್ಯನಛತ್ರದ ಸರ್ಕಾರಿ ಪದವಿಪೂರ್ವ ಕಾಲೇಜು ಉಪನ್ಯಾಸಕ ಎಸ್.ಪ್ರಶಾಂತ್, ಶಿಕ್ಷಕ ಎಸ್.ಪ್ರದೀಪ್ ಸೇರಿದಂತೆ ಬಂಧು–ಬಳಗ ಅಗಲಿದ್ದಾರೆ. ಸ್ವಗ್ರಾಮದ ಮೃತರ ತೋಟದಲ್ಲಿ ಮಧ್ಯಾಹ್ನ ಅಂತ್ಯಕ್ರಿಯೆ ನೆರವೇರಿತು.

ಬುಡಕಟ್ಟು ಆಶ್ರಮ ಶಾಲೆ ಮಕ್ಕಳು ನವೋದಯ ಶಾಲೆಗೆ ಆಯ್ಕೆ

ಚಾಮರಾಜನಗರ, ಏ.11–ತಾಲೂಕಿನ ಗಡಿ ಕಾಡಂಚಿನ ಗ್ರಾಮೀಣ ಭಾಗದ ಸರ್ಕಾರಿ ಬುಡಕಟ್ಟು ವಸತಿ ಶಾಲೆಯಲ್ಲಿ ವ್ಯಾಸಾಂಗ ಮಾಡುತ್ತಿದ್ದ ಇಬ್ಬರು ಮಕ್ಕಳು ನವೋದಯ ಶಾಲೆಗೆ ಆಯ್ಕೆಯಾಗುವ ಮೂಲಕ ಪರಿಶಿಷ್ಟ ವರ್ಗಗಳ ಇಲಾಖೆಗೆ ಹೆಸರು ತಂದಿದ್ದಾರೆ ಎಂದು ಮುಖ್ಯ ಶಿಕ್ಷಕ ಎಂ.ಸೋಮಣ್ಣ ತಿಳಿಸಿದ್ದಾರೆ.

ಪುಣಜನೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕೋಳಿಪಾಳ್ಯ ಗ್ರಾಮದ ವಾಲ್ಮೀಕಿ ಬುಡಕಟ್ಟು ಆಶ್ರಮ ಶಾಲೆಯ 5ನೇ ತರಗತಿಯ ಎಸ್.ಮನುಶ್ರೀ ಹಾಗೂ ಭುವನೇಶ್ ನಾಯ್ಕ ನವೋದಯ ಶಾಲೆ ಪ್ರವೇಶಕ್ಕೆ ಪರೀಕ್ಷೆ ಬರೆದು ಆಯ್ಕೆಯಾಗಿದ್ದಾರೆ.

ತಾಲೂಕಿನಲ್ಲಿ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯ 6 ಆಶ್ರಮ ಶಾಲೆಗಳ ಪೈಕಿ ಕೋಳಿಪಾಳ್ಯ ಆಶ್ರಮ ಶಾಲೆ ಸೇರಿದ್ದು, ಮಕ್ಕಳ ಆಯ್ಕೆಗೆ ಕಾರಣರಾದ ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ಅಧಿಕಾರಿ ಮಂಜುಳಾ, ತಾಲೂಕು ಅಧಿಕಾರಿ ಸುಬ್ಬರಾಯ, ಮುಖ್ಯ ಶಿಕ್ಷಕ ಸೋಮಣ್ಣ, ಸಹ ಶಿಕ್ಷಕರಾದ ನಾಗಮ್ಮ, ಭರತ್‌ರಾಜ್, ಸುವರ್ಣಮ್ಮ, ಶಂಕರ್ ಅವರನ್ನು ಪೋಷಕರು ಅಭಿನಂಧಿಸಿದ್ದಾರೆ.

ರಾಜ್ಯದ 28 ಕ್ಷೇತ್ರಗಳಲ್ಲೂ ಕಾಂಗ್ರೆಸ್ ಗೆಲುವು

• ಸಚಿವ ಕೆ.ಎಚ್.ಮುನಿಯಪ್ಪ ವಿಶ್ವಾಸ • ಸುನೀಲ್ ಬೋಸ್ ಪರ ಪ್ರಚಾರ



ಬಾಬು ಜಗಜೀವನರಾಂ ಬಡಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಸುನೀಲ್ ಬೋಸ್ ಪರ ಸಚಿವ ಕೆ.ಎಚ್.ಮುನಿಯಪ್ಪ ಮತಯಾಚಿಸಿದರು.

ಚಾಮರಾಜನಗರ, ಏ.11– ಜನರ ಆಶೀರ್ವಾದಿಂದ ರಾಜ್ಯದ 28 ಲೋಕಸಭಾ ಕ್ಷೇತ್ರಗಳಲ್ಲೂ ಕಾಂಗ್ರೆಸ್ ಗೆಲುವು ಸಾಧಿಸಲಿದೆ ಎಂದು ಆಹಾರ ಸರಬರಾಜು ಮತ್ತು ಗ್ರಾಹಕರ ವ್ಯವಹಾರ ಸಚಿವ ಕೆ.ಎಚ್.ಮುನಿಯಪ್ಪ ವಿಶ್ವಾಸ ವ್ಯಕ್ತಪಡಿಸಿದರು.

ನಗರದ ರಾಮಸಮುದ್ರ 30ನೇ ವಾರ್ಡ್‌ನ ಡಾ.ಬಾಬು ಜಗಜೀವನರಾಂ ಬಡಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಸುನೀಲ್ ಬೋಸ್ ಪರ ಮತಯಾಚಿಸಿ ಮಾತನಾಡಿದ ಅವರು, ಕಾಂಗ್ರೆಸ್ ವಿಧಾನಸಭಾ ಚುನಾವಣೆ ಪೂರ್ವದಲ್ಲಿ ಘೋಷಣೆ ಮಾಡಿದ ಪ್ರಣಾಳಿಕೆಯಂತೆ ಪಂಚ ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತಂದಿದೆ. ನುಡಿದಂತೆ ನಡೆಯುವ ಮೂಲಕ ಜನರ ವಿಶ್ವಾಸಗಳಿಸಿದೆ. ಮೈಸೂರು–ಕೊಡುಗು, ಚಾಮರಾಜನಗರ ಲೋಕಸಭಾ ಮೀಸಲು ಕ್ಷೇತ್ರ ಸೇರಿದಂತೆ ರಾಜ್ಯದಲ್ಲಿ 28 ಕ್ಷೇತ್ರಗಳಲ್ಲೂ ಕಾಂಗ್ರೆಸ್ ಜಯಭೇರಿ ಬಾರಿಸಲಿದೆ ಎಂದರು.

ಶಾಸಕ ಎ.ಆರ್.ಕೃಷ್ಣಮೂರ್ತಿ, ವಿಧಾನ ಪರಿಷತ್ ಸದಸ್ಯ ಡಾ.ತಿಮ್ಮಯ್ಯ, ಕಾಂಗ್ರೆಸ್ ಜಿಲ್ಲಾಧ್ಯಕ್ಷ ಪಿ.ಮರಿಸ್ವಾಮಿ, ವಾಲ್ಮೀಕಿ ಅಭಿವೃದ್ಧಿ ನಿಗಮದ ಮಾಜಿ ಅಧ್ಯಕ್ಷ ಬಸವರಾಜು, ಡಾ.ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ ಮಾಜಿ ನಿರ್ದೇಶಕ ಎಂ.ಶಿವಮೂರ್ತಿ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಮಹಮ್ಮದ್‌ಅಸ್ಗರ್, ಎಚ್.ವಿ.ಚಂದ್ರು, ಆರ್.ಕೆ.ಶಿವಕುಮಾರ್, ರಾಚಯ್ಯ ಇತರರು ಹಾಜರಿದ್ದರು.

ಬೆಂಡರವಾಡಿ ಕೆರೆಯಲ್ಲಿ ಅಪರಿಚಿತ ಶವ ಪತ್ತೆ

ಚಾಮರಾಜನಗರ, ಏ.11–ತಾಲೂಕಿನ ಬೆಂಡರವಾಡಿ ಗ್ರಾಮ ತಾವರೆಕೆರೆಯಲ್ಲಿ ಗುರುವಾರ ಅಪರಿಚಿತ ವ್ಯಕ್ತಿಯ ಶವ ಪತ್ತೆಯಾಗಿದೆ.

ಮೃತ ವ್ಯಕ್ತಿಗೆ ಸುಮಾರು 30 ರಿಂದ 35 ವರ್ಷವಾಗಿದ್ದು, 2–3 ದಿನಗಳ ಹಿಂದೆಯೇ ಮೃತಪಟ್ಟಿದ್ದಾರೆ. ಬಾಯಲ್ಲಿ ರಕ್ತ ಬಂದಿದೆ. ಬಲ ಕೈಯಲ್ಲಿ ಅಚ್ಚೆಯ ಗುರುತು ಇದೆ. ಕೆರೆಯಲ್ಲಿ ಬೆಳಗ್ಗೆ ಶವ ತೇಲುತ್ತಿರುವುದನ್ನು ಕಂಡ ದಾರಿಹೋಕರು ಪೊಲೀಸರಿಗೆ ವಿಷಯ ತಿಳಿಸಿದರು. ಶವವನ್ನು ನಗರದ ಸಿಮ್ಸ್ ಆಸ್ಪತ್ರೆಯ ಶವಾಗಾರದಲ್ಲಿ ಇರಿಸಲಾಗಿದೆ. ವಾರಸುದಾರರು ಇದ್ದಲ್ಲಿ ಚಾ.ನಗರ ಗ್ರಾಮಾಂತರ ಪೊಲೀಸ್ ಠಾಣೆ, ದೂರವಾಣಿ ಸಂ: 08226–222047 ಅಥವಾ ಮೊ.ಸಂ: 9480804646 ಅನ್ನು ಸಂಪರ್ಕಿಸಬಹುದು.

1.57 ಕೋಟಿ ಮೌಲ್ಯದ ಚಿನ್ನಾಭರಣ ವಶ

ಸತ್ತೇಗಾಲ ಚೆಕ್‌ಪೋಸ್ಟ್‌ನಲ್ಲಿ ತಪಾಸಣೆ ವೇಳೆ ಪತ್ತೆ

ಚಾಮರಾಜನಗರ: ಹನೂರು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಸತ್ತೇಗಾಲ ಚೆಕ್‌ಪೋಸ್ಟ್‌ನಲ್ಲಿ ದಾಖಲೆ ಇಲ್ಲದೆ ಸಾಗಿಸುತ್ತಿದ್ದ 1,57,87,000 ರೂ. ಮೌಲ್ಯದ 2 ಕೆಜಿ 170 ಗ್ರಾಂ ಚಿನ್ನಾಭರಣಗಳನ್ನು ಎಫ್‌ಎಸ್‌ಟಿ ತಂಡದ ಅಧಿಕಾರಿಗಳು ಗುರುವಾರ ವಶಪಡಿಸಿಕೊಂಡಿದ್ದಾರೆ.


ಬೆಳಗ್ಗೆ 10.45ರಲ್ಲಿ ಬೆಂಗಳೂರಿನಿಂದ ಕೊಳ್ಳೆಗಾಲಕ್ಕೆ ಬರುತ್ತಿದ್ದ ಕಾರಿನಲ್ಲಿ ಯಾವುದೇ ದಾಖಲೆ ಇಲ್ಲದೇ ಸಾಗಿಸುತ್ತಿದ್ದ ಕಾರ್ತಿಕ್ ಮತ್ತು ಚಿರಾಂತ್ ಅವರಿಂದ ಸತ್ತೇಗಾಲ ಚೆಕ್‌ಪೋಸ್ಟ್‌ನಲ್ಲಿ ಚಿನ್ನಾಭರಣಗಳನ್ನು ಎಂ.ರವಿಶಂಕರ್ ಜಪ್ತಿ ಮಾಡಿದ್ದಾರೆ.

ಆದಾಯ ತೆರಿಗೆ ಇಲಾಖೆಯ ಅನ್ವೇಷಣೆ ವಿಭಾಗದ ಸಹಾಯಕ ನಿರ್ದೇಶಕ ಆರ್.ರಂಗನಾಥ್, ಆದಾಯ ತೆರಿಗೆ ಇಲಾಖೆ ಅಧಿಕಾರಿಗ ಜಿ.ರಘು, ಜಿ.ದಿವಾಕರ್ ಅವರಿಂದ ತನಿಖೆ ಹಾಗೂ ಪರಿಶೀಲನಾ ಕಾರ್ಯ ಪ್ರಗತಿಯಲ್ಲಿದೆ ಎಂದು ಜಿಲ್ಲಾ ಚುನಾವಣಾಧಿಕಾರಿ ಶಿಲ್ಪನಾಗ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ಸತ್ತೇಗಾಲ ಚೆಕ್‌ಪೋಸ್ಟ್‌ನಲ್ಲಿ ದಾಖಲೆ ಇಲ್ಲದ 2 ಕೆಜಿ 170 ಗ್ರಾಂ ಚಿನ್ನಾಭರಣ ವಶಪಡಿಸಿಕೊಂಡ ಎಫ್‌ಎಸ್‌ಟಿ ತಂಡದ ಅಧಿಕಾರಿಗಳು.

ಆರ್‌ಟಿಐ ಕಾಯ್ದೆಯಡಿ ಚುನಾವಣಾ ಬಾಂಡ್‌ಗಳ ವಿವರ ನೀಡಲು ಎಸ್‌ಬಿಐ ನಕಾರ



ನವದೆಹಲಿ, ಏ.11– ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ (ಎಸ್‌ಬಿಐ) ಆರ್‌ಟಿಐ ಅಡಿಯಲ್ಲಿ ಚುನಾವಣಾ ಬಾಂಡ್‌ಗಳ ವಿವರಗಳನ್ನು ನೀಡುವುದಕ್ಕೆ ನಿರಾಕರಿಸಿದೆ.

ದಾಖಲೆಗಳು ಚುನಾವಣಾ ಆಯೋಗದ ವೆಬ್‌ಸೈಟ್‌ನಲ್ಲಿದ್ದು, ಸಾರ್ವಜನಿಕವಾಗಿ ಲಭ್ಯವಿದ್ದರೂ ವಿಶ್ವಾಸಾರ್ಹ ಆಧಾರದಲ್ಲಿ ವೈಯಕ್ತಿಕ ಮಾಹಿತಿ ಇರುವ ಕಾರಣ ಅದನ್ನು ಆರ್‌ಟಿಐನಲ್ಲಿ ನೀಡಲಾಗುವುದಿಲ್ಲ ಎಂದು ಹೇಳಿದೆ.

ಚುನಾವಣಾ ಬಾಂಡ್‌ಗಳ ಯೋಜನೆ ಅಸಂವಿಧಾನಿಕ ಮತ್ತು ಸ್ಪಷ್ಟವಾಗಿ ಅನಿಯಂತ್ರಿತವಾಗಿದೆ ಎಂಬುದನ್ನು ಪರಿಗಣಿಸಿದ ಸುಪ್ರೀಂಕೋರ್ಟ್, 2019ರ ಏಪ್ರಿಲ್ 12ರಿಂದ ಖರೀದಿಸಿದ ಬಾಂಡ್‌ಗಳ ಸಂಪೂರ್ಣ ವಿವರಗಳನ್ನು ಚುನಾವಣಾ ಆಯೋಗಕ್ಕೆ ಒದಗಿಸುವಂತೆ ಫೆಬ್ರವರಿ 15ರಂದು ಎಸ್‌ಬಿಐಗೆ ನಿರ್ದೇಶನ ನೀಡಿತ್ತು. ಅಷ್ಟೇ ಅಲ್ಲದೇ ಚುನಾವಣಾ ಆಯೋಗ ತನ್ನ ವೆಬ್‌ಸೈಟ್‌ನಲ್ಲಿ ಚುನಾವಣಾ ಬಾಂಡ್‌ಗಳಿಗೆ ಸಂಬಂಧಿಸಿದ ಮಾಹಿತಿಯನ್ನು ಮಾರ್ಚ್ 13ರಂದು ಪ್ರಕಟಿಸಬೇಕೆಂದು ಹೇಳಿತ್ತು.

ಮಾರ್ಚ್ 11 ರಂದು, ಗಡುವಿನ ವಿಸ್ತರಣೆಯನ್ನು ಕೋರಿ ಎಸ್‌ಬಿಐ ಸಲ್ಲಿಸಿದ ಅರ್ಜಿಯನ್ನು ನ್ಯಾಯಾಲಯವು ವಜಾಗೊಳಿಸಿತ್ತು. ಆರ್‌ಟಿಐ ಕಾರ್ಯಕರ್ತ ಕಮೋಡೋರ್ (ನಿವೃತ್ತ) ಲೋಕೇಶ್ ಬಾತ್ರಾ ಮಾರ್ಚ್ 13ರಂದು ಎಸ್‌ಬಿಐನ್ನು ಸಂಪರ್ಕಿಸಿ, ಸುಪ್ರೀಂ ಕೋರ್ಟ್‌ನ ಆದೇಶದ ನಂತರ ಇಸಿಗೆ ಒದಗಿಸಿದಂತೆ ಡಿಜಿಟಲ್ ರೂಪದಲ್ಲಿ ಚುನಾವಣಾ ಬಾಂಡ್‌ಗಳ ಸಂಪೂರ್ಣ ಡೇಟಾವನ್ನು ಕೋರಿದರು.

ಒಂದನೇ ಪುಟದಿಂದ

ಅಮಾನತು ಇಲ್ಲವೇ ವಜಾ

ಇನ್ನು ಈಶ್ವರಪ್ಪ, ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಪುತ್ರ ಬಿ.ವೈ. ರಾಘವೇಂದ್ರ ವಿರುದ್ಧ ಶಿವಮೊಗ್ಗದಲ್ಲಿ ಬಂಡಾಯ ಅಭ್ಯರ್ಥಿಯಾಗಿ ಕಣಕ್ಕಿಳಿಯುವುದಾಗಿ ಮತ್ತೆ ಘೋಷಣೆ ಮಾಡಿದ್ದಾರೆ. ಅಷ್ಟೇ ಅಲ್ಲ ನಾಳೆಯೇ ನಾಮಪತ್ರ ಸಲ್ಲಿಸುವುದಾಗಿಯೂ ಹೇಳಿಕೆ ಇತ್ತಿದ್ದಾರೆ.

ಪಕ್ಷದ ನೆಲೆಗಟ್ಟಿನ ಸಿದ್ಧಾಂತದ ಮೇಲೆ ಬಂದವರೇ ಬಂಡಾಯ ಎದ್ದರೆ ಉಳಿದ ಕಾರ್ಯಕರ್ತರಿಗೂ, ಮುಖಂಡರಿಗೂ ಭಯ ಇಲ್ಲದಂತಾಗುತ್ತದೆ ಎಂಬ ಹಿನ್ನೆಲೆಯಲ್ಲಿ ದೆಹಲಿ ವರಿಷ್ಠರು ಶಿಸ್ತು ಕ್ರಮಕ್ಕೆ ಮುಂದಾಗಿದ್ದಾರೆ.

ಶಾಸಕರನ್ನು ವಜಾಗೊಳಿಸಿದರೆ ಕಾಂಗ್ರೆಸ್‌ಗೆ ಸೇರ್ಪಡೆಗೊಳ್ಳಲು ದಾರಿ ಸುಗಮವಾಗುತ್ತದೆ ಎಂಬ ಹಿನ್ನೆಲೆಯಲ್ಲಿ ಅವರನ್ನು ಸದ್ಯ ಅಮಾನತ್ತಿನಲ್ಲಿಡಲು ಪಕ್ಷ ತೀರ್ಮಾನಿಸಿದೆ ಎನ್ನಲಾಗಿದೆ.

ಕೈಯಲ್ಲಿ ಕಿತ್ತುಕೊಳ್ಳೋದೇ 'ಗ್ಯಾರಂಟಿ'

ಬರುವ ಅಪೇಕ್ಷೆ ಇರಲಿಲ್ಲ. ಪ್ರಧಾನಿ ಮೋದಿಯವರ ನಾಯಕತ್ವ ಮೆಚ್ಚಿ ರಾಜಕಾರಣಕ್ಕೆ ಬಂದಿರುವ ಅವರನ್ನು ಗೆಲ್ಲಿಸುವ ಮೂಲಕ ಪ್ರಧಾನಿ ಮೋದಿಯವರನ್ನು ಕೈ ಬಲಪಡಿಸಬೇಕಿದೆ. ಈ ನಿಟ್ಟಿನಲ್ಲಿ ಬೂತ್ ಮಟ್ಟದಲ್ಲಿ ಮತಗಳ ಸಂಖ್ಯೆ ಜಾಸ್ತಿಯಾಗಬೇಕು. ಹಾಗೆಯೇ ಯದುವೀರ್ ಅವರು 2 ಲಕ್ಷ ಮತಗಳ ಅಂತರದಿಂದ ಗೆಲ್ಲುವುದು ನಿಶ್ಚಿತವೆಂದು ಭವಿಷ್ಯ ನುಡಿದರು.

ದೇಶದ ರಕ್ಷಣೆಯೇ ಮೋದಿ ಗ್ಯಾರಂಟಿ: ಬಹಿರಂಗ ಸಭೆಯ ಆರಂಭದಲ್ಲಿ ಮಾತನಾಡಿದ ಹಿರಿಯ ವಕೀಲ ಅರುಣ್ ಕುಮಾರ್, ದೇಶದ ರಕ್ಷಣೆಯೇ ಮೋದಿ ಗ್ಯಾರಂಟಿ. ಆರ್ಟಿಕಲ್ 370 ರದ್ದು ಮಾಡಿದ್ದೆ ಪ್ರಧಾನಿ ಮೋದಿಯವರ ದೊಡ್ಡ ಸಾಧನೆಯಾಗಿದ್ದು, ರಾಜಕೀಯ ಕುತಂತ್ರಕ್ಕೆ ದಾರಿಯಾಗಿದ್ದ ಜಮ್ಮು ಮತ್ತು ಕಾಶ್ಮೀರವಿಂದು ಬಂದ್ ಆಗಿದೆ. ಈ ಲೋಕಸಭಾ ಚುನಾವಣೆ ದೇಶದ ಚುನಾವಣೆಯಾಗಿದ್ದು, ದೇಶದ ಪ್ರತಿಬಿಂಬವೂ ಆಗಿದೆ. ವಿಶ್ವಕ್ಕೆ ಪ್ರಧಾನಿ ಮೋದಿಯವರು ಗೆಲ್ಲುವುದು ಮುಖ್ಯ ವಾಗಿದೆ ಎಂದರು.

ಶಾಸಕ ಟಿ.ಎಸ್.ಶ್ರೀವತ್ಸ, ಬಿಜೆಪಿ ಹಿಂದುಳಿದ ವರ್ಗಗಳ ಮೋರ್ಚಾ ರಾಜ್ಯಾಧ್ಯಕ್ಷ ರಘು ಕೌಟಿಲ್ಯ, ಅಲ್ಪಸಂಖ್ಯಾತ ಮೋರ್ಚಾ ರಾಜ್ಯಾಧ್ಯಕ್ಷ ಅನಿಲ್ ಥಾಮಸ್, ಮಾಜಿ ಮೇಯರ್ ಶಿವಕುಮಾರ್, ನಗರಪಾಲಿಕೆ ಮಾಜಿ ಸದಸ್ಯರಾದ ಮಾವಿ ರಾಮ್ ಪ್ರಸಾದ್, ಬಿ.ವಿ.ಮಂಜುನಾಥ್, ಮುಖಂಡರಾದ ಹೆಚ್.ಜಿ.ಗಿರಿಧರ್, ಗೋಪಾಲ್ ರಾಜೇ ಅರಸ್ ಮತ್ತಿತರರಿದ್ದರು.

> **❝ ಮೈಸೂರು ರಾಜಮನೆತನದ ಯದುವೀರ್ ಅವರು ರಾಜಕೀಯಕ್ಕೆ ಬರುತ್ತಾರೆ ಎಂಬ ಸುದ್ದಿ ಮಾಧ್ಯಮಗಳಲ್ಲಿ ಚರ್ಚೆಯಾಗುತ್ತಿದ್ದಂತೆ ಸ್ವತಃ ಸಿಎಂ ಮತ್ತು ಡಿಸಿಎಂ ಯದುವೀರ್ ಅವರಿಗೆ ಕರೆ ಮಾಡಿ, ನೀವು ರಾಜಕೀಯಕ್ಕೆ ಬರುವುದಾದರೆ ಕಾಂಗ್ರೆಸ್‌ನಿಂದಲೇ ನಿಮಗೆ ಟಿಕೆಟ್ ನೀಡುತ್ತೇವೆ ಎಂದು ಕರೆದಿದ್ದರು. ಇದಕ್ಕೆ ಪ್ರತಿಕ್ರಿಯೆ ನೀಡಿದ ಯದುವೀರ್ ಅವರು, ಪ್ರಧಾನಿ ಮೋದಿಯವರ ನಾಯಕತ್ವದ ಬಿಜೆಪಿ ಸೇರುತ್ತೇನೆಯೇ ಹೊರತು ಕಾಂಗ್ರೆಸ್‌ಗೆ ಬರಲ್ಲ ಎಂದಿದ್ದಾರೆ. ಇದರಿಂದಲೇ ಪ್ರಧಾನಿ ಮೋದಿಯವರು ದೇಶದ ಮೇಲಿಟ್ಟಿರುವ ಕಳಕಳಿ, ದೇಶಪ್ರೇಮ ಎಂತಹದ್ದು ಎಂಬುದು ತಿಳಿಯುತ್ತದೆ.**
>
> –ಬಿ.ವೈ.ವಿಜಯೇಂದ್ರ ಬಿಜೆಪಿ ರಾಜ್ಯಾಧ್ಯಕ್ಷ

ಸಂವಿಧಾನ ಆಶಯ ಜಾರಿಗೆ ಕಾಂಗ್ರೆಸ್ ಬೆಂಬಲಿಸಿ

ಸಂದಾಯ ಮಾಡುವಂತಾಗಿದೆ. ಇದು ಬಿಜೆಪಿಯವರು ಮಾಡುತ್ತಿರುವ ಮೋಸ. ಮತ್ತೆ ಮೋದಿ ಅಧಿಕಾರಕ್ಕೆ ಬಂದರೆ ದೇಶ ಇನ್ನೂ ಕರಾಳ ಸ್ಥಿತಿಗೆ ತಲುಪಲಿದೆ ಎಂದು ಹೇಳಿದರು. ಮುಡಾ ಮಾಜಿ ಅಧ್ಯಕ್ಷ ಹೆಚ್.ವಿ.ರಾಜೀವ್ ಮಾತನಾಡಿ, ರಾಜ್ಯ ಸರ್ಕಾರದ ಐದು ಗ್ಯಾರಂಟಿಗಳಿಂದ ಸರ್ವರು ಸಂತೃಪ್ತರಾಗಿದ್ದಾರೆ. ಈ ಬಾರಿಯ ಚುನಾವಣೆಯಲ್ಲಿ ಎಲ್ಲಾ 28 ಕ್ಷೇತ್ರಗಳು ಕಾಂಗ್ರೆಸ್ ಪಾಲಾಗಲಿದ್ದು, ಆ ಬಳಿಕ ಮೋದಿ ಮಾಡೆಲ್ ಅಲ್ಲ. ಬದಲಿಗೆ ಸಿದ್ದರಾಮಯ್ಯ ಮಾಡೆಲ್ ಬಗ್ಗೆ ಚರ್ಚೆಯಾಗಲಿದೆ. ಇಡೀ ರಾಜ್ಯದಲ್ಲಿ ಸರ್ಕಾರದ ಗ್ಯಾರಂಟಿಗಳಿಂದ ನೆಮ್ಮದಿ ಬದುಕು ಸಿಕ್ಕಿದೆ ಎಂಬ ವಿಶ್ವಾಸ ವ್ಯಕ್ತವಾಗುತ್ತಿದೆ. ಗ್ಯಾರಂಟಿಗಳಿಂದ ಕಟ್ಟಕಡೆಯ ವ್ಯಕ್ತಿಗೆ ಖರೀದಿಸುವ ಶಕ್ತಿ ಬಂದಿದೆ ಎಂದು ತಿಳಿಸಿದರು.

ಕಾಂಗ್ರೆಸ್‌ನ ಹಿಂದುಳಿದ ವರ್ಗಗಳ ವಿಭಾಗ ನಗರಾಧ್ಯಕ್ಷ ಎನ್.ಆರ್.ನಾಗೇಶ್ ಮಾತನಾಡಿ, 2013–19ರ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ರಾಜ್ಯ ಸರ್ಕಾರವು ಸವಿತ ಸಮಾಜ, ಗಾಣಿಗ, ಉಪ್ಪಾರ, ಕುಂಬಾರ ಸೇರಿದಂತೆ ಎಲ್ಲಾ ಕಾಯಕ ಸಮಾಜಗಳ ಶ್ರೇಯೋಭಿವೃದ್ಧಿಗೆ ಹತ್ತಾರು ಕಾರ್ಯಕ್ರಮಗಳನ್ನು ನೀಡಿತು. ಆದರೆ ತದನಂತರ ಬಂದ ಬಿಜೆಪಿ ಸರ್ಕಾರ ಕಾಯಕ ಸಮಾಜಗಳಿಗೆ ಯಾವುದೇ ಕಾರ್ಯಕ್ರಮ ನೀಡಲಿಲ್ಲ. ಕಾಯಕ ಸಮಾಜಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸರ್ಕಾರದ ಕೊಡುಗೆಗಳನ್ನು ಜನತೆಗೆ ತಿಳಿಸಿ ಕಾಂಗ್ರೆಸ್‌ಗೆ ಮತ ಕೇಳಬೇಕು. ನಮ್ಮ ಸಮುದಾಯಗಳ ಹಿತ ಕಾಯುವ ಕಾಂಗ್ರೆಸ್ ಪರವಾಗಿ ನಾವೆಲ್ಲರೂ ಕೆಲಸ ಮಾಡಬೇಕೆಂದು ಕೋರಿದರು. ಗ್ಯಾರಂಟಿ ಫಲಾನುಭವಿ ಮಹಿಳೆಯರು ಭಾರೀ ಸಂಖ್ಯೆಯಲ್ಲಿ ಪಾಲ್ಗೊಂಡಿದ್ದರು. ಮಾಜಿ ಶಾಸಕ ನಂಜುಂಡಸ್ವಾಮಿ, ಕಾಂಗ್ರೆಸ್ ಮುಖಂಡ ಕೋಟೆ ಎಂ.ಶಿವಣ್ಣ, ಕಾಂಗ್ರೆಸ್ ನಗರಾಧ್ಯಕ್ಷ ಆರ್.ಮೂರ್ತಿ, ಪ್ರಧಾನ ಕಾರ್ಯದರ್ಶಿ ಎಂ.ಶಿವಣ್ಣ, ಮಾಜಿ ಮೇಯರ್‌ಗಳಾದ ಪುರುಷೋತ್ತಮ್, ಟಿ.ಬಿ.ಚಿಕ್ಕಣ್ಣ, ಪುಷ್ಪಲತಾ ಚಿಕ್ಕಣ್ಣ, ಅತಿ ಹಿಂದುಳಿದ ವರ್ಗಗಳ ಜಾಗೃತಿ ವೇದಿಕೆ ರಾಜ್ಯಾಧ್ಯಕ್ಷ ಎಂ.ಸಿ.ವೇಣುಗೋಪಾಲ್, ಪ್ರಧಾನ ಕಾರ್ಯದರ್ಶಿ ಎಂ.ನಾಗರಾಜು, ಜಿಲ್ಲಾಧ್ಯಕ್ಷ ಡಿ.ನಾಗ ಭೂಷಣ್, ಹಿಂದುಳಿದ ವರ್ಗಗಳ ಜಾಗೃತ ವೇದಿಕೆ ರಾಜ್ಯಾಧ್ಯಕ್ಷ ಕೆ.ಎಸ್.ಶಿವರಾಮು ಮತ್ತಿತರರು ಹಾಜರಿದ್ದರು.

ಬೊಂಬೆ ಹೇಳುತ್ತೈತೆ 'ಮೋದಿ ಮತ್ತೆ ಪ್ರಧಾನಿ'!

ಮುಂದೆ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ ರಾಜ್ಯದಲ್ಲಿ ಅಧಿಕಾರಕ್ಕೆ ಬರಲಿದೆ ಎಂದು ಬೊಂಬೆ ಭವಿಷ್ಯ ನುಡಿದಿತ್ತು. ಯುಗಾದಿ ಹಬ್ಬದ ಮುನ್ನ ಹುಣ್ಣಿಮೆ ದಿನದಂದು ಬೊಂಬೆಗಳನ್ನು ಸ್ಥಳೀಯ ಹೊಳೆಯ ದಡದಲ್ಲಿ ನಾಲ್ಕು ದಿಕ್ಕುಗಳಲ್ಲಿ ಸ್ಥಾಪಿಸಲಾಗುತ್ತದೆ. ಮರುದಿನ, ಭವಿಷ್ಯಕಾರರು ನಿರ್ದಿಷ್ಟ ದಿಕ್ಕುಗಳಲ್ಲಿನ ಬೊಂಬೆಗಳನ್ನು ವಿಶ್ಲೇಷಿಸುತ್ತಾರೆ. ಮಳೆ–ಬೆಳೆ ಸೇರಿದಂತೆ ಇತರ ವಿಷಯಗಳ ಬಗ್ಗೆ ಭವಿಷ್ಯ ನುಡಿಯುತ್ತಾರೆ. ಈ ಬೊಂಬೆಗಳಿಗೆ ಹಾನಿಯಾದರೆ ಅಧಿಕಾರವೇ ಬದಲಾಗುತ್ತದೆ ಎಂದು ವಿಶ್ಲೇಷಿಸಲಾಗಿದೆ. ಈ ಬಾರಿ ಬೊಂಬೆಗಳು ಸುರಕ್ಷಿತವಾಗಿದ್ದು, ಯಾವುದೇ ಭಾಗಕ್ಕೆ ಹಾನಿಯಾಗಿಲ್ಲ. ಈ ಹಿನ್ನಲೆಯಲ್ಲಿ ಕೇಂದ್ರ ಹಾಗೂ ರಾಜ್ಯ ಮಟ್ಟದಲ್ಲಿ ಅಧಿಕಾರಕ್ಕೆ ತೊಂದರೆಯಾಗುವುದಿಲ್ಲ ಎಂದು ಭವಿಷ್ಯ ನುಡಿದಿದ್ದಾರೆ.

ಇಂದಿನಿಂದ ನಾಮಪತ್ರ ಸಲ್ಲಿಕೆ

ಎಸ್.ಬಂಗಾರಪ್ಪ ಪುತ್ರಿ ಗೀತಾ ಶಿವರಾಜ್‌ಕುಮಾರ್ ಕಣಕ್ಕಿಳಿಯಲಿದ್ದಾರೆ.

ಸಚಿವ ಎಸ್.ಎಸ್.ಮಲ್ಲಿಕಾರ್ಜುನ್ ಪತ್ನಿ ಪ್ರಭಾವತಿ ಮಲ್ಲಿಕಾರ್ಜುನ್ (ದಾವಣಗೆರೆ), ಇದೇ ಕ್ಷೇತ್ರದಲ್ಲಿ ಸಂಸದ ಸಿದ್ದೇಶ್ವರ್ ಪತ್ನಿ ಗಾಯತ್ರಿ ಸಿದ್ದೇಶ್ವರ್ ಕಣಕ್ಕಿಳಿಯುತ್ತಿದ್ದಾರೆ. ಸಚಿವ ಸತೀಶ್ ಜಾರಕಿಹೊಳಿ ಪುತ್ರಿ ಪ್ರಿಯಾಂಕ (ಚಿಕ್ಕೋಡಿ), ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಪುತ್ರ ಮೃಣಾಲ್ ಹೆಬ್ಬಾಳ್ಕರ್, ಸಚಿವ ಶಿವಾನಂದ ಪಾಟೀಲ್ ಪುತ್ರಿ ಸಂಯುಕ್ತ ಪಾಟೀಲ್ (ಬಾಗಲಕೋಟೆ), ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅಳಿಯ ರಾಧಾಕೃಷ್ಣ ದೊಡ್ಡಮನಿ (ಗುಲ್ಬರ್ಗ) ಕಾಂಗ್ರೆಸ್ ಅಭ್ಯರ್ಥಿಗಳಾಗಿ ಕಣಕ್ಕಿಳಿಯಲಿದ್ದಾರೆ. ಮಾಜಿ ಉಪಮುಖ್ಯಮಂತ್ರಿ ಬಿ.ಶ್ರೀರಾಮುಲು ಬಳ್ಳಾರಿ ಕ್ಷೇತ್ರದಿಂದ ಬಿಜೆಪಿ ಅಭ್ಯರ್ಥಿಯಾಗಿ, ಕೇಂದ್ರ ಸಚಿವ ಪ್ರಹ್ಲಾದ್ ಜೋಷಿ ಧಾರವಾಡದಿಂದ, ವಿಧಾನಸಭೆಯ ಮಾಜಿ ಸ್ಪೀಕರ್ ವಿಶ್ವೇಶ್ವರ ಹೆಗಡೆ ಕಾಗೇರಿ ಉತ್ತರ ಕನ್ನಡ ಕ್ಷೇತ್ರದಿಂದ ಕಣಕ್ಕಿಳಿಯುತ್ತಿದ್ದಾರೆ. ಈಗಾಗಲೇ ಹಳೇ ಮೈಸೂರು ಭಾಗದ ಚಾಮರಾಜನಗರ, ಮೈಸೂರು–ಕೊಡಗು, ಹಾಸನ, ಚಿಕ್ಕಮಗಳೂರು–ಉಡುಪಿ, ದಕ್ಷಿಣ ಕನ್ನಡ, ಚಿತ್ರದುರ್ಗ, ತುಮಕೂರು, ಚಿಕ್ಕಬಳ್ಳಾಪುರ, ಕೋಲಾರ, ಮಂಡ್ಯ ಬೆಂಗಳೂರು ಗ್ರಾಮಾಂತರ, ಬೆಂಗಳೂರು ದಕ್ಷಿಣ, ಬೆಂಗಳೂರು ಉತ್ತರ ಹಾಗೂ ಬೆಂಗಳೂರು ಕೇಂದ್ರ ಲೋಕಸಭಾ ಕ್ಷೇತ್ರಗಳಿಗೆ ಮೊದಲ ಹಂತದಲ್ಲಿ ಚುನಾವಣಾ ಪ್ರಕ್ರಿಯೆ ಆರಂಭಗೊಂಡಿದೆ.

ಮೈಸೂರಿನಲ್ಲಿ ಭಕ್ತಿ ಭಾವದ ರಂಜಾನ್ ಆಚರಣೆ

ತಿಲಕ್‌ನಗರದ ಈದ್ಗಾ ಮೈದಾನದಲ್ಲಿ ಮುಸ್ಲಿಂ ಬಾಂಧವರಿಂದ ಸಾಮೂಹಿಕ ಪ್ರಾರ್ಥನೆ





ಮೈಸೂರಿನ ತಿಲಕ್‌ನಗರದ ಈದ್ಗಾ ಮೈದಾನದಲ್ಲಿ ಗುರುವಾರ ರಂಜಾನ್ ಹಬ್ಬದ ಹಿನ್ನೆಲೆ ಸರ್ ಖಾಜಿ ಹಜರತ್ ಮೌಲಾನಾ ಮೊಹಮ್ಮದ್ ಉಸ್ಮಾನ್ ಷರೀಫ್ ಅವರು ಧರ್ಮ ಬೋಧನೆ ಮಾಡಿದರು. (ಎಡಚಿತ್ರ) ಸಾಮೂಹಿಕ ವಿಶೇಷ ಪ್ರಾರ್ಥನೆಯಲ್ಲಿ ಭಾಗವಹಿಸಿದ್ದ ಸಾವಿರಾರು ಜನರನ್ನು (ಬಲಚಿತ್ರ) ಕಾಣಬಹುದು.

- ಸರ್ ಖಾಜಿ ಅವರಿಂದ ಧರ್ಮ ಬೋಧನೆ
- ಸಾವಿರಾರು ಮುಸ್ಲಿಂ ಬಾಂಧವರು ಭಾಗಿ
- ಜಕಾತ್, ಫಿತ್ರಾ ಪಾಲನೆಗೆ ಸಲಹೆ
- ಒಂದು ತಿಂಗಳ ಉಪವಾಸ ಮುಕ್ತಾಯ

ಮೈಸೂರು, ಏ.11(ಬಿಎಲ್‌ಯು)– ಮೈಸೂರಿನಲ್ಲಿ ಇಂದು ಮುಸ್ಲಿಂ ಬಾಂಧವರು ರಂಜಾನ್ (ಈದ್– ಉಲ್– ಫಿತರ್) ಹಬ್ಬವನ್ನು ಸಡಗರ–ಸಂಭ್ರಮ ಹಾಗೂ ಭಕ್ತಿ ಭಾವದಿಂದ ಆಚರಿಸಿದರು. ಮೈಸೂರಿನ ತಿಲಕ್‌ನಗರದ ಈದ್ಗಾ ಮೈದಾನದಲ್ಲಿ ನಡೆದ ಸಾಮೂಹಿಕ ಪ್ರಾರ್ಥನೆಯಲ್ಲಿ ಸಾವಿರಾರು ಜನರು ಭಾಗವಹಿಸಿದ್ದರು. ದೇಶದಲ್ಲಿ ಶಾಂತಿ ನೆಲೆಸಿ, ಉತ್ತಮ ಮಳೆ, ಬೆಳೆಯಿಂದ ಸಮೃದ್ಧಿ ನೆಲೆಸಲಿ ಎಂದು ದೇವರಲ್ಲಿ ಈ ವೇಳೆ ಪ್ರಾರ್ಥಿಸಿದರು.

ಕಳೆದ ಒಂದು ತಿಂಗಳಿಂದ ಉಪವಾಸ ಇದ್ದ ಮುಸ್ಲಿಂ ಬಾಂಧವರು ಇಂದು ನಗರದ ಈದ್ಗಾ ಮೈದಾನದಲ್ಲಿ ಸಾಮೂಹಿಕ ಪ್ರಾರ್ಥನೆಯಲ್ಲಿ ಭಾಗವಹಿಸಿದ್ದರು.

ಸರ್ ಖಾಜಿ ಹಜರತ್ ಮೌಲಾನಾ ಮೊಹಮ್ಮದ್ ಉಸ್ಮಾನ್ ಷರೀಫ್, ಧರ್ಮ ಬೋಧನೆ ಮಾಡಿದರು. ಕೋಮು ಸೌಹಾರ್ದತೆಯಿಂದ ದೇಶದಲ್ಲಿ ಶಾಂತಿಯ ವಾತಾವರಣ ನಿರ್ಮಾಣವಾಗಲಿ. ಮಳೆ, ಬೆಳೆ ಹಾಗೂ ಸಮೃದ್ಧಿ ನೆಲೆಸಲಿ ಎಂದು ಪ್ರಾರ್ಥಿಸಲಾಯಿತು. ತಮಗೆ ಬರುವ ಆದಾಯದಲ್ಲಿ ಶೇ.2.5ರಷ್ಟನ್ನು ಬಡವರಿಗೆ ದಾನ ಮಾಡಬೇಕು ಎಂಬ ಇಸ್ಲಾಂ ಧರ್ಮದ ಜಕಾತ್ ಪಾಲಿಸಬೇಕು. ಜೊತೆಗೆ ಫಿತ್ರಾದಲ್ಲಿ ಪ್ರತಿಯೊಬ್ಬರು 90 ರೂಪಾಯಿಗಳನ್ನು ದಾನ ಮಾಡಬೇಕೆಂದು ಈ ಸಂದರ್ಭದಲ್ಲಿ ಸಲಹೆ ನೀಡಲಾಯಿತು. ಇಸ್ಲಾಂ ಧರ್ಮದಂತೆ ಇದನ್ನು ಪಾಲನೆ ಮಾಡುವಂತೆ ತಿಳಿ ಹೇಳಲಾಯಿತು. ಇದಕ್ಕೆ ಪ್ರತಿಯೊಬ್ಬರು ದನಿಗೂಡಿಸಿದರು.

ಈ ವೇಳೆ ಧರ್ಮ ಸಂದೇಶ ನೀಡಿದ ಸರ್ ಖಾಜೀ ಹಜರತ್ ಮೌಲಾನಾ ಮೊಹಮ್ಮದ್ ಉಸ್ಮಾನ್ ಷರೀಫ್, ಪ್ರತಿಯೊಬ್ಬರು ಐಕ್ಯತೆಯಿಂದ ಒಗ್ಗಟ್ಟನ್ನು ಪ್ರದರ್ಶಿಸಬೇಕು. ಹಿಂದೂ ಧರ್ಮಿಯರ ಹಬ್ಬದಲ್ಲಿ ನೀವು ಭಾಗಿಯಾಗಿ, ನಿಮ್ಮ ಹಬ್ಬದಲ್ಲಿ ಹಿಂದೂ ಧರ್ಮಿಯರನ್ನು ಭಾಗಿಯಾಗಿಸಿಕೊಳ್ಳಿ ಎಂದು ಕಿವಿಮಾತು ಹೇಳಿದರು.

ಶುದ್ಧತೆ, ಶಾಂತಿಯ ಸಂಕೇತವಾದ ಶ್ವೇತ ವರ್ಣದ ಬಟ್ಟೆಯನ್ನು ಎಲ್ಲರೂ ಧರಿಸಿದ್ದರು. ಪ್ರಾರ್ಥನೆ ನಂತರ ಒಬ್ಬರಿಗೊಬ್ಬರು ಪರಸ್ಪರ ಆಲಂಗಿಸಿ, ಹಸ್ತಲಾಘವ ನೀಡಿ ರಂಜಾನ್ ಹಬ್ಬದ ಸಂಭ್ರಮವನ್ನು ವಿನಿಮಯ ಮಾಡಿಕೊಂಡರು.


ರಂಜಾನ್ ಹಿನ್ನೆಲೆಯಲ್ಲಿ ಕಳೆದೊಂದು ತಿಂಗಳ ಅವಧಿಯಲ್ಲಿ ಬೆಳಗ್ಗೆ 5 ಗಂಟೆಯಿಂದ ಸಂಜೆ 6.38 ಗಂಟೆ ತನಕ ಉಪವಾಸ ಇದ್ದು ನಿರಂತರ ಪ್ರಾರ್ಥನೆ ಸಲ್ಲಿಸಿದ್ದ ಮುಸ್ಲಿಂ ಬಾಂಧವರು ಇಂದು ರಂಜಾನ್ ಆಚರಣೆ ಮೂಲಕ ಉಪವಾಸ ಅಂತ್ಯಗೊಳಿಸಿದರು.

ಪ್ರಾರ್ಥನೆಯಲ್ಲಿ ಭಾಗವಹಿಸಿದ ನಂತರ ಬಹಳಷ್ಟು ಜನರು ನೇರವಾಗಿ ಖಬರಸ್ತಾನ್‌ಗೆ ಹೋಗಿ ತಮ್ಮನ್ನು ಅಗಲಿದವರ ಸಮಾಧಿಗಳಿಗೆ ಪುಷ್ಪನಮನ ಸಲ್ಲಿಸಿ, ಆತ್ಮಕ್ಕೆ ಶಾಂತಿ ಕೋರಿದರು. ಸಾಮಾನ್ಯವಾಗಿ ಮಧುಮೇಹ ರೋಗ ಇದ್ದವರಿಗೆ ಒಂದು ಹೊತ್ತು ಉಪವಾಸ ಇದ್ದರೂ ಅನಾರೋಗ್ಯ ಎದುರಾಗುತ್ತದೆ. ಆದರೆ ರಂಜಾನ್ ವೇಳೆ ದೇವರ ಹೆಸರಿನಲ್ಲಿ ಒಂದು ತಿಂಗಳು ಉಪವಾಸ ಇದ್ದರೂ ಯಾರಿಗೂ ಯಾವುದೇ ರೀತಿಯ ಅನಾರೋಗ್ಯ ಎದುರಾಗದಿರುವುದು ದೇವರ ದಯೆ ಎಂದು ಮುಸ್ಲಿಂ ಬಾಂಧವರು ನಂಬಿದ್ದಾರೆ. ಮೈಸೂರಿನ ರಾಜೀವ್‌ನಗರದ ಈದ್ಗಾ ಮೈದಾನದಲ್ಲಿ ಕೂಡ ಇಂದು ಬೆಳಗ್ಗೆ 8.30 ಗಂಟೆಗೆ ಸಾಮೂಹಿಕ ಪ್ರಾರ್ಥನೆ ಸಲ್ಲಿಸಲಾಯಿತು. ಗೌಸಿಯಾ ನಗರದ ಹಲವು ಮಸೀದಿಗಳಲ್ಲಿ ಪ್ರಾರ್ಥನೆ ಮಾಡಲಾಯಿತು. ನರಸಿಂಹರಾಜ ಕ್ಷೇತ್ರದ ಶಾಸಕ ತನ್ವೀರ್ ಸೇಠ್ ಅಶೋಕ ರಸ್ತೆಯ ಮಜ್ದೀದ್ ಕಚ್ಚಿ ಮೈಮನ್‌ನಲ್ಲಿ ಪ್ರಾರ್ಥನೆ ಸಲ್ಲಿಸಿದರು. ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಎಂ.ಲಕ್ಷ್ಮಣ, ಸರ್ ಖಾಜಿ ಅವರನ್ನು ಅಭಿನಂದಿಸಿ, ರಂಜಾನ್ ಶುಭಾಶಯ ಕೋರಿದರು.

ಮೈಸೂರು ಜಿಲ್ಲೆಯ ವಕ್ಫ್ ಸಲಹಾ ಸಮಿತಿ ಅಧ್ಯಕ್ಷ ಗಯಾಸ್ ಅಹಮ್ಮದ್ ಅಕ್ರಂ, ಮೈಸೂರು ಮತ್ತು ಮಂಡ್ಯ ಜಿಲ್ಲೆ ವಕ್ಫ್ ಅಧಿಕಾರಿ ಮುಸ್ತಾಕ್ ಅಹಮ್ಮದ್, ವಿಶ್ರಾಂತ ಕುಲಪತಿ ಡಾ.ಸೈಯ್ಯದ್ ಅಕೀಲ್ ಅಹಮ್ಮದ್, ಎಸ್ ಜೆಸಿಇ ವಿಶ್ರಾಂತ ಪ್ರಾಂಶುಪಾಲ ಡಾ.ಸೈಯ್ಯದ್ ಶಕೀಬ್ ಉರ್ ರೆಹಮಾನ್ ಷರೀಫ್, ಜಮೀಲ್ ಅಹಮ್ಮದ್ ಹಶರಫಿ, ಮೌಲಾನಾ ಅಬ್ದುಲ್ ಸಲಾಂ ರಜ್ವಿ, ಅನ್ವೀರ್ ಬೇಗ್ ಅಲ್ತಾಫ್, ಕಾಂಗ್ರೆಸ್ ಮುಖಂಡ ಶೌಕತ್ ಅಲಿ ಖಾನ್, ಮಾಜಿ ಕಾರ್ಪೋರೇಟರ್ ಸುಹೇಲ್ ಬೇಗ್ ಸೇರಿದಂತೆ ಸಾವಿರಾರು ಜನರು ಸಾಮೂಹಿಕ ಪ್ರಾರ್ಥನೆಯಲ್ಲಿ ಭಾಗವಹಿಸಿದ್ದರು.

ಕಡ್ಡಾಯ ಮತದಾನಕ್ಕೆ ಸಲಹೆ

ಏಪ್ರಿಲ್ 26ರಂದು ನಡೆಯುವ ಲೋಕಸಭಾ ಚುನಾವಣೆಯಲ್ಲಿ ಕಡ್ಡಾಯವಾಗಿ ಪ್ರತಿಯೊಬ್ಬರು ಮತದಾನ ಮಾಡಬೇಕು ಎಂಬ ಸಂದೇಶ ಈ ಬಾರಿಯ ರಂಜಾನ್ ಹಬ್ಬದ ವಿಶಿಷ್ಟತೆಯಾಗಿತ್ತು. ಮತದಾನ ನಮ್ಮ ಹಕ್ಕು ಮಾತ್ರವಲ್ಲದೆ ಕರ್ತವ್ಯ ಎಂದು ಪರಿಗಣಿಸಬೇಕು. ಪುರುಷರಷ್ಟೆ ಅಲ್ಲದೆ ಮಹಿಳೆಯರು ಕೂಡ ಮತದಾನದಲ್ಲಿ ಭಾಗಿಯಾಗಿ ಶೇಕಡ 100ರಷ್ಟು ಮತದಾನ ಮಾಡಬೇಕು ಎಂದು ಸರ್ ಖಾಜಿ ಹಜರತ್ ಮೌಲಾನಾ ಮೊಹಮ್ಮದ್ ಉಸ್ಮಾನ್ ಷರೀಫ್ ಸಲಹೆ ನೀಡಿದರು. ಕಡ್ಡಾಯ ಮತದಾನದ ಮೂಲಕ ಒಳ್ಳೆಯ ಸರ್ಕಾರ ರಚನೆಗೆ ಅವಕಾಶ ಮಾಡಿಕೊಡಬೇಕು. ಯಾರೂ ಕೂಡ ಮತದಾನದಿಂದ ದೂರ ಉಳಿಯಬಾರದು ಎಂದು ತಿಳಿ ಹೇಳಿದರು. ಸಾಮೂಹಿಕ ಪ್ರಾರ್ಥನೆ ಮುಗಿದ ನಂತರ ಕೂಡ ಮೈಕ್‌ನಲ್ಲಿ ಕಡ್ಡಾಯ ಮತದಾನ ಮಾಡಿ ಎಂದು ಜಾಗೃತಿ ಸಂದೇಶ ಸಾರಲಾಗುತ್ತಿತ್ತು.



ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಎಂ.ಲಕ್ಷ್ಮಣ, ಸರ್ ಖಾಜಿ ಅವರನ್ನು ಅಭಿನಂದಿಸಿ, ರಂಜಾನ್ ಶುಭಾಶಯ ಕೋರಿದರು.

ಸರ್ವೆ ಕಚೇರಿಯಲ್ಲಿ ರಾಷ್ಟ್ರೀಯ ಭೂಮಾಪನ ದಿನಾಚರಣೆ



ನಜ಼ರ್‌ಬಾದ್‌ನಲ್ಲಿರುವ ಭೂ ಮಾಪನ ಕಚೇರಿಯಲ್ಲಿ ಗುರುವಾರ 35ನೇ ವರ್ಷ ರಾಷ್ಟ್ರೀಯ ಭೂ ಮಾಪನಾ ದಿನ ಆಚರಿಸಲಾಯಿತು.

ಮೈಸೂರು, ಏ.11(ಎಂಟಿವೈ)– ಮೈಸೂರಿನ ನಜ಼ರ್‌ಬಾದ್‌ನಲ್ಲಿರುವ ಭೂ ಮಾಪನ ಕಚೇರಿಯಲ್ಲಿ ಗುರುವಾರ 35ನೇ ವರ್ಷದ ರಾಷ್ಟ್ರೀಯ ಭೂ ಮಾಪನಾ ದಿನ ಆಚರಿಸಲಾಯಿತು.

ಭೂ ಮಾಪನ ಕಚೇರಿಯಲ್ಲಿ ಬ್ರಿಟಿಷರ ಕಾಲದಲ್ಲಿ ಭೂ ಮಾಪನದ ವ್ಯವಸ್ಥೆಯನ್ನು ಜಾರಿಗೊಳಿಸಿದ ತಂಡದ ನೇತೃತ್ವ ವಹಿಸಿದ್ದ 'ಕರ್ನಲ್ ವಿಲಿಯಂ ಲ್ಯಾಂಬ್ಟನ್' ಸೇನಾಧಿಕಾರಿ ಭಾವಚಿತ್ರಕ್ಕೆ ಪ್ರಾದೇಶಿಕ ಭೂ ದಾಖಲೆಗಳ ಜಂಟಿ ನಿರ್ದೇಶಕ ಪ್ರಸಾದ್ ವಿ.ಕುಲಕರ್ಣಿ ಪುಷ್ಪಾರ್ಚನೆ ಮಾಡುವ ಮೂಲಕ ರಾಷ್ಟ್ರೀಯ ಭೂ ಮಾಪನ ದಿನದ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ರಾಷ್ಟ್ರೀಯ ಭೂ ಮಾಪನ ದಿನವನ್ನು ಪ್ರತಿವರ್ಷವೂ ಅದ್ದೂರಿಯಾಗಿ ಆಚರಿಸಿ, ರೈತರಿಗೆ ಭೂ ಮಾಪನದ ಬಗ್ಗೆ ಜಾಗೃತಿ ಮೂಡಿಸಲಾಗುತ್ತಿತ್ತು. ಆದರೆ ಈ ಬಾರಿ ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ಸರಳವಾಗಿ ಕಾರ್ಯಕ್ರಮವನ್ನು ಆಚರಿಸಲಾಗಿದೆ. ಸರ್ವೆ ಇಲಾಖೆಗೆ ಬರುವ ರೈತರಿಗೆ ಇಲಾಖೆಯ ಸಿಬ್ಬಂದಿ ನ್ಯಾಯ ಒದಗಿಸಲು ಮುಂದಾಗಬೇಕು. ಜಮೀನಿಗೆ ಸಂಬಂಧಿಸಿದಂತೆ ರೈತರು ದೂರು ನೀಡಿದರೆ, ಅವುಗಳಿಗೆ ತಕ್ಷಣ ಸ್ಪಂದಿಸಬೇಕು. ಇಲಾಖೆಗೆ ನೀಡಿದ ಅರ್ಜಿಯನ್ನು ಸಕಾಲದಲ್ಲಿ ಬಗೆಹರಿಸಬೇಕು. ವಿನಾಕಾರಣ ರೈತರನ್ನು ಕಚೇರಿಗೆ ಅಲೆಸಬಾರದು. ಭೂ ಮಾಪಕರು ಸಬೂಬು ಹೇಳಿ ರೈತರಿಗೆ ತೊಂದರೆ ನೀಡಬಾರದು. ಎಲ್ಲಾ ಸಿಬ್ಬಂದಿಗಳು ಜವಾಬ್ದಾರಿಯಿಂದ ನಡೆದುಕೊಂಡರೆ ಇಲಾಖೆ ಮೇಲೆ ರೈತರಿಗೆ ವಿಶ್ವಾಸ ಹೆಚ್ಚುತ್ತದೆ ಎಂದರು.

ಭೂ ದಾಖಲೆಗಳ ಉಪನಿರ್ದೇಶಕರು ಸೀಮಂತಿನಿ, ಭೂ ದಾಖಲೆಗಳ ಸಹಾಯಕ ನಿರ್ದೇಶಕರುಗಳಾದ ಮಂಜುನಾಥ, ಮೇಘ ಹಾಗೂ ಕಚೇರಿ ಸಿಬ್ಬಂದಿ, ಭೂ ಮಾಪಕರು ಉಪಸ್ಥಿತರಿದ್ದರು.

ಹಾಸನದಲ್ಲಿ ಚಲಿಸುತ್ತಿದ್ದ ಕಾರಿನಲ್ಲಿ ದಿಢೀರ್ ಬೆಂಕಿ; ಪವಾಡಸದೃಶ್ಯ ಇಬ್ಬರು ಪ್ರಯಾಣಿಕರು ಪಾರು

ಹಾಸನ, ಏ.11– ಚಲಿಸುತ್ತಿದ್ದ ಕಾರಿನಲ್ಲಿ ಆಕಸ್ಮಿಕವಾಗಿ ಬೆಂಕಿ ಕಾಣಿಸಿಕೊಂಡ ಘಟನೆ ಹಾಸನ ಹೊರವಲಯದ ಬಿಟ್ಟಗೊಂಡನಹಳ್ಳಿಯಲ್ಲಿ ನಡೆದಿದೆ. ಅವಘಡ ಅರಿತ ಇಬ್ಬರು ಪ್ರಯಾಣಿಕರು ಕ್ಷಣಾರ್ಧದಲ್ಲೇ ಕಾರಿನಿಂದಿಳಿದು ಪ್ರಾಣಾಪಾಯದಿಂದ ಪಾರಾಗಿದ್ದಾರೆ.



ಉದಯಪುರದಿಂದ ಹಾಸನಕ್ಕೆ ಖಾಸಗಿ ಕಂಪನಿಯ ಕಾರಿನಲ್ಲಿ ಬರುತ್ತಿದ್ದಾಗ ಗೊರೂರು ರಸ್ತೆಯ ಬಿಟ್ಟಗೌಡನಹಳ್ಳಿ ಮುಖ್ಯರಸ್ತೆಯಲ್ಲಿ ಕಾರಿನೊಳಗೆ ಬೆಂಕಿ ಕಾಣಿಸಿಕೊಂಡಿದೆ. ಚಾಲಕ ಪ್ರವೀಣ್ ಮತ್ತು ನಾಗರಾಜು ತಕ್ಷಣ ಡೋರ್ ತೆಗೆದು ಹೊರಬಂದಿದ್ದಾರೆ. ಸ್ಥಳೀಯರು ನೀರು ಹಾಯಿಸಿ ಬೆಂಕಿ ನಂದಿಸಲು ಯತ್ನಿಸಿದ್ದಾರೆ. ಅಗ್ನಿಶಾಮಕ ದಳದ ಸಿಬ್ಬಂದಿ ಸ್ಥಳಕ್ಕೆ ಆಗಮಿಸುವ ಮುನ್ನ ಕಾರು ಬಹುತೇಕ ಸುಟ್ಟು ಹೋಗಿತ್ತು. ತಾಂತ್ರಿಕ ದೋಷದಿಂದ ಈ ಘಟನೆ ನಡೆದಿದೆ ಎನ್ನಲಾಗಿದೆ.

ಶಂತನು ಆರ್.ಜಮದಗ್ನಿ ಉನ್ನತ ಶ್ರೇಣಿಯಲ್ಲಿ ತೇರ್ಗಡೆ

ಮೈಸೂರು,ಏ.11–ಈ ಬಾರಿ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ವಿಜಯ ವಿಠಲ ಸಂಯುಕ್ತ ಪದವಿ ಪೂರ್ವ ಕಾಲೇಜು ವಿದ್ಯಾರ್ಥಿ ಶಂತನು ಆರ್.ಜಲಧಗ್ನಿ, 600 ಅಂಕಗಳಿಗೆ 544(ಶೇ.91) ಅಂಕ ಪಡೆದು ಉನ್ನತ ಶ್ರೇಣಿಯಲ್ಲಿ ತೇರ್ಗಡೆಯಾಗಿದ್ದಾರೆ. ಇಂಗ್ಲಿಷ್‌ನಲ್ಲಿ 90, ಸ್ಯಾನ್‌ಸ್ಕ್ರಿಟ್–92, ಭೌತಶಾಸ್ತ್ರ–82, ಕೆಮಿಸ್ಟ್ರಿ–91, ಗಣಿತಶಾಸ್ತ್ರ–88 ಮತ್ತು ಕಂಪ್ಯೂಟರ್ ಸೈನ್ಸ್‌ನಲ್ಲಿ 96 ಅಂಕ ಪಡೆದಿರುವ ಈತ ಜೆ.ಸಿ.ನಗರದ ನಿವಾಸಿಗಳಾದ ಸಿ.ಎಸ್.ರಾಮಕೃಷ್ಣ ಮತ್ತು ಡಿ.ಆರ್.ಸಂಧ್ಯಾ ದಂಪತಿ ಪುತ್ರ.



ದೇಶದಲ್ಲಿ ತಾಪಮಾನ ಹೆಚ್ಚಳ: ಆರೋಗ್ಯ ಸುರಕ್ಷತೆಗೆ ಆರೋಗ್ಯ ಸಚಿವಾಲಯ ಸೂಚನೆ

ನವದೆಹಲಿ, ಏ. 11–2024 ಚಳಿಗಾಲದ ನಂತರ ಬಿಸಿಗಾಳಿಯು ಈಗ ಸುಡುವ ಶಾಖದೊಂದಿಗೆ ಆರಂಭವಾಗಿದೆ. ದೇಹದಲ್ಲಿ ನೀರಿನ ಕೊರತೆಯಿಂದಾಗಿ ಹೆಚ್ಚಿನ ಜನರು ಅನೇಕ ರೋಗಗಳಿಗೆ ತುತ್ತಾಗುತ್ತಿದ್ದಾರೆ. ಈ ವಿಪರೀತ ಶಾಖ ಮತ್ತು ಬಿಸಿಗಾಳಿಯಿಂದ ರಕ್ಷಿಸಿಕೊಳ್ಳಲು ಆರೋಗ್ಯ ಸಚಿವಾಲಯ ಮಾರ್ಗಸೂಚಿ ಪ್ರಕಟಿಸಿದೆ.

ಬೇಸಿಗೆ ಬಂತೆಂದರೆ ಬಿಸಿಲಿನ ಬೇಗೆ ದಿನದಿಂದ ದಿನಕ್ಕೆ ಅಸಹನೀಯವಾಗುತ್ತಿದೆ. ಭಾರತೀಯ ಹವಾಮಾನ ಇಲಾಖೆ (IMD) ಏಪ್ರಿಲ್ ಮತ್ತು ಜೂನ್ ನಡುವೆ ಹಲವಾರು ರಾಜ್ಯಗಳಲ್ಲಿ ರಣ ಬಿಸಿಲಿನ ಎಚ್ಚರಿಕೆ ನೀಡಿದೆ. ಇದರರ್ಥ ಬೇಸಿಗೆ ಸ್ನೇಹಿಯಾಗಿ ಮಾಡಲು ಆಹಾರ ಮತ್ತು ಒಟ್ಟಾರೆ ಜೀವನಶೈಲಿಯನ್ನು ಪುನರ್ನಿರ್ಮಿಸುವ ಸಮಯ. ಈ ನಿಟ್ಟಿನಲ್ಲಿ ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯವು ಕೆಲವು ಆಹಾರ–ಸಂಬಂಧಿತ ಮುನ್ನೆಚ್ಚರಿಕೆಗಳ ಕುರಿತಂತೆ ಮಾಹಿತಿ ನೀಡಿದೆ. ಸಾಮಾಜಿಕ ಮಾಧ್ಯಮ ಪ್ಲಾಟ್‌ಫಾರ್ಮ್




Xನಲ್ಲಿ ಪೋಸ್ಟ್ ಮಾಡಿದೆ. ಹೈಡ್ರೇಟೆಡ್ ಆಗಿರಿ, ಲಘು ಆಹಾರ ಸೇವಿಸಿ ಮತ್ತು ನಿಮ್ಮ ಊಟವನ್ನು ಆನಂದಿಸುತ್ತಿರುವಾಗ ಬೇಸಿಗೆಯ ಶಾಖವನ್ನು ಸಹಿಸಲು ಸ್ಮಾರ್ಟ್ ಆಯ್ಕೆಗಳನ್ನು ಮಾಡಿ ಎಂದು ವಿಡಿಯೋವನ್ನು ಹಂಚಿಕೊಂಡಿದೆ.

ಮಧ್ಯಾಹ್ನ ಅಡುಗೆ ಮಾಡುವುದನ್ನು ತಪ್ಪಿಸಿ: ಮಧ್ಯಾಹ್ನದ ಶಾಖ ಮತ್ತು ಸುಡುವ ಅನಿಲವು ಅಡುಗೆ ಮನೆಯ ತಾಪಮಾನವನ್ನು ಹೆಚ್ಚಿಸುತ್ತದೆ. ಇದು ಸಾಮಾನ್ಯಕ್ಕಿಂತ ಹೆಚ್ಚಾಗಿರುತ್ತದೆ. ಆದ್ದರಿಂದ, ದೇಹದ ಉಷ್ಣತೆ ಮತ್ತು ಸಂಬಂಧಿತ ಆರೋಗ್ಯ ಸಮಸ್ಯೆಗಳನ್ನು ಹೆಚ್ಚಿಸುವ ಅಪಾಯಗಳನ್ನು ತಡೆಯಲು ದಿನದ ಪೀಕ್ ಅವರ್‌ಗಳಲ್ಲಿ, ವಿಶೇಷವಾಗಿ ಮಧ್ಯಾಹ್ನದ ಸಮಯದಲ್ಲಿ ಅಡುಗೆ ಮಾಡುವುದನ್ನು ತಪ್ಪಿಸಲು ಸರ್ಕಾರ ಸಲಹೆ ನೀಡಿದೆ.

ಅಡುಗೆ ಮನೆಯನ್ನು ತಂಪಾಗಿಡಿ: ಅಡುಗೆ ಮಾಡುವಾಗ ಹೊಗೆ, ಉಗಿ ಮತ್ತು ವಾಸನೆಯನ್ನು ಉತ್ಪಾದಿಸುತ್ತದೆ. ಅದು ನಮ್ಮ ಚರ್ಮ ಮತ್ತು ಕಣ್ಣುಗಳನ್ನು ಮತ್ತಷ್ಟು ಕೆರಳಿಸುತ್ತದೆ. ಈ ಅಂಶಗಳು ಹೆಚ್ಚಾಗಿ ಉಸಿರಾಟದ ತೊಂದರೆಗಳನ್ನು ಉಂಟುಮಾಡುತ್ತವೆ. ಆದ್ದರಿಂದ, ಅಡುಗೆ ಮನೆಯ ತಂಪಾಗಿಡಲು ಕಿಟಕಿಗಳು ಮತ್ತು ಬಾಗಿಲುಗಳನ್ನು ತೆರೆಯಲು ಸರ್ಕಾರ ಸಲಹೆ ನೀಡಿದೆ.

ಹೆಚ್ಚಿನ ಪ್ರೋಟೀನ್ ಆಹಾರವನ್ನು ತಪ್ಪಿಸಿ: ಬೇಸಿಗೆಯಲ್ಲಿ ಅತಿಯಾದ ಶಾಖದಿಂದಾಗಿ ದೇಹವು ಬಹಳಷ್ಟು ನೀರನ್ನು ಕಳೆದುಕೊಳ್ಳುತ್ತದೆ. ಪ್ರೋಟೀನ್ ಅನ್ನು ಜೀರ್ಣಿಸಿಕೊಳ್ಳಲು ನಮ್ಮ ದೇಹಕ್ಕೆ ಹೆಚ್ಚುವರಿ ನೀರು ಬೇಕಾಗುತ್ತದೆ. ನೀರಿನ ಕೊರತೆಯು ಸಾಮಾನ್ಯವಾಗಿ ನಿರ್ಜಲೀಕರಣ ಮತ್ತು ಸಂಬಂಧಿತ ಆರೋಗ್ಯ ತೊಂದರೆಗಳಿಗೆ ಕಾರಣವಾಗುತ್ತದೆ. ಆದ್ದರಿಂದ, ನಿಮ್ಮ ಕರುಳನ್ನು ತಂಪಾಗಿ ಮತ್ತು ಆರೋಗ್ಯಕರವಾಗಿಡಲು ಹೆಚ್ಚಿನ ಪ್ರೋಟೀನ್ ಆಹಾರವನ್ನು ತ್ಯಜಿಸಲು ಸಲಹೆ ನೀಡಲಾಗಿದೆ.

ಕೆಫೀನ್ ಮತ್ತು ಕಾರ್ಬೋನೇಟೆಡ್ ಪಾನೀಯಗಳನ್ನು ತಪ್ಪಿಸಿ: ಚಹಾ, ಕಾಫಿ, ಕಾರ್ಬೋನೇಟೆಡ್ ಪಾನೀಯಗಳು ಮತ್ತು ಸಕ್ಕರೆ ಪಾನೀಯಗಳಂತಹ ಕೆಫೀನ್‌ಗಳು ಪ್ರಕೃತಿಯಲ್ಲಿ ಮೂತ್ರವರ್ಧಕಗಳಾಗಿವೆ. ಇದು ನಿರ್ಜಲೀಕರಣದ ಅಪಾಯವನ್ನು ಹೆಚ್ಚಿಸುತ್ತದೆ. ಆದ್ದರಿಂದ, ದೇಹದಿಂದ ಹೆಚ್ಚುವರಿ ದ್ರವದ ನಷ್ಟವನ್ನು ತಪ್ಪಿಸಲು ಈ ಪಾನೀಯಗಳ ಸೇವನೆಯನ್ನು ಮಿತಿಗೊಳಿಸಲು ತಜ್ಞರು ಸಲಹೆ ನೀಡಿದ್ದಾರೆ.



ದುನಿಯಾ ವಿಜಯ್ ಮಗಳು ಮೋನಿಕಾ ಈಗ ನಾಯಕಿ

ತಂದೆಯ ಪಾತ್ರದಲ್ಲಿ ವಿಜಯ್

ಕನ್ನಡ ಚಿತ್ರರಂಗದಲ್ಲಿ ದುನಿಯಾ ವಿಜಯ್ ತುಂಬಾ ಕೆಳಮಟ್ಟದಿಂದ ಮೇಲೆ ಬಂದವರು. ದುನಿಯಾ ಚಿತ್ರದ ಮೂಲಕ ಹೀರೋ ಆಗಿ, ನಂತರ ದೊಡ್ಡಮಟ್ಟದ ಸ್ಟಾರ್ ಎನಿಸಿಕೊಂಡರು. ನಾಯಕ, ನಿರ್ದೇಶಕ ಅಲ್ಲದೆ ನಿರ್ಮಾಪಕನಾಗೂ ಗುರುತಿಸಿಕೊಂಡಿರುವ ವಿಜಯ್ ಈಗ ತಮ್ಮ ಪುತ್ರಿ 'ಮೋನಿಕಾ'ರನ್ನು ಚಿತ್ರರಂಗಕ್ಕೆ ಪರಿಚಯಿಸುತ್ತಿದ್ದಾರೆ. ಜಂಟಲ್‌ಮನ್, ಗುರುಶಿಷ್ಯರು ನಿರ್ದೇಶಕ ಹಾಗೂ ಕಾಟೇರ ಚಿತ್ರದ ಕಥೆಗಾರ ಜಡೇಶ್‌ಕುಮಾರ್ ಹಂಪಿ ಅವರ ನಿರ್ದೇಶನದ ಮೂಲಕ ಮೋನಿಕಾ(ರಿತನ್ಯಾ) ನಾಯಕಿಯಾಗಿ ಎಂಟ್ರಿ ಕೊಡುತ್ತಿದ್ದಾರೆ. ಈ ಚಿತ್ರದ ಮುಹೂರ್ತ ಗುರುವಾರ ಮಹಾಲಕ್ಷ್ಮಿ ಲೇಔಟ್‌ನ ಆಂಜನೇಯ ಸ್ವಾಮಿ ದೇವಸ್ಥಾನದಲ್ಲಿ ನಡೆಯಿತು. ಈ ಚಿತ್ರದಲ್ಲಿ ದುನಿಯಾ ವಿಜಯ್ ನಾಯಕಿಯ ತಂದೆಯ ಪಾತ್ರ ನಿರ್ವಹಿಸಲಿದ್ದಾರೆ.

ಇನ್ನು ಚಿತ್ರದಲ್ಲಿ ದುನಿಯಾ ವಿಜಯ್ ಜೊತೆ ನಾಯಕಿಯಾಗಿ ರಚಿತಾ ರಾಮ್ ನಟಿಸುತ್ತಿದ್ದಾರೆ. 12 ವರ್ಷಗಳ ಹಿಂದೆ ದರ್ಶನ್ ಅಭಿನಯದ ಸಾರಥಿ ಚಿತ್ರ ನಿರ್ಮಿಸಿದ್ದ ಕೆ.ವಿ.ಸತ್ಯಪ್ರಕಾಶ್ ಅವರು ತಮ್ಮ ಪುತ್ರ ಸೂರಜ್ ನೇತೃತ್ವದಲ್ಲಿ, ಸಾರಥಿ ಪ್ರೊಡಕ್ಷನ್ಸ್ ಅಡಿ ಈ ಚಿತ್ರ ನಿರ್ಮಿಸುತ್ತಿದ್ದಾರೆ. ತಂದೆಯ ಮಾರ್ಗ ದರ್ಶನದಲ್ಲಿ ಕನ್ನಡ ಚಿತ್ರರಂಗದಲ್ಲಿ ಮೊದಲ ಮೆಟ್ಟಿಲನ್ನೇರಲು ಸಿದ್ಧವಾಗಿರುವ ಮೋನಿಕಾ, ಚಿತ್ರರಂಗಕ್ಕೆ ಬೇಕಿರುವ ಎಲ್ಲ ತಯಾರಿಯನ್ನು ಈಗಾಗಲೇ ಮಾಡಿ ಕೊಂಡಿದ್ದಾರೆ. ಮುಂಬೈನ ಅನುಪಮ್‌ಖೇರ್ ಆಕ್ಟಿಂಗ್ ಸ್ಕೂಲ್‌ನಲ್ಲಿ ಅಭಿನಯ ಕಲಿತು ಬಂದಿದ್ದಾರೆ. ಈ ಚಿತ್ರದಲ್ಲಿ ಡೇರ್ ಡೆವಿಲ್ ಮುಸ್ತಫಾ ಖ್ಯಾತಿಯ ಶಿಶಿರ್ ನಾಯಕನಾಗಿ ನಟಿಸುತ್ತಿದ್ದಾರೆ. ಈ ಸಂದರ್ಭದಲ್ಲಿ ಮಾತನಾಡಿದ ನಿರ್ದೇಶಕ ಜಡೇಶ್, 1990ರ ಸಮಯದಲ್ಲಿ ಕೋಲಾರ ಭಾಗದಲ್ಲಿ ನಡೆಯುವ ಕಥೆಯನ್ನು ಈ ಚಿತ್ರದಲ್ಲಿ ಹೇಳುತ್ತಿದ್ದೇವೆ, ಇದು ಪ್ರತಿ ಹಳ್ಳಿಯಲ್ಲೂ ನಡೆಯುವ ಕಥೆಯಾಗಿದ್ದು, ನಾಯಕಿ ರಚಿತಾರಾಮ್ ಅವರು ಮೊದಲ ಬಾರಿಗೆ ಇಂಥ ಪಾತ್ರ ಮಾಡುತ್ತಿದ್ದಾರೆ. ಚಿತ್ರದ ಪೋಸ್ಟರ್‌ನಲ್ಲಿ ತೋರಿಸಿರುವಂತೆ ರಥವೊಂದಕ್ಕೆ ಬೆಂಕಿ ಹೊತ್ತಿರುವ ದೃಶ್ಯವೇ ಸಿನಿಮಾದ ಜೀವಾಳ, ಹೀರೋ ಪಾತ್ರ ಅಲ್ಲಿಂದಲೇ ಬದಲಾವಣೆಯಾಗುತ್ತೆ, ಇದೇ ತಿಂಗಳು ಚಿತ್ರೀಕರಣ ಆರಂಭಿಸಿ ಮೈಸೂರು, ಕೋಲಾರ, ಗುಡಿಬಂಡೆ ಹೀಗೆ ಒಂದಷ್ಟು ಡ್ರೈ ಏರಿಯಾಗಳಲ್ಲಿ ಚಿತ್ರೀಕರಣ ನಡೆಸುವ ಪ್ಲಾನಿದೆ. ವಿಜಯ್ ಅವರ ಪಾತ್ರ ಈ ಚಿತ್ರದಲ್ಲಿ ತುಂಬಾ ವಿಶೇಷವಾಗಿದೆ. ಅವರ ಮಗಳಾಗೇ ರಿತನ್ಯ ಕಾಣಿಸಿ ಕೊಂಡಿದ್ದಾರೆ ಎಂದು ಹೇಳಿದರು.



ಪುನೀತ್ ಕೇಳಿದ್ದ ಕೊನೆಯ ಕಥೆ '02'


ಪುನೀತ್ ಯಾವಾಗಲೂ ಹೊಸ ಪ್ರತಿಭೆಗಳನ್ನು ಪ್ರೋತ್ಸಾಹಿಸುತ್ತಲೇ ಬಂದಿದ್ದರು. ಇದೀಗ ಆ ಕೆಲಸವನ್ನು ಅಶ್ವಿನಿ ಪುನೀತ್ ರಾಜಕುಮಾರ್ ಮುಂದುವರೆಸಿಕೊಂಡು ಹೋಗುತ್ತಿದ್ದಾರೆ. ಪಿ.ಆರ್.ಕೆ. ಪ್ರೊಡಕ್ಷನ್ಸ್ ನಿರ್ಮಾಣದ ಮತ್ತೊಂದು ಚಿತ್ರ '02' ತೆರೆಗೆ ಬರಲು ಸಿದ್ಧವಾಗಿದೆ. ಏ.19ರಂದು ತೆರೆಕಾಣುತ್ತಿರುವ ಈ ಚಿತ್ರಕ್ಕೆ ಪ್ರಶಾಂತ್‌ರಾಜ್ ಹಾಗೂ ರಾಘವ್ ನಾಯಕ್ ಆಕ್ಷನ್ ಕಟ್ ಹೇಳಿದ್ದಾರೆ. ಸ್ವತಃ ಪುನೀತ್ ರಾಜಕುಮಾರ್ ಅವರೇ ಕೇಳಿ ಮೆಚ್ಚಿಕೊಂಡ ಕೊನೆಯ ಕಥೆಯಿದು.

ಇತ್ತೀಚೆಗೆ ನಡೆದ ಪತ್ರಿಕಾಗೋಷ್ಠಿಯಲ್ಲಿ ನಿರ್ದೇಶಕ ಪ್ರಶಾಂತ್‌ರಾಜ್ ಮಾತನಾಡುತ್ತ ಪುನೀತ್ ರಾಜಕುಮಾರ್ ಅವರು ನನ್ನ ಈ ಕಥೆ ಕೇಳಿ ಮೆಚ್ಚಿ ನಿರ್ಮಾಣಕ್ಕೆ ಮುಂದಾಗಿದ್ದರು. ವೈದ್ಯಕೀಯ ಆವಿಷ್ಕಾರದ ಕುರಿತಾದ ಚಿತ್ರ ಇದಾಗಿದ್ದು, ವ್ಯಕ್ತಿಯೊಬ್ಬನಿಗೆ ಹೃದಯಸ್ತಂಭನವಾಗಿ ಆತ ಸಾವಿನಂಚಿಗೆ ತಲುಪಿದಾಗ ಆತನನ್ನು 02 ಡ್ರಗ್ ಮೂಲಕ ಬದುಕಿಸಬಹುದು ಎಂಬ ಹೊಸ ಆವಿಷ್ಕಾರವನ್ನು ಚಿತ್ರದಲ್ಲಿ ನಾಯಕಿ ಶ್ರದ್ಧಾ(ಆಶಿಕಾ ರಂಗನಾಥ್) ಮಾಡುತ್ತಾರೆ. 02 ಡ್ರಗ್ ಕುರಿತು ಸಂಶೋಧನೆ ನಡೆಸುವಾಗ ನಾಯಕಿ ಸಾಕಷ್ಟು ಸವಾಲುಗಳನ್ನು ಎದುರಿಸಬೇಕಾಗುತ್ತದೆ. ಇಷ್ಟೇ ಅಲ್ಲದೆ ನಮ್ಮ ಚಿತ್ರದಲ್ಲಿ ಪ್ರೀತಿಯ ಕಥೆ, ಅನಿರೀಕ್ಷಿತ ತಿರುವುಗಳ ಜೊತೆಗೆ ಮನರಂಜನೆ ಕೂಡ ಇದೆ. ಕನ್ನಡದಲ್ಲಿ ಈ ರೀತಿಯ ಕಥೆಗಳು ತೀರ ವಿರಳ ಎನ್ನಬಹುದು ಎಂದರು. ನಿರ್ಮಾಪಕಿ ಅಶ್ವಿನಿ ಪುನೀತ್ ರಾಜಕುಮಾರ್ ಮಾತನಾಡುತ್ತ, ನಾನು ಹಾಗೂ ಅಪ್ಪು ಇಬ್ಬರೂ ಒಟ್ಟಿಗೆ ಈ ಕಥೆಯನ್ನು ಕೇಳಿದ್ದೆವು. ಇದು ಅಪ್ಪು ಅವರು ಕೇಳಿದ ಕೊನೆಯ ಕಥೆ ಕೂಡ. ಚಿತ್ರವೀಗ ಬಿಡುಗಡೆಗೆ ಸಿದ್ಧವಾಗಿದೆ. ಚಿತ್ರದ ಹಾಡು ಹಾಗೂ ಕ್ಲೈಮ್ಯಾಕ್ಸ್ ನನಗೆ ಬಹಳ ಇಷ್ಟವಾಯಿತು. ಸದ್ಯದಲ್ಲೇ ಮತ್ತೆರಡು ಚಿತ್ರಗಳನ್ನು ನಮ್ಮ ಸಂಸ್ಥೆಯಿಂದ ಆರಂಭಿಸುತ್ತಿದ್ದೇವೆ ಎಂದು ಹೇಳಿದರು.

ನಾಯಕ ಪ್ರವೀಣ್‌ತೇಜ್ ಮಾತನಾಡಿ, ಚಿತ್ರದಲ್ಲಿ ನಾನು ಒಬ್ಬ ಎನ್.ಆರ್.ಐ. ವೈದ್ಯನ ಪಾತ್ರವನ್ನು ಮಾಡಿದ್ದೇನೆ ಎಂದು ಹೇಳಿದರು. ನಾಯಕಿ ಆಶಿಕಾ ರಂಗನಾಥ್ ಮಾತನಾಡುತ್ತ ನಾನೂ ಕೂಡ ಒಬ್ಬ ವೈದ್ಯೆಯಾಗಿ ಕಾಣಿಸಿಕೊಂಡಿದ್ದೇನೆ. ನನ್ನ ಪಾತ್ರದ ಹೆಸರು ಶ್ರದ್ಧಾ. ಪಿ.ಆರ್.ಕೆ. ಪ್ರೊಡಕ್ಷನ್ಸ್ ಸಂಸ್ಥೆಯ ಚಿತ್ರದಲ್ಲಿ ನಟಿಸಿರುವುದು ಖುಷಿಯ ಸಂಗತಿ ಎಂದು ಹೇಳಿದರು. ಈ ಚಿತ್ರಕ್ಕೆ ವಿವಾನ್ ರಾಧಾಕೃಷ್ಣ ಅವರ ಸಂಗೀತವಿದೆ.

ಪುಟ್ಟಸ್ವಾಮಿ ಹಾಗೂ ಸತೀಶ್ ಚಿತ್ರದ ಕಾರ್ಯಕಾರಿ ನಿರ್ಮಾಪಕರು. ನವೀನ್‌ಕುಮಾರ್ ಅವರ ಛಾಯಾಗ್ರಹಣ ಹಾಗೂ ಕೆ.ಎಂ.ಪ್ರಕಾಶ್ ಅವರ ಸಂಕಲನ ಚಿತ್ರಕ್ಕಿದೆ, ಆಶಿಕಾ ರಂಗನಾಥ್, ಪ್ರವೀಣ್‌ತೇಜ್, ರಾಘವ್ ನಾಯಕ್, ಸಿರಿ ರವಿಕುಮಾರ್, ಪ್ರಕಾಶ್ ಬೆಳವಾಡಿ ಮುಂತಾದವರು ತಾರಾಬಳಗದಲ್ಲಿದ್ದಾರೆ.

ಚಿರತೆ ಬಂತು ಚಿರತೆ



ಈ ಹಳ್ಳಿಗೆ ಚಿರತೆ ಬಂತು ನಾಯಿ ಹೊತ್ತೊಯ್ದಿತು. ಆ ಹಳ್ಳಿಗೆ ಚಿರತೆ ಬಂತು ಕುರಿ ಎಳೆದೊಯ್ದಿತು. ಇಂತಹ ಸುದ್ದಿಗಳು ಇತ್ತೀಚಿನ ದಿನಗಳಲ್ಲಿ ಮಾಮೂಲಿ. ಇಂತಹ ಘಟನೆ ನಡೆದಾಗ ಗ್ರಾಮಸ್ಥರು ಅರಣ್ಯ ಇಲಾಖೆ ವಿರುದ್ಧ ತಿರುಗಿ ಬೀಳುತ್ತಾರೆ. ಬೋನಿಟ್ಟು ಚಿರತೆ ಸೆರೆಗೆ ಆಗ್ರಹಿಸುತ್ತಾರೆ.

ಚಿರತೆ ದಾಳಿಯಿಂದ ಹಳ್ಳಿಯ ಮುಖಂಡ ಮಾದಪ್ಪನ ಮನೆಯ ಎತ್ತು ಮಾರಣಾಂತಿಕವಾಗಿ ಘಾಸಿಗೊಳ್ಳುತ್ತದೆ. ಚಿತ್ರದ ನಾಯಕ ಪಾರ್ಥಪ್ಪ(ಸುಂದರ್) ಸರ್ಕಾರಿ ನೌಕರಿ ಬಿಟ್ಟು ಬಂದು ಗ್ರಾಮದಲ್ಲಿ ವ್ಯವಸಾಯದಲ್ಲಿ ತೊಡಗಿಕೊಂಡಿರುತ್ತಾನೆ. ಈತನ ಬಗ್ಗೆ ಎಲ್ಲರಿಗೂ ಗೌರವ. ಈತನ ಬಳಿ ತಂದೆಯಿಂದ ಬಳುವಳಿಯಾಗಿ ಬಂದ ಬಂದೂಕು ಇರುತ್ತದೆ. ವಿಧವೆ ಲಕ್ಷ್ಮಮ್ಮನ ಮನೆಯ ಕುರಿ ಚಿರತೆಗೆ ಬಲಿಯಾದಾಗ ಇಡೀ ಊರಿಗೆ ಊರೇ ಮುಖಂಡ ಮಾದಪ್ಪನ ನೇತೃತ್ವದಲ್ಲಿ ಶತಾಯುಗತಾಯು ಚಿರತೆಯನ್ನು ಬಂದೂಕಿನಿಂದ ಸುಟ್ಟು ಕೊಂದು ಹಾಕುವಂತೆ ಪಾರ್ಥಪ್ಪನ ಮೇಲೆ ಒತ್ತಡ ಹೇರುತ್ತಾರೆ. ವಿದ್ಯಾವಂತನಾದ ಪಾರ್ಥಪ್ಪ ಅರಣ್ಯ ಸಂರಕ್ಷಣಾ ಕಾನೂನನ್ನು ಬಲ್ಲವನಾದ್ದರಿಂದ ಕೊಲ್ಲಲು ಬರುವುದಿಲ್ಲ ಎಂದು ಸಮಜಾಯಿಷಿ ಹೇಳಿ, ಉಪ ಅರಣ್ಯ ಸಂರಕ್ಷಣಾಧಿಕಾರಿಯನ್ನು ಭೇಟಿ ಮಾಡಿ ಗಂಭೀರತೆ ವಿವರಿಸುತ್ತಾನೆ. ಚಿರತೆಯ ಚಲನವಲನ ಗಮನಿಸಲು ಇಬ್ಬರು ಗಾರ್ಡ್‌ಗಳನ್ನು ನೇಮಿಸಲು ಸಫಲನಾಗುತ್ತಾನೆ. ಚಿರತೆಯ ಸೆರೆಗೆ ಬೋನಿಡಲಾಗುತ್ತದೆ. ಚಿರತೆ ಪದೇ ಪದೆ ಕಾಣಿಸಿಕೊಂಡು ಗ್ರಾಮಸ್ಥರ ನೆಮ್ಮದಿ ಕೆಡುತ್ತದೆ. ಇದಕ್ಕೆ ಮಾಟ ಮಂತ್ರವೇ ಕಾರಣ ಎಂಬ ಮೂಢನಂಬಿಕೆಯಿಂದ ಮಂತ್ರವಾದಿಯ ಮೊರೆ ಹೋಗುತ್ತಾರೆ. ಚಲನಚಿತ್ರದಲ್ಲಿ ಪಶುವೈದ್ಯ, ಅರಣ್ಯ ಇಲಾಖೆ ಸಿಬ್ಬಂದಿ, ಪೂಜಾರಿ, ಮಂತ್ರವಾದಿ, ಚಿರತೆಯ ನೆಪದಲ್ಲಿ ಊರ ಮುಖಂಡನಿಂದ ದುಡ್ಡು ಸುಲಿಯುತ್ತಾರೆ.

ಕೊನೆಯಲ್ಲಿ ಪಾರ್ಥಪ್ಪ ಚಿರತೆ ಕೊಲ್ಲದೇ ಉಳಿಸುವ ಪ್ರಯತ್ನದಲ್ಲಿ ಗೆಲ್ಲುತ್ತಾನೋ ಊರ ಜನ ಅಡ್ಡ ಮಾರ್ಗದಲ್ಲಿ ಚಿರತೆ ಕೊಲ್ಲಿಸುತ್ತಾರೋ ಚಿತ್ರದಲ್ಲಿ ಇಂತಹ ಸಸ್ಪೆನ್ಸ್ ಸಹ ಇದೆ. ಜಗದೀಶ್ ಮಲ್ನಾಡ್ ನಿರ್ಮಾಣದ ಚಿರತೆ ಬಂತು ಚಿರತೆ ಚಲನಚಿತ್ರದಲ್ಲಿ ಸಿ.ಆರ್.ಕೃಷ್ಣಮೂರ್ತಿ (ಬೆನಕ ಕಿಟ್ಟಿ) ಕತೆ,ಚಿತ್ರಕತೆ,ಸಾಹಿತ್ಯ, ಸಂಭಾಷಣೆ ಜೊತೆಗೆ ಆ್ಯಕ್ಷನ್ ಕಟ್ ಹೇಳಿದ್ದಾರೆ. ಚಿತ್ರದ ವಿಶೇಷ ಎಂದರೆ ಇದು ಸಂಪೂರ್ಣ ಚಾಮರಾಜನಗರದ ಕಾಡಂಚಿನ ಗ್ರಾಮಗಳಲ್ಲಿ ಸತತ 20 ದಿನಗಳ ಹೊರಾಂಗಣ ಚಿತ್ರೀಕರಣ ಮಾಡಿ ಮುಗಿಸಲಾಗಿದೆ. ಇಲ್ಲಿನ ಆಡುಭಾಷೆ ಚಿತ್ರದ ಜೀವಾಳ. ಸ್ಥಳೀಯ ರಂಗಭೂಮಿ ಕಲಾವಿದರು ಚಿತ್ರಕ್ಕೆ ಜೀವ ತುಂಬಿದ್ದಾರೆ. ಏಪ್ರಿಲ್ 19 ರಂದು ಚಿತ್ರ ರಾಜ್ಯಾದ್ಯಂತ ಬಿಡುಗಡೆಯಾಗುತ್ತಿದೆ.


'ರತ್ನ' ಅಪ್ಪು ಅಭಿಮಾನಿಯ ಕಥೆ...



ಬಸವರಾಜ್ ಬಳ್ಳಾರಿ ಅವರ ನಿರ್ಮಾಣ ಹಾಗೂ ನಿರ್ದೇಶನದ 'ರತ್ನ' ಚಿತ್ರದ ಹಾಡುಗಳ ಬಿಡುಗಡೆ ಕಾರ್ಯಕ್ರಮ ಇತ್ತೀಚೆಗೆ ನಡೆಯಿತು, ಚಿತ್ರದಲ್ಲಿ ಐದು ಹಾಡುಗಳಿದ್ದು, ಒಂದೊಂದು ಹಾಡನ್ನು ಪುನೀತ್ ಅಭಿಮಾನಿಗಳು ಹಾಗೂ ಒಡನಾಡಿಗಳು ಬಿಡುಗಡೆ ಮಾಡಿದ್ದು ವಿಶೇಷ. ಅಪ್ಪು ವೆಂಕಟೇಶ್, ಬೆಳ್ಳುಳ್ಳಿ ಕಬಾಬ್ ಖ್ಯಾತಿಯ ಚಂದ್ರು, ಪುನೀತ್ ಅಂಗರಕ್ಷಕರಾಗಿದ್ದ ಚಲಪತಿ, ಹುಬ್ಬಳ್ಳಿಯಿಂದ ಬಂದಿದ್ದ ರಘುಪತಿ ಹಾಗೂ ಮಾರುತಿ ಅವರು "ರತ್ನ" ಚಿತ್ರದ ಹಾಡುಗಳನ್ನು ಲೋಕಾರ್ಪಣೆ ಮಾಡಿದರು. ಪುನೀತ್ ರಾಜಕುಮಾರ್ ಮೇಲೆ ಅಪಾರ ಅಭಿಮಾನ ಇಟ್ಟುಕೊಂಡ ಯುವತಿಯ ಜೀವನದ ಕಥೆ ಈ ಚಿತ್ರದಲ್ಲಿದೆ. ಆಡಿಯೋ ಬಿಡುಗಡೆ ಮಾಡಿದ ಅಷ್ಟೂ ಜನ ವೇದಿಕೆಯಲ್ಲಿ ಪುನೀತ್ ರಾಜಕುಮಾರ್‌ರನ್ನು ನೆನೆದು ಭಾವುಕರಾದರು.

ಪುನೀತ್ ರಾಜಕುಮಾರ್ ನನಗೆ ಮಾಡಿರುವ ಸಹಾಯ ಹಾಗೂ ಸಹಕಾರ ಅಷ್ಟಿಷ್ಟಲ್ಲ. ಅವರ ಒಳ್ಳೆಯ ಗುಣಗಳೇ, ನನಗೆ ಈ ಚಿತ್ರ ಮಾಡಲು ಸ್ಫೂರ್ತಿ. ನಾನು ಕೂಡ ಅವರ ಅಪ್ಪಟ ಅಭಿಮಾನಿ. ಅಪ್ಪು ಅವರನ್ನು ಜನ ಎಷ್ಟು ಪ್ರೀತಿಸುತ್ತಾರೆ ಎನ್ನುವುದಕ್ಕೆ ಈ ಚಿತ್ರ ನೋಡಬೇಕು. ಏಕೆಂದರೆ ಇದು ಅಪ್ಪು ಅಭಿಮಾನಿಯ ಬಗ್ಗೆಯೇ ಮಾಡಿದ ಚಿತ್ರ. ಸತೀಶ್ ಬಾಬು ಅವರು ಸಂಗೀತ ನೀಡಿರುವ ಈ ಚಿತ್ರವನ್ನು ಏಪ್ರಿಲ್ 19ರಂದು ರಿಲೀಸ್ ಮಾಡುತ್ತಿದ್ದೇವೆ ಎಂದು ನಿರ್ದೇಶಕ ಹಾಗೂ ನಿರ್ಮಾಪಕ ಬಸವರಾಜ್ ಬಳ್ಳಾರಿ ಹೇಳಿದರು. ಚಿತ್ರದಲ್ಲಿ ಅಪ್ಪು ಅಭಿಮಾನಿಯಾಗಿ ನಟಿ ಹರ್ಷಲ ಹನಿ ಅವರು ಕಾಣಿಸಿಕೊಂಡಿದ್ದಾರೆ, ನಾಯಕ ವರ್ಧನ್, ಸಂಕಲನಕಾರ ಹಾಗೂ ನಟ ನಾಗೇಂದ್ರ ಅರಸ್, ನಟ ಅಮಿತ್‌ರಾವ್ ಎಲ್ಲರೂ ರತ್ನ ಚಿತ್ರದ ಕುರಿತಂತೆ ಮಾತನಾಡಿದರು. ವರ್ಧನ್ ನಾಯಕನಾಗಿದ್ದು, ಮಗಳ ಪಾತ್ರದಲ್ಲಿ ರಾಣಿ ಬಸವರಾಜ್ ಕಾಣಿಸಿಕೊಂಡಿದ್ದಾರೆ, ಉಳಿದಂತೆ ಆನಂದ್ ಅಪ್ಪು, ವಿಜಯ್ ಚಂಡೂರ್. ಮಹೇಶ್‌ಬಾಬು, ಸುಚಿತ್ ಚೌವ್ಹಾಣ್, ರಾಮು ಕರೂರ್, ಮಂಜು ದೈವಜ್ಞ, ಜಗದೀಶ್ ಕೊಪ್ಪ ಮುಂತಾದವರಿದ್ದಾರೆ.

ಸಿನಿಪದಬಂಧ-521



ಹೆಸರು ______

ವಿಳಾಸ ______

ದೂರವಾಣಿ ಸಂಖ್ಯೆ ______



ವಿಜೇತರು: ಎಸ್.ನೂತನ್, ನಂ.8094, ವಿಜಯನಗರ 4ನೇ ಹಂತ, 2ನೇ ಘಟ್ಟ, ಮೈಸೂರು-570032

ಎಡದಿಂದ ಬಲಕ್ಕೆ

1. ತಪ್ಪು – ಒಪ್ಪುಗಳ ವಿಮರ್ಶೆಗೆ ಟೈಗರ್ ಪ್ರಭಾಕರ್ ಬಲವಿದೆ 5
5. ಸುರಸುಂದರಾಂಗಿ ಜೊತೆ ಖಡ್ಗ ಹಿಡಿದ ಶೂರ 5
6. ನರಕಕ್ಕೆ ಹೀಗೊಂದು ಪದ 4
9. ಬಿಗಿ ರಕ್ಷಣೆಗೆ ಎನ್.ಎಸ್.ಸಿಂಗ್ ನಿರ್ದೇಶಕ 5
11. ನವರಸ ನಾಯಕ ಜಗ್ಗೇಶ್ "ವಾಚಾಳಿ" 5
13. ಅಂಬಿಯ ಈ ಚಿತ್ರದಲ್ಲಿ ಹಣದ ಮೋಹ ಅಧಿಕಾರದ ದಾಹವಿದೆ 4
16. ಶಿವರಾಜ್ ಕುಮಾರ್ ಅಭಿನಯದ "ಜನಕ" 5
17. ರಾಜಣ್ಣ – ಕಲ್ಪನಾಳ ಚಿತ್ರ ಮೆಜೆಸ್ಟಿಕ್ ಸಮೀಪವೇ ಇದೆ 5

ಮೇಲಿನಿಂದ ಕೆಳಕ್ಕೆ

1. ವಿಷ್ಣುವರ್ಧನ್–ರಜನಿಕಾಂತ್ ಇವರಿಬ್ಬರ ಚಾಲೆಂಜಿಗೆ ಕೆ.ಎಸ್.ಆರ್.ದಾಸ್ ನಿರ್ದೇಶನವಿದೆ 8
2. ತಾಯಿಗೆ ತಕ್ಕ ಮಗ ಚಿತ್ರದ ನಾಯಕಿ 4
3. ಕಗ್ಗತ್ತಲು ಆವರಿಸಿಕೊಂಡಿರುವ ಕಪ್ಪನೆಯ ಬೆಟ್ಟ 4
4. ಮೃದಂಗ ಬಾರಿಸಿದಾಗ ಸಂಭವಿಸಿದ ಸಾವು 3
5. ಜಾಣ ಚಿತ್ರದ ನಾಯಕಿ 3
7. ಒಂದು ಬಾರಿಯು ಪರಾಭವ ಕಾಣದವನಿಗೆ ಅಂಬಿ ಅಭಿನಯದಲ್ಲಿ ಹೀಗೆನ್ನಿ! 8
8. 'ರಾಗ'ದ ಹಿಂದಿರುವ "ನೀರವತೆ" 2
10. ಅಮರೀಶ್ ಪುರಿಯ "ಅರಣ್ಯ" 2
12. ತರೀಕೆರೆ ಏರಿ ಮೇಲೆ ಮೆಯ್ದ ಪ್ರಾಣಿ ಪುಟ್ಟದು 4
13. ಯಾರೇ ನೀನು ಚೆಲುವೆ ಚಿತ್ರದ ಹಾಡೊಂದರಲ್ಲಿ ಹುಳಿ ಹಣ್ಣಿದೆ 3
14. ರಾಜಕಾರಣಿಗಳಿಗೆ ಇವೆರಡು ಬಲ ಬೇಕು 4
15. ಇರುಳಿನ ನಟಿ 3



ಉಮ್ಮತ್ತೂರು ಇಂದುಶೇಖರ್

ಮೊ.9880820462

ಸಿನಿ ಪದಬಂಧ 520ರ ಉತ್ತರ

ಮ	ಹಾ	ಕಾ	ಳಿ			ಹ	ದ್ದಿ	ನ	ಕ	ಣ್ಣು
ನ				ಗಂ		ಣ				ಹೇ
ಮೆ	ರ	ವ	ಣಿ	ಗೆ		ಕಾ		ಪೌ		
ಚ್ಚಿ						ಸು	ವ	ರ್ಣ	ಭೂ	ಮಿ
ದ	ಶಾ	ವ	ತಾ	ರ				ಮಿ		ಥಿ
ಹು				ತಿ		ಅ				ಲೆ
ಡು		ಸ				ಜ	ಯ	ವಿ	ಜ	ಯ
ಗಿ	ರಿ	ಮ	ಲ್ಲಿ	ಗೆ						ಸೀ
		ರ		ದ್ದ		ತಾ	ಯಿ	ಮ	ಮ	ತೆ
ಹೀ				ಮ		ಯಿ				ಯ
ರಾ	ಯ	ರ	ಮ	ಗ			ನ	ಮ್ಮ	ಊ	ರು

ಈ ವಾರ ಶಿಕ್ಷಣ ವ್ಯವಸ್ಥೆಯ 'ಸ್ಕ್ಯಾಮ್ 1770'



ದೇವರಾಜ್ ಆರ್. ಅವರ ನಿರ್ಮಾಣದ, ವಿಕಾಸ್ ಪುಷ್ಪಗಿರಿ ನಿರ್ದೇಶನದ ಸ್ಕ್ಯಾಮ್ 1770 ಈ ವಾರ ರಾಜ್ಯಾದ್ಯಂತ ಬಿಡುಗಡೆಯಾಗುತ್ತಿದೆ. ಪ್ರಸ್ತುತ ಶಿಕ್ಷಣ ವ್ಯವಸ್ಥೆಯ ಸುತ್ತ ನಡೆಯುವ ಕಥಾಹಂದರ ಹೊಂದಿರುವ ಚಿತ್ರ ಇದಾಗಿದ್ದು, ಸತ್ಯ ಘಟನೆಗಳನ್ನು ಕಟ್ಟಿಕೊಂಡು ವಾಸ್ತವದಲ್ಲಿ ಏನೆಲ್ಲಾ ನಡೆಯುತ್ತಿದೆ ಎಂಬುದನ್ನು ಈ ಚಿತ್ರದಲ್ಲಿ ಹೇಳಲಾಗಿದೆ. ವಿದ್ಯಾರ್ಥಿಗಳು, ಪೋಷಕರು ಹಾಗೂ ಶಿಕ್ಷಣ ಸಂಸ್ಥೆ ನಡೆಸುತ್ತಿರುವವರು ನೋಡಲೇಬೇಕಾದ ಚಿತ್ರ ಇದಾಗಿದೆ. ಡಾ॥ಇಂದು ನಟೇಶ್ ಹಾಗೂ ಅಡ್ವೋಕೇಟ್ ನೇತ್ರಾವತಿ ಎಜುಕೇಶನ್ ಮಾಫಿಯಾ ಕುರಿತಾಗಿ ಮಾಡಿರುವ ಈ ಚಿತ್ರದ ಕಥೆಯನ್ನು ಬರೆದಿದ್ದು, ವಿಕಾಸ್ ಪುಷ್ಪಗಿರಿ ಹಾಗೂ ಶಂಕರ್ ರಾಮನ್ ಚಿತ್ರಕಥೆ ಬರೆದಿದ್ದಾರೆ. ಸಂಭಾಷಣೆಗಳನ್ನೂ ಸಹ ಶಂಕರ್ ರಾಮನ್ ಅವರೇ ರಚಿಸಿದ್ದಾರೆ. ಸತೀಶ್ ಆರ್ಯನ್ ಅವರ ಸಂಗೀತ ನಿರ್ದೇಶನ, ಶೋಯೆಬ್ ಅವರ ಛಾಯಾಗ್ರಹಣ, ಸುರೇಶ್ ಆರ್ಮುಗಂ ಅವರ ಸಂಕಲನ, ಕಲೈ – ರಾಮು ಅವರ ನೃತ್ಯ ನಿರ್ದೇಶನ ಹಾಗೂ ಚಂದ್ರು ಬಂಡೆ ಸಾಹಸ ನಿರ್ದೇಶನ ಸ್ಕ್ಯಾಮ್ 1770 ಚಿತ್ರಕ್ಕಿದೆ.

ನಿಶ್ವಿತ(ನಾಯಕಿ), ಬಿ.ಸುರೇಶ್, ಅವಿನಾಶ್ ಇನ್ನಿತರರಿದ್ದಾರೆ.

ವಿಳಾಸ: 'ಸಿನಿಬಂಧ' ವಿಭಾಗ, 'ಮೈಸೂರು ಮಿತ್ರ' ದಿನಪತ್ರಿಕೆ, ಬನ್ನಿಮಂಟಪ, ಮೈಸೂರು-570 015

ಅರಸು ಹುಟ್ಟೂರಲ್ಲಿ ಯದುವೀರ್ ಮತಬೇಟೆ

ತಾಲೂಕಿನ ಮೊಮ್ಮಗನಿಗೆ ಮತ ನೀಡಿ: ಶಾಸಕ ಜಿ.ಡಿ.ಹರೀಶ್‌ಗೌಡ



ಶಾಸಕ ಜಿ.ಡಿ.ಹರೀಶ್‌ಗೌಡರೊಂದಿಗೆ ಯದುವೀರ್ ಭರ್ಜರಿ ಪ್ರಚಾರ ನಡೆಸಿದರು.

ಹುಣಸೂರು, ಏ.11– ಸಾಮಾಜಿಕ ನ್ಯಾಯದ ಹರಿಕಾರ ಡಿ.ದೇವರಾಜ ಅರಸು ಹುಟ್ಟೂರಲ್ಲಿ ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ಮಿಂಚಿನ ಸಂಚಾರ ಮಾಡಿ ಮತಬೇಟೆ ನಡೆಸಿದರು.

ನಗರದಲ್ಲಿರುವ ಮಾಜಿ ಮುಖ್ಯಮಂತ್ರಿ ಡಿ.ದೇವರಾಜ ಅರಸು ಅವರ ಪುತ್ಥಳಿಗೆ ಮಾಲಾರ್ಪಣೆ ಮಾಡಿದ ಯದುವೀರ್ ಹಾಗೂ ಶಾಸಕ ಜಿ.ಡಿ.ಹರೀಶ್‌ಗೌಡ, ನಂತರ ಅರಸು ಕಲ್ಲಹಳ್ಳಿ ಗ್ರಾಮಕ್ಕೆ ತೆರಳಿ ಡಿ.ದೇವರಾಜ ಅರಸು ಸಮಾಧಿಗೆ ಪೂಜೆ ಸಲ್ಲಿಸುವ ಮೂಲಕ ಸಾಮಾಜಿಕ ನ್ಯಾಯದ ಹರಿಕಾರನಿಗೆ ಗೌರವ ಸಲ್ಲಿಸಿದರು. ಇದೇ ವೇಳೆ ಕಲ್ಲಹಳ್ಳಿ ಗ್ರಾಮದಲ್ಲಿರುವ ಡಿ.ದೇವರಾಜ ಅರಸು ಮನೆಗೆ ಭೇಟಿ ನೀಡುವ ಮೂಲಕ ಗಮನ ಸೆಳೆದ ಯದುವೀರ್, ಕ್ಷೇತ್ರದ ಹಲವೆಡೆ ತೆರಳಿ ಚುನಾವಣಾ ಪ್ರಚಾರ ನಡೆಸಿದರು.

ಜನ ನನ್ನನ್ನು ಸ್ವೀಕರಿಸಿದ್ದಾರೆ: ಡಿ.ದೇವರಾಜ ಅರಸು ಸಮಾಧಿಗೆ ಪೂಜೆ ಸಲ್ಲಿಸಿ ಮಾತನಾಡಿದ ಯದುವೀರ್, ಜನರು ನನ್ನ ರಾಜಕೀಯ ಅವತಾರ ಸ್ವೀಕಾರ ಮಾಡಿದ್ದಾರೆ. ರಾಜಪ್ರಭುತ್ವ ಹಾಗೂ ಪ್ರಜಾಪ್ರಭುತ್ವ ಬೇರೆ ಬೇರೆಯಾಗಿದ್ದು, ನಾನು ಅಭ್ಯರ್ಥಿಯಾಗಿ ಪ್ರಚಾರದಲ್ಲಿ ತೊಡಗಿಸಿಕೊಂಡಿದ್ದೇನೆ. ನನಗೆ ಎಲ್ಲೆಡೆ ಉತ್ತಮ ಪ್ರತಿಕ್ರಿಯೆ ಸಿಗುತ್ತಿದೆ. ನಾನು ಚುನಾವಣೆಗೋಸ್ಕರ ದೇವರಾಜ ಅರಸು ಅವರ ಸಮಾಧಿಗೆ ಪೂಜೆ ಮಾಡುವ ಗಿಮಿಕ್ ಮಾಡುತ್ತಿಲ್ಲ. ಚುನಾವಣೆಗಾಗಿ ತಂತ್ರಗಾರಿಕೆ ಮಾಡುತ್ತಿಲ್ಲ. ದೇವರಾಜ ಅರಸು ಅವರು ಒಳ್ಳೆಯ ಕೆಲಸ ಮಾಡಿರುವ ಕಾರಣ ನಾವು ಅವರನ್ನು ಗೌರವಿಸುತ್ತಿದ್ದೇವೆ. ದೇವರಾಜ ಅರಸು ಅವರು ನಮ್ಮ ಸಮುದಾಯ, ಸಂಬಂಧಿಕರೂ ಆಗಿದ್ದಾರೆ. ನಮಗೆ ಎಲ್ಲರೂ ಬೆಂಬಲ ನೀಡುವ ವಿಶ್ವಾಸವಿದ್ದು, ಗೆಲ್ಲುವ ಭರವಸೆ ಹೆಚ್ಚಿದೆ. ಹೆಚ್ಚಿನ ಲೀಡ್‌ನಲ್ಲಿ ಗೆಲ್ಲುವ ನಂಬಿಕೆ ಇದೆ ಎಂದರು.

ಯದುವೀರ್ ತಾಲೂಕಿನ ಮೊಮ್ಮಗ: ಶಾಸಕ ಜಿ.ಡಿ.ಹರೀಶ್‌ಗೌಡ ಮಾತನಾಡಿ, ಯದುವೀರ್ ಅವರು ಹುಣಸೂರಿನ ಮೊಮ್ಮಗ, ನಮ್ಮ ತಾಲೂಕಿನವರು. ಯದುವೀರ್ ಅವರ ತಾಯಿ ಅರಸು ಕಲ್ಲಹಳ್ಳಿಯವರು. ಹೀಗಾಗಿ ಹುಣಸೂರು ಕ್ಷೇತ್ರದಲ್ಲೇ 25 ಸಾವಿರ ಲೀಡ್ ಕೊಡಬೇಕು. ಆ ನಿಟ್ಟಿನಲ್ಲಿ ಬಿಜೆಪಿ, ಜೆಡಿಎಸ್ ಕಾರ್ಯಕರ್ತರು ಒಟ್ಟಾಗಿ ಕೆಲಸ ಮಾಡಬೇಕು. ಮೈಸೂರು ಅರಸರು ಕೃಷಿ ಭೂಮಿಗೆ ನೀರಾವರಿ ಒದಗಿಸಿದ್ದು, ಅಂತಹ ಕುಟುಂಬಕ್ಕೆ ಮತ ಹಾಕುವುದು ನಮ್ಮ ಪುಣ್ಯ ಎಂದರು.

> ಡಿ.ದೇವರಾಜ ಅರಸು ರಾಜ್ಯಕ್ಕೆ ಮಾದರಿಯಾಗಿದ್ದಾರೆ. ಅವರು ಆಯ್ಕೆಯಾಗಿದ್ದ ಕ್ಷೇತ್ರದಿಂದಲೇ ನಾನು ಆಯ್ಕೆಯಾಗಿರುವುದು ಹೆಮ್ಮೆಯ ವಿಚಾರ. ಅವರ ಹಲವು ವಿಚಾರ ಧಾರೆಗಳನ್ನು ನಾವು ಅಳವಡಿಸಿಕೊಳ್ಳಬೇಕಿದ್ದು, ಅವರ ಬಗ್ಗೆ ಅಗಾಧವಾದ ಗೌರವ ಹೊಂದಿದ್ದೇವೆ.
>
> -ಜಿ.ಡಿ.ಹರೀಶ್‌ಗೌಡ, ಶಾಸಕ.

ಅದ್ಧೂರಿ ಬೈಕ್ ರ‍್ಯಾಲಿ: ಚುನಾವಣಾ ಪ್ರಚಾರಕ್ಕಾಗಿ ಪಟ್ಟಣಕ್ಕೆ ಆಗಮಿಸಿದ ಯದುವೀರ್ ಅವರಿಗೆ ಸ್ಥಳೀಯರು ಅದ್ಧೂರಿ ಸ್ವಾಗತ ನೀಡಿದರು. ಡಿ.ದೇವರಾಜ ಅರಸು ಅವರ ಪ್ರತಿಮೆಗೆ ಮಾಲಾರ್ಪಣೆ ಮಾಡಿದ ಬಳಿಕ, ಅರಸು ಕಲ್ಲಹಳ್ಳಿ ಗ್ರಾಮಕ್ಕೆ ತೆರಳಿದ ಅಭ್ಯರ್ಥಿ ಯದುವೀರ್, ಶಾಸಕ ಜಿ.ಡಿ.ಹರೀಶ್‌ಗೌಡ ಅವರ ಪರ ಸ್ಥಳೀಯ ಜೆಡಿಎಸ್ ಹಾಗೂ ಬಿಜೆಪಿ ಕಾರ್ಯಕರ್ತರು, ಘೋಷಣೆಗಳನ್ನು ಕೂಗುತ್ತಾ ಬೈಕ್ ರ‍್ಯಾಲಿ ನಡೆಸಿದರು.

ಈ ಸಂದರ್ಭ ಬಿಜೆಪಿ ಜಿಲ್ಲಾಧ್ಯಕ್ಷ ಎಲ್.ಆರ್.ಮಹದೇವಸ್ವಾಮಿ, ತಾಲೂಕು ಅಧ್ಯಕ್ಷ ಕಾಂತರಾಜು, ನಗರಾಧ್ಯಕ್ಷ ನಾರಾಯಣ, ನಿಕಟಪೂರ್ವ ಅಧ್ಯಕ್ಷ ನಾಗಣ್ಣಗೌಡ, ಜೆಡಿಎಸ್ ಅಧ್ಯಕ್ಷ ದೇವರಾಜ ಒಡೆಯರ್, ಮುಖಂಡರಾದ ಹೇಮಂತ್ ಕುಮಾರ್‌ಗೌಡ, ನಾಗರಾಜ ಮಲ್ಲಾಡಿ, ಕೆಂಪೇಗೌಡ, ಶ್ರೀಧರ್, ಟಿಎಪಿಸಿಎಂಎಸ್ ಅಧ್ಯಕ್ಷ ಬಸವಲಿಂಗಯ್ಯ, ವಸಂತ್ ಕುಮಾರ್ ಇನ್ನಿತರರಿದ್ದರು.

ದೇವರಾಜ ಅರಸರ ಮೊಮ್ಮಗನ ಬೆಂಬಲ

ಹುಣಸೂರಿನ ವಿವಿಧೆಡೆ ಪ್ರಚಾರ ನಡೆಸಿದ ಯದುವೀರ್ ಅವರಿಗೆ ಮಾಜಿ ಮುಖ್ಯಮಂತ್ರಿ ದೇವರಾಜ ಅರಸು ಅವರ ಮೊಮ್ಮಗ ಮಂಜುನಾಥ್ ಅರಸ್ ಬೆಂಬಲ ನೀಡಿದರು. ಪಟ್ಟಣದಲ್ಲಿ ದೇವರಾಜ ಅರಸು ಪ್ರತಿಮೆಗೆ ಮಾಲಾರ್ಪಣೆ ಮಾಡುವ ಸಂದರ್ಭ ಯದುವೀರ್ ಜೊತೆ ಕಾಣಿಸಿಕೊಂಡ ಮಾಜಿ ಸಂಸದೆ ದಿ.ಚಂದ್ರಪ್ರಭಾ ಅರಸು ಅವರ ಪುತ್ರ ಮಂಜುನಾಥ್ ಅರಸು, ಬಿಜೆಪಿ ಅಭ್ಯರ್ಥಿ ಯದುವೀರ್ ಅವರಿಗೆ ಬೆಂಬಲ ನೀಡುವುದಾಗಿ ಘೋಷಿಸಿದರು.

ಈ ಬಗ್ಗೆ ಪ್ರತಿಕ್ರಿಯಿಸಿದ ಅವರು, ಸದ್ಯಕ್ಕೆ ನಾನು ಬಿಜೆಪಿ ಸೇರ್ಪಡೆ ಆಗಿಲ್ಲ. ಮಹಾರಾಜರ ಕುಟುಂಬದ ಮೇಲೆ ಅಪಾರ ಗೌರವವಿದ್ದು, ಆ ಕಾರಣಕ್ಕೆ ಯದುವೀರ್ ಅವರಿಗೆ ಬೆಂಬಲ ಸೂಚಿಸುತ್ತಿದ್ದೇನೆ. ಕಾಲ ಪಕ್ವವಾದ ಬಳಿಕ ನಾನು ಬಿಜೆಪಿ ಸೇರುತ್ತೇನೆ. ಬಿಜೆಪಿ ಬಾವುಟ ಹಾಕಿದ್ದೇನೆ. ಮುಂದೆ ಬಿಜೆಪಿ ಪಕ್ಷಕ್ಕೆ ಸೇರುತ್ತೇನೆ. ನನಗೆ ಮೋದಿ ಅವರ ಸಿದ್ಧಾಂತ ಇಷ್ಟವಾಗಿದೆ. ಪ್ರಪಂಚದಲ್ಲೇ ಭಾರತವನ್ನು ಗುರುತಿಸುವಂತೆ ಮಾಡಿದ್ದಾರೆ. ಹಲವು ಯೋಜನೆಗಳು ನನಗೆ ಇಷ್ಟವಾಗಿವೆ. ದೇವರಾಜ ಅರಸು ಅವರನ್ನು ಕೊನೆಗಾಲದಲ್ಲಿ ಕೆಟ್ಟದಾಗಿ ನಡೆಸಿಕೊಂಡರು. ನಮ್ಮ ಕುಟುಂಬಕ್ಕೆ ಕಾಂಗ್ರೆಸ್‌ನವರು ಏನು ಮಾಡಿದ್ದಾರೆ? ಪೋಸ್ಟರ್‌ನಲ್ಲಿ ಅವರ ಹೆಸರು ಬೇಕು. ಕಾರ್ಯಕ್ರಮಗಳಲ್ಲಿ ಅವರ ಫೋಟೋ ಬಳಸಿಕೊಳ್ಳಬೇಕು. ಅಷ್ಟೇ ಅವರ ಉದ್ದೇಶ ಎಂದು ವಾಗ್ದಾಳಿ ನಡೆಸಿದರು.

ಮೈಸೂರು ಚಿತ್ರಮಂದಿರಗಳಲ್ಲಿ



ಪದ್ಮ ಚಿತ್ರಮಂದಿರ	**(ದೂ: 2521923)**
ಬಡೇ ಮಿಯಾನ್ ಚೋಟೆ ಮಿಯಾನ್ (ಕ)	2 ಪ್ರದರ್ಶನಗಳು
ಬಡೇ ಮಿಯಾನ್ ಚೋಟೆ ಮಿಯಾನ್ (ಹಿಂ)	2 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್ ಚಿತ್ರಮಂದಿರ	**(ದೂ: 2422871)**
ಯುವ (ಕ)	4 ಪ್ರದರ್ಶನಗಳು
ಬಾಲಾಜಿ ಚಿತ್ರಮಂದಿರ	**(ದೂ: 2497199)**
ಸೈತಾನ್ (ಹಿಂ)	4 ಪ್ರದರ್ಶನಗಳು
ಮಹದೇಶ್ವರ ಚಿತ್ರಮಂದಿರ	**(ಮೊ:9900820093)**
ಮುಕ್ತ ಮನಸ್ಸು (ಕ)	4 ಪ್ರದರ್ಶನಗಳು
ಗಾಯಿತ್ರಿ	
ಯುವ (ಕ)	4 ಪ್ರದರ್ಶನಗಳು
ರಾಜಕಮಲ್	
ಬಡೇ ಮಿಯಾನ್ ಚೋಟೆ ಮಿಯಾನ್ (ಹಿಂ)	4 ಪ್ರದರ್ಶನಗಳು
ಸಂಗಂ	
ಅವತಾರ ಪುರುಷ 2 (ಕ)	4 ಪ್ರದರ್ಶನಗಳು
ಲಿಡೋ	
ಮ್ಯಾಟ್ನಿ (ಕ)	4 ಪ್ರದರ್ಶನಗಳು
ತಿಬ್ಬಾದೇವಿ	
ಬಡೇ ಮಿಯಾನ್ ಚೋಟೆ ಮಿಯಾನ್ (ಹಿಂ)	4 ಪ್ರದರ್ಶನಗಳು
ಪ್ರಭಾ	
ಮಾರಿಗೋಲ್ಡ್ (ಕ)	4 ಪ್ರದರ್ಶನಗಳು

ಡಿಆರ್‌ಸಿ ಸಿನಿಮಾಸ್

ದೂ : 4240422/4241800

ಸ್ಕ್ರೀನ್ 1	ಬಡೇ ಮಿಯಾನ್ ಚೋಟೆ ಮಿಯಾನ್ (ಹಿಂ): ಬೆ.10.15ಕ್ಕೆ, ರಾ.7.05ಕ್ಕೆ, ರಾ.10.15ಕ್ಕೆ, ಗಾಡ್ಜಿಲ್ಲಾ ಎಕ್ಸ್ ಕಾಂಗ್ ದಿ ನ್ಯೂ ಎಂಪೈರ್ (ಇಂ): ಮ.1.25ಕ್ಕೆ, ಸ್ವತಂತ್ರ್ಯ ವೀರ ಸಾವರ್ಕರ್ (ಹಿಂ): ಮ.3.45ಕ್ಕೆ.
ಸ್ಕ್ರೀನ್ 2	ಅಪ್ಪ ಐ ಲವ್‌ಯು (ಕ): ಬೆ.10.20ಕ್ಕೆ, ಮುಕ್ತ ಮನಸ್ಸು (ಕ): ಮ.1.10ಕ್ಕೆ, ಗೀತಾಂಜಲಿ ಮಲ್ಲಿ ವಚ್ಚಿಂದಿ (ತೆ): ಸಂ.4.20ಕ್ಕೆ, ವರ್ಷನ್‌ಗಲ್ಕು ಶೇಷಂ (ಮ): ರಾ.7.10ಕ್ಕೆ, ಆವೇಶಂ (ಮ): ರಾ.10.20ಕ್ಕೆ.
ಸ್ಕ್ರೀನ್ 3	ಅವತಾರ ಪುರುಷ 2 (ಕ): ಬೆ.10.55ಕ್ಕೆ, ರೊಮಿಯೋ (ತ): ಮ.1.25ಕ್ಕೆ, ಡಿಯರ್ (ತ): ಸಂ.4.15ಕ್ಕೆ, ಮೈದಾನ್ (ಹಿಂ): ಸಂ.6.55ಕ್ಕೆ, ರಾ.10.20ಕ್ಕೆ.
ಸ್ಕ್ರೀನ್ 4	ವರ್ಷನ್‌ಗಲ್ಕು ಶೇಷಂ (ಮ): ಬೆ.10.05ಕ್ಕೆ, ಮಂಜುಮ್ಮೆಲ್ ಬಾಯ್ಸ್ (ಮ): ಮ.1.15ಕ್ಕೆ, ಯುವ (ಕ): ಸಂ.4ಕ್ಕೆ, ರಾ.7ಕ್ಕೆ, ರಾ.10ಕ್ಕೆ

ಐನಾಕ್ಸ್ ಮೂವೀಸ್

ದೂ : 2533444 / 2433456

ಸ್ಕ್ರೀನ್ 1	ಬಡೇ ಮಿಯಾನ್ ಚೋಟೆ ಮಿಯಾನ್ (ಹಿಂ): ಬೆ.10.50ಕ್ಕೆ, ಮ.3ಕ್ಕೆ, ರಾ.10ಕ್ಕೆ, ಬಡೇ ಮಿಯಾನ್ ಚೋಟೆ ಮಿಯಾನ್ (3ಡಿ) (ಹಿಂ): ಸಂ.6.30ಕ್ಕೆ.
ಸ್ಕ್ರೀನ್ 2	ಮೈದಾನ್ (ಹಿಂ): ಬೆ.9.50ಕ್ಕೆ, ಮ.1.40ಕ್ಕೆ, ಸಂ.5.30ಕ್ಕೆ, ರಾ.9.20ಕ್ಕೆ.
ಸ್ಕ್ರೀನ್ 3	ಬಡೇ ಮಿಯಾನ್ ಚೋಟೆ ಮಿಯಾನ್ (ಹಿಂ): ಬೆ.9.40ಕ್ಕೆ, ಅಪ್ಪ ಐ ಲವ್‌ಯು (ಕ): ಮ.1.10ಕ್ಕೆ, ಅವತಾರ ಪುರುಷ 2 (ಕ): ಸಂ.4.15ಕ್ಕೆ, ಯುವ (ಕ): ಸಂ.6.55ಕ್ಕೆ, ಮೈದಾನ್ (ಹಿಂ): ರಾ.10.10ಕ್ಕೆ.
ಸ್ಕ್ರೀನ್ 4	ಯುವ (ಕ): ಬೆ.9.40ಕ್ಕೆ, ಸಂ.4ಕ್ಕೆ, ರೋಮಿಯೋ (ತ): ಮ.12.55ಕ್ಕೆ, ಗೀತಾಂಜಲಿ ಮಲ್ಲಿ ವಚ್ಚಿಂದಿ (ತೆ): ರಾ.7.05ಕ್ಕೆ, ಗಾಡ್ಜಿಲ್ಲಾ ಎಕ್ಸ್ ಕಾಂಗ್ ದಿ ನ್ಯೂ ಎಂಪೈರ್ (3ಡಿ) (ಇಂ): ರಾ.10.20ಕ್ಕೆ.

ಮೈಸೂರು ವಿಷನ್ ಸಿನಿಮಾ

ದೂ : 0821–2973519

ಸ್ಕ್ರೀನ್ 1	ಪಾರ್ಕಿಂಗ್ (ಕ): ಬೆ.10.35ಕ್ಕೆ, ಸಪ್ತಸಾಗರದಾಚೆ ಎಲ್ಲೋ 2 (ಕ): ಮ.1.10ಕ್ಕೆ, ಬ್ಯಾಡ್ ಮ್ಯಾನರ್ಸ್ (ಕ): ಸಂ.4ಕ್ಕೆ, ಅರ್ಧಂಬರ್ಧ ಪ್ರೇಮಕಥೆ (ತ): ಸಂ.6.35ಕ್ಕೆ, ಅನ್ನಪೂರ್ಣಿ (ತ): ರಾ.9.15ಕ್ಕೆ.
ಸ್ಕ್ರೀನ್ 2	ಅನಿಮಲ್ (ಹಿಂ): ಬೆ.10ಕ್ಕೆ, ಸಂ.6ಕ್ಕೆ, ರಾ.9.45ಕ್ಕೆ, ಸ್ಯಾಮ್ ಬಹದ್ದೂರ್ (ಹಿಂ): ಮ.1.45ಕ್ಕೆ.
ಸ್ಕ್ರೀನ್ 3	ಸ್ಯಾಮ್ ಬಹದ್ದೂರ್ (ಹಿಂ): ಬೆ.10.10ಕ್ಕೆ, ಸಂ.4.50ಕ್ಕೆ, ಅನಿಲಲ್ (ಹಿಂ): ಮ.1.05ಕ್ಕೆ, ರಾ.7.45ಕ್ಕೆ
ಸ್ಕ್ರೀನ್ 4	ಸಪ್ತ ಸಾಗರದಾಚೆ ಎಲ್ಲೋ 2 (ತೆ): ಬೆ.10.45ಕ್ಕೆ, ಅನಿಮಲ್ (ಹಿಂ): ಮ.2.40ಕ್ಕೆ, ನೆಪೋಲಿಯನ್ (ಇಂ): ಸಂ.6.25ಕ್ಕೆ, ಸ್ಯಾಮ್ ಬಹದ್ದೂರ್ (ಹಿಂ): ರಾ.9.35ಕ್ಕೆ.

ಪಿವಿಆರ್ ಸಿನಿಮಾಸ್

ನೆಕ್ಸಸ್ ಸೆಂಟರ್‌ಸಿಟಿ ಮಾಲ್, 2ನೇ ಮಹಡಿ, ಮೊ.ನಂ: 8951357139

ದಿ ಫ್ಯಾಮಿಲಿ ಸ್ಟಾರ್ (ತೆ): ಬೆ.9.10ಕ್ಕೆ, ಮ.12.30ಕ್ಕೆ, ಮ.3.50ಕ್ಕೆ, ರಾ.7.10ಕ್ಕೆ, ರಾ.10.30ಕ್ಕೆ, ಯುವ (ಕ): ಬೆ.10.20ಕ್ಕೆ, ಬೆ.11.35ಕ್ಕೆ, ಮ.12.45ಕ್ಕೆ, ಮ.3.20ಕ್ಕೆ, ಸಂ.5.45ಕ್ಕೆ, ಸಂ.6.45ಕ್ಕೆ, ರಾ.10ಕ್ಕೆ, ಗಾಡ್ಜಿಲ್ಲಾ ಎಕ್ಸ್ ಕಾಂಗ್ ದಿ ನ್ಯೂ ಎಂಪೈರ್ (3ಡಿ) (ಇಂ): ಬೆ.10.45ಕ್ಕೆ, ಮ.1.25ಕ್ಕೆ, ಸಂ.6.50ಕ್ಕೆ, ರಾ.9.30ಕ್ಕೆ, ಅವತಾರ ಪುರುಷ 2 (ಕ): ಮ.12.40ಕ್ಕೆ, ಸಂ.6.35ಕ್ಕೆ, ಮ್ಯಾಟ್ನಿ (ಕ): ಮ.1.35ಕ್ಕೆ, ಭರ್ಜರಿ ಗಂಡು (ಕ): ಮ.2.50ಕ್ಕೆ, ದಿ ಫಸ್ಟ್ ಓಮನ್ (ಇಂ): ಸಂ.4ಕ್ಕೆ, ರಾ.9ಕ್ಕೆ, ಕ್ರೂವ್ (ಹಿಂ): ಸಂ.4.05ಕ್ಕೆ, ರಾ.9.15ಕ್ಕೆ, ಮಂಜುಮ್ಮೆಲ್ ಬಾಯ್ಸ್ (ಮ): ಸಂ.4.30ಕ್ಕೆ, ಮಾರಿಗೋಲ್ಡ್ (ಕ): ರಾ.7.25ಕ್ಕೆ, ಆಡುಜೀವಿತಂ (ಮ): ರಾ.10.15ಕ್ಕೆ.

ಗರುಡ ಮಾಲ್,

1ನೇ ಮಹಡಿ, ಮೊ.ನಂ: 9901373210

ಯುವ (ಕ): ಬೆ.9.30ಕ್ಕೆ, ಮ.12.25ಕ್ಕೆ, ಮ.3.40ಕ್ಕೆ, ಸಂ.6.30ಕ್ಕೆ, ರಾ.10.30ಕ್ಕೆ, ದಿ ಫ್ಯಾಮಿಲಿ ಸ್ಟಾರ್ (ತೆ): ಬೆ.9.50ಕ್ಕೆ, ಮ.12ಕ್ಕೆ, ಮ.3.20ಕ್ಕೆ, ಸಂ.6.40ಕ್ಕೆ, ರಾ.10ಕ್ಕೆ, ಗಾಡ್ಜಿಲ್ಲಾ ಎಕ್ಸ್ ಕಾಂಗ್ ದಿ ನ್ಯೂ ಎಂಪೈರ್ (3ಡಿ) (ಇಂ): ಮ.1.10ಕ್ಕೆ, ಮ.3.50ಕ್ಕೆ, ರಾ.9.45ಕ್ಕೆ, ಅವತಾರ ಪುರುಷ 2 (ಕ): ಮ.2ಕ್ಕೆ, ರಾ.7.35ಕ್ಕೆ, ಮ್ಯಾಟ್ನಿ (ಕ): ಸಂ.4.40ಕ್ಕೆ, ಆಡುಜೀವಿತಂ (ಮ): ಸಂ.6.55ಕ್ಕೆ, ರಾ.10.15ಕ್ಕೆ.

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ನನ್ನ ವಿರುದ್ಧ ಸಿಬಿಐ ತನಿಖೆ ಮಾಡಿದರೂ ಸ್ವಾಗತ: ಜಿಡಿಹೆಚ್



ಹುಣಸೂರು, ಏ.11– ನನ್ನ ಅಧಿಕಾರವಧಿಯಲ್ಲಿ ಡಿಸಿಸಿ ಬ್ಯಾಂಕ್‌ನಲ್ಲಿ ಯಾವುದೇ ಹಗರಣ ನಡೆದಿಲ್ಲ. ನನ್ನ ಹಾಗೂ ಬ್ಯಾಂಕ್ ವಿರುದ್ಧ ಸಿಬಿಐ ತನಿಖೆ ಮಾಡಿದರೆ ಅದನ್ನು ನಾವು ಸ್ವಾಗತಿಸುತ್ತೇವೆ ಎಂದು ಶಾಸಕ ಜಿ.ಡಿ.ಹರೀಶ್ ಗೌಡ ತಿಳಿಸಿದರು.

ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಡಿಸಿಸಿ ಬ್ಯಾಂಕ್ ಚುನಾವಣೆ ನಡೆಸದಂತೆ ನನಗೆ ಕಿರುಕುಳ ಕೊಟ್ಟಿದ್ದಾಗಿದೆ. ಇದೀಗ ಡಿಸಿಸಿ ಬ್ಯಾಂಕ್‌ಗಳಲ್ಲಿ ಹಣ ಲೂಟಿ ಮಾಡಿದವರನ್ನೇ ಆಯಾಕಟ್ಟಿನ ಸ್ಥಾನಗಳಿಗೆ ನೇಮಕ ಮಾಡುತ್ತಿದ್ದಾರೆ. ಮುಖ್ಯಮಂತ್ರಿಗಳೇ ನೇಮಕ ಮಾಡಿರುವ ಆಡಳಿತಾಧಿಕಾರಿಗಳು, ಭ್ರಷ್ಟ ಅಧಿಕಾರಿಗಳನ್ನು ಅದೇ ಸ್ಥಾನಗಳಿಗೆ ತಂದು ಕೂರಿಸಿದ್ದಾರೆ. ಕೇವಲ ನನ್ನನ್ನು ಗುರಿಯಾಗಿಸಿಕೊಂಡು ಕಿರುಕುಳ ಕೊಡುವುದರ ಬದಲು, ನನ್ನ ವಿರುದ್ಧ ಹಾಗೂ ಡಿಸಿಸಿ ಬ್ಯಾಂಕ್ ವಿರುದ್ಧ ಸಿಬಿಐ ತನಿಖೆ ಮಾಡಿಸಿದರೆ ಅದನ್ನು ಸ್ವಾಗತಿಸುತ್ತೇನೆ. ನಮ್ಮ ಕಾಲದಲ್ಲಿ ಡಿಸಿಸಿ ಬ್ಯಾಂಕ್‌ನಲ್ಲಿ ಯಾವುದೇ ಹಗರಣ ನಡೆದಿಲ್ಲ. ದಯವಿಟ್ಟು ಮಾಡಿ ನಿಮ್ಮ ಕಾಲದಲ್ಲಿ ಆಗಿರುವ ಹಗರಣಗಳನ್ನು ಮಾಡಿದವರಿಗೆ ಸಹಕಾರ ನೀಡುವುದನ್ನು ನಿಲ್ಲಿಸಿ ಎಂದರು.

ಹೋಲಿಕೆ ಸರಿಯಲ್ಲ: ಸಿಎಂ ಸಿದ್ದರಾಮಯ್ಯ ಅವರು ಡಿ.ದೇವರಾಜ ಅರಸು ಅವರಿಗೆ ಹೋಲಿಕೆ ಮಾಡಿಕೊಳ್ಳುವ ವಿಷಯ ಕುರಿತು ಮಾತನಾಡಿದ ಅವರು, ದೇವರಾಜ ಅರಸು ಅವರು ಎಲ್ಲರನ್ನೂ ವಿಶ್ವಾಸಕ್ಕೆ ತೆಗೆದುಕೊಂಡು ಸಾಕಷ್ಟು ಕೆಲಸ ಮಾಡಿದ್ದು, ಅವರಿಗೆ ಹೋಲಿಕೆ ಮಾಡಿಕೊಳ್ಳುವುದು ಸೂಕ್ತವಲ್ಲ. ಯಾರಿಗಾದರೂ ನಮ್ಮನ್ನು ಹೋಲಿಕೆ ಮಾಡಿಕೊಳ್ಳುವ ಮುನ್ನ ಹಲವು ಬಾರಿ ಯೋಚಿಸಬೇಕಿದೆ. ಹಾಗೆಂದ ಮಾತ್ರಕ್ಕೆ ಸಿದ್ದರಾಮಯ್ಯ ಅವರಿಗೆ ದೇವರಾಜ ಅರಸು ಅವರ ವ್ಯಕ್ತಿತ್ವ ಇಲ್ಲವೆಂಬುದನ್ನು ನಾನು ತೀರ್ಮಾನ ಮಾಡುವುದಿಲ್ಲ. ಅದನ್ನು ಜನರೇ ತೀರ್ಮಾನಿಸುತ್ತಾರೆ ಎಂದರು.

ಅಭಿವೃದ್ಧಿ ನೋಡಿ ಮಾತಾಡಿ: ಶಾಸಕ ಜಿ.ಟಿ.ದೇವೇಗೌಡರ ವಿರುದ್ಧ ಸಿದ್ದರಾಮಯ್ಯ ಹೇಳಿಕೆ ಕುರಿತು ಮಾತನಾಡಿದ ಅವರು, ಚಾಮುಂಡೇಶ್ವರಿ ಕ್ಷೇತ್ರದ ಬಗ್ಗೆ ಸಿಎಂ ಕೇಳಿದ ಪ್ರಶ್ನೆಗೆ ಜಿ.ಟಿ.ದೇವೇಗೌಡರು ಈಗಾಗಲೇ ಉತ್ತರ ಕೊಟ್ಟಿದ್ದಾರೆ. ಚರ್ಚೆ ಸಂದರ್ಭದಲ್ಲಿ ಸಿಎಂ ಆದವರು ಯಾವ ರೀತಿ ಪದಬಳಕೆ ಮಾಡಬೇಕೆಂದು ತಿಳಿದಿರಬೇಕು. ಸಿದ್ದರಾಮಯ್ಯ ಅವರ ನಂತರ ಚಾಮುಂಡೇಶ್ವರಿ ಕ್ಷೇತ್ರದ ಅಭಿವೃದ್ಧಿ ಗಮನಿಸಿ ಮಾತನಾಡಬೇಕಿದೆ. ಜವಾಬ್ದಾರಿಯುತ ಸ್ಥಾನದಲ್ಲಿರುವ ಅವರು ಸ್ಥಾನಕ್ಕೆ ಗೌರವ ಬರುವಂತೆ ಮಾತನಾಡಬೇಕಿದೆ. ಈ ವಿಷಯದಲ್ಲಿ ಜಿದ್ದು, ಸೇಡು ಎಲ್ಲವನ್ನು ಯಾರು ಮಾಡುತ್ತಿದ್ದಾರೆ ಎಂಬುದು ಎಲ್ಲರಿಗೂ ಗೊತ್ತಿದೆ ಎಂದು ಟೀಕಿಸಿದರು.

ಬಾಲರಾಜ್ ಪರ ಮಾಜಿ ಶಾಸಕ ಹರ್ಷವರ್ಧನ್ ಪ್ರಚಾರ




ನಂಜನಗೂಡು, ಏ.11– ಚಾಮರಾಜನಗರ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಬಾಲರಾಜ್ ಪರ ನಗರದ ತಮ್ಮಡಗೇರಿ, ಹಳ್ಳದಕೇರಿ, ಪಾಠಶಾಲಾ ಬೀದಿ, ಕಾಯಂಗಡಿ ಬೀದಿಗಳಲ್ಲಿ ಗುರುವಾರ ಮಾಜಿ ಶಾಸಕ ಬಿ.ಹರ್ಷವರ್ಧನ್ ಕಾರ್ಯಕರ್ತರೊಂದಿಗೆ ಮತಯಾಚನೆ ಮಾಡಿದರು.

ಗುರುವಾರ ಬೆಳಗ್ಗೆ ನಗರದ ರಾಘವೇಂದ್ರ ಸ್ವಾಮಿಗಳ ಮಠಕ್ಕೆ ತೆರಳಿ ಪೂಜೆ ಸಲ್ಲಿಸಿದ ನಂತರ ನಗರದ ಪ್ರಮುಖ ಬೀದಿಗಳ ಮನೆ ಮನೆಗಳಿಗೆ ತೆರಳಿ ಮತಯಾಚಿಸಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಹರ್ಷವರ್ಧನ್, ಕ್ಷೇತ್ರದಲ್ಲಿ ಬಿಜೆಪಿ ಪರವಾದ ವಾತಾವರಣವಿದೆ. ನನ್ನ ಅವಧಿಯಲ್ಲಿ ಹೆಚ್ಚಿನ ಅನುದಾನ ತಂದು ಕ್ಷೇತ್ರವನ್ನು ಸಮಗ್ರ ಅಭಿವೃದ್ಧಿಪಡಿಸಲಾಗಿತ್ತು. ನುಗು ಏತ ನೀರಾವರಿ ಯೋಜನೆ, ನಗರದ 2 ಪ್ರಮುಖ ವೃತ್ತಗಳಲ್ಲಿ ಸಿಗ್ನಲ್ ಲೈಟ್ ಹಾಗೂ ಕೆಂಡಗಣ್ಣಸ್ವಾಮಿ ಮಠದ ಬಳಿ ಬಸವೇಶ್ವರರ ಮೂರ್ತಿ ಸ್ಥಾಪನೆಗೆ ಕ್ರಮವಹಿಸಲಾಗಿತ್ತು. ಕೇಂದ್ರ ಸರ್ಕಾರದ 10 ವರ್ಷಗಳ ಸಾಧನೆಯನ್ನು ನಮ್ಮ ಕಾರ್ಯಕರ್ತರು ಮತದಾರರಿಗೆ ಮನವರಿಕೆ ಮಾಡಿಕೊಟ್ಟು ಮತಯಾಚನೆ ಮಾಡುತ್ತಿದ್ದಾರೆ. ಸ್ವಚ್ಛಭಾರತ್, ಆಯುಷ್ಮಾನ್ ಯೋಜನೆಯಲ್ಲಿ ಬಡವರಿಗೆ ಉಚಿತ ಚಿಕಿತ್ಸೆ, ಜನೌಷಧಿ ಕೇಂದ್ರಗಳಲ್ಲಿ ಕಡಿಮೆ ಬೆಲೆಗೆ ಔಷಧಿಗಳು ದೊರೆಯುತ್ತಿವೆ. ದೇಶದ 20 ನಗರಗಳಿಗೆ ಮೆಟ್ರೊ ವಿಸ್ತರಣೆಗೊಂಡಿದೆ. ಪಿಎಂ ಕಿಸಾನ್ ಯೋಜನೆಯಲ್ಲಿ ರೈತರು ಕೇಂದ್ರದಿಂದ ನೇರವಾಗಿ ಆರ್ಥಿಕ ಸಹಾಯ ಸೇರಿದಂತೆ ಮೋದಿಯವರ ನೇತೃತ್ವದಲ್ಲಿ ದೇಶ ಜಗತ್ತಿನ 5ನೇ ದೊಡ್ಡ ಆರ್ಥಿಕ ಶಕ್ತಿಯಾಗಿ ಬೆಳೆದಿದೆ. ಚುನಾವಣಾ ಪ್ರಚಾರಕ್ಕೆ ಪ್ರಧಾನಿ ಮೋದಿ ಮೈಸೂರಿಗೆ ಭೇಟಿ ಕೊಡುತ್ತಿದ್ದಾರೆ. ಕಳೆದ 3 ಲೋಕಸಭಾ ಚುನಾವಣೆಗಳಲ್ಲಿ ನಂಜನಗೂಡು ಕ್ಷೇತ್ರದಲ್ಲಿ ಮುನ್ನಡೆ ಸಾಧಿಸಿದೆ. ಈ ಬಾರಿಯೂ ನಮ್ಮ ಅಭ್ಯರ್ಥಿ ಬಾಲರಾಜ್ ಅವರಿಗೆ ಹೆಚ್ಚಿನ ಲೀಡ್ ನೀಡಲಿದ್ದೇವೆ. ರಾಜ್ಯಾಧ್ಯಕ್ಷ ವಿಜಯೇಂದ್ರ ನಗರಕ್ಕೆ ಭೇಟಿ ಕೊಟ್ಟು ಚುನಾವಣಾ ಪ್ರಚಾರ ಸಭೆಯಲ್ಲಿ ಭಾಗಿಯಾಗಲಿದ್ದಾರೆ ಎಂದು ಹೇಳಿದರು.

ಈ ವೇಳೆ ರಾಜ್ಯ ಕಾಂಪೋಸ್ಟ್ ಅಭಿವೃದ್ಧಿ ನಿಗಮದ ಮಾಜಿ ಅಧ್ಯಕ್ಷ ಎಸ್.ಮಹದೇವಯ್ಯ, ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ ಮಾಜಿ ಅಧ್ಯಕ್ಷ ಎನ್.ಆರ್.ಕೃಷ್ಣಪ್ಪಗೌಡ, ಜಿಪಂ ಮಾಜಿ ಸದಸ್ಯ ಸಿ.ಚಿಕ್ಕರಂಗನಾಯಕ, ಬಿಜೆಪಿ ತಾಲೂಕು ಅಧ್ಯಕ್ಷ ಕೆಂಡಗಣ್ಣಪ್ಪ, ನಗರಾಧ್ಯಕ್ಷ ಸಿದ್ದರಾಜು, ಓಬಿಸಿ ಅಧ್ಯಕ್ಷ ಬಾಲಚಂದ್ರು, ನಗರಸಭಾ ಸದಸ್ಯರಾದ ಕಪಿಲೇಶ್, ಮಹೇಶ್ ಅತ್ತಿಖಾನೆ, ಹೆಚ್.ಎಸ್.ಮಹದೇವಸ್ವಾಮಿ, ಮಹದೇವಪ್ರಸಾದ್, ಎಪಿಎಂಸಿ ಮಾಜಿ ಸದಸ್ಯ ಗುರುಸ್ವಾಮಿ, ಬಿಜೆಪಿ ಯುವ ಮೋರ್ಚಾ ಅಧ್ಯಕ್ಷ ಗೋವರ್ಧನ್, ಜಿಲ್ಲಾ ಕಾರ್ಯದರ್ಶಿ ಮಧುರಾಜ್, ಮುಖಂಡ ವಿನಯ್‌ಕುಮಾರ್ ಹಲವರಿದ್ದರು.

ಸುನೀಲ್ ಬೋಸ್ ಪರ ಚೆಲುವರಾಜ್ ಮತಯಾಚನೆ



ಮೈಮುಲ್ ನಿರ್ದೇಶಕ ಆರ್.ಚೆಲುವರಾಜು ಸುನೀಲ್ ಬೋಸ್ ಪರ ಮತಯಾಚಿಸಿದರು.

ತಿ.ನರಸೀಪುರ, ಏ.11– ಕಾಂಗ್ರೆಸ್ ಪಕ್ಷದ ಸಾಮಾನ್ಯ ಕಾರ್ಯಕರ್ತನಾಗಿ ಪಕ್ಷ ನಿಷ್ಠೆ ತೋರಿದ ಸುನೀಲ್ ಬೋಸ್ ಸಿದ್ಧಾಂತ, ಬದ್ಧತೆ ಮೆಚ್ಚುವಂತಹುದು. ಹೀಗಾಗಿ ಇವರನ್ನು ಕ್ಷೇತ್ರದ ಜನತೆ ಗೆಲ್ಲಿಸಿ ಲೋಕಸಭೆಗೆ ಕಳುಹಿಸಿಕೊಡಬೇಕು ಎಂದು ಮೈಮುಲ್ ನಿರ್ದೇಶಕ ಆರ್.ಚೆಲುವರಾಜು ಮನವಿ ಮಾಡಿದರು.

ತಾಲೂಕಿನ ಕೇತುಪುರ, ಉಕ್ಕಲಗೆರೆ ಹಾಗೂ ಸೋಮನಾಥಪುರ ಗ್ರಾಪಂ ವ್ಯಾಪ್ತಿಯಲ್ಲಿ ಚಾಮರಾಜನಗರ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಸುನೀಲ್ ಬೋಸ್ ಪರ ಮತಯಾಚಿಸಿ ಮಾತನಾಡಿದ ಅವರು, ಸುನೀಲ್ ಬೋಸ್ ಅವರು ಕಳೆದ 3 ಚುನಾವಣೆಯಲ್ಲಿ ಶಾಸಕನಾಗುವ ಎಲ್ಲಾ ಅವಕಾಶಗಳಿದ್ದರೂ, ಕಾರಣಾಂತರಗಳಿಂದ ವಂಚಿತರಾದರು. ಟಿಕೆಟ್ ಕೈತಪ್ಪಿದ್ದಕ್ಕೆ ಬೇಸರ ಮಾಡಿಕೊಳ್ಳದೇ ಕ್ಷೇತ್ರದ ಕಾರ್ಯಕರ್ತರೊಂದಿಗೆ ನಿರಂತರ ಸಂಪರ್ಕ ಹೊಂದಿ ಜನಸಾಮಾನ್ಯರ ಕಷ್ಟ ಸುಖಗಳಲ್ಲಿ ಭಾಗಿಯಾಗಿದ್ದಾರೆ. 2018 ರಲ್ಲಿ ಬೇರೆ ಪಕ್ಷದ ಆಫರ್ ತಿರಸ್ಕರಿಸಿ ಪಕ್ಷದಲ್ಲೇ ಉಳಿದು ಸಾಮಾನ್ಯ ಕಾರ್ಯಕರ್ತನಂತೆ ತಮ್ಮ ತಂದೆಯೊಂದಿಗೆ ಕ್ಷೇತ್ರದ ಜನರೊಂದಿಗೆ ಒಡನಾಟ ಇಟ್ಟುಕೊಂಡು ಬಂದಿದ್ದಾರೆ. ಹಾಗಾಗಿ ಅವರ ಸಿದ್ಧಾಂತ ಹಾಗೂ ಬದ್ಧತೆ ಎಲ್ಲರೂ ಮೆಚ್ಚಲೇಬೇಕು ಎಂದರು.

ಎಪಿಎಂಸಿ ಮಾಜಿ ಸದಸ್ಯ ಉಕ್ಕಲಗೆರೆ ಬಸವಣ್ಣ ಮಾತನಾಡಿ, ರಾಜ್ಯದಲ್ಲಿ 5ವರ್ಷ ಹಾಗೂ ಕೇಂದ್ರದಲ್ಲಿ 10 ವರ್ಷ ಆಡಳಿತ ನಡೆಸಿದ ಬಿಜೆಪಿ ಪಕ್ಷ ಬಡವರ ಉದ್ಧಾರಕ್ಕೆ ಯಾವುದೇ ಕಾರ್ಯಕ್ರಮ ರೂಪಿಸಲಿಲ್ಲ. ಬದಲಿಗೆ ಸುಳ್ಳು ಭರವಸೆ ನೀಡುವ ಮೂಲಕ ಜನರ ಕಣ್ಣಿಗೆ ಮಣ್ಣೆರಚುವ ಕೆಲಸ ಮಾಡಿಕೊಂಡೇ ಬಂತು. ಈಗ ಮತ್ತೆ ಸುಳ್ಳು ಭರವಸೆಗಳನ್ನು ನೀಡಿ ಮತ್ತೆ ಅಧಿಕಾರ ಹಿಡಿಯಲು ಹವಣಿಸುತ್ತಿದೆ. ಜನತೆ ಅವರ ಮಾತಿಗೆ ಮರುಳಾಗಬೇಡಿ. ರಾಜ್ಯ ಸರ್ಕಾರ ಜಾರಿಗೊಳಿಸಿರುವ ಗ್ಯಾರಂಟಿ ಯೋಜನೆಗಳು ಜನಪರವಾಗಿದೆ. ಹೀಗಾಗಿ ಜನಪರ, ಅಭಿವೃದ್ಧಿ ಪರ ಸರ್ಕಾರಕ್ಕೆ ಕಾಂಗ್ರೆಸ್ ಬೆಂಬಲಿಸಿ. ಕ್ಷೇತ್ರದಲ್ಲಿ ಸುನೀಲ್ ಬೋಸ್ ಗೆಲುವು ಸಾಧಿಸಿದರೆ ಮುಂದಿನ 15 ವರ್ಷ ಅವರನ್ನು ಅಲುಗಾಡಿಸಲು ಯಾರಿಂದಲೂ ಸಾಧ್ಯವಿಲ್ಲ ಎಂದರು.

ಸಭೆಯಲ್ಲಿ ಪಿಕಾರ್ಡ್ ಬ್ಯಾಂಕ್ ಮಾಜಿ ಅಧ್ಯಕ್ಷ ಕೆ.ವಜ್ರೇಗೌಡ, ಮೈಮುಲ್ ಮಾಜಿ ನಿರ್ದೇಶಕ ಕೇತುಪುರ ಪ್ರಭಾಕರ್, ಲಕ್ಷ್ಮಿನಾರಾಯಣ, ಅನಿಲ್ ಬೋಸ್, ಮಾಜಿ ಜಿಪಂ ಅಧ್ಯಕ್ಷೆ ಲತಾ, ಮಾಜಿ ಸದಸ್ಯೆ ಸುಧಾ ಮಹದೇವಯ್ಯ, ಟಿ.ಹೆಚ್.ಮಂಜುನಾಥ, ಕೆಪಿಸಿಸಿ ಸದಸ್ಯ ಮಲ್ಲಿಕಾರ್ಜುನಸ್ವಾಮಿ, ಮಹದೇಶ್ವರ ಬಸ್ ಮಾಲೀಕ ಕೆ.ನಾಗೇಂದ್ರ, ಎಪಿಎಂಸಿ ಮಾಜಿ ಅಧ್ಯಕ್ಷ ರಾಜಣ್ಣ, ಪ್ರಥಮ ದರ್ಜೆ ಗುತ್ತಿಗೆದಾರ ಸಿದ್ದರಾಮ, ಕೆ.ಎಂ.ಮಧುಕುಮಾರ್, ನ್ಯಾಯ ಬೆಲೆ ಅಂಗಡಿ ನಾಗೇಂದ್ರ, ಮಹಿಳಾ ಘಟಕದ ಅಧ್ಯಕ್ಷ ಲತಾ ಜಗದೀಶ್, ವಿ.ಪಿ.ಹುಂಡಿ ಬಸವರಾಜು, ಬನ್ನೂರು ಪುರಸಭೆ ಮಾಜಿ ಅಧ್ಯಕ್ಷ ಡಿ.ಪದ್ಮನಾಭ, ಗ್ರಾಪಂ ಸದಸ್ಯ ಅತ್ತಹಳ್ಳಿ ಮಹೇಶ್, ಯಾಚೇನಹಳ್ಳಿ ಅಶೋಕ್, ಮುರಳಿ, ಉಕ್ಕಲಗೆರೆ ಗ್ರಾಪಂ ಮಾಜಿ ಸದಸ್ಯ ರಾಜು, ಬೂದದಳ್ಳಿ ಸಿದ್ದರಾಜು, ಸುನೀಲ್ ಬೋಸ್ ಯುವ ಬ್ರಿಗೇಡ್ ಕುಮಾರ್, ಕೊಡಗಳ್ಳಿ ಗ್ರಾಪಂ ಮಾಜಿ ಅಧ್ಯಕ್ಷ ಧನಂಜಯ, ಮುಖಂಡರಾದ ಗಿರಿಧರ್, ಷಡಕ್ಷರಿ, ಜಯಮಾಲ, ನಾಗಮ್ಮ, ಪಂಕಜ ಮತ್ತಿತರರಿದ್ದರು.

> ಕಳೆದ 20 ವರ್ಷದಿಂದ ನನ್ನ ಕೈ ಹಿಡಿದು ನಡೆಸಿಕೊಂಡು ಬಂದಿದ್ದೀರಾ. ಈಗ ಲೋಕಸಭಾ ಚುನಾವಣೆಯಲ್ಲಿ ನನ್ನ ಕೈ ಬಿಡಬೇಡಿ. ನಾನು ಈ ಕ್ಷೇತ್ರದ ಮನೆ ಮಗ. ನಾನು 24 ಗಂಟೆಯೂ ನಿಮ್ಮ ಸೇವಕನಾಗಿ ದುಡಿದಿದ್ದೇನೆ. ಭೀಕರ ಬರಗಾಲ, ಬೆಳೆ ಸಂಕಷ್ಟದ ನಡುವೆಯೂ ರಾಜ್ಯ ಸರ್ಕಾರದ ಅನ್ನಭಾಗ್ಯ ಯೋಜನೆಯಿಂದ ಬಡವರು ನೆಮ್ಮದಿಯಿಂದ 2 ಹೊತ್ತಿನ ಊಟ ಮಾಡುತ್ತಿದ್ದಾರೆ. 5 ಗ್ಯಾರಂಟಿ ಯೋಜನೆಯಿಂದ ಕೋಟ್ಯಾಂತರ ಫಲಾನುಭವಿಗಳು ಸ್ವಾವಲಂಬಿಗಳಾಗಿ ಜೀವನ ನಡೆಸುತ್ತಿದ್ದಾರೆ. ಹಾಗಾಗಿ ಅಭಿವೃದ್ಧಿ ಪರವಾಗಿರುವ ಕಾಂಗ್ರೆಸ್‌ಗೆ ಮತ ನೀಡುವ ಮೂಲಕ ಮತ್ತಷ್ಟು ಅಭಿವೃದ್ಧಿಗೆ ಮುನ್ನುಡಿ ಬರೆಯಲು ಜನತೆ ಮುಂದಾಗಬೇಕು.
>
> -ಸುನೀಲ್ ಬೋಸ್, ಕಾಂಗ್ರೆಸ್ ಅಭ್ಯರ್ಥಿ.

ಇಂದು ಚುನಾವಣಾ ಪ್ರಚಾರಕ್ಕೆ ಚಾಲನೆ



ಭೇರ್ಯ, ಏ.11– ಮಂಡ್ಯ ಲೋಕಸಭಾ ಕ್ಷೇತ್ರದ ಎನ್‌ಡಿಎ ಮೈತ್ರಿ ಅಭ್ಯರ್ಥಿ, ಮಾಜಿ ಸಿಎಂ ಹೆಚ್.ಡಿ.ಕುಮಾರಸ್ವಾಮಿ ಪರ ಚುನಾವಣಾ ಪ್ರಚಾರಕ್ಕೆ ಮಾಜಿ ಸಚಿವ ಸಾ.ರಾ.ಮಹೇಶ್ ಏ.12ರಂದು ಚಾಲನೆ ನೀಡಲಿದ್ದಾರೆ ಎಂದು ತಾಲೂಕು ಯುವ ಜೆಡಿಎಸ್ ಅಧ್ಯಕ್ಷ ಡಿ.ಎಸ್.ಯೋಗೇಶ್ ತಿಳಿಸಿದ್ದಾರೆ.

ಕೆ.ಆರ್.ನಗರ ತಾಲೂಕಿನ ಮಾರಗೌಡನಹಳ್ಳಿ ಗ್ರಾಮದ ಪ್ರಸಿದ್ಧ ಶ್ರೀಬಸವೇಶ್ವರ ದೇವಾಲಯದಲ್ಲಿ ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ ಅವರ ಗೆಲುವಿಗಾಗಿ ವಿಶೇಷ ಪೂಜೆ ಸಲ್ಲಿಸಿ, ನಂತರ ಮೈತ್ರಿ ಪಕ್ಷದ ಮುಖಂಡರೊಂದಿಗೆ ಕರಪತ್ರ ಬಿಡುಗಡೆ ಮಾಡಿ ಪ್ರಚಾರ ಕಾರ್ಯಕ್ಕೆ ಮಾಜಿ ಸಚಿವ ಸಾ.ರಾ. ಮಹೇಶ್ ಚಾಲನೆ ನೀಡಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

ನರೇಂದ್ರ ಮೋದಿ ಮತ್ತೆ ಪ್ರಧಾನಿ: ಹೆಚ್.ಡಿ.ದೇವೇಗೌಡರ ಆಶಯ

ಸಮನ್ವಯ ಸಭೆಯಲ್ಲಿ ಮಾಜಿ ಸಚಿವ ಜಿ.ಟಿ.ದೇವೇಗೌಡ ಅಭಿಪ್ರಾಯ



ಶಾಸಕ ಜಿ.ಟಿ.ದೇವೇಗೌಡ, ಮಾಜಿ ಶಾಸಕ ಪ್ರೀತಂಗೌಡರ ನೇತೃತ್ವದಲ್ಲಿ ಬಿಜೆಪಿ–ಜೆಡಿಎಸ್ ಸಮನ್ವಯ ಸಭೆ ನಡೆಯಿತು.

ಹೆಚ್.ಡಿ.ಕೋಟೆ, ಏ.11– ಮೋದಿಯವರು ಮತ್ತೊಮ್ಮೆ ಪ್ರಧಾನಿಯಾಗಬೇಕೆಂಬ ಉದ್ದೇಶದಿಂದ ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡರು ಬಿಜೆಪಿ ಬೆಂಬಲಿಸುತ್ತಿದ್ದಾರೆ ಎಂದು ಮಾಜಿ ಸಚಿವ ಜಿ.ಟಿ.ದೇವೇಗೌಡ ತಿಳಿಸಿದರು.

ಪಟ್ಟಣದ ಕನಕ ಭವನದಲ್ಲಿ ನಡೆದ ಸಮನ್ವಯ ಸಭೆ ಉದ್ಘಾಟಿಸಿ ಮಾತನಾಡಿದ ಅವರು, ಬಿಜೆಪಿ ಎಲ್ಲರಿಗೂ ಸಮಾನ ಅವಕಾಶ ನೀಡಬೇಕೆಂಬ ಉದ್ದೇಶದಿಂದ ಗಿರಿಜನ ಮಹಿಳೆಯನ್ನು ರಾಷ್ಟ್ರಪತಿ ಮಾಡಿದೆ. ಅಲ್ಲದೇ ದಲಿತರನ್ನು ರಾಷ್ಟ್ರಪತಿ ಮಾಡಲಾಗಿತ್ತು ಎಂದರು.

ಬಿಜೆಪಿ ಸಂವಿಧಾನ ಬದಲಿಸುತ್ತದೆ ಎಂದು ಕಾಂಗ್ರೆಸ್‌ನವರು ಸುಳ್ಳು ಆರೋಪ ಮಾಡುತ್ತಿದ್ದಾರೆ. ಆದರೆ ಇಂದಿರಾ ಗಾಂಧಿ ಅವರು ಪ್ರಧಾನಿಯಾಗಿದ್ದಾಗ ಹಲವು ಬಾರಿ ಬದಲಾಯಿಸಿದೆ ಇದನ್ನು ಮರೆಮಾಚಿ ಕಾಂಗ್ರೆಸ್ ದೂರುತ್ತಿದೆ. ಆದರೆ ದೇಶದಲ್ಲಿ ಪ್ರಧಾನಿ ಅಭ್ಯರ್ಥಿ ಇರುವುದು ಒಬ್ಬರೇ. ಅದು ನಮ್ಮ ನರೇಂದ್ರ ಮೋದಿ ಎಂದರು. ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದಾಗಿನಿಂದ ಬರಗಾಲ ಆವರಿಸಿದೆ. ವಿದ್ಯಾರ್ಥಿಗಳು ಓಡಾಡಲು ಸರಿಯಾದ ಬಸ್ ವ್ಯವಸ್ಥೆ ಇಲ್ಲ, ಇಂತಹ ಸರ್ಕಾರಕ್ಕೆ ನಾವು ತಕ್ಕ ಪಾಠ ಕಲಿಸಬೇಕು ಎಂದರು.

ಭಾರತದಲ್ಲಿ ಮುಸ್ಲಿಮರು ಬೇರೆ ದೇಶಗಳಿಗಿಂತ ನೆಮ್ಮದಿಯಾಗಿದ್ದಾರೆ. ನೆರೆಯ ಪಾಕಿಸ್ತಾನದಲ್ಲೂ ಮುಸ್ಲಿಮರು ನೆಮ್ಮದಿಯಿಂದ ಇರಲು ಸಾಧ್ಯವಾಗದ ಪರಿಸ್ಥಿತಿ ಇದೆ. ಇದಕ್ಕೆಲ್ಲಾ ಮೋದಿ ಅವರ ಅಭಯವೇ ಕಾರಣ ಎಂದರು. ಈ ಚುನಾವಣೆಯಲ್ಲಿ ಚಾಮರಾಜನಗರ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಎಸ್.ಬಾಲರಾಜ್ ಅವರನ್ನು ಅತೀ ಹೆಚ್ಚು ಮತಗಳ ಅಂತರದಿಂದ ಗೆಲ್ಲಿಸಿ ಮೋದಿ ಕೈ ಬಲಪಡಿಸಬೇಕು ಎಂದು ಮನವಿ ಮಾಡಿದರು.

> ಕಳೆದ ವಿಧಾನಸಭಾ ಚುನಾವಣೆಯಲ್ಲಿ ಬಿಜೆಪಿ ಮತ್ತು ಜೆಡಿಎಸ್ ಅಭ್ಯರ್ಥಿಗಳು 97 ಸಾವಿರ ಮತಗಳನ್ನು ಪಡೆದಿದ್ದರು. ಈ ಬಾರಿ ತಾಲೂಕಿನಲ್ಲಿ ಲಕ್ಷಕ್ಕೂ ಹೆಚ್ಚು ಮತಗಳನ್ನು ಬಿಜೆಪಿ ಅಭ್ಯರ್ಥಿ ಪಡೆಯಲಿದ್ದು, ಇತಿಹಾಸ ನಿರ್ಮಾಣವಾಗಲಿದೆ.
>
> -ಚಿಕ್ಕಣ್ಣ, ಮಾಜಿ ಶಾಸಕ.

ಬಿಜೆಪಿ ಪ್ರಧಾನ ಕಾರ್ಯದರ್ಶಿ ಪ್ರೀತಂಗೌಡ ಮಾತನಾಡಿ, ನಮ್ಮ ಮುಂದೆ ಇರುವುದು ದೇಶದ ಚುನಾವಣೆ ಯಾವುದೋ ಪಂಚಾಯಿತಿ ಚುನಾವಣೆಯಲ್ಲ. ಸಿಎಂ ಸಿದ್ದರಾಮಯ್ಯ ಐದು ಗ್ಯಾರಂಟಿಗಳನ್ನು ನೀಡುತ್ತಿದ್ದೇವೆ ಎನ್ನುತ್ತಾರೆ. 10 ಕೆಜಿ ಅಕ್ಕಿ ಕೊಡುತ್ತೇನೆ ಎಂದು ಹೇಳಿ ಕೇಂದ್ರ ಸರ್ಕಾರದ 5 ಕೆಜಿ ಅಕ್ಕಿಯನ್ನು ತಾವು ನೀಡುತ್ತಿದ್ದೇವೆ ಎಂದು ಸುಳ್ಳು ಹೇಳಿ ಸರ್ಕಾರ ನಡೆಸುತ್ತಿದ್ದಾರೆ ಎಂದು ಲೇವಡಿ ಮಾಡಿದರು. ರಾಜ್ಯದ 28 ಕ್ಷೇತ್ರಗಳಲ್ಲೂ ನಮ್ಮ ಪರ ಅಲೆ ಇರುವುದರಿಂದ ಎಲ್ಲಾ ಕ್ಷೇತ್ರಗಳಲ್ಲೂ ಮೈತ್ರಿ ಅಭ್ಯರ್ಥಿಗಳೇ ಗೆಲುವು ಸಾಧಿಸಲಿದ್ದಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಇದಕ್ಕೂ ಮುನ್ನಾ ಕಾರ್ಯಕ್ರಮಕ್ಕೆ ಆಗಮಿಸಿದ ಶಾಸಕ ಜಿ.ಟಿ.ದೇವೇಗೌಡ, ಬಿಜೆಪಿ ರಾಜ್ಯ ಪ್ರಧಾನ ಕಾರ್ಯದರ್ಶಿ ಪ್ರೀತಂಗೌಡ, ಎಸ್.ಟಿ.ಮೋರ್ಚಾ ರಾಜ್ಯ ಪ್ರಧಾನ ಕಾರ್ಯದರ್ಶಿ ಕೆ.ಎಂ.ಕೃಷ್ಣನಾಯಕ, ಮುಖಂಡ ಜಯಪ್ರಕಾಶ್ ಚಿಕ್ಕಣ್ಣ ಸೇರಿದಂತೆ ಹಲವು ಮುಖಂಡರನ್ನು ಹ್ಯಾಂಡ್‌ಪೋಸ್ಟ್ ಸರ್ಕಲ್‌ನಲ್ಲಿ ಕಾರ್ಯಕರ್ತರು ಹಾಗೂ ಮುಖಂಡರು ಬೃಹತ್ ಸೇಬಿನ ಹಾರ ಹಾಕಿ ಬರಮಾಡಿಕೊಂಡರು. ಬಳಿಕ ಬೈಕ್ ರ‍್ಯಾಲಿ ಮೂಲಕ ತೆರೆದ ವಾಹನದಲ್ಲಿ ಮೆರವಣಿಗೆಯಲ್ಲಿ ಕನಕ ಭವನಕ್ಕೆ ಕರೆತಂದರು.

ಕಾರ್ಯಕ್ರಮದಲ್ಲಿ ಕೋಟೆ ಸರಗೂರು ತಾಲೂಕು ಬಿಜೆಪಿ ಅಧ್ಯಕ್ಷ ಶಂಭೇಗೌಡ, ಗುರುಸ್ವಾಮಿ, ಜಿಲ್ಲಾ ಉಪಾಧ್ಯಕ್ಷ ರಮೇಶ್ ಕುಮಾರ್, ಕೋಟೆ ಸರಗೂರು ಜೆಡಿಎಸ್ ಅಧ್ಯಕ್ಷ ರಾಜೇಂದ್ರ, ಗೋಪಾಲ ಸ್ವಾಮಿ, ಮುಖಂಡರಾದ ಜಯಪ್ರಕಾಶ್ ಚಿಕ್ಕಣ್ಣ, ಸಿ.ವಿ.ನಾಗರಾಜ್, ಕೃಷ್ಣಸ್ವಾಮಿ, ವೆಂಕಟಸ್ವಾಮಿ, ಹೆಚ್.ಸಿ.ಲಕ್ಷ್ಮಣ್, ಪ್ರಶಾಂತ, ದೊಡ್ಡನಾಯಕ, ಬಸವರಾಜಪ್ಪ ರಾಜು, ಗುರುಸ್ವಾಮಿ, ಮಹೇಶ್, ವೆಂಕಟೇಶ್, ಗಿರೀಶ್, ನಂದೀಶ್, ಶಾಂತ ಎಚ್.ಸಿ.ಶಿವಣ್ಣ, ಸುರೇಂದ್ರ ಡಿ.ಗೌಡ, ಯತೀಶ್ ಕುಮಾರ್, ಸೋಮಚಾರ್, ನರಸಿಂಹೇಗೌಡ, ಮಂಜು, ಜವರೇಗೌಡ, ಸಿದ್ದನಾಯಕ, ವಿನೋದ ಇನ್ನಿತರರಿದ್ದರು.





ಮೈಸೂರು ಮಿತ್ರ

ವಾರ್ಷಿಕೋತ್ಸವ ವಿಶೇಷ ಸಂಚಿಕೆ

"ಮೈಸೂರು ಮಿತ್ರ" ತನ್ನ ಓದುಗರು ಹಾಗೂ ಜಾಹೀರಾತುದಾರರ ಸೇವೆಯಲ್ಲಿ ಏಪ್ರಿಲ್ 16, 2024ಕ್ಕೆ 44 ವರ್ಷಗಳನ್ನು ಯಶಸ್ವಿಯಾಗಿ ಪೂರ್ಣಗೊಳಿಸಿ, 45ನೇ ವರ್ಷಕ್ಕೆ ಕಾಲಿಡುತ್ತಿರುವ ಈ ಸುಸಂದರ್ಭದಲ್ಲಿ ವರ್ಣರಂಜಿತ ವಿಶೇಷಾಂಕವನ್ನು ಹೊರತರಲಾಗುತ್ತಿದೆ. ಹಾಗಾಗಿ ಜಾಹೀರಾತುದಾರರಿಗೆ ಇದೊಂದು ಸುಸಮಯ. ಮುದ್ರಣದ ದೃಷ್ಟಿಯಿಂದ ತಮ್ಮ ಜಾಹೀರಾತುಗಳನ್ನು ಏಪ್ರಿಲ್ 13, 2024 ರೊಳಗೆ ನೀಡಬೇಕಾಗಿ ಕಳಕಳಿಯ ಮನವಿ.

ಪ್ರಧಾನ ಕಛೇರಿ
0821-2496522, 2496523, 0821-2496520 (5 ಲೈನುಗಳು)
ಮರಿಯ ಫರ್ನಾಂಡೀಸ್, ಜಾಹೀರಾತು ವ್ಯವಸ್ಥಾಪಕರು: 9448525060
ಜಾಯ್ ಅಂಥೋಣಿ ಡೋವ್: 8951668960
ಪ್ರೇಮ: 9880549879
ಕೆ.ಆರ್. ಸರ್ಕಲ್ ಕಛೇರಿ: 0821-2431774
ದೇವರಾಜ ಅರಸ್ ರಸ್ತೆ ಕಛೇರಿ: 0821-2428695

ಕೊಡಗು — ಪ್ರಸಾದ್, ಪೂಜಾ ಆರ್ಕೆಡ್, ಜೂನಿಯರ್ ಕಾಲೇಜು ರಸ್ತೆ, ಮಡಿಕೇರಿ 9731469871

ಹುಣಸೂರು — ಕೆ. ಕೃಷ್ಣ (ಕೆ.ಕೆ.), EWS 204, KHB ಕಾಲೋನಿ, ಹುಣಸೂರು. 9448720626

ಮಂಡ್ಯ — ಕೆ. ಮೋಹನ್‌ರಾಜ್, 3ನೇ ಕ್ರಾಸ್, ಅಶೋಕನಗರ, ಮಂಡ್ಯ 8762960325

ಶ್ರೀರಂಗಪಟ್ಟಣ — ವಿನಯ್ ಕಾರೇಕುರ, ಶ್ರೀರಂಗಪಟ್ಟಣ 9686893234

ಯಳಂದೂರು — ವಿ.ನಾಗರಾಜು, ಮೈತ್ರಿ ಮೆಡಿಕಲ್ಸ್, ಬಳೆಪೇಟೆ, ಯಳಂದೂರು 9844349191

ಚಾಮರಾಜನಗರ — ಸಿದ್ದಲಿಂಗಸ್ವಾಮಿ, ಸಿ.ಹೆಚ್.ಆರ್. ಕಾಂಪ್ಲೆಕ್ಸ್, ಸರ್ಕಾರಿ ಆಸ್ಪತ್ರೆ ಎದುರು, ಚಾಮರಾಜನಗರ 9242265657

ಟಿ. ನರಸೀಪುರ — ಕುಮಾರ್, ಸಾರ್ವಜನಿಕ ಆಸ್ಪತ್ರೆ ರಸ್ತೆ, ಆರ್ಯ ಮಹಲ್ ಛತ್ರದ ಎದುರು, ಟಿ. ನರಸೀಪುರ. 9986719590

ಗುಂಡ್ಲುಪೇಟೆ — ಸೋಮಶೇಖರ್, ಡ.ರಾ. ಬೇಂದ್ರೆ ನಗರ, ಅಶ್ವಿನಿ ಲೇಔಟ್, ಗುಂಡ್ಲುಪೇಟೆ. 9845995426

ಕೆ.ಆರ್. ನಗರ — ಕೆ.ಟಿ. ರಮೇಶ್, ಸ್ನೇಹ ಎಂಟರ್ ಪ್ರೈಸಸ್, ಎ.ಪಿ.ರಸ್ತೆ, ಕೆ.ಆರ್. ನಗರ. 9448021368

ಮಳವಳ್ಳಿ — ಶಿವಶಂಕರ, ನಂ.47, 1ನೇ ಕ್ರಾಸ್, ಎನ್.ಇ.ಎಸ್ ಮಳವಳ್ಳಿ ಟೌನ್–571430 9632407806

ಕೊಳ್ಳೇಗಾಲ — ರಾಜು, ಮೈಸೂರು ಮಿತ್ರ ರಿಪೋರ್ಟರ್ #101, ಹುರಳಕೇರಿ ಬೀದಿ, ಕೊಳ್ಳೇಗಾಲ 9916621007

ಹಾಸನ — ಆರ್.ಎನ್.ಸೋಮೇಶ್‌ಗೌಡ, ಹೋಲಿ ಚಿಲ್ಡ್ರನ್ ಶಾಲೆ ಹತ್ತಿರ, ಜಯನಗರ, 1ನೇ ಹಂತ, 2ನೇ ಕ್ರಾಸ್, ಹಾಸನ. 9448401175

ಕುಶಾಲನಗರ — ರಘು, ಮೈಸೂರು ಮಿತ್ರ ರಿಪೋರ್ಟರ್ ಮನು ಪ್ರೆಸ್, ಐ.ಬಿ.ರಸ್ತೆ, ಕುಶಾಲನಗರ 9845698401

ಜಯಪುರ — ಬಿಳಿಗಿರಿ, ಜಯಪುರ 9945479288

ಪಿರಿಯಾಪಟ್ಟಣ — ವೀರೇಶ್, ಪಿರಿಯಾಪಟ್ಟಣ 8660057128

ವಿರಾಜಪೇಟೆ — ಮಂಜುನಾಥ, ವಿರಾಜಪೇಟೆ 9900949353

ಕೆ.ಆರ್.ಪೇಟೆ — ಶ್ರೀನಿವಾಸ, ಅಗ್ರಹಾರ ಬಾಚಹಳ್ಳಿ, ಕೆ.ಆರ್.ಪೇಟೆ 9449326847, 7022767438

ಹೆಚ್.ಡಿ.ಕೋಟೆ — ಮಂಜುನಾಥ ಎಸ್., ಹೆಚ್.ಡಿ.ಕೋಟೆ 9483574452

ಕೆ.ಎಂ.ದೊಡ್ಡಿ — ಸತೀಶ್ ಎ.ಎಲ್, ಕೆ.ಎಂ.ದೊಡ್ಡಿ 9242120338

ನಂಜನಗೂಡು — ರಂಗಸ್ವಾಮಿ, ನಂ.4565, ಕಬಿನಿ ಕಾಲೋನಿ ಹಿಂಭಾಗ, ನೀಲಕಂಠ ನಗರ, ನಂಜನಗೂಡು ಟೌನ್–571301 9901602226

ಹುಣಸೂರು — ಹೆಚ್.ಆರ್. ಕೃಷ್ಣಕುಮಾರ್ (ಜನ್ ರಾಮೇಗೌಡ), ನಂದಿನಿ ಮಾರಾಟ ಕೇಂದ್ರ, ಮಾರುತಿ ಪೆಟ್ರೋಲ್ ಬಂಕ್ ಹತ್ತಿರ, ಹಳೆಯ ಬಿ.ಎಂ. ರಸ್ತೆ ಹತ್ತಿರ, ಹುಣಸೂರು 9060406093

ಕೊಳ್ಳೇಗಾಲ — ನಾಗೇಂದ್ರ ಸ್ವಾಮಿ, ನಂ.7ಎ, 684, 14 ನೇ ಕ್ರಾಸ್, ಬಸವೇಶ್ವರ ನಗರ, ಕೊಳ್ಳೇಗಾಲ 9448576247, 7899849858